


ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


46

ಜುಲೈ 19 ಶನಿವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 93 | ಪುಟಗಳು: 12
ಜಾಹೀರಾತು: ad@mysurumithra.com, website: www.mysurumithra.com
ಸುದ್ದಿ, ಫೋಟೋಗೆ: news@mysurumithra.com

₹4



ಇಂದು 'ಸಾಧನಾ ಸಮಾವೇಶ'

● ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಹಲವು ಸಚಿವರು ಭಾಗಿ ● ಲಕ್ಷಕ್ಕೂ ಅಧಿಕ ಕಾರ್ಯಕರ್ತರು ಪಾಲ್ಗೊಳ್ಳುವ ನಿರೀಕ್ಷೆ



ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ 'ಸಾಧನ ಸಮಾವೇಶ'ಕ್ಕೆ ಹಾಕಲಾಗಿರುವ ಬೃಹತ್ ವೇದಿಕೆ ಸೇರಿದಂತೆ ಇನ್ನಿತರ ಸಿದ್ಧತೆಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ಸಂಜೆ ಪರಿಶೀಲಿಸಿದರು. ಈ ವೇಳೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರು, ಜು.18(ಎಂಟಿವೈ)– ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಎರಡು ವರ್ಷ ಪೂರೈಸಿರುವ ಹಿನ್ನೆಲೆಯಲ್ಲಿ ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ನಾಳೆ(ಜು.19) ಬೆಳಗ್ಗೆ 10.30ಕ್ಕೆ ಆರಂಭವಾಗುವ 'ಸಾಧನ ಸಮಾವೇಶ'ದಲ್ಲಿ ಒಂದು ಲಕ್ಷಕ್ಕೂ ಹೆಚ್ಚು ಮಂದಿ ಕಾರ್ಯಕರ್ತರು ಪಾಲ್ಗೊಳ್ಳುವ ನಿರೀಕ್ಷೆಯಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಮಹಾರಾಜ ಕಾಲೇಜು ಮೈದಾನದಲ್ಲಿ ಆಯೋಜಿಸಿರುವ ಸಾಧನ ಸಮಾವೇಶದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವ ಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ ಸೇರಿದಂತೆ ಸಚಿವ ಸಂಪುಟದ ಬಹುತೇಕ ಸಚಿವರು ಪಾಲ್ಗೊಳ್ಳುತ್ತಿದ್ದಾರೆ. ಸರ್ಕಾರದ ಮಹತ್ವ ಕಾಂಕ್ಷೆಯ ಯೋಜನೆಗಳಾದ ಪಂಚ ಗ್ಯಾರಂಟಿ ಯೋಜನೆ ಸೇರಿದಂತೆ ವಿವಿಧ ಯೋಜನೆಗಳ ಮಹತ್ವವನ್ನು ಜನರಿಗೆ ತಿಳಿಸುವ ನಿಟ್ಟಿನಲ್ಲಿ ಆಯೋಜಿಸಿರುವ ಈ ಸಾಧನ ಸಮಾವೇಶದಲ್ಲಿ ಮೈಸೂರು ಜಿಲ್ಲೆಯಲ್ಲಿ 2,578 ಕೋಟಿ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗೂ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

ಮೈಸೂರಲ್ಲಿ ಮಳೆ ವಾತಾವರಣವಿರುವ ನಿಟ್ಟಿನಲ್ಲಿ ಸಮಾವೇಶ ನಡೆಯುವ ಸ್ಥಳದಲ್ಲಿ ವಾಟರ್ ಪ್ರೂಫ್ ಬೃಹತ್ ಶಾಮಿಯಾನ ಹಾಕಲಾಗಿದ್ದು, ವಿವಿಧೆಡೆಯಿಂದ ಬರುವ ಕಾರ್ಯಕರ್ತರು ಮಳೆಯಲ್ಲಿ ನೆನೆಯದಂತೆ ನೋಡಿಕೊಳ್ಳಲು ವಾಟರ್ ಪ್ರೂಫ್ ಶಾಮಿಯಾನದ ವ್ಯವಸ್ಥೆ ಮಾಡಲಾಗಿದೆ. ಸಮಾವೇಶದಲ್ಲಿ ಮೈಸೂರು ಜಿಲ್ಲೆ ಮಾತ್ರವಲ್ಲದೆ, ಮಂಡ್ಯ, ಚಾಮರಾಜನಗರ, ಕೊಡಗು, ಹಾಸನ ಜಿಲ್ಲೆಯಿಂದಲೂ ಕಾರ್ಯಕರ್ತರು, ಕಾಂಗ್ರೆಸ್ ಪದಾಧಿಕಾರಿಗಳು ಪಾಲ್ಗೊಳ್ಳಲಿದ್ದಾರೆ.

465 ಸಾರಿಗೆ ಬಸ್: ಸಾಧನ ಸಮಾವೇಶಕ್ಕೆ ಪಕ್ಷದ ಕಾರ್ಯಕರ್ತರನ್ನು ಕರೆತರಲು ಪಕ್ಷದ ವತಿಯಿಂದ ಸಾರಿಗೆ ಸಂಸ್ಥೆಯ 465 ಬಸ್ ಗಳನ್ನು ಬಾಡಿಗೆಗೆ ಪಡೆಯಲಾಗಿದೆ. ಮೈಸೂರು ನಗರ ವಿಭಾಗದಿಂದ 130, ಗ್ರಾಮಾಂತರ ವಿಭಾಗದಿಂದ 185, ಹಾಸನದಿಂದ 60, ಚಾಮರಾಜನಗರದಿಂದ 60 ಹಾಗೂ ಮಂಡ್ಯದಿಂದ 30 ಬಸ್‌ಗಳನ್ನು ಸಮಾವೇಶಕ್ಕೆ ಕಾರ್ಯಕರ್ತರನ್ನು ಬಳಸಿಕೊಳ್ಳಲಾಗುತ್ತಿದೆ.

▶ 10ನೇ ಪುಟಕ್ಕೆ

ಮುಖ್ಯಮಂತ್ರಿ ಕುರ್ಚಿ ಉಳಿವಿಗೆ ಸಿದ್ದರಾಮಯ್ಯ ಶಕ್ತಿ ಪ್ರದರ್ಶನ

ಮೈಸೂರು, ಜು.18(ಎಂಟಿವೈ)– ಕುರ್ಚಿ ಉಳಿವಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕಸರತ್ತು ಆರಂಭಿಸಿದ್ದಾರೆ. ಆ ಪ್ರಯತ್ನದ ಫಲವೇ ಮೈಸೂರಿನಲ್ಲಿ ನಾಳೆ (ಶನಿವಾರ) ನಡೆಸುತ್ತಿರುವ ಶಕ್ತಿ ಪ್ರದರ್ಶನ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಲೇವಡಿ ಮಾಡಿದ್ದಾರೆ.



ಮೈಸೂರಲ್ಲಿ ಪತ್ರಕರ್ತರೊಂದಿಗೆ ಮಾತನಾಡುತ್ತಾ, ರಾಜ್ಯ ರಾಜಕೀಯದಲ್ಲಿ ನವೆಂಬರ್‌ನಲ್ಲಿ ಮಹತ್ವದ ಬೆಳವಣಿಗೆಯಾಗಲಿದ್ದು, ಅಧಿಕಾರ ಹಂಚಿಕೆ ಕುರಿತು ಆಗಿರುವ ಒಪ್ಪಂದದಂತೆ ಸಿಎಂ ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನ ಬಿಟ್ಟು ಕೊಡಲಿದ್ದಾರೆ ಎಂದು ಭವಿಷ್ಯ ನುಡಿದಿದ್ದಾರೆ. ನವೆಂಬರ್‌ನಲ್ಲಿ ರಾಜ್ಯ ರಾಜಕೀಯದಲ್ಲಿ ಮಹತ್ತರ ಬೆಳವಣಿಗೆ ನಡೆಯುವುದು ನಿಶ್ಚಿತ. ತಂತ್ರ–ಕುತಂತ್ರಗಳಿಗೆ ಇತಿಮಿತಿ ಇರುತ್ತದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಧ್ಯೆ ಕಾಂಗ್ರೆಸ್ಸಿನ ಹೈಕಮಾಂಡ್ ಮಟ್ಟದಲ್ಲಿ ಅಧಿಕಾರ ಹಂಚಿಕೆ ಒಪ್ಪಂದವಾಗಿದ್ದು, ಎರಡೂವರೆ ವರ್ಷ ತುಂಬಿದ ಮೇಲೆ ಸಿದ್ದರಾಮಯ್ಯ ನವರು ಮುಖ್ಯಮಂತ್ರಿ ಸ್ಥಾನ ಬಿಟ್ಟುಕೊಡ ಬೇಕಾಗುತ್ತದೆ ಎಂದು ಕಾಂಗ್ರೆಸ್ ಮುಖಂಡರೇ ಹೇಳುತ್ತಿದ್ದಾರೆ ಎಂದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಎರಡೂವರೆ ವರ್ಷ ಆಗಿದೆ. ಇದುವರೆಗೆ ಯಾವುದೇ ಅಭಿವೃದ್ಧಿ ಕಾರ್ಯ ನಡೆದಿಲ್ಲ. ಇದರಿಂದ ರಾಜ್ಯದ ಜನರು ಹಿಡಿಶಾಪ ಹಾಕುತ್ತಿದ್ದಾರೆ. ಆಡಳಿತ ಯಂತ್ರ ಸಂಪೂರ್ಣ ಕುಸಿದಿದೆ. ಗ್ಯಾರಂಟಿಗಳಿಗೆ ಹಣ ಸಂಗ್ರಹವಾಗದೆ ಜಿಎಸ್‌ಟಿ ಮೂಲಕ ಬೀದಿ ವ್ಯಾಪಾರಿಗಳಿಗೂ ಬರೆ ಎಳೆಯುವ ಕೆಲಸ ಮಾಡುತ್ತಿದ್ದಾರೆ. ವಿರೋಧ ಪಕ್ಷವಾಗಿರುವ ಬಿಜೆಪಿ ಸಮರ್ಥವಾಗಿ ಕೆಲಸ ಮಾಡುತ್ತಿದೆ.

▶ 10ನೇ ಪುಟಕ್ಕೆ





ಸಾಧನಾ ಸಮಾವೇಶ; ಶಕ್ತಿ ಪ್ರದರ್ಶನವಲ್ಲ

■ ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ ■ ಗ್ಯಾರಂಟಿಗಳಿಂದ ಆರ್ಥಿಕ ಪರಿಸ್ಥಿತಿ ಹದಗೆಟ್ಟಿದೆ ಎಂಬ ಬಿಜೆಪಿ ಅಪಪ್ರಚಾರಕ್ಕೆ ತಕ್ಕ ಉತ್ತರ ನೀಡಲು ಈ ಸಮಾವೇಶ

ಮೈಸೂರು, ಜು.18(ಬಿಎಲ್‌ಯು)– ಮೈಸೂರಿನಲ್ಲಿ ನಾಳೆ ನಡೆಯುತ್ತಿರು ವುದು ಸರ್ಕಾರದ ಸಾಧನಾ ಸಮಾವೇಶವೇ ಹೊರತು, ಯಾರ ಶಕ್ತಿ ಪ್ರದರ್ಶನವಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.

ಮೈಸೂರು ವಿಮಾನ ನಿಲ್ದಾಣದಲ್ಲಿ ಇಂದು ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಕಳೆದ ಎರಡೂವರೆ ವರ್ಷದ ಅವಧಿಯಲ್ಲಿ ಸರ್ಕಾರ ಮಾಡಿರುವ ಅಭಿವೃದ್ಧಿ ಕಾರ್ಯಗಳನ್ನು ಜನರಿಗೆ ಮನದಟ್ಟು ಮಾಡಲು ಈ ಸಮಾವೇಶವನ್ನ ಆಯೋಜನೆ ಮಾಡಲಾಗಿದೆ. ಇದು ಬಿಟ್ಟು ಯಾರ ಶಕ್ತಿಯನ್ನು ಪ್ರದರ್ಶಿಸಲು ಈ ಸಮಾವೇಶವನ್ನು ಏರ್ಪಡಿಸಿಲ್ಲ ಎಂದು ಸ್ಪಷ್ಟನೆ ನೀಡಿದರು.

ಗ್ಯಾರಂಟಿ ಯೋಜನೆಯಿಂದ ರಾಜ್ಯದ ಆರ್ಥಿಕ ಪರಿಸ್ಥಿತಿ ಹದಗೆಟ್ಟಿದೆ. ಅಭಿವೃದ್ಧಿ ಕಾರ್ಯಗಳು ಕುಂಠಿತವಾಗಿದೆ ಎಂದು ಅಪಪ್ರಚಾರ ಮಾಡುತ್ತಿದ್ದ ಬಿಜೆಪಿಗೆ ತಕ್ಕ ಉತ್ತರ ನೀಡಲು ಈ ಸಮಾವೇಶ ಹಮ್ಮಿಕೊಂಡಿದ್ದೇವೆ. ನಾಳೆ ನಡೆಯುವ ಸರ್ಕಾರದ ಸಾಧನಾ ಸಮಾವೇಶದಲ್ಲಿ 2,600 ಕೋಟಿಗೂ ಹೆಚ್ಚು ಅಭಿವೃದ್ಧಿ ಕಾರ್ಯಗಳನ್ನು ಉದ್ಘಾಟಿಸಿ, ಶಂಕುಸ್ಥಾಪನೆ ನೆರವೇರಿಸುತ್ತಿದ್ದೇವೆ. ರಾಜ್ಯದ ಆರ್ಥಿಕ ಪರಿಸ್ಥಿತಿ ಅಧೋಗತಿಗೆ ಇಳಿದಿದ್ದರೆ, ಖಜಾನೆಯಲ್ಲಿ ಹಣವಿಲ್ಲದಿದ್ದರೆ ಒಂದೇ ನಗರಕ್ಕೆ ಇಷ್ಟು ಹಣ ಕೊಡಲು ಸಾಧ್ಯವಾಗುತ್ತಿರಲಿಲ್ಲ ಎಂದು ಅಭಿಪ್ರಾಯಪಟ್ಟರು.

ಬಿಜೆಪಿಯಿಂದ ಆಗದ ಅಭಿವೃದ್ಧಿಯನ್ನು ನಾವು ಮಾಡುತ್ತಿದ್ದೇವೆ. ಆದರೆ ಈ ಸಮಾವೇಶದಿಂದ ನಾವು ಯಾರೂ ಶಕ್ತಿಯನ್ನು ಪ್ರದರ್ಶಿಸುವುದಿಲ್ಲ. ಕಳೆದ ಎರಡೂವರೆ ವರ್ಷದ ಅವಧಿಯಲ್ಲಿ ನಮ್ಮ ಸರ್ಕಾರ ಏನು ಮಾಡಿದೆ, ಜನರಿಗೆ ಇದರಿಂದ ಯಾವ ರೀತಿಯ ಅನುಕೂಲವಾಗಿದೆ ಎಂದು ಸಮಾವೇಶದಲ್ಲಿ ಮನವರಿಕೆ ಮಾಡಿಕೊಡುತ್ತೇವೆ ಎಂದು ಸಿದ್ದರಾಮಯ್ಯ ಪುನರುಚ್ಚರಿಸಿದರು.

ಅಸಾಂಕ್ರಾಮಿಕ ರೋಗಗಳಿಂದ ಹೃದ್ರೋಗ ಪ್ರಮಾಣ ಹೆಚ್ಚಳ

● ಮೈಸೂರು ಜಯದೇವ ಹೃದ್ರೋಗ ಮತ್ತು ಸಂಶೋಧನಾ ಸಂಸ್ಥೆ ವೈದ್ಯಕೀಯ ಅಧೀಕ್ಷಕ ಡಾ.ಕೆ.ವಿ.ಸದಾನಂದ ಆತಂಕ ● ಇದನ್ನು ತಡೆಗಟ್ಟಲು ಜಾಗೃತಿಗಾಗಿ 'ಗೃಹ ಆರೋಗ್ಯ ಸೇವೆ' ಅವಶ್ಯಕ ● 'ಗೃಹ ಆರೋಗ್ಯ ಯೋಜನೆ' ಕಾರ್ಯಾಗಾರಕ್ಕೆ ಚಾಲನೆ



'ಗೃಹ ಆರೋಗ್ಯ ಯೋಜನೆ ಕಾರ್ಯಾಗಾರ'ದಲ್ಲಿ 'ಆಶಾ ಕಾರ್ಯಕರ್ತರ ಕೈಪಿಡಿ' ಬಿಡುಗಡೆ ವೇಳೆ ಮೈಸೂರು ಜಯದೇವ ಹೃದ್ರೋಗ ಮತ್ತು ಸಂಶೋಧನಾ ಸಂಸ್ಥೆ ವೈದ್ಯಕೀಯ ಅಧೀಕ್ಷಕ ಡಾ.ಕೆ.ವಿ.ಸದಾನಂದ, ಆರೋಗ್ಯ ಇಲಾಖೆ ವಿಭಾಗೀಯ ಸಹ ನಿರ್ದೇಶಕಿ ಡಾ.ಬಿ.ಮಲ್ಲಿಕಾ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಪಿ.ಸಿ.ಕುಮಾರಸ್ವಾಮಿ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ನಾಗರಾಜ್ ಮತ್ತಿತರರಿದ್ದರು.

ಮೈಸೂರು, ಜು.18(ಎಂಕೆ)– ಇತ್ತೀಚಿನ ದಿನಗಳಲ್ಲಿ ಹೆಚ್ಚಾಗುತ್ತಿರುವ ಅಸಾಂಕ್ರಾಮಿಕ ರೋಗಗಳು ಹೃದ್ರೋಗಕ್ಕೆ ಪ್ರಮುಖ ಕಾರಣವಾಗುತ್ತಿದ್ದು, ಅವುಗಳನ್ನು ತಡೆಗಟ್ಟುವ ಹಾಗೂ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ 'ಗೃಹ ಆರೋಗ್ಯ ಸೇವೆ' ಅವಶ್ಯವಾಗಿದೆ ಎಂದು ಮೈಸೂರು ಜಯದೇವ ಹೃದ್ರೋಗ ಮತ್ತು ಸಂಶೋಧನಾ ಸಂಸ್ಥೆ ವೈದ್ಯಕೀಯ ಅಧೀಕ್ಷಕ ಡಾ.ಕೆ.ವಿ.ಸದಾನಂದ ತಿಳಿಸಿದರು.

ಮೈಸೂರಿನ ಕೆಆರ್‌ಎಸ್ ರಸ್ತೆಯಲ್ಲಿರುವ ಜಯದೇವ ಹೃದ್ರೋಗ ಮತ್ತು ಸಂಶೋಧನಾ ಸಂಸ್ಥೆ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಪಂ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ವೈದ್ಯರು ಹಾಗೂ ವೈದ್ಯಕೀಯ ಸಿಬ್ಬಂದಿಗೆ ಆಯೋಜಿಸಿದ್ದ 'ಗೃಹ ಆರೋಗ್ಯ ಯೋಜನೆ ಕಾರ್ಯಾಗಾರ'ದಲ್ಲಿ ಮಾತನಾಡಿದ ಅವರು, ಆರೋಗ್ಯ ಇಲಾಖೆಯ ಗೃಹ ಆರೋಗ್ಯ ಯೋಜನೆಯಿಂದ ಹೃದ್ರೋಗದ ಪ್ರಮಾಣ ತಗ್ಗಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಸಾಂಕ್ರಾಮಿಕ ರೋಗಗಳ ಜೊತೆಗೆ ಅಸಾಂಕ್ರಾಮಿಕ ರೋಗಗಳು ಹೆಚ್ಚಾಗುತ್ತಿವೆ. ಈಗಾಗಲೇ ಭಾರತವನ್ನು ಡಯಾಬಿಟಿಸ್ ಮತ್ತು ಹೃದ್ರೋಗದ ಕ್ಯಾಪಿಟಲ್ ಎಂದು ಕರೆಯಲಾಗುತ್ತಿದೆ. ಇದಕ್ಕೆ ಮುಖ್ಯ ಕಾರಣ ಜೀವನ ಶೈಲಿ. ಹಾಗಾಗಿ ಗೃಹ ಆರೋಗ್ಯ ಸೇವೆಯಡಿ ಮನೆ ಮನೆಗೆ ಭೇಟಿ ನೀಡಿ ತಪಾಸಣೆ ನಡೆಸುವುದರಿಂದ ಆರೋಗ್ಯ ಸಮಸ್ಯೆಯನ್ನು ಆರಂಭದಲ್ಲಿಯೇ ಪತ್ತೆ ಮಾಡಿ, ಸೂಕ್ತ ಸಲಹೆಗಳನ್ನು ನೀಡುವುದರಿಂದ

▶ 10ನೇ ಪುಟಕ್ಕೆ



ಮೈಸೂರು ಮಿತ್ರ ಶನಿವಾರ 19 ಜುಲೈ 2025

ವಿವಿಧ ಬೇಡಿಕೆ ಈಡೇರಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯರಿಗೆ ರೈತರ ನಿಯೋಗ ಮನವಿ



ರಾಜ್ಯ ಕಬ್ಬು ಬೆಳೆಗಾರರ ಸಂಘದ ಮುಖಂಡರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದರು.

ಮೈಸೂರು, ಜು.18– ರಾಜ್ಯ ಕಬ್ಬು ಬೆಳೆಗಾರರ ಸಂಘದ ರೈತರ ನಿಯೋಗವು ಆಡಳಿತ ತರಬೇತಿ ಸಂಸ್ಥೆ ಬಳಿ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಮನವಿ ನೀಡಿ, ವಿವಿಧ ಬೇಡಿಕೆಗಳ ಈಡೇರಿಸಲು ಆಗ್ರಹಿಸಿತು.

ಬರಡನಪುರ ನಾಗರಾಜ್, ಕಿರಗಸೂರು ಶಂಕರ್, ಪಿ.ಸೋಮಶೇಖರ್, ಮಾರ್ಬಳ್ಳಿ ನೀಲಕಂಠಪ್ಪ, ಕುರುಬೂರು ಸಿದ್ದೇಶ್, ವಿಜಯೇಂದ್ರ, ವರಕೋಡು ನಾಗೇಶ್, ಕುರುಬೂರು ಪ್ರದೀಪ್, ಬನ್ನೂರು ಸೂರಿ, ವಾಜಮಂಗಲ ಮಹದೇವು ಸೇರಿದಂತೆ ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಹಾಗೂ ರಾಜ್ಯ ಕಬ್ಬು ಬೆಳೆಗಾರರ ಸಂಘದ ಪದಾಧಿಕಾರಿಗಳು ನಿಯೋಗದಲ್ಲಿದ್ದರು.

ಪ್ರಮುಖ ಬೇಡಿಕೆಗಳು: ಕಬ್ಬು ಬೆಳೆಗಾರ ರೈತರಿಗೆ ಹಳೆಯ ಬಾಕಿ 150 ರೂ. ಸಕ್ಕರೆ ಕಾರ್ಖಾನೆಯಿಂದ ಕೊಡಿಸಬೇಕು. ಪ್ರಸಕ್ತ ಸಾಲಿನಲ್ಲಿ ಕಬ್ಬಿನ ಎಫ್‌ಆರ್‌ಪಿ (ನ್ಯಾಯಸಮ್ಮತ ಮತ್ತು ಪ್ರೋತ್ಸಾಹ ದಾಯಕ ದರ) ಹಾಗೂ ಹೆಚ್ಚುವರಿ ದರ ಎಸ್‌ಎಪಿ(ರಾಜ್ಯ ಸಲಹಾ ಬೆಲೆ)ಯನ್ನು 4,000 ರೂ. ನಿಗದಿ ಮಾಡಬೇಕು. ಬಣ್ಣಾರಿ ಕಾರ್ಖಾನೆ ಮುಂದೆ ತೂಕದ ಯಂತ್ರ ಅಳವಡಿಸಬೇಕು. ಒಂದು ಜಿಲ್ಲೆ ಒಂದು ಬೆಳೆ ಎಂಬ ಯೋಜನೆಯಡಿ ಮೈಸೂರಿಗೆ ಬಾಳೆ ಬೆಳೆ ಘೋಷಿಸಿದ್ದು, ಈ ಸಂಬಂಧ ಯೋಜನೆಗಳ ಜಾರಿಗೆ ಆರ್ಥಿಕ ನೆರವು ನೀಡಬೇಕು. ನಾಲ್ಕೈದು ದಶಕಗಳಿಂದ ಉಳುಮೆ ಮಾಡಿಕೊಂಡು ಬರುತ್ತಿರುವ ರೈತರಿಗೆ ಸಾಗುವಳಿ ಚೀಟಿ ನೀಡಬೇಕು. ಬ್ಯಾಂಕುಗಳಲ್ಲಿ ಚಿನ್ನದ ಮೇಲಿನ ಸಾಲ ಹಾಗೂ ಬೆಳೆ ಸಾಲದ ನವೀಕರಣಕ್ಕೆ ಹಳೆಯ ನಿಯಮವನ್ನೇ ಜಾರಿಗೊಳಿಸಬೇಕು. ಕಡಕೋಳದಿಂದ ವಾಜಮಂಗಲಕ್ಕೆ 220 ಕೆ.ವಿ. ಸಾಮರ್ಥ್ಯದ ವಿದ್ಯುತ್ ಪ್ರಸರಣ ತಂತಿ ಹಾದುಹೋಗುವ ಜಮೀನು ಮಾಲೀಕರಿಗೆ ಎಕರೆಗೆ 10 ಪಟ್ಟು ಪರಿಹಾರ ಕೊಡಿಸಬೇಕು. ಕೃಷಿ ಪಂಪ್ ಸೆಟ್ ಬಳಕೆ ರೈತರಿಗೆ ಆಧಾರ್ ನೋಂದಣಿ ಮಾಡಿ ಮೀಟರ್ ಅಳವಡಿಕೆ ಕೈ ಬಿಡಬೇಕು.

ಅಕ್ರಮ–ಸಕ್ರಮ ಯೋಜನೆ ಮುಂದುವರೆಸಿ ರೈತರಿಗೆ 5000 ರೂ. ಹಣ ಪಾವತಿಸಿಕೊಂಡು ಕೃಷಿ ಪಂಪ್ ಸೆಟ್‌ಗೆ ವಿದ್ಯುತ್ ಸಂಪರ್ಕ ಕಲ್ಪಿಸಬೇಕು. ತೋಟ ಹಾಗೂ ಕೃಷಿ ಜಮೀನಿನಲ್ಲಿ ವಾಸದ ಮನೆ ನಿರ್ಮಾಣ ಮಾಡಿಕೊಂಡಿರುವ ರೈತರಿಗೆ ವಿದ್ಯುತ್ ಸಂಪರ್ಕ ಕಲ್ಪಿಸಿಕೊಡಬೇಕು. ಅರಣ್ಯ ಇಲಾಖೆಗೆ ಸೇರಿದ ನೂರಾರು ಎಕರೆ ಭೂಮಿಯನ್ನು ಬಂಡವಾಳ ಶಾಹಿಗಳಿಂದ ರಕ್ಷಿಸಿಕೊಳ್ಳಬೇಕು. ವರುಣ ಕೆರೆಗೆ ಚರಂಡಿ ನೀರು ಸೇರದಂತೆ ಕ್ರಮ ವಹಿಸಬೇಕು. ಖಾಸಗಿ ಫೈನಾನ್ಸ್‌ಗಳ ಹಾವಳಿ ನಿಲ್ಲಿಸಲು ಸೂಕ್ತ ಕ್ರಮವಹಿಸಬೇಕು.

ಆ.11ರಿಂದ ವಿಧಾನಮಂಡಲದ ಮುಂಗಾರು ಅಧಿವೇಶನ

ಬೆಂಗಳೂರು, ಜು.18– ರಾಜ್ಯದ ವಿಧಾನಮಂಡಲದ ಮುಂಗಾರು ಅಧಿವೇಶನ ಆ.11ರಿಂದ ಆಗಸ್ಟ್ 22ರವರೆಗೆ ನಡೆಯಲಿದೆ. ಈ ಬಗ್ಗೆ ರಾಜ್ಯ ಸರ್ಕಾರದ ಸಂಸದೀಯ ವ್ಯವಹಾರಗಳ ಕಾರ್ಯದರ್ಶಿ ಜಿ.ಶ್ರೀಧರ್ ಅಧಿಸೂಚನೆ ಹೊರಡಿಸಿದ್ದಾರೆ.

12 ದಿನಗಳಲ್ಲಿ ಎಂಟು ದಿನ ಮಾತ್ರ ಅಧಿವೇಶನ ನಡೆಯಲಿದ್ದು, ಮೊದಲ ದಿನ(ಆ.11) ಅಧಿವೇಶನ ಉದ್ದೇಶಿಸಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಭಾಷಣ ಮಾಡಲಿದ್ದಾರೆ. ಆ.11ರಿಂದ ಮೂರು ದಿನ ಸರ್ಕಾರಿ ಕಾರ್ಯಕಲಾಪಗಳು ನಡೆಯಲಿದ್ದು, ಆ.14ರಂದು ಖಾಸಗಿ ಕಾರ್ಯಕಲಾಪವೂ ನಡೆಯಲಿದೆ. 15ರಂದು ಸಾರ್ವತ್ರಿಕ ರಜೆಯಿದ್ದು, ಆ.16ರಂದು ಎರಡನೇ ಶನಿವಾರದ ಕಾರಣ ಅಂದೂ ಕಾರ್ಯಕಲಾಪಗಳು ನಡೆಯುವುದಿಲ್ಲ. ಮತ್ತೆ ಭಾನುವಾರ ರಜೆ ಇರಲಿದೆ. ಉಳಿದಂತೆ ಆ.22ರವರೆಗೆ ಕಲಾಪ ನಡೆಯಲಿದೆ.

ರಾಷ್ಟ್ರೀಯ ರಕ್ಷಣಾ ನಿಧಿಗೆ ದೇಣಿಗೆ



ಮೈಸೂರಿನ ನಿವೃತ್ತ ಶುಶ್ರೂಷಾಧಿಕಾರಿಗಳ ಸಂಘದ ವತಿಯಿಂದ ಇತ್ತೀಚೆಗೆ ನಡೆದ ಕಾರ್ಯಕ್ರಮದಲ್ಲಿ ಟಿ.ಕೆ.ಲೇಔಟ್ ಶ್ರೀ ವೆಂಕಟರಮಣ ಕ್ರೆಡಿಟ್ ಕೊ ಆಪರೇಟಿವ್ ಸೊಸೈಟಿ ಲಿಮಿಟೆಡ್, ಮೈಸೂರು ಶಾಖೆಯಿಂದ ರಾಷ್ಟ್ರೀಯ ರಕ್ಷಣಾ ನಿಧಿಗೆ ಆನ್‌ಲೈನ್ ಮೂಲಕ 50,000 ರೂ.ಗಳ ದೇಣಿಗೆಯನ್ನು ನೀಡಲಾಯಿತು. ಈ ಸಂಬಂಧ ರಾಷ್ಟ್ರೀಯ ರಕ್ಷಣಾ ನಿಧಿಯಿಂದ ಸ್ವೀಕೃತಿ ರಶೀದಿ ನೀಡಿದ್ದಾರೆ. ಈ ವೇಳೆ ಸಂಘದ ಅಧ್ಯಕ್ಷೆ ಶಿವಮ್ಮ, ಉಪಾಧ್ಯಕ್ಷ ಬಿ ಗಂಗಾಧರಯ್ಯ, ಕಾರ್ಯದರ್ಶಿ ಹೇಮಲತಾ, ಖಜಾಂಚಿ ಆಲೀಸ್ ಫ್ಲಾರೆನ್ಸ್ ಕ್ರಾಸ್ಟಾ, ಮಾಜಿ ಅಧ್ಯಕ್ಷ ಕೆ ಕೆ ಕುಶಾಲಪ್ಪ, ಸಂಘಟನಾ ಕಾರ್ಯದರ್ಶಿ ಕಣ್ಣೂರು ವಿ ಗೋವಿಂದಾಚಾರಿ, ಬ್ಯಾಂಕಿನ ಪ್ರಬಂಧಕರಾದ ಧೀರಜ್ ಹಾಗೂ ಸಿಬ್ಬಂದಿಗಳಾದ ಹರ್ಷಿತಾ, ಯಕ್ಷಿತಾ ಹಾಜರಿದ್ದರು.

ಪ್ರೊಫೆಸರ್ ಎಸ್.ಎ.ಮೋಹನ್‌ಕೃಷ್ಣ ಅನುಮಾನಾಸ್ಪದ ಸಾವು

ಮೈಸೂರು, ಜು.18– ಮೈಸೂರಿನ ಗೋಕುಲಂ ನಿವಾಸಿ, ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜಿನ ಮೆಕ್ಯಾನಿಕಲ್ ಇಂಜಿನಿಯರಿಂಗ್ ವಿಭಾಗದ ಅಸೋಸಿಯೇಟ್ ಪ್ರೊಫೆಸರ್ ಡಾ. ಎಸ್.ಎ.ಮೋಹನ್‌ಕೃಷ್ಣ(44) ಅನುಮಾನಾಸ್ಪದವಾಗಿ ಸಾವನ್ನಪ್ಪಿದ್ದಾರೆ.



ಅನಾರೋಗ್ಯದಿಂದ ಬಳಲುತ್ತಿದ್ದ ಅವರನ್ನು ಜು.16 ರಂದು ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದು, ಚಿಕಿತ್ಸೆ ಫಲಕಾರಿಯಾಗದೇ ಇಂದು (ಶುಕ್ರವಾರ) ಸಾವನ್ನಪ್ಪಿದ್ದಾರೆ. ಅವರು ವಿಷ ಸೇವಿಸಿರಬಹುದು ಎಂದು ಅನುಮಾನಗೊಂಡು ಆಸ್ಪತ್ರೆಯವರು ಎಂಎಲ್‌ಸಿ ಮಾಡಿದ್ದರಿಂದಾಗಿ ವಿವಿ ಪುರಂ ಪೊಲೀಸ್ ಠಾಣೆಯಲ್ಲಿ ಯುಡಿಆರ್ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ. ಮರಣೋತ್ತರ ಪರೀಕ್ಷೆ ಬಂದ ಬಳಿಕ ಅವರ ಸಾವಿನ ನಿಖರ ಕಾರಣ ತಿಳಿಯಲಿದೆ. ಹವ್ಯಾಸಿ ಖಗೋಳಶಾಸ್ತ್ರಜ್ಞರಾದ ಅವರು ಪತ್ನಿ ಶ್ವೇತಾ ಮೋಹನ್‌ಕೃಷ್ಣ, ಪುತ್ರಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಗೋಕುಲಂನಲ್ಲಿರುವ ರುದ್ರಭೂಮಿಯಲ್ಲಿ ಸಂಜೆ 4 ಗಂಟೆಗೆ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸುಹೇಲ್ ಅಹಮದ್

ಮೈಸೂರು, ಜು. 18– ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಆಯೂಬ್ ಖಾನ್ ಅವರ ಭಾವ ಸುಹೇಲ್ ಅಹಮದ್ (58) ಶುಕ್ರವಾರ ಬೆಳಗ್ಗೆ ಹೃದಯಾಘಾತದಿಂದ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರಿ, ಓರ್ವ ಪುತ್ರ ಹಾಗೂ ಅಪಾರ ಬಂಧುಮಿತ್ರರನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮೈಸೂರಿನ ಟಿಪ್ಪು ಸರ್ಕಲ್ ಬಳಿ ಇರುವ ಮುಸ್ಲಿಮರ ಖಬರ್‌ಸ್ಥಾನ್ ಗೇಟ್ ನಂ.2ರಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.



ಬೋಗಯ್ಯ

ಮೈಸೂರು, ಜು. 18– ಮೈಸೂರು ತಾಲೂಕು ಸರ್ಕಾರಿ ಉತ್ತನಹಳ್ಳಿಯಲ್ಲಿರುವ ಕಾರ್ಗಳಮ್ಮ ದೇವಸ್ಥಾನದ ಗುಡ್ಡಪ್ಪನವರಾದ ಬೋಗಯ್ಯ(85) ಶುಕ್ರವಾರ ನಿಧನರಾದರು. ಉತ್ತನಹಳ್ಳಿಯ ಏಳಿಗೆಹುಂಡಿಯಲ್ಲಿ ವಾಸವಾಗಿದ್ದ ದಿವಂಗತರು ಪತ್ನಿ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಶನಿವಾರ (ಜು.19) ಬೆಳಗ್ಗೆ 11 ಗಂಟೆಗೆ ಸ್ವಗ್ರಾಮದ ರುದ್ರಭೂಮಿಯಲ್ಲಿ ಮೃತರ ಅಂತ್ಯಕ್ರಿಯೆ ನೆರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.



ಬಾಬು ಜಗಜೀವನರಾಂರಿಗೆ ದೇಶದ ಪ್ರಧಾನಿಯಾಗುವ ಎಲ್ಲಾ ಅರ್ಹತೆ ಇತ್ತು

● ಸಮಾಜ ಕಲ್ಯಾಣ ಸಚಿವ ಡಾ. ಹೆಚ್.ಸಿ.ಮಹದೇವಪ್ಪ ಅಭಿಮತ ● ಬಾಬೂಜಿ ಕುರಿತ ರಾಜ್ಯ ಮಟ್ಟದ ವಿಚಾರ ಸಂಕಿರಣಕ್ಕೆ ಚಾಲನೆ ● ಬಾಬೂಜಿ ಚಿಂತನೆ ಯುವ ಜನರಿಗೆ ಪ್ರೇರಣೆ: ಮುನಿಯಪ್ಪ



ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಘಟಿಕೋತ್ಸವ ಭವನದಲ್ಲಿ ಶುಕ್ರವಾರ ನಡೆದ 'ಭಾರತದ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ಪ್ರಗತಿಗೆ ಡಾ.ಬಾಬು ಜಗಜೀವನರಾಂ ಕೊಡುಗೆಗಳು' ವಿಷಯ ಕುರಿತ ಒಂದು ದಿನದ ರಾಜ್ಯ ಮಟ್ಟದ ವಿಚಾರ ಸಂಕಿರಣದಲ್ಲಿ ಸಚಿವರಾದ ಕೆ.ಹೆಚ್.ಮುನಿಯಪ್ಪ, ಡಾ.ಹೆಚ್.ಸಿ. ಮಹದೇವಪ್ಪ, ಡಾ.ಬಾಬು ಜಗಜೀವನರಾಂ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು.

ಮೈಸೂರು, ಜು.18(ಎಂಟಿವೈ)– ರಾಷ್ಟ್ರ ಕಟ್ಟಲು ಹಾಗೂ ಸಮ ಸಮಾಜ ನಿರ್ಮಾಣಕ್ಕಾಗಿ ಶ್ರಮಿಸಿದ ಬಾಬು ಜಗಜೀವನರಾಂ (ಬಾಬೂಜಿ) ಅವರ ಚಿಂತನೆಗಳು ನಮಗೆ ಪ್ರೇರಣೆಯಾಗಿವೆ ಎಂದು ಸಚಿವ ಡಾ.ಎಚ್.ಸಿ.ಮಹದೇವಪ್ಪ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಮುಕ್ತ ಗಂಗೋತ್ರಿಯಲ್ಲಿರುವ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಘಟಿಕೋತ್ಸವ ಭವನದಲ್ಲಿ ಡಾ.ಬಾಬು ಜಗಜೀವನ ರಾಂ ಅಧ್ಯಯನ, ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರದ ವತಿಯಿಂದ ಶುಕ್ರವಾರ ಆಯೋಜಿಸಿದ್ದ 'ಭಾರತದ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ಪ್ರಗತಿಗೆ ಡಾ.ಬಾಬು ಜಗಜೀವನರಾಂ ಅವರ ಕೊಡುಗೆಗಳು' ವಿಷಯ ಕುರಿತ ಒಂದು ದಿನದ ರಾಜ್ಯ ಮಟ್ಟದ ವಿಚಾರ ಸಂಕಿರಣದಲ್ಲಿ ಮಾತನಾಡಿದ ಅವರು, ಬಾಬು ಜಗಜೀವನರಾಂ ಅವರಿಗೆ ಪ್ರಧಾನಮಂತ್ರಿಯಾಗುವ ಎಲ್ಲಾ ಅವಕಾಶ ಹಾಗೂ ಅರ್ಹತೆಗಳಿದ್ದವು. ಆದರೆ, ಜಾತಿ ವ್ಯವಸ್ಥೆ ಪ್ರಧಾನಮಂತ್ರಿ ಹುದ್ದೆಯಿಂದ ದೂರ ಇಟ್ಟಿತ್ತು. ಜಾತಿ ವ್ಯವಸ್ಥೆ ಹೇಗೆ ಕೆಲಸ ಮಾಡುತ್ತಿದೆ ಎನ್ನುವುದನ್ನು ಎಲ್ಲರೂ ತಿಳಿದುಕೊಳ್ಳಬೇಕು. ಭಾರತದ ಪ್ರಜಾಪ್ರಭುತ್ವ ಆಡಳಿತ, ಸಂವಿಧಾನ ಚರ್ಚೆಯ ವಿಷಯಗಳಾಗಿದೆ. ಆದರೆ ಸಂಪೂರ್ಣವಾದಂತಹ ಫಲ ಸಾಮಾನ್ಯ ಜನರಿಗೆ ತಲುಪಿಸುವಲ್ಲಿ ಹೆಣಗಾಡುವ ಪರಿಸ್ಥಿತಿ ಇದೆ. ಕಾರಣ ನೈತಿಕತೆ ಎನ್ನುವುದು ಕುಸಿಯುತ್ತಿದೆ ಎಂದು ವಿಷಾದಿಸಿದರು.

ಬಾಬು ಜಗಜೀವನರಾಂ, ನೆಹರು, ಅಂಬೇಡ್ಕರ್ ಅವರು ಸಾಂಸ್ಕೃತಿಕ ನಾಯಕತ್ವ ಮತ್ತು ನೈತಿಕತೆಯನ್ನು ಹೊಂದಿದ್ದ ನಾಯಕರಾಗಿದ್ದರು. ಆದರೆ ಇಂದು ಅಂತಹ ಸಾಂಸ್ಕೃತಿಕ ನಾಯಕತ್ವ ಕುಸಿಯುತ್ತಿದೆ. ಧಾರ್ಮಿಕತೆ ಅಧೋಗತಿಗೆ ಹೋಗುತ್ತಿದೆ. ಪ್ರಜಾಸತ್ತಾತ್ಮಕ ನಿಲುವು ಮತ್ತು ನಡೆಗಳ ಮೂಲಕ ಸಂವಿಧಾನದ ಆಶಯಗಳ ಜಾರಿಗೊಳಿಸಿ ಭವಿಷ್ಯದ ಭಾರತವನ್ನು ಕಟ್ಟಿ, ಬಹುತ್ವದ ರಕ್ಷಣೆ ಮಾಡಿ ಸಮ ಸಮಾಜ ನಿರ್ಮಾಣ ಮಾಡಿದ್ದರಿಂದ ಮುಂದಿನ ಪೀಳಿಗೆಗೂ ತಿಳಿಸುವ ಕೆಲಸವಾಗಬೇಕು ಎಂದು ತಿಳಿಸಿದರು.

ಭಾರತದಲ್ಲಿ ಅನಕ್ಷರತೆ, ಬಡತನ, ಹಸಿವು ಇದೆಲ್ಲಾ ಇದ್ದ ಸಂದರ್ಭದಲ್ಲೇ ಕೃಷಿ ಸಚಿವರಾಗಿದ್ದ ಬಾಬು ಜಗಜೀವನ ರಾಂ ಅವರು, ಆಳವಾದ ಅಧ್ಯಯನದ ಮೂಲಕ ಹೊಸ ತಂತ್ರಜ್ಞಾನ, ವೈಜ್ಞಾನಿಕ ದೃಷ್ಟಿಕೋನದಿಂದ ಕಡಿಮೆ ವೆಚ್ಚದ ವ್ಯವಸಾಯ ಮಾಡಿ, ಹೆಚ್ಚು ಉತ್ಪಾದನೆ ಮಾಡಿ ಆರ್ಥಿಕ ಮತ್ತು ಆಹಾರದ ಸ್ವಾವಲಂಬನೆಗೆ ಹೆಚ್ಚು ಒತ್ತನ್ನು ನೀಡಿದರು. ಬಾಬು ಜಗಜೀವನರಾಂ ಅವರು ರಾಜಕೀಯ ವಿಚಾರದಲ್ಲಿ ಸಜ್ಜನಿಕೆ, ಸುಸಂಸ್ಕೃತ ನಾಯಕರಾಗಿದ್ದರು. ಇವರ ಆಡಳಿತದ ಕೌಶಲ್ಯ, ದೃಷ್ಟಿಕೋನ, ಮುಂದಾಲೋಚನೆಗಳು ರಾಷ್ಟ್ರದ ಭವಿಷ್ಯದ ರಾಷ್ಟ್ರ ನಿರ್ಮಾಣದ ಕಡೆಗೆ ಇರುತ್ತಿದ್ದವು. ಮೊದಲ ಬಾರಿಗೆ ಕಾರ್ಮಿಕ ಸಚಿವರಾದ ಸಂದರ್ಭದಲ್ಲಿ ಕಾರ್ಮಿಕರಿಗೆ ಅನೇಕ ಸವಲತ್ತುಗಳನ್ನು ನೀಡಿದರು. ರೈಲ್ವೆ ಮಂತ್ರಿಯಾದಾಗ ಹಿಂದುಳಿದವರಿಗೆ ಶೋಷಿತರಿಗೆ ಮೀಸಲಾತಿ ನೀಡಿದರು. ರಕ್ಷಣಾ ಸಚಿವರಾಗಿಯೂ ಉತ್ತಮ ಸೇವೆ ಮಾಡಿದ ಅವರು, ಭಾರತದ ರಾಷ್ಟ್ರ ಧ್ವಜದ ಪತಾಕೆಯನ್ನು ಹಿಮಾಲಯದ ಮೇಲೆ ಹಾರಿಸಿದರು ಎಂದು ವಿವರಿಸಿದರು.

ಬಾಬೂಜಿ ಚಿಂತನೆ ಯುವ ಜನರಿಗೆ ಪ್ರೇರಣೆ: ಆಹಾರ ಸಚಿವ ಕೆ.ಹೆಚ್.ಮುನಿಯಪ್ಪ ಮಾತನಾಡಿ, ಡಾ.ಬಿ.ಆರ್.ಅಂಬೇಡ್ಕರ್ ಯಾವ ಮಾದರಿಯಲ್ಲಿ ಹೋರಾಟ ಮಾಡಿದರೋ ಅದೇ ಮಾದರಿಯಲ್ಲಿ ಬಾಬೂಜಿ ಅವರು ಹೋರಾಟ ಮಾಡಿದರು. ದೂರದೃಷ್ಟಿಯುಳ್ಳವರಾಗಿದ್ದ ಅವರು, ಸಮಾನತೆಗಾಗಿ ಹಲವಾರು ಕಾಯ್ದೆಗಳನ್ನು ಜಾರಿಗೆ ತಂದರು. ಹೋರಾಟದಿಂದ ಬೆಳೆದು ಬಂದ ಅವರನ್ನು ಕಾಂಗ್ರೆಸ್ ಪಕ್ಷ ಗುರುತಿಸಿ ಹೆಚ್ಚಿನ ಪ್ರೋತ್ಸಾಹ ನೀಡಿತು ಎಂದರು.

ಡಾ. ಬಾಬು ಜೀವನರಾಮ್, ಈ ರಾಷ್ಟ್ರ ಕಂಡ ಶ್ರೇಷ್ಠ ರಾಜಕೀಯ ಮುತ್ಸದ್ದಿ ದಲಿತರ, ತುಳಿತಕ್ಕೊಳಗಾದವರ, ಶ್ರಮಿಕರ ಹಾಗೂ ಎಲ್ಲಾ ವರ್ಗದ ಅಭಿವೃದ್ಧಿಗೆ ಪೂರಕವಾಗಿ ತಮ್ಮ ಜೀವನವನ್ನು ಮುಡಿಪಾಗಿಟ್ಟ ಮಹಾನ್ ಚೇತನ. ಅವರ ಚಿಂತನೆಗಳು ನಮ್ಮ ಸಮಾಜದ ಯುವಜನತೆಗೆ ಪ್ರೇರಣೆಯಾಗಿವೆ. ಕರ್ನಾಟಕ ರಾಜ್ಯ ಸರ್ಕಾರ ರಾಜ್ಯದ 9 ವಿಶ್ವವಿದ್ಯಾಲಯಗಳಲ್ಲಿ (ಮೈಸೂರು, ಮೈಸೂರು ಮುಕ್ತ ವಿಶ್ವವಿದ್ಯಾಲಯ, ಬೆಂಗಳೂರು, ಧಾರವಾಡ, ಶಿವಮೊಗ್ಗ, ತುಮಕೂರು, ಬಳ್ಳಾರಿ, ದಾವಣಗೆರೆ, ಕಲಬುರಗಿ) ಡಾ. ಬಾಬು ಜಗಜೀವನ ರಾಮ್ ಅಧ್ಯಯನ ಕೇಂದ್ರಗಳನ್ನು ತೆರೆದು, ಈ ಕೇಂದ್ರಗಳ ಮೂಲಕ ತಳ ಸಮುದಾಯಗಳಲ್ಲಿ ಸಾಮಾಜಿಕವಾಗಿ, ಶೈಕ್ಷಣಿಕವಾಗಿ, ಆರ್ಥಿಕವಾಗಿ ಜಾಗೃತಿ ಮೂಡಿಸಲು ವಿಚಾರ ಸಂಕಿರಣ, ಸಮ್ಮೇಳನ ಮತ್ತಿತರ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಶರಣಪ್ಪ.ವಿ. ಹಲಸೆ, ಪ್ರಾಧ್ಯಾಪಕ ಪ್ರೊ.ಆರ್.ತಿಮ್ಮರಾಯಪ್ಪ, ಕುಲಸಚಿವ ಎಸ್.ಕೆ.ನವೀನ್ ಕುಮಾರ್, ಡಾ. ಬಾಬು ಜಗಜೀವನರಾಂ ಅಧ್ಯಯನ, ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರದ ನಿರ್ದೇಶಕಿ ಡಾ.ಆರ್.ಶರಣಮ್ಮ ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

19.07.2025 ಶನಿವಾರ, ಮಳೆ ನಕ್ಷತ್ರ: ಪುನರ್ವಸು, 6.07.2025 ರಿಂದ 19.07.2025 ವಿಶ್ವವಸು ನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಆಷಾಢ ಮಾಸ, ಕೃಷ್ಣ ಪಕ್ಷ, ತಿಥಿ: ನವಮಿ, ನಕ್ಷತ್ರ: ಭರಣಿ, ರಾಹುಕಾಲ: ಬೆಳಗ್ಗೆ 9 ರಿಂದ 10.30 ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಬೆಳಗ್ಗೆ 6.30 ರಿಂದ ದೇಹ–ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ, ಬೆಳಗ್ಗೆ 9 ರಿಂದ ವೆರಿಕೋಸ್ ವೇನ್ಸ್ ಮತ್ತು ವೆರಿಕೋಸ್ ಅಲ್ಸರ್‌ಗಳ ಚಿಕಿತ್ಸಾ ಶಿಬಿರ, ಡಯಾಬಿಟಿಕ್ ರೆಟಿನೋಪತಿ ತಪಾಸಣಾ ಶಿಬಿರ, ಇಸುಬು ತಪಾಸಣಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ ಆವರಣ, ಲಲಿತಾದ್ರಿ ರಸ್ತೆ, ಆಲನಹಳ್ಳಿ.

■ **ಪ್ಯಾಲೇಸ್ ಸ್ಪೋರ್ಟ್ಸ್ ಕ್ಲಬ್ :** ಜಿಲ್ಲಾ ಮಟ್ಟದ ಪ್ರೌಢಶಾಲಾ ಬಾಲಕ ಹಾಗೂ ಬಾಲಕಿಯರ ವಾಲಿಬಾಲ್ ಪಂದ್ಯಾವಳಿ, ಅಧ್ಯಕ್ಷತೆ : ಶಾಸಕ ಹರೀಶ್‌ಗೌಡ, ಉದ್ಘಾಟನೆ : ಶಾಸಕ ಟಿ.ಎಸ್. ಶ್ರೀವತ್ಸ, ಸನ್ಮಾನಿತರು : ಅಂತರರಾಷ್ಟ್ರೀಯ ವಾಲಿಬಾಲ್ ಆಟಗಾರ ವಿ.ಆರ್. ಸನೋಜ್, ಸ್ಥಳ: ವಿವೇಕಾನಂದ ಕ್ರೀಡಾಂಗಣ, ಕುವೆಂಪುನಗರ, ಬೆಳಗ್ಗೆ 9ಕ್ಕೆ.

■ **ಸಿದ್ಧಾರ್ಥನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಸಮರ್ಥನಂ ಅಂಗವಿಕಲರ ಸಂಸ್ಥೆ:** ಉದ್ಯೋಗ ಮೇಳ, ಸ್ಥಳ: ಕಾಲೇಜು ಆವರಣ, ಬೆಳಗ್ಗೆ 9 ರಿಂದ.

■ **ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ, ಮೈಸೂರು ಶಾಖೆಯ ಮಹಿಳಾ ಘಟಕ :** ಮಹಿಳಾ ಉದ್ಯಮಿಗಳು ತಯಾರಿಸುವ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ, ಉದ್ಘಾಟನೆ : ದಿಯಾ ಸಿಲ್ಕ್ ವ್ಯವಸ್ಥಾಪಕ ನಿರ್ದೇಶಕರಾದ ನಮ್ರತಾ ಶೆಣೈ, ಅತಿಥಿಗಳು : ಬಿಲ್ಡರ್ಸ್ ಅಸೋಸಿಯೇಷನ್ ಮೈಸೂರು ಶಾಖೆ ಅಧ್ಯಕ್ಷ ವಿ. ಶ್ರೀನಿವಾಸ್, ಸ್ಥಳ: ಜಯಮ್ಮ ಗೋವಿಂದೇಗೌಡ ಕಲ್ಯಾಣ ಮಂಟಪ, ಕುವೆಂಪುನಗರ, ಬೆಳಗ್ಗೆ 9.30ಕ್ಕೆ

■ **ಕಾವೇರಿ ಆಯುರ್ವೇದ ಆಸ್ಪತ್ರೆ :** ಪಾರ್ಶ್ವವಾಯು ಮತ್ತು ಅನ್ಯನರ ಸಂಬಂಧಿ ಕಾಯಿಲೆ ಉಚಿತ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10 ರಿಂದ.

■ **ಮೈಸೂರು ಜಿಲ್ಲಾ ಚಿನ್ನ ಬೆಳ್ಳಿ ಕೆಲಸಗಾರರ ಅಭಿವೃದ್ಧಿ ಸಂಘ :** ವಿಶ್ವಬ್ರಹ್ಮ ಕ್ರಿಕೆಟ್ ಟೂರ್ನಮೆಂಟ್, ಸ್ಥಳ : ವಿ.ವಿ. ಮೈದಾನ, ಬೆಳಗ್ಗೆ 10 ರಿಂದ.

■ **ಜೆಎಸ್‌ಎಸ್ ನರ್ಸಿಂಗ್ ಕಾಲೇಜು :** ಬಿ.ಎಸ್ಸಿ ನರ್ಸಿಂಗ್‌ನ 28ನೇ ಬ್ಯಾಚ್ ವಿದ್ಯಾರ್ಥಿಗಳ ಸಮರ್ಪಣಾ ಕಾರ್ಯಕ್ರಮ, ಮುಖ್ಯ ಅತಿಥಿಗಳು : ಬೇಬಿ ಮೆಮೋರಿಯಲ್ ಆಸ್ಪತ್ರೆ ಕೋಳಿಕೋಡ್ ಮುಖ್ಯಸ್ಥರಾದ ಪ್ರೊ. ಅಲಿರ್ಝುಬೆತ್ ವರ್ಕಿ, ಅಧ್ಯಕ್ಷತೆ : ಜೆಎಸ್‌ಎಸ್ ಮಹಾವಿದ್ಯಾಪೀಠ ವೈದ್ಯಕೀಯ ಶಿಕ್ಷಣ ವಿಭಾಗದ ನಿರ್ದೇಶಕ ಆರ್. ಮಹೇಶ್, ಅತಿಥಿಗಳು : ಜೆಎಸ್‌ಎಸ್ ಆಸ್ಪತ್ರೆ ನಿರ್ದೇಶಕ ಡಾ. ಸಿ.ಪಿ. ಮಧು, ಶ್ರೀಮತಿ ಜಾನೆಟ್ ಮಥಿಯಾಸ್, ಸ್ಥಳ: ಶ್ರೀರಾಜೇಂದ್ರ ಶತಮಾನೋತ್ಸವ ಸಭಾಂಗಣ, ಜೆಎಸ್‌ಎಸ್ ಆಸ್ಪತ್ರೆ, ಬೆಳಗ್ಗೆ 10ಕ್ಕೆ.

■ **ಎಸ್‌ಡಿಎಂ ಬಾಲಕಿಯರ ಪದವಿಪೂರ್ವ ಕಾಲೇಜು :** ವಿದ್ಯಾರ್ಥಿಗಳ ಕೌನ್ಸಿಲ್ ಉದ್ಘಾಟನಾ ಸಮಾರಂಭ, ಮುಖ್ಯ ಅತಿಥಿಗಳು : ಆಯಿಷ್ ನಿರ್ದೇಶಕರಾದ ಪ್ರೊ. ಎಂ. ಪುಷ್ಪಾವತಿ, ಗೌರವ ಅತಿಥಿಗಳು : ಎಂಎಂಕೆ ಮತ್ತು ಎಸ್‌ಡಿಎಂ ಪ್ರಿನ್ಸಿಪಾಲ್ ಪ್ರೊ. ಎನ್. ಭಾರತಿ, ಅಧ್ಯಕ್ಷತೆ : ಕಾಲೇಜು ಪ್ರಿನ್ಸಿಪಾಲ್ ಶ್ರೀಮತಿ ನಯನಕುಮಾರಿ, ಸ್ಥಳ: ರತ್ನಮ್ಮ ಹೆಗ್ಗಡೆ ಕಲಾಮಂಟಪ, ಕಾಲೇಜು ಆವರಣ, ಬೆಳಗ್ಗೆ 10ಕ್ಕೆ

■ **ಜೆಎಸ್‌ಎಸ್ ಮಹಿಳಾ ಕಾಲೇಜು :** ಶಿಕ್ಷಕರ ಸಾಮರ್ಥ್ಯ ನಿರ್ಮಾಣ ಕಾರ್ಯಾಗಾರ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಉದ್ಘಾಟನೆ : ಜೆಎಸ್‌ಎಸ್ ಮಹಾವಿದ್ಯಾಪೀಠ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ. ಸಿ.ಜಿ. ಬೆಟಸೂರ ಮಠ, ಮುಖ್ಯ ಅತಿಥಿಗಳು : ಮಹಾಜನ ಸ್ನಾತಕೋತ್ತರ ಕೇಂದ್ರದ ನಿರ್ದೇಶಕ ಡಾ. ಸಿ.ಕೆ. ರೇಣುಕಾರ್ಯ, ಅಧ್ಯಕ್ಷತೆ : ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕ ಪ್ರೊ. ಮೊರಬದ ಮಲ್ಲಿಕಾರ್ಜುನ, ಸ್ಥಳ: ಕಾಲೇಜು ಆವರಣ, ಬೆಳಗ್ಗೆ 10ಕ್ಕೆ.

■ **ಜಿಲ್ಲಾಡಳಿತ, ಜಿಪಂ :** ಮೈಸೂರು ಜಿಲ್ಲೆಯ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಉದ್ಘಾಟನಾ ಕಾರ್ಯಕ್ರಮ, ಮುಖ್ಯಮಂತ್ರಿ ಸಿದ್ದರಾಮಯ್ಯ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಂದ ಶಂಕುಸ್ಥಾಪನೆ, ಮುಖ್ಯ ಅತಿಥಿಗಳು : ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಸಚಿವ ಕೆ. ವೆಂಕಟೇಶ್, ರಾಜ್ಯಸಭಾ ಸದಸ್ಯ ರಣದೀಪ್ ಸಿಂಗ್ ಸುರ್ಜೇವಾಲಾ, ಅಧ್ಯಕ್ಷತೆ : ಶಾಸಕ ಕೆ. ಹರೀಶ್‌ಗೌಡ, ಸ್ಥಳ: ಮಹಾರಾಜ ಕಾಲೇಜು ಮೈದಾನ, ಬೆಳಗ್ಗೆ 10.30ಕ್ಕೆ.

■ **ಕುಂಚಕಾವ್ಯ ಸಾಂಸ್ಕೃತಿಕ ಸಮಿತಿ :** ಕುಂಚ ಕಾವ್ಯ ಸಾಂಸ್ಕೃತಿಕ ಕಾರ್ಯಕ್ರಮಗಳು, ಉದ್ಘಾಟನೆ : ಚಲನಚಿತ್ರ ನಟ ಪ್ರಕಾಶ್ ಬೆಳವಾಡಿ, ಮುಖ್ಯ ಅತಿಥಿಗಳು : ದೃಶ್ಯ ಕಲಾವಿದ ಎಂ.ಎಸ್. ಉಮೇಶ್, ಅಧ್ಯಕ್ಷತೆ : ಚಾಮರಾಜೇಂದ್ರ ದೃಶ್ಯ ಕಲಾ ಕಾಲೇಜು ಡೀನ್ ಎ. ದೇವರಾಜು, ಉಪಸ್ಥಿತರು : ಚಾಮರಾಜೇಂದ್ರ ದೃಶ್ಯ ಕಲಾ ಕಾಲೇಜು ಆಡಳಿತಾಧಿಕಾರಿ ಶ್ರೀಮತಿ ನಿರ್ಮಲಾ ಮಠಪತಿ, ಶೈಕ್ಷಣಿಕ ಸಂಯೋಜಕ ಎ.ಪಿ. ಚಂದ್ರಶೇಖರ್, ಸ್ಥಳ: ಚಾಮರಾಜೇಂದ್ರ ದೃಶ್ಯಕಲಾ ಕಾಲೇಜು, ಸಿದ್ಧಾರ್ಥನಗರ, ಬೆಳಗ್ಗೆ 11ಕ್ಕೆ.

■ **ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ :** ಕಾವೇರಿ ನದಿ ತೀರದ ಪ್ರಸಿದ್ಧ ಸ್ಥಳಗಳನ್ನು ಕುರಿತಂತೆ ತಾವು ರಚಿಸಿರುವ 'ಕಾವೇರಿ ನದಿ ತೀರದ ಪ್ರಸಿದ್ಧ ಸ್ಥಳಗಳು' ಕೃತಿಯ ಬಿಡುಗಡೆ ಕಾರ್ಯಕ್ರಮ, ಕೃತಿ ಬಿಡುಗಡೆ : ಹಿರಿಯ ಸಾಹಿತಿ ಡಾ.ಸಿ.ಪಿ.ಕೃಷ್ಣಕುಮಾರ್(ಸಿಪಿಕೆ), ಅಧ್ಯಕ್ಷತೆ : ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಕೃತಿ ಕುರಿತು : ಸುಮಾ ಪಂಚೋಳಿ, ಮುಖ್ಯ ಅತಿಥಿಗಳು : ಪ್ರಕಾಶಕ ಬಿ.ಎನ್. ಶ್ರೀನಿವಾಸ್, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಸಾಹಿತಿ ಮಿರ್ಲೆ ಚಂದ್ರಶೇಖರ್, ಲೇಖಕಿ ಪ್ರಭಾಶಾಸ್ತ್ರಿ ಜೋಶ್ಯುಲ, ಡಿ. ಈರೇಶ್ ನಗರ್ಲೆ, ಡಾ.ಎಂ.ಶಿವಸ್ವಾಮಿ, ಸ್ಥಳ: ಡಾ. ಶಿವರಾತ್ರಿ ರಾಜೇಂದ್ರ ಭವನ, ಎಂ.ಜಿ. ರಸ್ತೆ, ಸಂಜೆ 4.30ಕ್ಕೆ.

■ **ಗುತ್ತಿಗೆದಾರರ ಕ್ರೆಡಿಟ್ ಕೋ ಆಪರೇಟಿವ್ ಸೊಸೈಟಿ ಲಿಮಿಟೆಡ್ :** ಗುತ್ತಿಗೆದಾರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ, ಸಾನ್ನಿಧ್ಯ : ಆದಿಚುಂಚನಗಿರಿ ಶಾಖಾ ಮಠದ ಶ್ರೀ ಸೋಮೇಶ್ವರನಾಥ ಸ್ವಾಮೀಜಿ, ಅಧ್ಯಕ್ಷತೆ: ಸೊಸೈಟಿ ಅಧ್ಯಕ್ಷ ಮಹಾಲಿಂಗಂ, ಮುಖ್ಯ ಅತಿಥಿಗಳು : ಶಾಸಕ ಟಿ.ಎಸ್. ಶ್ರೀವತ್ಸ, ಮುಖ್ಯ ಭಾಷಣಕಾರರು : ಆರ್.ಎ. ಚೇತನ್‌ರಾವ್, ಸೊಸೈಟಿ ಉಪಾಧ್ಯಕ್ಷ ವಿ. ಕುಮಾರ್, ಸ್ಥಳ: ರಿಯೋ ಮೆರಿಡಿಯನ್ ಸಭಾಂಗಣ, ಹೈವೇ ಸರ್ಕಲ್, ಸಂಜೆ 5ಕ್ಕೆ.

■ **ಸುವರ್ಣ ಬೆಳಕು ಫೌಂಡೇಶನ್ ಹಾಗೂ ಹಿಮಾಲಯ ಪ್ರತಿಷ್ಠಾನ :** ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಗುರುವಂದನ ಕಾರ್ಯಕ್ರಮ, ಹಿರಿಯ ಕ್ರೀಡಾ ತರಬೇತುದಾರರಾದ ಪ್ರಭಾಕರ್, ಜೀವೇಂದ್ರಕುಮಾರ್ ಅವರಿಗೆ ಗುರುವಂದನಾ ಪ್ರಶಸ್ತಿ ಪ್ರದಾನ ಸಮಾರಂಭ, ಉದ್ಘಾಟನೆ : ಅಂತರರಾಷ್ಟ್ರೀಯ ಯೋಗ ಶಿಕ್ಷಕ ರಮೇಶ್‌ಶೆಟ್ಟಿ, ಅಧ್ಯಕ್ಷತೆ : ಶ್ರೀರಾಮಕೃಷ್ಣ ಪರಮಹಂಸ ಸೇವಾ ಟ್ರಸ್ಟ್‌ನ ಕೆಂಪಲಿಂಗರಾಜು, ಮುಖ್ಯ ಅತಿಥಿಗಳು : ಕೆ.ಟಿ. ರಾಮೇಗೌಡ, ಅವಿನಾಶ್, ಸ್ಥಳ: ಸುವರ್ಣ ಬೆಳಕು ಫೌಂಡೇಷನ್ ಆವರಣ, ಸಂಜೆ 5ಕ್ಕೆ.

■ **ಉತ್ತರ ಕನ್ನಡ ಜಿಲ್ಲಾ ಸಾಂಸ್ಕೃತಿಕ ಸಂಘ, ಸುಬ್ರಹ್ಮಣ್ಯ ಚಿಟ್ಟಾಣಿ ಯಕ್ಷ ಸ್ನೇಹ ಬಳಗ :** ಆಷಾಢ ಯಕ್ಷ ವೈಭವ, ಮಾಗಧ ವಧೆ ಯಕ್ಷಗಾನ ನಾಟಕ, ಸ್ಥಳ: ಯೋಗ ಸಂಸ್ಕೃತಿ ಕಲಾ ಭವನ, ಸಂಜೆ 5 ರಿಂದ.

■ **ಸಂಗೀತ ಪ್ರಿಯರ ಬಳಗ :** ಸಂತಸ ಅರಳುವ ಸಮಯ ಕನ್ನಡ ಕರೋಕೆ ಗಾಯನ ಕಾರ್ಯಕ್ರಮ, ಸ್ಥಳ: ನಾದಬ್ರಹ್ಮ ಸಂಗೀತ ಸಭಾ ಸಭಾಂಗಣ, ಜೆಎಲ್‌ಬಿ ರಸ್ತೆ, ಸಂಜೆ 5ಕ್ಕೆ.

■ **ಯೇಸುವಿನ ಪವಿತ್ರ ಹೃದಯದ ದೇವಾಲಯ :** ವಾರ್ಷಿಕ ಮಹೋತ್ಸವ, ಸಂಜೆ 5.30ಕ್ಕೆ ವಿಶೇಷ ಪ್ರಬೋಧನೆಯ ಬಲಿಪೂಜೆ–ಆರಾಧನೆ, ವಂ. ಗುರು ಮರಿಯ ಜೇವಿಯರ್, ಸ್ಥಳ: ಯೇಸುವಿನ ಪವಿತ್ರ ಹೃದಯದ ದೇವಾಲಯ, ಯಾದವಗಿರಿ.

■ **ಗೀತ್ ಸಂಗಮ್ ತಂಡ :** ಡಾ. ರಾಜ್‌ಕುಮಾರ್ ಹಾಗೂ ಎಸ್.ಪಿ. ಬಾಲಸುಬ್ರಮಣ್ಯಂ ಸ್ಮರಣಾರ್ಥ ಪ್ರಣಯ ಗೀತೆಗಳ ಮಧುರ ಸಂಗಮ, ಸ್ಥಳ: ಜಗನ್ಮೋಹನ ಅರಮನೆ, ಸಂಜೆ 5.30ಕ್ಕೆ.

■ **ಶ್ರೀ ಕೃಷ್ಣ ಗಾನಸಭಾ :** ಶ್ರೀಮನ್ ಮಹಾರಾಜ ಶ್ರೀ ಮುಮ್ಮಡಿ ಕೃಷ್ಣರಾಜ ಒಡೆಯರ್ ಅವರ 231ನೇ ಜಯಂತ್ಯೋತ್ಸವ, ಹರಿಕಥಾ ಕಾರ್ಯಕ್ರಮ : ಶ್ರೀ ಕೃಷ್ಣಾವತಾರ ವೈಭವ, ಸೀತಾರಾಮ ಮುನಿಕೋಟಿ ಅವರಿಂದ, ಸಹಕಾರ : ವಿದ್ವಾನ್ ವರದರಾಜನ್, ವಿದ್ವಾನ್ ಶಿವಪ್ರಶಾಂತ್–ಕೀಬೋರ್ಡ್, ಸ್ಥಳ: ಆಳ್ವಾರ್ ಕಲಾಭವನ, ಶ್ರೀ ಕೃಷ್ಣ ದೇವಸ್ಥಾನ, ಗೋಕುಲಂ 3ನೇ ಹಂತ, ಸಂಜೆ 6ಕ್ಕೆ.

■ **ಶ್ರುತಿಮಂಜರಿ ಪ್ರತಿಷ್ಠಾನ, ರೋಟರಿ ಪಶ್ಚಿಮ :** ಶ್ರೀ ಜಯಚಾಮರಾಜ ಒಡೆಯರ್ ಸಂಸ್ಮರಣಾ ದಿನಾಚರಣೆ, ವಿದ್ವಾನ್ ಶ್ರೀಕಾಂತಂ ನಾಗೇಂದ್ರ ಶಾಸ್ತ್ರಿ ಮತ್ತು ವೃಂದದವರಿಂದ ಶ್ರೀ ಜಯಚಾಮರಾಜ ಒಡೆಯರ್ ಅವರ ಶ್ರೀ ವಿದ್ಯಾಂಕಿತ ಕೃತಿಗಳ ಆಂತರ್ಯ ಕುರಿತು ಕಾರ್ಯಕ್ರಮ, ಸ್ಥಳ: ರೋಟರಿ ಪಶ್ಚಿಮ ಸಭಾಂಗಣ, ಕಾಮಾಕ್ಷಿ ಆಸ್ಪತ್ರೆ ಎದುರು, ಸರಸ್ವತಿಪುರಂ, ಸಂಜೆ 6ಕ್ಕೆ.

■ **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಮಹೀಪಾಲಾನಂದ ಅವರಿಂದ ಇನ್‌ಸೈಟ್ಸ್ ಫ್ರಂ ಪ್ಯಾರಾಬಲ್ಸ್ ಆಫ್ ಶ್ರೀರಾಮಕೃಷ್ಣ–7 ಕುರಿತು ಪ್ರವಚನ, ಸ್ಥಳ: ಸ್ವಾಮಿ ಶಾಂಭವಾನಂದಜೀ ಸ್ಮಾರಕ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

■ **ಭಾರತೀಯ ವಿದ್ಯಾಭವನ, ಮೈಸೂರು, ಇನ್ಫೋಸಿಸ್ ಫೌಂಡೇಷನ್ :** 146ನೇ ಸಾಂಸ್ಕೃತಿಕ ಕಾರ್ಯಕ್ರಮ, ಗಾನಕಲಾಭೂಷಣ ವಿದ್ವಾನ್ ಡಾ.ಆರ್.ಕೆ. ಪದ್ಮನಾಭ ಅವರಿಂದ ಕರ್ನಾಟಕ ಶಾಸ್ತ್ರೀಯ ಸಂಗೀತ, ವಿದ್ವಾನ್ ಸಿ. ಚೆಲುವರಾಜು–ಮೃದಂಗ, ವಿದುಷಿ ಸಿಂಧು ಸುಚೇತನ್–ವಯೋಲಿನ್, ಸ್ಥಳ: ಭಾರತೀಯ ವಿದ್ಯಾಭವನ ಆವರಣ, ವಿಜಯನಗರ, ಸಂಜೆ 6ಕ್ಕೆ.

■ **ಶ್ರೀ ರಾಮಾಭ್ಯುದಯ ಸಭಾ ಚಾರಿಟಬಲ್ ಟ್ರಸ್ಟ್ :** ಲೋಕಕಲ್ಯಾಣಕ್ಕಾಗಿ ಶ್ರೀಮದ್ ಭಾಗವತ್ ಪ್ರವಚನ, ವಿದ್ವಾನ್ ಶ್ರೀ ಗಣೇಶ್ ಶರ್ಮಾ (ಮೈಸೂರು) ಅವರಿಂದ. ಸ್ಥಳ: ರಾಮಮಂದಿರ ಆವರಣ, ಶಿವರಾಂಪೇಟೆ, ಸಂಜೆ 6.30 ರಿಂದ.

■ **ಚಿನ್ಮಯ ಮಿಷನ್ :** ಮಿಷನ್‌ನ ಕರ್ನಾಟಕದ ಮುಖ್ಯಸ್ಥರಾದ ಸ್ವಾಮಿ ಬ್ರಹ್ಮಾನಂದ ಅವರಿಂದ 'ನಿತ್ಯ ಜೀವನಕ್ಕೆ ಗೀತೆಯ ಸಂದೇಶ' ಕುರಿತು ಪ್ರವಚನ, ಸ್ಥಳ: ಮೈಸೂರಿನ ಫೋರ್ಟ್ ಮೊಹಲ್ಲಾದ ಶೃಂಗೇರಿ ಶ್ರೀ ಶಂಕರ ಮಠದ ಆವರಣ, ಸಂಜೆ 6.30 ರಿಂದ.

■ **ಅನುಭೂತಿ ಸಂಸ್ಥೆ, ಇವೆಂಟ್ ಟ್ರೀ, ಜಗನ್ನಾಥ ಕಲೆ ಮತ್ತು ಸಾಂಸ್ಕೃತಿಕ ಕೇಂದ್ರ :** ಮಾಯಾ ನಾಟಕ ಪ್ರದರ್ಶನ, ನಿರ್ದೇಶನ : ಎಸ್. ರಾಮನಾಥ್, ಸ್ಥಳ: ಜಗನ್ನಾಥ ಕಲೆ ಮತ್ತು ಸಾಂಸ್ಕೃತಿಕ ಕೇಂದ್ರದ ಆವರಣ, ವಿಜಯನಗರ, ಸಂಜೆ 6.30ಕ್ಕೆ.

■ **ಮೈಸೂರು ಸಿನಿಮಾ ಸೊಸೈಟಿ :** ಮೂರು ಕಿರು ಚಿತ್ರಗಳ ಉಚಿತ ಪ್ರದರ್ಶನ, ಸ್ಥಳ: ಸುಮಶ್ರೀ ಆರ್ಕೇಡ್, ಸರಸ್ವತಿಪುರಂ, ಸಂಜೆ 7 ರಿಂದ 8 ಗಂಟೆಯವರೆಗೆ

■ **ಗಾನಭಾರತೀ :** ಸಂಜೆ 5 ರಿಂದ ಶ್ರೀ ಜಯಚಾಮರಾಜ ವೈಭವ–ಸಂಗೀತ, ನೃತ್ಯ ಮತ್ತು ಸಂವಾದ ಕಾರ್ಯಕ್ರಮ, ವಿದುಷಿ ಅಶ್ವಿನಿ ಸುಕೀರ್ತಿ ಮತ್ತು ವಿದುಷಿ ಸ್ವಾತಿ ಕಿರಣ್ ಅವರಿಂದ ಶಾಸ್ತ್ರೀಯ ನೃತ್ಯ ಪ್ರದರ್ಶನ, ಬಳಿಕ ವಿದುಷಿ ಡಾ. ಸುಕನ್ಯಾ ಪ್ರಭಾಕರ್ ಮತ್ತು ವಿದುಷಿ ಡಾ. ಸುಮನ ವೇದಾಂತ್ ಅವರಿಂದ ಅವರಿಂದ ಗಾಯನ, ವಿದ್ವಾನ್ ಬಿ.ಕೆ. ರಘು–ವಯೋಲಿನ್, ವಿದ್ವಾನ್ ಅನೂರ್ ಅನಂತಕೃಷ್ಣ ಶರ್ಮ–ಮೃದಂಗ, ವಿದ್ವಾನ್ ಜಿ.ಎಸ್. ರಾಮಾನುಜಮ್–ಘಟಂ, ರಾತ್ರಿ 8 ಗಂಟೆಗೆ ತತ್ವಜ್ಞಾನಿ ಹೆಚ್.ಎಲ್. ಚಂದ್ರಶೇಖರ್ ಅವರಿಂದ ಪ್ರವಚನ, ಸ್ಥಳ: ವೀಣೆ ಶೇಷಣ್ಣ ಭವನ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ತತ್ವ ದರ್ಪಣ ಕೊರಡು ಕೊನರಿಸಿದ ಪಾಶ್ಚಾತ್ಯ ತತ್ವಜ್ಞಾನಿಗಳು, ಪ್ರಸ್ತುತಿ: ಪ್ರೊ.ವಿ.ಎನ್.ಶೇಷಗಿರಿರಾವ್, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ನಿತಿನ್ ರಾಜಾರಾಂ ಶಾಸ್ತ್ರೀ ಮತ್ತು ಜಿ. ಪುಷ್ಪಲತಾ, ವ್ಯಾಖ್ಯಾನ–ಡಾ. ಮ. ರಾಮಕೃಷ್ಣ, 6.50 ರೈತರಿಗೆ ಸಲಹೆ, 7.15 ಮನೆ ಮನೆಯ ಹಣತೆ –ಪ್ರಾಯೋಜಿತ ಸರಣಿ ಕಾರ್ಯಕ್ರಮ, ಪ್ರಾಯೋಜಕರು –ಡಾ. ಬಿ.ಆರ್. ಅಂಬೇಡ್ಕರ್ ಸಂಶೋಧನಾ ಸಂಸ್ಥೆ, ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ, 8.30 ಕನ್ನಡ ಚಿತ್ರಗೀತೆಗಳು, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ, 10.30 ಹಿಂದಿ ಚಿತ್ರಗೀತೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ನಮ್ಮೂರ್ ಹೆಸರು, ಪ್ರಸ್ತುತಿ : ಡಾ. ಮೈಸೂರು ಉಮೇಶ್

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಜನಪದ ಸಂಗೀತ, 1.00 ಪ್ರಗತಿಪಥ– ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 2.40 ಹಿಂದಿ ಚಿತ್ರಗೀತೆಗಳು, 3.00 ಹಳ್ಳಿಹಾಡು, 3.30 ಮಕ್ಕಳ ಮಂಟಪ–ಹಕ್ಕಿಗೂಡು. ಪ್ರಸ್ತುತಿ–ಬಿ.ಜಿ. ಕವಿತಾ, 4.00 ನಾಟಕ– ರಾಮಧ್ಯಾನ್ಯ ಪ್ರಕರಣ, 4.30 ನೆನಪಿನಂಗಳ (ಧ್ವನಿ ಭಂಡಾರದಿಂದ), 6.50 ಕೃಷಿರಂಗ : ಕಿಸಾನ್‌ವಾಣಿ–ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ಸಾವಯವ ಕೃಷಿ ಪ್ರಾಮುಖ್ಯತೆ ಕುರಿತು ಸಂವಾದ ಭಾಗವಹಿಸುತ್ತಾರೆ– ಚಾಮರಾಜನಗರ ತಾಲೂಕು ಹರವೆ ಹೋಬಳಿ ಅರಳಿಕಟ್ಟೆ ಗ್ರಾಮದ ಸದಾಶಿವಪ್ಪ ಹಾಗೂ ಅವರ ಮಗ ಸಂಜೀವ್ ಕುಮಾರ್, ಪ್ರಸ್ತುತಿ: ಎನ್. ಕೇಶವಮೂರ್ತಿ, 8.00 ಸವಿನೆನಪು, 8.30 ಹಿಂದಿ ಚಿತ್ರಗೀತೆಗಳು, 9.30 ಯುವವಾಣಿ, 10.00 ರಾಷ್ಟ್ರೀಯ ಸಂಗೀತ ಕಾರ್ಯಕ್ರಮ, ರೋಹನ್ ನಾಯ್ಡು–ವೈಯೋಲಿನ್ ವಾದನ


ಭರತ್ ಗೌಡ
ರವರಿಗೆ
ಹುಟ್ಟುಹಬ್ಬದ
ಶುಭಾಶಯಗಳು
ಶುಭಕೋರುವವರು : ಪೈ. ದಿನೇಶ್ ಗೌಡ.ಸಿ ಜೆ.ಡಿ.ಎಸ್. ಯುವ ಮುಖಂಡರು ಸುರೇಶ್ ಧರ್ಮ, ಜ್ವಾಲಾಮುಖಿ ಎಂಟರ್‌ಪ್ರೈಸಸ್

ನಕ್ಕರೆ ಅದೇ ಸ್ವರ್ಗ

ಹೆಂಡತಿ ಮಲಗಿದ್ದಳು. ಅವಳ ಕಾಲಿನ
ಸಮೀಪ ಹಾವು ಓಡಾಡುತ್ತಿತ್ತು.
ಗಂಡ (ಕೈ ಜೋಡಿಸಿ) ಕಚ್ಚು ಕಚ್ಚು ಎಂದು ಬೇಡಿಕೊಳ್ಳುತ್ತಿದ್ದ.
ಹಾವು : ಬೇವರ್ಸಿ.... ಇವರು ನಮ್ಮ ಕುಲದೇವತೆ.
ಕಾಲಿಗೆ ನಮಸ್ಕರಿಸಲು ಬಂದಿದ್ದೇವೆ

ಮೈಸೂರು ಮಿತ್ರ

ಶನಿವಾರ, 19 ಜುಲೈ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ..........

ಜೀವನದಲ್ಲಿ ಆಸ್ತಿ ಮಾಡಿ, ಆದರೆ ನಿಮ್ಮ ಆರೋಗ್ಯ ಕೆಟ್ಟಾಗ ನಿಮ್ಮ ಮಕ್ಕಳು ಡಾಕ್ಟರ್ ಬಿಟ್ಟು ಲಾಯರ್‌ಗೆ ಫೋನ್ ಮಾಡುವಷ್ಟು ಆಸ್ತಿ ಮಾಡಬೇಡಿ.

ವೇದ ಸುಳ್ಳಾದರೂ { ಅಲ್ಪರ ಸಂಗ
ಗಾದೆ ಸುಳ್ಳಾಗದು { ಅಭಿಮಾನ ಭಂಗ

ನಿಮ್ಮ ಪತ್ರಗಳು

ಕೆಬಿಜಿಯವರಿಗೆ ನುಡಿ ನಮನ

■ ಮರೆಯಲಾಗದ ಕೆಬಿಜಿ ಸರ್



ಮಾನ್ಯರೆ,

ನಾನು 1979 ಮೇನಲ್ಲಿ ಮೈಸೂರಿನ ಅಂದಿನ ಕಾಲಕ್ಕೆ ದೊಡ್ಡದಾದ ಖಾಸಗಿ ಕಾರ್ಖಾನೆಯೊಂದರಲ್ಲಿ ಕೆಲಸಕ್ಕೆ ಸೇರಿದ್ದೆ. ಆಗ ತಾನೇ ಮೈಸೂರಿಗೆ ಸ್ಟಾರ್ ಆಫ್ ಮೈಸೂರ್ ಆಂಗ್ಲ ಸಂಜೆ ಪತ್ರಿಕೆ ದಾಂಗುಡಿ ಇಟ್ಟಿತ್ತು. ಟೈಪಿಸ್ಟ್‌ಗಳು ಟೈಪ್ ಮಾಡಿದ ನಂತರ ಪತ್ರದಡಿಯಲ್ಲಿ ಟೈಪ್ ಮಾಡಿದವರು ಯಾರೆಂಬುದು ತಿಳಿಯಲು ಅವರ ಇನಿಷಿಯಲ್ ಹಾಕಬೇಕಿತ್ತು. ಒಬ್ಬಾತ ಮಾತ್ರ ಇನಿಷಿಯಲ್ ನಂತರ ನಕ್ಷತ್ರ ಚಿಹ್ನೆ ಟೈಪಿಸುತ್ತಿದ್ದ. ಆತನಿಗೆ 'ಸ್ಟಾರ್ ಆಫ್ ಮೈಸೂರ್' ಎಂದು ಛೇಡಿಸುತ್ತಿದ್ದರು ಇನ್ನಿತರರು.

ಪ್ರಾರಂಭದಲ್ಲಿ ಸರಸ್ವತಿಪುರಂನಲ್ಲಿದ್ದ ಮುದ್ರಣಾಲಯ ಬಾಲ್ಯಾವಸ್ಥೆ ಕಳೆದ ನಂತರ ಬನ್ನಿಮಂಟಪದಲ್ಲಿ ಸ್ವಂತ ಕಟ್ಟಡಕ್ಕೆ ಸ್ಥಳಾಂತರಿಸಿಕೊಂಡಿತ್ತು. ಆಗ ನನಗೆ ಪರಿಚಯವಾಗಿದ್ದು ಕೆಬಿಜಿ ಸರ್ ಅವರು. ಹೆಗಲಿಗೆ ಒಂದು ಬ್ಯಾಗ್ ಹಾಕಿಕೊಂಡು ಒಂದು ಲ್ಯಾಂಬ್ರೆಟ ಸ್ಕೂಟರ್‌ನಲ್ಲಿ ಬರುವ ಅವರ ವ್ಯಕ್ತಿತ್ವ ಇನ್ನೂ ಕಣ್ಣಿಗೆ ಕಟ್ಟಿದಂತಿದೆ. ಒಬ್ಬ ಸಾಮಾನ್ಯ ಪತ್ರಕರ್ತ ಯಾವುದೇ ಮುಲಾಜಿಗೆ ಒಳಗಾಗದೆ ಒಂದು ಪತ್ರಿಕೆಯನ್ನು ಹೇಗೆ ಬೆಳೆಸಬೇಕು ಎಂಬುದಕ್ಕೆ ಅವರೇ ನಿದರ್ಶನ. ನನ್ನ ಬಹುತೇಕ ಲೇಖನಗಳನ್ನು, ಕವನಗಳು, ಕಥೆ, ಪತ್ರಗಳನ್ನು ಮೈಸೂರು ಮಿತ್ರ ಮತ್ತು ಸ್ಟಾರ್ ಪತ್ರಿಕೆ ಪ್ರಕಟಿಸುತ್ತಲೇ ಬಂದಿದೆ. ಒಂದೆರಡು ವಾರ್ಷಿಕ ಸಂಚಿಕೆಯಲ್ಲಿ ಬಹುಮಾನವೂ ದೊರೆತಿದೆ. ಹಲವಾರು ಜನರಿಗೆ ಪತ್ರಿಕಾ ಧರ್ಮದ ಪರಿಚಯ ಮಾಡಿಸಿ ಕೆಲವರು ಉನ್ನತ ಸ್ಥಾನಗಳಲ್ಲಿ, ಮತ್ತೆ ಕೆಲವರು ಮೀಡಿಯಾ ಸಂಸ್ಥೆಗಳನ್ನು ಕಟ್ಟಿರುವುದು ಇತಿಹಾಸ. ನನಗೆ ಅವರು ಹೇಳುತ್ತಿದ್ದುದು ಅಯ್ಯಂಗಾರ್‌ರೇ, ಮೂರು ಸೂಕ್ಷ್ಮ ವಿಚಾರಗಳನ್ನು ಹೊರತುಪಡಿಸಿ ನೀವು ಬರೆಯಿರಿ ಎಂದಾಗ ಯಾಕೆ ಸರ್ ಎಂದಾಗ, ಅವರು ನಾನು ಪತ್ರಕರ್ತ, ನನ್ನನ್ನು ಅವಲಂಬಿಸಿ ಕೆಲವರಿದ್ದಾರೆ. ಬದುಕಬೇಡವೇ ಮಾರಾಯ ಎಂದು ಮುಗುಳ್ನಕ್ಕಿದ್ದರು. 2007 ರಿಂದ 2008 ಏಪ್ರಿಲ್‌ವರೆಗೆ ಅವರೊಂದಿಗೆ ದೈನಂದಿನ ಒಡನಾಟವಿತ್ತು. ನಂತರ ಕೆಲವು ಕೊಡವರ ಮದುವೆ ಇತ್ಯಾದಿ ಸಮಾರಂಭಗಳಲ್ಲಿ ಸಿಕ್ಕಾಗ ನಕ್ಕು ಮಾತನಾಡಿಸುತ್ತಿದ್ದರು.

ಕೆಬಿಜಿಯವರೇನೋ ನೆಮ್ಮದಿಯಾಗಿ ಇಹಲೋಕವನ್ನು ತೊರೆದು ಹೊರಟುಬಿಟ್ಟರು. ಆದರೆ ಬಡವಾಗಿದ್ದು ಮಾತ್ರ ನಾವು, ಅವರು ಕಟ್ಟಿ ಬೆಳೆಸಿದ ಪತ್ರಿಕಾ ಸಂಸ್ಥೆ ಮತ್ತು ಅವರ ಭೂಮಂತ್ರ ಮತ್ತು ಅಬ್ರಕಡಬ್ರ ಮೂಲಕ ಬರುತ್ತಿದ್ದಂತಹ ಮೊನಚಾದ ಲೇಖನಗಳು. ಕೆಬಿಜಿಯವರೇ ನೀವು ಮರೆಯಲಾಗದ ಮಹಾನುಭಾವರು. ಹೋಗಿ ಬನ್ನಿ, ನಿಮಗೆ ಸದ್ಗತಿ ದೊರೆಯಲಿ, ಓಂ ಶಾಂತಿ.

–ವಿಜಯ್ ಹೆಮ್ಮಿಗೆ, ಮೈಸೂರು

■ ಪ್ರಮುಖ ಅಶೋಕ ವೃತ್ತದಲ್ಲಿ ಭಾರೀ ಗುಂಡಿ



ಮಾನ್ಯರೆ,

ಇದು, ಮೈಸೂರಿನ ಹೃದಯ ಭಾಗದಲ್ಲಿರುವ ಅಶೋಕ ವೃತ್ತದ (ಬಲ್ಲಾಳ್ ಸರ್ಕಲ್) ಬಳಿ ರಸ್ತೆ ಗುಂಡಿ. ಈ ಸರ್ಕಲ್ ಮುಖಾಂತರವೇ ಮೈಸೂರಿನ ಬಹುತೇಕ ಜನ ಬಸ್ಸು, ಕಾರು, ದ್ವಿಚಕ್ರ ವಾಹನಗಳಲ್ಲಿ ಸಂಚರಿಸುತ್ತಾರೆ. ಈ ವೃತ್ತದ ಮಧ್ಯೆ ಭಾಗದಲ್ಲೇ ಸುಮಾರು 2 ಅಡಿ ಆಳದಷ್ಟು ಗುಂಡಿಗಳು ಬಿದ್ದಿವೆ. ನಗರ ಪಾಲಿಕೆಯ ಆಯುಕ್ತರು, ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಈ ರಸ್ತೆಯಲ್ಲೇ ಓಡಾಡಿದರೂ ಈ ಗುಂಡಿಗಳು ಇವರ ಕಣ್ಣಿಗೆ ಬಿದ್ದಿಲ್ಲವೇ? ಅಥವಾ ಜಾಣ ಕುರುಡಾಗಿದ್ದಾರಾ? ಮೈಸೂರಿನ ಎಲ್ಲಾ ಪ್ರಮುಖ ರಸ್ತೆಗಳಲ್ಲೂ ಇದೇ ಪರಿಸ್ಥಿತಿ ಇದೆ. ಈ ಗುಂಡಿಗಳನ್ನು ಮುಚ್ಚುವ ಕನಿಷ್ಠ ಜ್ಞಾನವೂ ನಗರಪಾಲಿಕೆಯ ಅಧಿಕಾರಿಗಳಿಗೆ ಇಲ್ಲವಾಯಿತೆ? ಸಾಧನೆ ಸಮಾವೇಶ ಮಾಡುತ್ತಿರುವ ಸರ್ಕಾರಕ್ಕೆ ಇದೊಂದು ನಾಚಿಕೆಗೇಡಿನ ಸಂಗತಿ ಅಲ್ಲವೆ?

–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು

■ ದೇವನಹಳ್ಳಿ ಭೂ ಸ್ವಾಧೀನ ಅಧಿಸೂಚನೆ ರದ್ದು ಶ್ಲಾಘನೀಯ

ಮಾನ್ಯರೆ,

ದೇವನಹಳ್ಳಿ ತಾಲೂಕಿನ ಚನ್ನರಾಯಪಟ್ಟಣ ಹಾಗೂ ಇತರ ಗ್ರಾಮಗಳಲ್ಲಿನ ಭೂಸ್ವಾಧೀನ ಅಧಿಸೂಚನೆ ಕೈಬಿಡಲು ಸರಕಾರ ತೀರ್ಮಾನಿಸಿದೆ. ಆದರೆ ಜಮೀನು ನೀಡಲು ತಾವಾಗೇ ಮುಂದೆ ಬರುವ ರೈತರಿಗೆ ಅಭಿವೃದ್ಧಿ ಪಡಿಸಿದ ನಿವೇಶನ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿರುವುದು ಶ್ಲಾಘನೀಯ. ಕೆಐಡಿಬಿಯಿಂದ 1777 ಎಕರೆ ಫಲವತ್ತಾದ ಜಮೀನನ್ನು ಹೊಂದಿದ್ದ ಹಾಗೂ ಇದನ್ನೇ ಹೆಚ್ಚು ಅವಲಂಭಿತವಾಗಿ ಜೀವನ ನಡೆಸುತ್ತಿದ್ದ ರೈತರ ಜಮೀನನ್ನು, ಕೆಐಎಡಿಬಿ ಭೂಸ್ವಾಧೀನ ಮಾಡುವುದನ್ನು ವಿರೋಧಿಸಿ ಹಲವಾರು ದಿನಗಳಿಂದ ರೈತರು ಹೋರಾಟ ನಡೆಸುತ್ತಿದ್ದರು. ರೈತರ ಹೋರಾಟಕ್ಕೆ ಮಣಿದ ರಾಜ್ಯ ಸರ್ಕಾರ ಈ ನಿರ್ಧಾರಕ್ಕೆ ಬಂದಿರುವುದು ಸ್ವಾಗತಾರ್ಹ ಬೆಳವಣಿಗೆ. ದೇವನಹಳ್ಳಿ ತಾಲೂಕಿನ ರೈತರು, ರೈತ ಸಂಘಟನೆಗಳು ಹಾಗೂ ಈ ಹೋರಾಟಕ್ಕೆ ಗೆಲುವು ದೊರಕಲು ಪರೋಕ್ಷ ಹಾಗೂ ಪ್ರತ್ಯಕ್ಷವಾಗಿ ಬೆಂಬಲ ನೀಡಿದ ಪ್ರತಿಯೊಬ್ಬರೂ ಅಭಿನಂದನಾರ್ಹರು.

–ಬೆಸಗರಹಳ್ಳಿ ರವಿ ಪ್ರಸಾದ್, ಮೈಸೂರು.



ಡಾ. ವಿ. ರಂಗನಾಥ್
ಲೇಖಕರು ಹಾಗೂ ನಿವೃತ್ತ ತಹಸೀಲ್ದಾರರು
ಮೊ: 94482 08746/ 97421 79000

ಚಿಂತನೆ

ಮೈಸೂರು ಸಹೃದಯಿ ಪತ್ರಕರ್ತರು ಕೆಬಿಜಿ



ಡಾ. ಕೆ.ಬಿ. ಗಣಪತಿ

ಸುಮಾರು ಐದು ದಶಕಗಳ ಕಾಲ ಮೈಸೂರಿನ ಪತ್ರಿಕೋದ್ಯಮದ 'ಭೀಷ್ಮ' ಎನಿಸುವಂತೆ ಬಾಳಿ-ಬದುಕಿದವರು ಡಾ. ಕೆ.ಬಿ. ಗಣಪತಿ (ಕೆಬಿಜಿ) ಅವರು. ಅವರ ಸಹೃದಯತೆಗೆ ಅನೇಕರು ಅನೇಕ ಉದಾಹರಣೆಗಳನ್ನು ತಮ್ಮ ಅಶ್ರುತರ್ಪಣದ ಮಾತುಗಳಲ್ಲಿ ಹೇಳಿದ್ದಾರೆ. ಕೆಬಿಜಿ ಅವರ ಹಲವು ಮುಖಗಳು ಇದರಿಂದ ಬಹಿರಂಗವಾಗಿದೆ. ಇದನ್ನು ಓದಿದವರಿಗೆ ತಾವು ಅವರೊಡನೆ ಮತ್ತಷ್ಟು ಸಂಬಂಧ ಹಾಗೂ ಬಾಂಧವ್ಯ ಇಟ್ಟುಕೊಳ್ಳ ಬೇಕಾಗಿತ್ತು ಎನ್ನಿಸುತ್ತದೆ. ಯೌವನದಲ್ಲೇ ಮೈಸೂರಿಗೆ ಬಂದವರು, ಮೈಸೂರನ್ನು ತಮ್ಮೂರನ್ನಾಗಿಸಿಕೊಂಡವರು. 'ಸ್ಟಾರ್ ಆಫ್ ಮೈಸೂರ್' ಮೂಲಕ ಮೈಸೂರಿಗರಿಗೆ ಹತ್ತಿರದ ಬಂಧುವಾದರೆ, 'ಮೈಸೂರು ಮಿತ್ರ'ದ ಮೂಲಕ ಜಿಲ್ಲೆಯ ಜನರಿಗೆ ಹಿತೈಷಿಯಾಗಿ ಕಂಡವರು ಅವರು.

ಅವರು 'ಸ್ಟಾರ್ ಆಫ್ ಮೈಸೂರ್' ಆರಂಭಿಸಿ 48 ವರ್ಷಗಳಾದವು. ಇತ್ತೀಚೆಗೆ ಅದರ ವಾರ್ಷಿಕ ಸಂಚಿಕೆಯೂ ಹೊರ ಬಂದಿತ್ತು. ಅದರಲ್ಲಿ ಅವರು ತಾವು ಮೊದಲ ಪತ್ರಿಕೆಯಲ್ಲಿ ಬರೆದಿದ್ದ **STAR IS BORN** ಎಂಬುದನ್ನು ಮರು ಮುದ್ರಿಸಿದ್ದರು. ಅದು ಪ್ರತಿ ವರ್ಷದ ವಾರ್ಷಿಕ ಸಂಚಿಕೆಯಲ್ಲೂ ಕಂಡುಬರುತ್ತದೆ. ಅಂದರೆ ಮೊದಲ ಸಂಚಿಕೆಯಲ್ಲಿ ಈ ಪತ್ರಿಕೆಯನ್ನು ತಾನು ಏಕೆ ಪ್ರಾರಂಭಿಸುತ್ತಿದ್ದೇನೆ ಎಂಬುದನ್ನು ಸ್ಪಷ್ಟ ಮಾತುಗಳಲ್ಲಿ ಹೇಳಿದ್ದರು. ಅದೇ ರೀತಿ ಪತ್ರಿಕೆ ಸಾಗಿ ಬಂದಿದೆ ಎಂಬುದನ್ನು ತುಲನಾತ್ಮಕವಾಗಿ ಪರಿಶೀಲಿಸಿಕೊಳ್ಳಲು ಈ ಪುಟ್ಟ ಲೇಖನವನ್ನು ಪ್ರತಿ ವಿಶೇಷ ಸಂಚಿಕೆಯಲ್ಲಿ ಮುದ್ರಿಸುತ್ತಿದ್ದರು. ನಾನು ಈ ಪತ್ರಿಕೆ ಆರಂಭದಿಂದಲೂ ಅದರ ಓದುಗ. ಎಲ್ಲೋ ಕೆಲವು ದಿನ ದೂರದ ಊರಿನಲ್ಲಿ ಇದ್ದಾಗ ಪತ್ರಿಕೆ ಓದಲಾಗದೆ ಬಿಟ್ಟಿರಬಹುದು. ಆದರೆ ಮೈಸೂರಿನಲ್ಲಿದ್ದಾಗ ರಾತ್ರಿ ಎಷ್ಟು ಹೊತ್ತಾದರೂ ಪತ್ರಿಕೆ ಓದಿಯೇ ಮಲಗುವುದು ಅಭ್ಯಾಸ. ಅಂತಹ ಆಕರ್ಷಣೆ ಪತ್ರಿಕೆಯದ್ದು (ಅದು ಈಗಲೂ ಮುಂದುವರೆದಿದೆ). ಅಂದರೆ ಸರಿಸುಮಾರು 48 ವರ್ಷಗಳಿಂದ ನಾನು ಅದರ ಓದುಗ. ಎಂತಹ ಹೆಮ್ಮೆಯ ವಿಷಯವಲ್ಲವೇ? ಇದು ನನ್ನೊಬ್ಬನ ಹೆಗ್ಗಳಿಕೆ ಎಂದೇನಲ್ಲ. ಬಹುಶಃ ಇಂತಹ ಸಾವಿರಾರು ಜನರು ಮೈಸೂರಿನಲ್ಲಿ ಇದ್ದಾರೆ. ಒಬ್ಬ ಪತ್ರಕರ್ತನ ಬದ್ಧತೆ ಇದರಿಂದ ವ್ಯಕ್ತವಾಗುತ್ತದೆ.

ಅದೇ ರೀತಿ ನಮ್ಮ 'ಮೈಸೂರು ಮಿತ್ರ' ಆರಂಭವಾಗಿ 46 ವರ್ಷಗಳು. ಇದೂ ಸಹ ದಾಖಲೆಯೇ. ಈ ಪತ್ರಿಕೆಯೂ ವಾರ್ಷಿಕ ವಿಶೇಷ ಸಂಚಿಕೆ ಪ್ರಕಟಿಸುತ್ತದೆ. ಪತ್ರಿಕೆ ಪ್ರಕಟವಾಗುವ ದಿನವನ್ನು ಮುಂಚೆಯೇ ಪತ್ರಿಕೆಯಲ್ಲಿ ಪ್ರಕಟಿಸಲಾಗಿರುತ್ತದೆ. ಅಂದು ಬೆಳಿಗ್ಗೆ ಸುಮಾರು 7.30-8 ಗಂಟೆಯ ಹೊತ್ತಿಗೆ ಪತ್ರಿಕೆ ಮಾರುವ ಅಂಗಡಿಗೆ ಹೋದರೆ ಪತ್ರಿಕೆ ಸಿಗದು. ಸೋಲ್ಡ್ ಔಟ್ ಎಂದು ಪತ್ರಿಕೆ ಮಾರುವ ಅಂಗಡಿಯವರು ಹೇಳುತ್ತಾರೆ. ಅಷ್ಟು ಡಿಮ್ಯಾಂಡ್ ಈ ಪತ್ರಿಕೆಗೆ ಇದೆ.

ನಾನು ಅವರೊಡನೆ ಪ್ರತಿದಿನದ ಸಂಪರ್ಕದಲ್ಲಿ ಇರಲಿಲ್ಲ ಎಂಬುದು ನಿಜ. ಆದರೆ ಈ ಎರಡೂ ಪತ್ರಿಕೆಗಳನ್ನು ಪ್ರತಿದಿನ ಓದುವುದರಿಂದ ಅವರೊಡನೆ ಸಂಪರ್ಕವಂತೂ ಪರೋಕ್ಷವಾಗಿ ಇದ್ದೇ ಇತ್ತು.

ಅದು 1980-84 ರ ಸಮಯ. ನಾನು ಆಗ ಪ್ರಕಟವಾಗುತ್ತಿದ್ದ ಬೆಳಗಿನ ದಿನಪತ್ರಿಕೆ ಆರತಿ ಪತ್ರಿಕೆಯ ಉಪಸಂಪಾದಕ. ಆಗಿನಿಂದಲೂ ಶ್ರೀ ಗಣಪತಿಯವರೊಡನೆ ಸಂಪರ್ಕ ಇತ್ತು. ಆ ಸಮಯದಲ್ಲಿ ಮೈಸೂರು ಸಣ್ಣ ಪತ್ರಿಕೆಗಳ ತವರೂರು ಎನಿಸಿಕೊಂಡಿತ್ತು. ಪ್ರತಿದಿನ ಬೆಳಿಗ್ಗೆ ಹಾಗೂ ಸಂಜೆ ಹಲವು ಪತ್ರಿಕೆಗಳು ಪ್ರಕಟವಾಗುತ್ತಿದ್ದವು. ಅದರಲ್ಲಿ ಕನ್ನಡ ಹಾಗೂ ಇಂಗ್ಲಿಷ್ ಪತ್ರಿಕೆಗಳೂ ಇದ್ದುವು. ಆದರೆ 'ಸ್ಟಾರ್ ಆಫ್ ಮೈಸೂರ್' ಹಾಗೂ 'ಮೈಸೂರು ಮಿತ್ರ' ಆಗಿನಿಂದಲೂ ನಿಯಮಿತವಾಗಿ ಪ್ರಕಟವಾಗುತ್ತಿದೆ. ಇತರೆ ಅನೇಕ ಪತ್ರಿಕೆಗಳು ಆರಂಭವಾಗಿ ಹಾಗೇ ಅಂತ್ಯವನ್ನೂ ಕಂಡಿದ್ದನ್ನು ನಾನು ನೋಡಿದ್ದೇನೆ.

ಆ ಸಮಯದಲ್ಲಿ ಮೈಸೂರಿನ ಪತ್ರಿಕೋದ್ಯಮ ಅತ್ಯಂತ ಬದ್ಧತೆಯಿಂದ ಕೆಲಸ ನಿರ್ವಹಿಸುತ್ತಿತ್ತು. ಅತ್ಯಂತ ಮೇಧಾವಿ ಪತ್ರಕರ್ತರು ಮೈಸೂರಿನಲ್ಲಿ ಇದ್ದರು. ಅವರೆಲ್ಲಾ ಖ್ಯಾತಿವೆತ್ತವರೇ ಆಗಿದ್ದು ವಿಶೇಷ. ಅದರಲ್ಲಿ ನೆನಪು ಮಾಡಿಕೊಳ್ಳಬಹುದಾದ ಕೆಲವು ಹೆಸರುಗಳೆಂದರೆ ಡೆಕ್ಕನ್ ಹೆರಾಲ್ಡ್‌ನ ಕೃಷ್ಣವಟ್ಟಂ, ಪ್ರಜಾವಾಣಿಯ ಅರ್ಜುನದೇವ್, ಪಟ್ಟಾಭಿರಾಮನ್, ಸಂಯುಕ್ತ ಕರ್ನಾಟಕದ ಹ.ಲಾ ಶ್ರೀಕಂಠಮೂರ್ತಿ, ಆಂದೋಲನದ ರಾಜಶೇಖರ ಕೋಟಿ, ಸಮಾಚಾರ್ ಸತ್ಯನಾರಾಯಣ, ಮೈಸೂರು ಪತ್ರಿಕೆಯ ವೆಂಕಟರಾಮ್, ವಿಜಯ ಪತ್ರಿಕೆಯ ರಾಮಣ್ಣ, ಅರುಣ ಪತ್ರಿಕೆಯ ರಾಮಣ್ಣ, ಅಶೋಕ ಪತ್ರಿಕೆಯ ರವೀಂದ್ರನಾಥ್, ಸಂಕ್ರಾಂತಿಯ ಚಂದ್ರಶೇಖರ ಕುಕ್ಕಿಕಟ್ಟೆ ಮೊದಲಾದವರು. ಆ ಸಾಲಿನ ಮುಂಚೂಣಿಯಲ್ಲಿನ ಕೆಲವು ಹೆಸರುಗಳ ಪೈಕಿ ಕೆ.ಬಿ.ಗಣಪತಿಯವರು ಇದ್ದರು. ಆಗ ಅವರು ಕೆಲವು ಪತ್ರಿಕಾಗೋಷ್ಠಿಗಳು ಹಾಗೂ ಪ್ರಮುಖ ಕಾರ್ಯಕ್ರಮಗಳಿಗೆ ಖುದ್ದು ಹಾಜರಾಗುತ್ತಿದ್ದರು. ಇಂತಹ ಮೇಧಾವಿಗಳ ಜೊತೆಗೆ ಬೆರೆಯುವುದು ಒಂದು ರೀತಿಯ ಸೌಭಾಗ್ಯ ಎಂದೇ ಹೇಳಬೇಕು. ಪತ್ರಿಕಾಗೋಷ್ಠಿಯಲ್ಲಿ ಮಾತನಾಡುವವರು ಎಲ್ಲಾ ರೀತಿಯಲ್ಲೂ ತಯಾರಿ ಆಗಿಯೇ ಬರಬೇಕಾಗಿತ್ತು. ಅವರು ಏನಾದರೂ ತಪ್ಪು ಹೇಳಿದರೆ ಇಡೀ ಪತ್ರಕರ್ತರ ತಂಡ ಮುಗಿ ಬೀಳುತ್ತಿತ್ತು. ಹಾಗಾಗಿ ಮಾತನಾಡುವವರು ಬಹಳ ಎಚ್ಚರಿಕೆ ವಹಿಸುತ್ತಿದ್ದರು. ಪತ್ರಿಕಾಗೋಷ್ಠಿ ಮುಗಿದ ನಂತರ ನಡೆಯುತ್ತಿದ್ದ ಆಫ್ ದ ರೆಕಾರ್ಡ್ ಮಾತುಕತೆಗಳೂ ಅತ್ಯಂತ ಕುತೂಹಲಕಾರಿಯಾಗಿರುತ್ತಿದ್ದವು. ಅಂದರೆ ಆಗಿನ ನನ್ನಂತಹ ಚಿಕ್ಕ ವಯಸ್ಸಿನವರ ಮೇಲೆ ಅವು ಬಹಳ ಪ್ರಭಾವ ಬೀರುತ್ತಿತ್ತು. ನಂತರ ನಾನು ಸರ್ಕಾರಿ ಕೆಲಸಕ್ಕೆ ಸೇರಿದ ನಂತರ ಪತ್ರಿಕೋದ್ಯಮದಿಂದ ದೂರವಾಗುವಂತೆ ಆಯಿತು.

ಸರ್ಕಾರಿ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮತ್ತೆ ಬರೆಯುವಂತೆ ಆಹ್ವಾನ ಬಂದಿದ್ದು 'ಮೈಸೂರು ಮಿತ್ರ'ನಿಂದಲೇ! ಸುಮಾರು ಎಂಟು ವರ್ಷಗಳಿಂದ ಅಂಕಣ ಬರೆಯಲು ಅವಕಾಶ ನೀಡಿದ್ದು ಇದೇ ಪತ್ರಿಕೆ. ನಿಮ್ಮಲ್ಲೂ ಬರೆಯುವ ಶಕ್ತಿ ಇದೆ ಬರೆಯಿರಿ ಎಂದದ್ದು ಮೈಸೂರು ಮಿತ್ರ ಬಳಗ. ಪತ್ರಿಕೆಯಲ್ಲಿ ಪ್ರಕಟವಾದ ಎಲ್ಲಾ ನನ್ನ ಅಂಕಣ ಬರಹಗಳನ್ನು ಶ್ರೀ ಗಣಪತಿಯವರು ಓದುತ್ತಿದ್ದರು. ಇಷ್ಟವಾದಲ್ಲಿ ಸಂಬಂಧಿಸಿದ ಬರಹಗಾರರಿಗೆ ದೂರವಾಣಿ ಕರೆ ಮಾಡಿ ಅಭಿನಂದಿಸುತ್ತಿದ್ದರು. ನನ್ನ ಅಂಕಣಬರಹದ ಬಗ್ಗೆಯೂ ಹತ್ತಾರು ಸಲ ಕರೆ ಮಾಡಿ ನಾನು ನಿಮ್ಮ ಫ್ಯಾನ್ ಎಂದು ಹೇಳಿ ಹುರಿದುಂಬಿಸುವ ಕೆಲಸ ಮಾಡುತ್ತಿದ್ದರು. ನೀವೇಕೆ ನಮ್ಮ 'ಸ್ಟಾರ್ ಆಫ್ ಮೈಸೂರ್'ಗೂ ಬರೆಯಬಾರದು ಎಂದು ಕೆಲವು ಸಲ ಕೇಳಿದ್ದುಂಟು. ಅಷ್ಟು ಹೆಸರು ಮಾಡಿರುವ ಎರಡು ಪತ್ರಿಕೆಗಳ ಸಂಸ್ಥಾಪಕ ಸಂಪಾದಕರು ತಮ್ಮ ಪತ್ರಿಕೆಗಳಲ್ಲಿ ಬರೆಯುವವರೊಡನೆ ಇಂತಹ ಸಂಬಂಧ ಹೊಂದಿರಬೇಕು ಎಂಬುದು ನಿಜಕ್ಕೂ ರೋಮಾಂಚನ ಉಂಟು ಮಾಡುವಂತಹುದು.

ನಾನು ಅವರ ಎಲ್ಲಾ ಅಂಕಣಗಳನ್ನು, ಬರಹಗಳನ್ನು ಓದಿದ್ದೇನೆ. ಅಲ್ಲೆಲ್ಲಾ ಅವರ ನಿರ್ಭಿಡೆಯ ಅಭಿಪ್ರಾಯ ಗಮನಿಸಿದ್ದೇನೆ. ಪತ್ರಿಕಾ ಮಾಧ್ಯಮದಲ್ಲಿರುವವರು ಹೇಳಬೇಕಾದ್ದನ್ನು ನೇರವಾಗಿ ಹೇಳಬೇಕು, ಅದರಲ್ಲಿ ಸಂಕೋಚ ಇರಬಾರದು ಎಂಬ ನಿಷ್ಠೆ ಅವರ ಬರಹಗಳಲ್ಲಿ ಕಾಣುತ್ತಿತ್ತು. ಅಷ್ಟೇ ಏಕೆ, ಈ ಪತ್ರಿಕೆಗಳಲ್ಲಿ ಬರುವ ಪ್ರತಿಯೊಂದು ಬರಹವೂ ಹಾಗೇ ಇರಬೇಕೆಂದು ಬಯಸುವ ಮನೋಭಾವ ಅವರಲ್ಲಿತ್ತು. ಲೇಖನಗಳಲ್ಲಿ ಸ್ಪಷ್ಟತೆ ಇಲ್ಲ ಎಂದಾಗ ಮುಲಾಜಿಲ್ಲದೆ ಅವನ್ನು ಪ್ರಕಟಿಸದಿರುವ ನಿಲುವೂ ಸಹಾ ಈ ಪತ್ರಿಕೆಗಳಿಗೆ ಇದೆ. ಈ ಕಾರಣದಿಂದಲೇ ಈ ಪತ್ರಿಕೆಗಳನ್ನು ಮೆಚ್ಚುವ ಲಕ್ಷಾಂತರ ಜನರಿದ್ದಾರೆ. ನಾನು ಗಮನಿಸಿದಂತೆ ಒಂದು ರಾಷ್ಟ್ರೀಯ ಪತ್ರಿಕೆ ತರಿಸುವವರು ಸ್ಥಳೀಯ ಸುದ್ದಿಗಾಗಿ 'ಮೈಸೂರು ಮಿತ್ರ' ಹಾಗೂ 'ಸ್ಟಾರ್ ಆಫ್ ಮೈಸೂರ್' ತರಿಸುತ್ತಾರೆ. ಆದರೆ ಪತ್ರಿಕೆ ಈಗ ಸ್ಥಳೀಯ ಪತ್ರಿಕೆಯ ಮಟ್ಟದಲ್ಲಿ ಉಳಿಯದೇ ರಾಷ್ಟ್ರೀಯ ಸುದ್ದಿಗಳ ಪ್ರಕಟಣೆಯಲ್ಲಿಯೂ ಅಗ್ರಸ್ಥಾನದಲ್ಲಿದೆ.

ಇದಕ್ಕೆ ಉದಾಹರಣೆ ಎಂದರೆ ಇತ್ತೀಚೆಗೆ ಲೋಕಸಭೆಯಲ್ಲಿ ಮಂಡಿತವಾದ ವಕ್ಫ್ ಕಾಯಿದೆಯ ಬಗೆಗಿನ ಚರ್ಚೆ. ಅದು ಮಧ್ಯರಾತ್ರಿವರೆಗೂ ನಡೆದಿತ್ತು. ಅನೇಕ ಪತ್ರಿಕೆಗಳು ಲೋಕಸಭೆಯಲ್ಲಿ, ರಾಜ್ಯಸಭೆಯಲ್ಲಿ ಚರ್ಚೆ ನಡೆಯುತ್ತಿದೆ ಎಂದಷ್ಟೇ ಪ್ರಕಟಿಸಿದ್ದವು. ಈ ಚರ್ಚೆಯ ಬಗ್ಗೆ ಮತದಾನವಾದಾಗ ಮುಂಜಾನೆ (ಬೆಳಗಿನ ಜಾವ) ಸುಮಾರು 2 ಗಂಟೆಯಾಗಿತ್ತು. ಮರುದಿನ 'ಮೈಸೂರು ಮಿತ್ರ'ದಲ್ಲಿ ಮಾತ್ರ ಮತದಾನದಲ್ಲಿ ಮಸೂದೆ ಅಂಗೀಕಾರವಾದ ಬಗ್ಗೆ ವಿವರವಿತ್ತು. ಅಂದರೆ ಮಧ್ಯರಾತ್ರಿ ನಡೆದ ವಿದ್ಯಮಾನವನ್ನೂ ಪತ್ರಿಕೆ ಪ್ರಕಟಿಸಿತ್ತು. ಇದನ್ನು ಇತರೆ ರಾಷ್ಟ್ರೀಯ ಪತ್ರಿಕೆಗಳಲ್ಲಿ ಕಾಣಲಿಲ್ಲ. ಇದನ್ನೇ ಬದ್ಧತೆ ಎನ್ನುವುದು. ಇದಕ್ಕೆ ಮೂಲ ಪ್ರೇರಕ ಶಕ್ತಿ ಶ್ರೀ ಗಣಪತಿಯವರು ಎಂದು ಬೇರೆ ಹೇಳಬೇಕಾಗಿಲ್ಲ.

ಒಟ್ಟಿನಲ್ಲಿ ಮೈಸೂರಿನ, ಅಷ್ಟೇ ಏಕೆ ಭಾರತದ ಪತ್ರಿಕೋದ್ಯಮದಲ್ಲಿ ತಮ್ಮ ಛಾಪು ಮೂಡಿಸಿದ ಗಣಪತಿಯವರು ಒಬ್ಬ ಆದರ್ಶ ಪತ್ರಕರ್ತನಾಗಿ ನಮ್ಮ ಮುಂದೆ ಕಂಡುಬರುತ್ತಾರೆ. ಮುಂದಿನ ಹತ್ತಾರು ವರ್ಷ ಅವರ ನೆನಪು ಕಾಡುವುದಂತೂ ನಿಜ. ಅವರು ಮಹಾ ಮೇಧಾವಿಯೂ, ಸಹೃದಯಿಯೂ, ಮೈಸೂರನ್ನು ಬಯಸುವ ಪತ್ರಕರ್ತರಾಗಿ ನಮ್ಮ ಮನದಲ್ಲಿ ಶಾಶ್ವತ ಸ್ಥಾನ ಪಡೆದಿದ್ದಾರೆ ಎಂಬುದು ಸುಳ್ಳಲ್ಲ.

> “ ನಾನು ಗಮನಿಸಿದಂತೆ ಒಂದು ರಾಷ್ಟ್ರೀಯ ಪತ್ರಿಕೆ ತರಿಸುವವರು ಸ್ಥಳೀಯ ಸುದ್ದಿಗಾಗಿ 'ಮೈಸೂರು ಮಿತ್ರ' ಹಾಗೂ 'ಸ್ಟಾರ್ ಆಫ್ ಮೈಸೂರ್' ತರಿಸುತ್ತಾರೆ. ಆದರೆ ಪತ್ರಿಕೆ ಈಗ ಸ್ಥಳೀಯ ಪತ್ರಿಕೆಯ ಮಟ್ಟದಲ್ಲಿ ಉಳಿಯದೇ ರಾಷ್ಟ್ರೀಯ ಸುದ್ದಿಗಳ ಪ್ರಕಟಣೆಯಲ್ಲಿಯೂ ಅಗ್ರಸ್ಥಾನದಲ್ಲಿದೆ. ಇದಕ್ಕೆ ಉದಾಹರಣೆ ಎಂದರೆ ಇತ್ತೀಚೆಗೆ ಲೋಕಸಭೆಯಲ್ಲಿ ಮಂಡಿತವಾದ ವಕ್ಫ್ ಕಾಯಿದೆಯ ಬಗೆಗಿನ ಚರ್ಚೆ. ಅದು ಮಧ್ಯರಾತ್ರಿವರೆಗೂ ನಡೆದಿತ್ತು. ಅನೇಕ ಪತ್ರಿಕೆಗಳು ಲೋಕ ಸಭೆಯಲ್ಲಿ, ರಾಜ್ಯಸಭೆಯಲ್ಲಿ ಚರ್ಚೆ ನಡೆಯುತ್ತಿದೆ ಎಂದಷ್ಟೇ ಪ್ರಕಟಿಸಿದ್ದವು. ಈ ಚರ್ಚೆಯ ಬಗ್ಗೆ ಮತದಾನವಾದಾಗ ಮುಂಜಾನೆ (ಬೆಳಗಿನ ಜಾವ) ಸುಮಾರು 2 ಗಂಟೆಯಾಗಿತ್ತು. ಮರುದಿನ 'ಮೈಸೂರು ಮಿತ್ರ'ದಲ್ಲಿ ಮಾತ್ರ ಮತದಾನದಲ್ಲಿ ಮಸೂದೆ ಅಂಗೀಕಾರವಾದ ಬಗ್ಗೆ ವಿವರವಿತ್ತು.

ಇದು ಮುಖ್ಯಮಂತ್ರಿ ಅಳಿವು-ಉಳಿವಿನ ಸಮಾವೇಶ



ಬೆಂಗಳೂರು: ಸಿಎಂ ಸಿದ್ದರಾಮಯ್ಯ ಕುರ್ಚಿ ಉಳಿಸಿಕೊಳ್ಳಲು ಸಮಾವೇಶ ನಡೆಸುತ್ತಿದ್ದಾರೆ. ಸಾಧನಾ ಸಮಾವೇಶ ಆದ ನಂತರ ಇದು ಸಿಎಂ ಅಳಿವು-ಉಳಿವಿನ ಸಮಾವೇಶವಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಟೀಕಿಸಿದರು.

ಬೆಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆರಂಭದಿಂದಲೂ ಮುಖ್ಯಮಂತ್ರಿ ಬದಲಾಗುತ್ತಾರೆ ಎಂದು ಹೇಳುತ್ತಲೇ ಇದ್ದಿದ್ದರಿಂದ ಯಾವಾಗಲೂ ಸರ್ಕಾರವನ್ನು ಅಸ್ಥಿರತೆ ಕಾಡುತ್ತಿದೆ. ಈ ಸಮಾವೇಶದಿಂದ ಜನರಿಗೆ ಯಾವುದೇ ಉಪಯೋಗವಿಲ್ಲ. ವಾಲ್ಮೀಕಿ ನಿಗಮದಲ್ಲಿ ಹಗರಣ, 2,500 ರೈತರ ಆತ್ಮಹತ್ಯೆ, 1200 ನವಜಾತ ಶಿಶುಗಳ ಸಾವು, ಬಾಣಂತಿಯರ ಸಾವು, ಹತ್ತಕ್ಕೂ ಅಧಿಕ ಗುತ್ತಿಗೆದಾರರು ಹಾಗೂ ಅಧಿಕಾರಿಗಳ ಆತ್ಮಹತ್ಯೆ, ಆರ್‌ಸಿಬಿ ಸಂಭ್ರಮಾಚರಣೆ ವೇಳೆ 11 ಸಾವು, ಇಂತಹ ಘಟನೆಗಳನ್ನು ಸಂಭ್ರಮಿಸಲು ಸಮಾವೇಶ ಮಾಡಲಾಗುತ್ತಿದೆಯೇ ಎಂದು ಪ್ರಶ್ನಿಸಿದರು. ಆರ್‌ಸಿಬಿ ಕಾರ್ಯಕ್ರಮ ಸರ್ಕಾರದ ವತಿಯಿಂದ ನಡೆದಿಲ್ಲ ಎಂದು ಬಿಂಬಿಸಲಾಗುತ್ತಿದೆ. ಆದರೆ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ಈ ಕಾರ್ಯಕ್ರಮದಲ್ಲಿ ಮುಂಚೂಣಿಯಲ್ಲಿದ್ದರು. ಸಿಐಡಿ ಹಾಗೂ ನ್ಯಾ.ಡಿಕುನ್ಹಾ ನೇತೃತ್ವದಲ್ಲಿ ನಡೆದ ತನಿಖೆಯಲ್ಲಿ ಸರ್ಕಾರದ ಪಾತ್ರದ ಬಗ್ಗೆ ಹೇಳದೆ, ಪೊಲೀಸರ ಮೇಲೆ ಆರೋಪ ಮಾಡಲಾಗಿದೆ ಎಂದರು.

ಹೊಸ ರೂಪದಲ್ಲಿ ನಂದಿನಿ ಹಾಲಿನ ಪ್ಯಾಕೆಟ್

ಬೆಂಗಳೂರು: ಕರ್ನಾಟಕದಲ್ಲಷ್ಟೇ ಅಲ್ಲದೇ ದೇಶ-ವಿದೇಶಗಳಲ್ಲೂ ಜನರ ಮೆಚ್ಚುಗೆಗಳಿಸಿರುವ ನಂದಿನಿ ಹಾಲಿಗೆ ಇನ್ಮುಂದೆ ಹೊಸ ರೂಪ ನೀಡಲು ಕೆಎಂಎಫ್ ಮುಂದಾಗಿದೆ.



ಈಗ ಪಾಲಿಥಿನ್ ಕವರ್‌ನಲ್ಲಿ ಪ್ಯಾಕ್ ಆಗಿ ಹೊರಬರುತ್ತಿರುವ ನಂದಿನಿ ಹಾಲಿಗೆ ಇದೀಗ ಪರಿಸರ ಸ್ನೇಹಿ ಟಚ್ ಕೊಡಲು ಬಮೂಲ್ (ಬೆಂಗಳೂರು ಹಾಲು ಒಕ್ಕೂಟ) ಮುಂದಾಗಿದೆ. ಇನ್ಮುಂದೆ ಪಾಲಿಥಿನ್ ಪ್ಯಾಕೆಟ್‌ಗಳ ಬದಲಾಗಿ ಜೈವಿಕ ಅಂಶಗಳಾಗಿ ವಿಘಟನೆಯಾಗಬಲ್ಲ (ಮಣ್ಣಿನಲ್ಲಿ ಬೇಗ ಕೊಳೆಯುವ ಪ್ಯಾಕೆಟ್) ಪ್ಯಾಕೆಟ್‌ನಲ್ಲಿ ನಂದಿನಿ ಹಾಲು ಬರಲಿದೆ. ಪ್ರಯೋಗಿಕವಾಗಿ ಇದೇ ತಿಂಗಳಿನಲ್ಲಿ ಬೆಂಗಳೂರಿನಲ್ಲಿ ಮಾತ್ರ ಹೊಸ ರೂಪದೊಂದಿಗೆ ನಂದಿನಿ ಹಾಲಿನ ಪ್ಯಾಕೆಟ್ ಬಿಡುಗಡೆಯಾಗಲಿದ್ದು, ಮುಂದಿನ ದಿನಗಳಲ್ಲಿ ಕರ್ನಾಟಕದಾದ್ಯಂತ ಬಿಡುಗಡೆಯಾಗಲಿದೆ.

ಜನಪ್ರತಿನಿಧಿಗಳು, ಸರ್ಕಾರಿ ಅಧಿಕಾರಿಗಳ ಮೇಲೆ ಸಮಾಜದ ಋಣ ಹೆಚ್ಚಿದೆ

● ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿಪಾದನೆ ● ಕೆಎಎಸ್ ತಾಲೂಕು ನೋಡಲ್ ಅಧಿಕಾರಿಗಳಿಗೆ ತರಬೇತಿಗೆ ಚಾಲನೆ



ಮೈಸೂರಿನ ಆಡಳಿತ ತರಬೇತಿ ಸಂಸ್ಥೆಯಲ್ಲಿ ಕೆಎಎಸ್ ತಾಲೂಕು ನೋಡಲ್ ಅಧಿಕಾರಿಗಳಿಗೆ ಶುಕ್ರವಾರ ಆಯೋಜಿಸಿದ್ದ ತರಬೇತಿ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿದರು.

ಮೈಸೂರು, ಜು.18(ಎಸ್‌ಬಿಡಿ)- ಪ್ರತಿಯೊಬ್ಬರ ಮೇಲೂ ಸಮಾಜದ ಋಣವಿದೆ. ಇದನ್ನು ತೀರಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಬೇಕಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಮೈಸೂರಿನ ಆಡಳಿತ ತರಬೇತಿ ಸಂಸ್ಥೆಯ ಹೇಮಾವತಿ ಸಭಾಂಗಣದಲ್ಲಿ ಭಾರತೀಯ ಸಾರ್ವಜನಿಕ ಆಡಳಿತ ಸಂಸ್ಥೆಯ ಕರ್ನಾಟಕ ಪ್ರಾದೇಶಿಕ ಶಾಖೆ (ಐಐಪಿಎ-ಕೆಆರ್‌ಬಿ) ಸಹಯೋಗದೊಂದಿಗೆ 'ಸಾರ್ವಜನಿಕ ಕುಂದುಕೊರತೆಗಳನ್ನು ಪರಿಹರಿಸುವುದು ಮತ್ತು ಒಟ್ಟು ಜಿಲ್ಲಾ ಉತ್ಪನ್ನವನ್ನು ಹೆಚ್ಚಿಸುವುದು' ಕುರಿತು ಕೆಎಎಸ್ ತಾಲೂಕು ನೋಡಲ್ ಅಧಿಕಾರಿಗಳಿಗೆ ಶುಕ್ರವಾರ ಆಯೋಜಿಸಿದ್ದ ತರಬೇತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಒಂದಿಲ್ಲೊಂದು ರೀತಿಯಲ್ಲಿ ಪ್ರತಿಯೊಬ್ಬರ ಮೇಲೂ ಸಮಾಜದ ಋಣವಿರುತ್ತದೆ. ಮುಖ್ಯವಾಗಿ ಜನಪ್ರತಿನಿಧಿಗಳು ಹಾಗೂ ಸರ್ಕಾರಿ ಅಧಿಕಾರಿಗಳ ಮೇಲೆ ಇದರ ಪ್ರಮಾಣ ಹೆಚ್ಚಿರುತ್ತದೆ. ಸಮಾಜಕ್ಕೆ ನಾವು-ನೀವೆಲ್ಲಾ ಋಣಿಯಾಗಿರಬೇಕು. ಸಮಾಜದ ಋಣ ತೀರಿಸುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಕೆಲಸ ಮಾಡಬೇಕು. ಇದಕ್ಕಾಗಿ ವಿಶೇಷ ತರಬೇತಿ ಅಗತ್ಯವಿಲ್ಲ. ಮನುಷ್ಯತ್ವ, ಅಶಕ್ತರ ಬಗ್ಗೆ ಅನುಕಂಪ, ಸಾಮಾಜಿಕ ಕಾಳಜಿ, ಜನಪರ ಧೋರಣೆ ಇದ್ದರೆ ಸಾಕು ಎಂದರು.

ಸಂವಿಧಾನ ಓದಿ: ಅಧಿಕಾರಿಗಳು ತಮ್ಮ ಸಾಮಾಜಿಕ ಜವಾಬ್ದಾರಿಯನ್ನು ಸಮರ್ಥವಾಗಿ ನಿರ್ವಹಿಸಿದರೆ ಸಾಕು, ನಿಮ್ಮಿಂದ ಮತ್ತೇನು ನಿರೀಕ್ಷಿಸುವುದಿಲ್ಲ. ಯಾರೂ ಬೃಹಸ್ಪತಿಗಳಲ್ಲ ಆದರೆ ಸಾಮಾಜಿಕ, ಆರ್ಥಿಕ, ರಾಜಕೀಯ ಜ್ಞಾನ ಹೆಚ್ಚಿಸಿಕೊಳ್ಳಬೇಕು. ಅವಕಾಶ ಸಿಗದ ನಮಗಿಂತ ಹೆಚ್ಚು ಬುದ್ಧಿವಂತರು ಸಮಾಜದಲ್ಲಿದ್ದಾರೆ ಎಂಬ ಜಾಗ್ರತೆ ಇರಬೇಕು. ಆಡಳಿತ ನಡೆಸುವ ರಾಜಕಾರಣಿಗಳು ಹಾಗೂ ಅಧಿಕಾರಿಗಳು ಸಂವಿಧಾನ ಓದದಿದ್ದರೆ ಜನರ ಸಮಸ್ಯೆ ಪರಿಹರಿಸಲು ಸಾಧ್ಯವಿಲ್ಲ. ಸಂವಿಧಾನದ ಧ್ಯೇಯೋದ್ದೇಶಗಳನ್ನು ಜಾರಿಗೆ ತರುವುದು ನಮ್ಮ ಆದ್ಯ ಕರ್ತವ್ಯ ಎಂದು ಹೇಳಿದರು.

ನಿಮ್ಮ ಜವಾಬ್ದಾರಿ ಮುಖ್ಯ: ನೋಡಲ್ ಅಧಿಕಾರಿಗಳು ಸಮಾಜದ ಕೆನೆ ಪದರವಿದ್ದಂತೆ. ನಿಮ್ಮ ಮೇಲೆ ಜವಾಬ್ದಾರಿ ಹೆಚ್ಚಿದೆ. ಕೋಮು ಗಲಭೆ, ಹಿಂಸೆ, ಪ್ರಚೋದನೆ, ಸುಳ್ಳು ಸುದ್ದಿ ಹರಡದಂತೆ ತಡೆಯುವವರೆಗೂ ಸಮಾಜದ ಸುಧಾರಣೆ ಅಸಾಧ್ಯ ಎನ್ನುವುದನ್ನು ಮರೆಯಬಾರದು. ಯುವ ಸಮುದಾಯವನ್ನು ಹಾಳು ಮಾಡುತ್ತಿರುವ ಮಾದಕ ವಸ್ತುಗಳ ಸಾಗಾಟ ಮತ್ತು ಮಾರಾಟ ತಡೆಯಬೇಕು. ಶಾಲೆ, ಆಸ್ಪತ್ರೆ, ಹಾಸ್ಟೆಲ್‌ಗೆ ಭೇಟಿ ನೀಡಿ, ಸರ್ಕಾರದ ಆದೇಶ ಪರಿಪಾಲನೆಯಾಗುತ್ತಿದೆಯೇ, ಸರ್ಕಾರದ ಸವಲತ್ತು ವಿತರಣೆ ಸಮರ್ಪಕವಾಗಿ ಆಗುತ್ತಿದೆಯೇ ಎಂದು ಪರಿಶೀಲಿಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಐಐಪಿಎ-ಕೆಆರ್‌ಬಿ ಅಧ್ಯಕ್ಷರೂ ಆದ ಸರ್ಕಾರದ ಮಾಜಿ ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯ್ ಭಾಸ್ಕರ್, ಬೀದರ್ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಿ.ರಂದೀಪ್ ಮತ್ತಿತರರು ಉಪಸ್ಥಿತರಿದ್ದರು.

> ▶ ಡಾ.ಬಿ.ಆರ್.ಅಂಬೇಡ್ಕರ್ ಅವರು ಎಲ್ಲಾ ವಿಷಯಗಳಲ್ಲಿ ಸಂಶೋಧನಾತ್ಮಕ ಅಧ್ಯಯನ ಮಾಡಿ ಎಲ್ಲಾ ಭಾರತೀಯರ ಹಕ್ಕು ರಕ್ಷಿಸುವ ಶ್ರೇಷ್ಠ ಸಂವಿಧಾನ ನೀಡಿದ್ದಾರೆ. ಆದರೆ ಜಾತಿ ಮತ್ತು ಧರ್ಮ ಸಂವಿಧಾನ ಆಶಯಗಳ ಜಾರಿಗೆ ಪ್ರತಿಕೂಲ ಪರಿಣಾಮವಾಗಿವೆ. ಇದನ್ನು ಮೀರಿದ ಆಡಳಿತ ನೀಡಬೇಕು. ಅಧಿಕಾರಿಗಳು ಸರ್ಕಾರದ ಕಣ್ಣು-ಕಿವಿಯಾಗಿ ಕೆಲಸ ಮಾಡಬೇಕು. ಎಷ್ಟೋ ಜನ ನಿರ್ದಿಷ್ಟವಾದ ಆದಾಯ ಇಲ್ಲದೆ ಬದುಕುತ್ತಿದ್ದಾರೆ. ಯಾರಾದರೂ ಅರ್ಜಿ ನೀಡಿದರೆ ಪೂರ್ವಾಗ್ರಹವಿಲ್ಲದೆ ಓದಿ, ನಿಷ್ಪಕ್ಷಪಾತವಾಗಿ ಕ್ರಮ ಕೈಗೊಳ್ಳಬೇಕು. ಪ್ರಜಾಪ್ರಭುತ್ವದ ರಕ್ಷಣೆ ನಿಟ್ಟಿನಲ್ಲಿ ಕಾರ್ಯಾಂಗ ಸಮರ್ಥವಾಗಿ ಕಾರ್ಯ ನಿರ್ವಹಿಸಬೇಕು.
>
> –ಸಚಿವ ಡಾ.ಹೆಚ್.ಸಿ.ಮಹದೇವಪ್ಪ

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಕಾಂಗ್ರೆಸ್‌ನ ಅಭಿವೃದ್ಧಿಯ ಕ್ರೆಡಿಟ್ ಬಿಜೆಪಿ ತೆಗೆದುಕೊಳ್ಳುತ್ತಿದೆ

ಮೈಸೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಆಕ್ರೋಶ



ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಶುಕ್ರವಾರ ನಡೆದ ಯುವ ಕಾಂಗ್ರೆಸ್ ಪದ ಗ್ರಹಣ ಸಮಾರಂಭವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು.

ಮೈಸೂರು, ಜು.18(ಬಿಎಲ್‌ಯು)– ಮೈಸೂರು ಸೇರಿದಂತೆ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಮಾಡಿರುವ ಅಭಿವೃದ್ಧಿ ಕಾರ್ಯಗಳ ಕ್ರೆಡಿಟ್ ಅನ್ನು ಬಿಜೆಪಿ ತೆಗೆದುಕೊಳ್ಳುತ್ತಿದ್ದು, ಬುರುಡೆ ಬಿಡುವವರೇ ಹೆಚ್ಚಾಗಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಇಂದು ಯುವ ಕಾಂಗ್ರೆಸ್ ನ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಮಾತನಾಡಿದ ಅವರು, ಮೈಸೂರಿನಲ್ಲಿ ನಾಳೆ ನಡೆಯುತ್ತಿರುವ ಸಾಧನಾ ಸಮಾವೇಶದಲ್ಲಿ 2,600 ಕೋಟಿಗೂ ಹೆಚ್ಚು ಅಭಿವೃದ್ಧಿ ಕಾರ್ಯಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ಮಾಡುತ್ತಿದ್ದೇವೆ. ಈ ಬಗ್ಗೆ ನಾವು ಸುಳ್ಳು ಹೇಳುವುದಿಲ್ಲ. ಇದನ್ನು ಸಾಬೀತು ಮಾಡಲು ನಾವು ಸಿದ್ಧರಿದ್ದು, ಚರ್ಚೆಗೆ ಬನ್ನಿ ಎಂದು ಸವಾಲು ಹಾಕಿದರು.

1960ರಲ್ಲಿ ಸ್ಥಾಪನೆಯಾದ ಯುವ ಕಾಂಗ್ರೆಸ್ ದೇಶದ ರಾಜಕೀಯ ಸ್ಥಿತ್ಯಂತರದಲ್ಲಿ ತನ್ನದೇ ಆದ ಪಾತ್ರ ವಹಿಸಿದೆ. ಸ್ವಾತಂತ್ರ್ಯ ಸಂಗ್ರಾಮದಲ್ಲಿ ಹೋರಾಟ ಮಾಡಿದ ಕಾಂಗ್ರೆಸ್, ದೇಶಕ್ಕೆ ಹಲವು ಮಹತ್ವದ ಕೊಡುಗೆ ನೀಡಿದೆ. ಆದರೆ ಸಂಘ ಪರಿವಾರದವರು ಬ್ರಿಟಿಷರ ಜೊತೆ ಸೇರಿ ಪಿತೂರಿ ನಡೆಸಿದರು. ಆರ್‌ಎಸ್‌ಎಸ್ ನಾಯಕರಾದ ಹೆಗಡೆವಾರ್ ಸೇರಿದಂತೆ ಹಲವು ಸಂಘ ಪರಿವಾರದ ನಾಯಕರು ಸ್ವಾತಂತ್ರ್ಯ ಸಂಗ್ರಾಮದಲ್ಲಿ ಭಾಗವಹಿಸಿರಲಿಲ್ಲ ಎಂದು ಸಿದ್ದರಾಮಯ್ಯ ಆರೋಪಿಸಿದರು.

ಬಿಜೆಪಿಯವರು ದೇಶ ಭಕ್ತಿ ಬಗ್ಗೆ ಉದ್ದುದ್ದ ಭಾಷಣ ಬಿಗಿಯುತ್ತಾರೆ. ಆದರೆ ದೇಶದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಪಾಲ್ಗೊಳ್ಳದ ಇವರಿಗೆ ದೇಶದ ಅಭಿವೃದ್ಧಿ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ ಎಂದು ಬಿಜೆಪಿ ನಾಯಕರಿಗೆ ತಿರುಗೇಟು ನೀಡಿದರು.

ಒಗ್ಗಟ್ಟಿಲ್ಲದಿದ್ದರೆ ಅಪಾಯ ಕಟ್ಟಿಟ್ಟ ಬುತ್ತಿ

ಒಗ್ಗಟ್ಟಿಲ್ಲದೆ ಗುಂಪುಗಳಾಗಿ ಛಿದ್ರಗೊಂಡರೆ ಅಪಾಯ ಕಟ್ಟಿಟ್ಟ ಬುತ್ತಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಯುವ ಕಾಂಗ್ರೆಸ್ ಕಾರ್ಯಕರ್ತರ ಎಚ್ಚರಿಸಿದ್ದಾರೆ.

ಈಗ ಯುವ ಕಾಂಗ್ರೆಸ್‌ನಿಂದ 65 ಮಂದಿ ಗೆಲುವು ಸಾಧಿಸಿ ಅಧಿಕಾರ ವಹಿಸಿಕೊಂಡಿದ್ದಾರೆ. ಚುನಾವಣೆ ನಂತರ ಸೋತವರು ಹಾಗೂ ಗೆದ್ದವರು ಒಂದಾಗಬೇಕು. ಯಾವುದೇ ಕಾರಣಕ್ಕೂ ಗುಂಪುಗಳಾಗಿ ಒಡೆದು ಛಿದ್ರವಾಗಬಾರದು ಎಂದು ಸಲಹೆ ನೀಡಿದರು.

ಒಗ್ಗಟ್ಟು ಇಲ್ಲದಿದ್ದರೆ ರಾಜಕೀಯವಾಗಿ ಬೆಳೆಯಲು ಸಾಧ್ಯವಿಲ್ಲ. ಈ ಹಿನ್ನೆಲೆಯಲ್ಲಿ ಭಿನ್ನಾಭಿಪ್ರಾಯ ಇದ್ದರೂ ಅದನ್ನು ಮರೆತು ಒಗ್ಗಟ್ಟಾಗಿರಬೇಕು ಎಂದು ಯುವ ಕಾಂಗ್ರೆಸ್ ನಾಯಕರಿಗೆ ಕಿವಿಮಾತು ಹೇಳಿದರು.

ನಾವು ಜ್ಯಾತ್ಯಾತೀತ ಮತ್ತು ಧರ್ಮಾತೀತ ಸಿದ್ಧಾಂತ ಪಾಲಿಸುತ್ತೇವೆ ಎಂದು ಬಿಜೆಪಿ ನಾಯಕರು ಹೇಳುತ್ತಾರೆ. ಆದರೆ ಬಿಜೆಪಿಯಿಂದ ಆಯ್ಕೆಯಾದ 240 ಲೋಕಸಭಾ ಸದಸ್ಯರಲ್ಲಿ ಮುಸ್ಲಿಂ ಸಮುದಾಯದ ಒಬ್ಬನೇ ಒಬ್ಬ ಇಲ್ಲ. ಬಿಜೆಪಿಯವರು ಸಂವಿಧಾನವನ್ನು ಗೌರವಿಸುವುದಿಲ್ಲ, ಸಮಾನತೆಯ ಭಾವವಿಲ್ಲ ಎಂಬುದಕ್ಕೆ ಇದು ಸ್ಪಷ್ಟ ನಿದರ್ಶನ ಎಂದು ಆಪಾದಿಸಿದರು.

ಲೋಕಸಭಾ ಚುನಾವಣೆಯಲ್ಲಿ ನನ್ನ ಸೋಲಿಗೆ ಹಿಂದೂ ಮಹಾಸಭಾದ ಸಾರ್ವರ್ಕರ್ ಹಾಗೂ ಕಮ್ಯೂನಿಸ್ಟ್‌ನವರು ಕಾರಣರಾಗಿದ್ದರು ಎಂದು ಡಾ.ಅಂಬೇಡ್ಕರ್ ಅವರು ಸ್ನೇಹಿತರೊಬ್ಬರಿಗೆ ಬರೆದ ಪತ್ರದಲ್ಲಿ ತಿಳಿಸಿದ್ದರು.

ಇಷ್ಟೆಲ್ಲ ಹುಳುಕು ಇದ್ದರೂ ಈ ದೇಶದ ವಾರಸುದಾರರು ನಾವೇ ಎಂದು ಬಿಜೆಪಿ ನಾಯಕರು ತಪ್ಪು ಸಂದೇಶ ನೀಡುತ್ತಿದ್ದಾರೆ. ಆದರೆ ವಾಸ್ತವವಾಗಿ ಕಾಂಗ್ರೆಸ್ ಈ ದೇಶದ ಸಂವಿಧಾನ, ಪ್ರಜಾಪ್ರಭುತ್ವ, ಜಾತ್ಯಾತೀತತೆಯನ್ನ ಸಂರಕ್ಷಣೆ ಮಾಡುತ್ತಿದೆ ಎಂದು ಸಿದ್ದರಾಮಯ್ಯ ತಿಳಿಸಿದರು.

ಜೆಡಿಎಸ್‌ನವರು ಇಲ್ಲಿವರೆಗೆ ಸ್ವತಂತ್ರವಾಗಿ ಅಧಿಕಾರಕ್ಕೆ ಬಂದಿಲ್ಲ. ಬಿಜೆಪಿ ಹಾಗೂ ಕಾಂಗ್ರೆಸ್ ಬೆಂಬಲದಿಂದ ಹೆಚ್.ಡಿ.ಕುಮಾರಸ್ವಾಮಿ ಮುಖ್ಯಮಂತ್ರಿ ಆಗಿದ್ದರು. ಇವರಿಗೆ ರಾಜಕೀಯದ ತತ್ವ, ಸಿದ್ಧಾಂತವಿಲ್ಲ ಎಂದು ಕಿಡಿಕಾರಿದರು.

ಇದೇ ವೇಳೆ ಸಿದ್ದರಾಮಯ್ಯ ಅವರು ಯುವ ಕಾಂಗ್ರೆಸ್ ನೂತನ ಅಧ್ಯಕ್ಷ ಸೈಯದ್ ಅಬ್ರಹಾಂ ಸೇರಿದಂತೆ ಇತರರಿಗೆ ಕಾಂಗ್ರೆಸ್ ಬಾವುಟ ನೀಡುವ ಮೂಲಕ ಶುಭ ಕೋರಿದರು.

ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಶಾಸಕರಾದ ಕೆ.ಹರೀಶ್‌ಗೌಡ, ತನ್ವೀರ್ ಸೇಠ್, ರವಿಶಂಕರ್, ಮಾಜಿ ಶಾಸಕರಾದ ಎಂ.ಕೆ. ಸೋಮಶೇಖರ್, ನಂಜುಂಡಸ್ವಾಮಿ, ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಜಿಲ್ಲಾಧ್ಯಕ್ಷ ಡಾ. ವಿಜಯಕುಮಾರ್ ಸೇರಿದಂತೆ ಹಲವು ಕಾಂಗ್ರೆಸ್ ನಾಯಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಸಿಇಟಿ: ಆಯ್ಕೆ ದಾಖಲು ಅವಧಿ ವಿಸ್ತರಣೆ

ಬೆಂಗಳೂರು, ಜು. 18– ಎಂಜಿನಿಯರಿಂಗ್ ಸೇರಿದಂತೆ ವಿವಿಧ ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕೆ ಕಾಲೇಜು, ಕೋರ್ಸ್‌ಗಳ ಆಯ್ಕೆಗಳನ್ನು ದಾಖಲಿಸುವ ಅವಧಿಯನ್ನು ಜುಲೈ 22ರವರೆಗೆ ವಿಸ್ತರಿಸಲಾಗಿದೆ.




ಎಂಜಿನಿಯರಿಂಗ್, ದಂತ ವೈದ್ಯಕೀಯ, ಪಶು ವೈದ್ಯಕೀಯ, ಕೃಷಿ ವಿಜ್ಞಾನ, ಬಿಎಸ್‌ಸಿ ನರ್ಸಿಂಗ್ ಸೇರಿದಂತೆ ಹಲವು ಕೋರ್ಸ್‌ಗಳ ಸೀಟು ಲಭ್ಯತಾ ಪಟ್ಟಿ ಸಿದ್ಧವಾಗಿದ್ದು, ಲಭ್ಯವಿರುವ ಎಲ್ಲ ಕೋರ್ಸ್‌ಗಳಿಗೂ ಆಯ್ಕೆಗಳನ್ನು ದಾಖಲಿಸಬಹುದು ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್. ಪ್ರಸನ್ನ ಹೇಳಿದ್ದಾರೆ.

ವೈದ್ಯಕೀಯ, ಆಯುರ್ವೇದ, ಹೋಮಿಯೋಪತಿ ಮತ್ತು ಯುನಾನಿ, ಫಾರ್ಮಸಿ ಕೋರ್ಸ್‌ಗಳ ಸೀಟು ಲಭ್ಯತಾ ಪಟ್ಟಿ ಬಂದ ನಂತರ ಆಯ್ಕೆ ನಮೂದಿಸಲು ಅವಕಾಶ ನೀಡಲಾಗುವುದು. ಕೊನೆ ದಿನಾಂಕದವರೆಗೆ ಎಷ್ಟು ಬಾರಿಯಾದರೂ ಬದಲಿಸಿಕೊಳ್ಳಬಹುದು. ಆದರೆ, ಅಂತಿಮವಾಗಿ ಬದಲಿಸಿದ ವಿವರಗಳನ್ನು ಮಾತ್ರ ಸೀಟು ಹಂಚಿಕೆಗೆ ಪರಿಗಣಿಸಲಾಗುತ್ತದೆ ಎಂದು ವಿವರಿಸಿದ್ದಾರೆ.

ಡಿಸಿಇಟಿ ಸೀಟು ಹಂಚಿಕೆ ಪ್ರಕಟ: ಎಂಜಿನಿಯರಿಂಗ್ ಎರಡನೇ ವರ್ಷಕ್ಕೆ ನೇರ ಪ್ರವೇಶ ಕಲ್ಪಿಸುವ ಡಿಪ್ಲೊಮಾ ಸಿಇಟಿ ಮೊದಲ ಸುತ್ತಿನ ಸೀಟು ಹಂಚಿಕೆಯ ಫಲಿತಾಂಶವನ್ನು ಪ್ರಕಟಿಸಲಾಗಿದೆ. ಸೀಟು ಹಂಚಿಕೆಯಾದವರು ಜುಲೈ 19ರಂದು ಮಧ್ಯಾಹ್ನ 3ರ ಒಳಗೆ ತಮಗೆ ಸೂಕ್ತ ಎನಿಸಿದ ಕಾಲೇಜು, ಕೋರ್ಸ್‌ಗಳನ್ನು ದಾಖಲಿಸಬೇಕು. ಯಾವುದೇ ಆಯ್ಕೆ ದಾಖಲಿಸದೇ ಸುಮ್ಮನಿದ್ದರೂ ನಂತರದ ಸುತ್ತುಗಳಿಗೆ ಅವರನ್ನು ಪರಿಗಣಿಸಲಾಗುವುದಿಲ್ಲ ಎಂದು ಪ್ರಾಧಿಕಾರ ಹೇಳಿದೆ.

ನಾಳೆಯಿಂದ 3 ದಿನ ಸ್ವಾಮಿ ಬ್ರಹ್ಮಾನಂದರಿಂದ ಪ್ರವಚನ

ಮೈಸೂರು,ಜು.18(ಪಿಎಂ)– ಚಿನ್ಮಯ ಮಿಷನ್ ವತಿಯಿಂದ ಜು.19ರಿಂದ 21ರವರೆಗೆ ಮಿಷನ್‌ನ ಕರ್ನಾಟಕದ ಮುಖ್ಯಸ್ಥರಾದ ಸ್ವಾಮಿ ಬ್ರಹ್ಮಾನಂದ ಅವರಿಂದ 'ನಿತ್ಯ ಜೀವನಕ್ಕೆ ಗೀತೆಯ ಸಂದೇಶ' ಕುರಿತು ಪ್ರವಚನ ಹಮ್ಮಿಕೊಳ್ಳಲಾಗಿದೆ. ಮೈಸೂರಿನ ಫೋರ್ಟ್ ಮೊಹಲ್ಲಾದ ಶೃಂಗೇರಿ ಶ್ರೀ ಶಂಕರ ಮಠದ ಆವರಣದಲ್ಲಿ ಮೂರು ದಿನಗಳ ಕಾಲ ಸಂಜೆ 6.30ರಿಂದ 8ರವರೆಗೆ ಪ್ರವಚನ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.



ಸಕಾಲದಲ್ಲಿ ಬಡ್ತಿ ನೀಡದೆ ಎಸ್‌ಸಿ, ಎಸ್‌ಟಿ ನೌಕರರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಂದ ಅನ್ಯಾಯ

● ಬಿಎಸ್‌ಪಿ ರಾಜ್ಯಾಧ್ಯಕ್ಷ ಗಂಭೀರ ಆರೋಪ ● ಶಿಕ್ಷಣ, ಗೃಹ, ಅರಣ್ಯ, ತೋಟಗಾರಿಕೆ, ನಗರಾಭಿವೃದ್ಧಿ, ಸಾರಿಗೆ, ಇಂಧನ ಇಲಾಖೆಗಳಲ್ಲಿ ಅರ್ಹತೆ ಇದ್ದರೂ ಬಡ್ತಿ ನೀಡದೆ ಅನ್ಯಾಯ

ಮೈಸೂರು, ಜು.18(ಜಿಎ)–ಎಸ್‌ಸಿ, ಎಸ್‌ಟಿ ನೌಕರರಿಗೆ ಸಕಾಲದಲ್ಲಿ ಬಡ್ತಿ ನೀಡದೆ, ದಲಿತ ನೌಕರರಿಗೆ ನೇಮಕಾತಿ ಮತ್ತು ಬಡ್ತಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅನ್ಯಾಯ ಮಾಡುತ್ತಿದ್ದಾರೆ ಎಂದು ಬಹುಜನ ಸಮಾಜವಾದಿ ಪಾರ್ಟಿಯ ರಾಜ್ಯಾಧ್ಯಕ್ಷ ಎಂ.ಕೃಷ್ಣಮೂರ್ತಿ ಬೇಸರ ವ್ಯಕ್ತಪಡಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ಒಂದು ಜಿಲ್ಲೆಗೆ ಮಾತ್ರ ಎಸ್‌ಸಿ, ಎಸ್‌ಟಿ ಸಮುದಾಯಕ್ಕೆ ಸೇರಿದ ಜಿಲ್ಲಾಧಿಕಾರಿಯನ್ನು ನೇಮಕ ಮಾಡಿದೆ. ಐಎಎಸ್ ಹುದ್ದೆಗೆ ಅರ್ಹತೆ ಮತ್ತು ಯೋಗ್ಯತೆ ಇದ್ದರೂ ದಲಿತರನ್ನು ನೇಮಕ ಮಾಡದೆ ದಲಿತ ನೌಕರರ ಹಕ್ಕುಗಳನ್ನು ಹೇಗೆ ಹತ್ತಿಕ್ಕುತ್ತದೆ ಎಂಬುದಕ್ಕೆ ಸ್ಪಷ್ಟ ಉದಾಹರಣೆಯಾಗಿದೆ ಎಂದು ಕಿಡಿಕಾರಿದರು.

ಪದವಿ ಪೂರ್ವ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಸುಮಾರು 80 ಉಪನ್ಯಾಸಕರಿಗೆ 2016ರಲ್ಲಿಯೇ ಪ್ರಾಂಶುಪಾಲರಾಗಿ ಬಡ್ತಿ ನೀಡಬೇಕಾಗಿತ್ತು. ಆದರೆ ಇವರಿಗೆ ಬಡ್ತಿ ತಪ್ಪಿಸಲು ಶಾಲಾ ಶಿಕ್ಷಣ ಇಲಾಖೆ ಮುಂದಾಗಿತ್ತು. ಇದರ ವಿರುದ್ಧ ಕಾಂಗ್ರೆಸ್ ಶಾಸಕ ನರೇಂದ್ರಸ್ವಾಮಿ ನೇತೃತ್ವದ ಎಸ್‌ಸಿ, ಎಸ್‌ಟಿ ಸದನ ಸಮಿತಿ ನೌಕರರ ಬಡ್ತಿಗೆ ಆದೇಶ ನೀಡಿತ್ತು ಆದರೆ, ಸಮಿತಿಯ ಆದೇಶವನ್ನು ಕಡೆಗಣಿಸಿ ಎಸ್‌ಸಿ, ಎಸ್‌ಟಿ ಜನಾಂಗದ ಉಪನ್ಯಾಸಕರಿಗೆ ಅನ್ಯಾಯ ಮಾಡುವಸಲುವಾಗಿ ಇತರರಿಗೆ ಬಡ್ತಿ ನೀಡಲಾಗಿದೆ. ಸದನ ಸಮಿತಿ ಆದೇಶವನ್ನು ಪಾಲಿಸದಿದ್ದರೆ ಸದನ ಸಮಿತಿಯನ್ನೇ ರದ್ದುಗೊಳಿಸಿ. ಇಲ್ಲವೇ ಎಸ್‌ಸಿ, ಎಸ್‌ಟಿ ಹಿತರಕ್ಷಣೆ ಮಾಡಲು ವಿಫಲವಾಗಿರುವ ಶಾಸಕ ನರೇಂದ್ರಸ್ವಾಮಿ ರಾಜೀನಾಮೆ ನೀಡಲಿ ಎಂದು ಆಗ್ರಹಿಸಿದರು.

ವೋಟು ಮತ್ತು ಅಧಿಕಾರಕ್ಕಾಗಿ ದಲಿತ ಪರ ಎನ್ನುವ ಸಿದ್ದರಾಮಯ್ಯ ಮತ್ತು ಕಾಂಗ್ರೆಸ್ ಸರ್ಕಾರ ರಾಜ್ಯದ ಪದವಿ ಪೂರ್ವ ಶಿಕ್ಷಣ, ಗೃಹ, ಆರಣ್ಯ, ತೋಟಗಾರಿಕೆ, ಕೃಷಿ, ನಗರಾಭಿವೃದ್ಧಿ, ಸಾರಿಗೆ, ಡಿಪಿಎಆರ್. ಇಂಧನ ಇಲಾಖೆ ಸೇರಿದಂತೆ ಹಲವಾರು ಇಲಾಖೆಗಳಲ್ಲಿ ಮುಂಬಡ್ತಿಗೆ ಅರ್ಹರಾಗಿರುವ ಎಸ್‌ಸಿ, ಎಸ್‌ಟಿ ನೌಕರರಿಗೆ ಸಕಾಲದಲ್ಲಿ ಬಡ್ತಿ ನೀಡದೆ ವಂಚಿಸುತ್ತಿದ್ದು, ಇದರಿಂದ ನೌಕರರು ಮಾನಸಿಕವಾಗಿ ಕುಗ್ಗಿ ಹೋಗುತ್ತಿದ್ದಾರೆ ಎಂದು ಅವರು ನುಡಿದರು.


ನಗರಾಭಿವೃದ್ಧಿ ಅಡಿಯಲ್ಲಿ ಬರುವ ನಗರ ನೀರು ಸರಬರಾಜು ಮಂಡಳಿಯಲ್ಲಿ ಕಳೆದ 8 ವರ್ಷಗಳಿಂದ ಬಡ್ತಿಯಿಂದ ವಂಚಿಸಿಕೊಂಡು ಬರಲಾಗುತ್ತಿದೆ. ಸಚಿವ ಡಾ.ಹೆಚ್.ಸಿ.ಮಹದೇವಪ್ಪ ನೇತೃತ್ವದ ಸಮಾಜ ಕಲ್ಯಾಣ ಇಲಾಖೆಯ ಸ್ಪಷ್ಟ ಆದೇಶವಿದ್ದರೂ ನಗರಾಭಿವೃದ್ಧಿ ಕಾರ್ಯದರ್ಶಿ ಬಡ್ತಿ ನಿಯಮಗಳನ್ನು ಗಾಳಿಗೆ ತೂರಿ ವಂಚಿಸುತ್ತಿದ್ದಾರೆ. ಕೆ.ಜೆ.ಜಾರ್ಜ್ ಸಚಿವರಾಗಿರುವ ಇಂಧನ ಇಲಾಖೆಯಲ್ಲಿ 5 ಎಸ್ಸಿ ಎಸ್ಟಿ ಸಹಾಯಕ ಇಂಜನಿಯರ್‌ಗಳಿಗೆ ಬಡ್ತಿ ನೀಡದೆ ವಂಚಿಸಲಾಗುತ್ತಿದೆ ಎಂದು ಆರೋಪಿಸಿದರು.

ಸಮುದಾಯದ ವಿರುದ್ಧ ಅನ್ಯಾಯವಾಗುತ್ತಿದ್ದರೂ ಸಚಿವರಾದ ಡಾ.ಜಿ.ಪರಮೇಶ್ವರ್, ಡಾ.ಹೆಚ್.ಸಿ. ಮಹದೇವಪ್ಪ, ಕೆ.ಹೆಚ್.ಮುನಿಯಪ್ಪ, ಸತೀಶ್ ಜಾರಕಿಹೊಳಿ, ಕೆ.ಎನ್.ರಾಜಣ್ಣ, ಶಿವರಾಜ್ ತಂಗಡಗಿ, ಪ್ರಿಯಾಂಕ ಖರ್ಗೆ, ಆರ್.ಬಿ.ತಿಮ್ಮಾಪುರ್ ಮೀಸಲು ಕ್ಷೇತ್ರಗಳಿಂದ ಗೆದ್ದಿರುವ ಶಾಸಕರುಗಳು ಬಾಯಿ ಮುಚ್ಚಿಕೊಂಡು ಕುಳಿತಿರುವುದು ನಾಚಿಕೆಗೇಡು ಎಂದು ಅಕ್ರೋಶ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಬಹುಜನ ಸಮಾಜ ಪಾರ್ಟಿಯ ಜಿಲ್ಲಾಧ್ಯಕ್ಷ ಪಿ.ಚಂದ್ರಶೇಖರ್, ರಾಜ್ಯ ಕಾರ್ಯದರ್ಶಿ ಬಿ.ಅರ್.ಪುಟ್ಟಸ್ವಾಮಿ, ಜಿಲ್ಲಾ ಉಸ್ತುವಾರಿ ದಂಡಿಕೆರೆ ಬಸವಣ್ಣ, ಜಿಲ್ಲಾ ಸಂಯೋಜಕ ಬಿ.ಮಹದೇವಸ್ವಾಮಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಚ್.ಗಂಗಾಧರ್, ಜಿಲ್ಲಾ ಉಪಾಧ್ಯಕ್ಷ ಪ್ರಭಾಕರ್ ಉಪಸ್ಥಿತರಿದ್ದರು.

ಕೆಬಿಜಿಯವರಿಗೆ ಸಂತಾಪ

ಪಾರಂಪರಿಕ ಹಾಗೂ ಐತಿಹಾಸಿಕ ಹಿನ್ನೆಲೆ ಇರುವ ಮೈಸೂರು ನಗರದ ಅಭಿವೃದ್ಧಿ ಬಗ್ಗೆ ಡಾ. ಕೆ.ಬಿ.ಗಣಪತಿ ಅವರು ಅಪಾರ ಕಾಳಜಿ ಹೊಂದಿದ್ದರು.



'ಮೈಸೂರು ಮಿತ್ರ' ಹಾಗೂ 'ಸ್ಟಾರ್ ಆಫ್ ಮೈಸೂರ್' ಪತ್ರಿಕೆಗಳ ಮೂಲಕ ಮೈಸೂರಿನ ಅಭಿವೃದ್ಧಿ ಸಂಬಂಧ ನನ್ನಂತಹ ಹಲವು ಜನಪ್ರತಿನಿಧಿಗಳಿಗೆ ಮಾರ್ಗದರ್ಶನ ನೀಡುತ್ತಿದ್ದರು.

ಮೈಸೂರಿನ ಧನ್ವಂತರಿ ರಸ್ತೆ, ಇರ್ವಿನ್ ರಸ್ತೆ ಅಗಲೀಕರಣ ಮಾಡಲು ನನಗೆ ಉತ್ತೇಜನ ನೀಡಿದ್ದರು. ನಗರದ ರೈಲ್ವೆ ನಿಲ್ದಾಣದ ಬಳಿ ಏಕ ಪಥ ರಸ್ತೆ ದ್ವಿಪಥವಾಗಲು ಡಾ.ಕೆ.ಬಿ.ಗಣಪತಿ ಅವರೆ ಕಾರಣಕರ್ತರಾಗಿದ್ದರು. ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಪ್ರತಿಮೆ ಮತ್ತು ವೃತ್ತದ ಅಭಿವೃದ್ಧಿಗೂ ಸಲಹೆ ನೀಡಿದ್ದರು. ಚಿಕ್ಕ ಗಡಿಯಾರದ ವೃತ್ತದಲ್ಲಿ ದಿನ ಪತ್ರಿಕೆಗಳ ವಿತರಕರಿಗೆ ಅನುಕೂಲವಾಗುವಂತೆ ವ್ಯವಸ್ಥೆ ಮಾಡಿದ್ದಾಗ ಕೆಬಿಜಿ ಅವರು ಸಂತಸ ವ್ಯಕ್ತಪಡಿಸಿದ್ದರು. ನಾನು ಒಂದಷ್ಟು ಸಮಾಜ ಸೇವೆ ಮಾಡಿ ಗುರುತಿಸಿಕೊಳ್ಳಲು ಡಾ.ಗಣಪತಿ ಅವರೇ ಕಾರಣಕರ್ತರಾಗಿದ್ದರು.

– ಎಂ.ಜೆ.ರವಿಕುಮಾರ್, ಮಾಜಿ ಮೇಯರ್

ಮೈಸೂರು ಮಿತ್ರ

ಶನಿವಾರ 19 ಜುಲೈ 2025

ನಾಳೆ ಮೈಸೂರಿನ ಮಣಿಪಾಲ್ ಆಸ್ಪತ್ರೆಯಲ್ಲಿ ಹಿರಿಯ ನಾಗರಿಕರೊಂದಿಗೆ ರುಮಟೊಲಾಜಿ ಕುರಿತು ಸಂವಾದ

Manipal Hospitals

ಮೈಸೂರು, ಜು. 18– ಮೈಸೂರಿನ ಮಣಿಪಾಲ್ ಆಸ್ಪತ್ರೆ ವತಿಯಿಂದ ಜು. 20ರಂದು ಬೆಳಗ್ಗೆ 10.30ರಿಂದ ಆಸ್ಪತ್ರೆಯ ಹೊರ ರೋಗಿಗಳ ವಿಭಾಗದಲ್ಲಿ ಹಿರಿಯ ನಾಗರಿಕರೊಂದಿಗೆ ರುಮಟೊಲಾಜಿ ಮತ್ತು ಸಮಗ್ರ ಸ್ವಾಸ್ಥ್ಯ ಕುರಿತು ಸಂವಾದ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮವು ಮಧ್ಯಾಹ್ನ 1 ಗಂಟೆಯ ವರೆಗೂ ನಡೆಯಲಿದ್ದು, ಮಣಿಪಾಲ್ ಆಸ್ಪತ್ರೆಯ ರುಮಟೊಲಾಜಿ ವಿಭಾಗದ ಮುಖ್ಯಸ್ಥೆ ಡಾ. ಸಂಗೀತ ಕೆ.ಎನ್. ಅಧ್ಯಕ್ಷತೆ ವಹಿಸಲಿದ್ದಾರೆ. ಹಿರಿಯ ನಾಗರಿಕರಿಗೆ ಅವರು ಚಲನಶೀಲತೆ, ಜೀವನದ ಗುಣಮಟ್ಟ ಸುಧಾರಿಸುವಲ್ಲಿ ಆರಂಭಿಕ ಪತ್ತೆ, ತಜ್ಞರ ಆರೈಕೆ, ಫಿಸಿಯೋ ಥೆರಪಿ, ಪೋಷಣೆಯ ಸಹಾಯಕ ಪಾತ್ರಗಳ ಕುರಿತು ಮಾಹಿತಿ ನೀಡಲಿದ್ದಾರೆ.


ಹಿರಿಯ ನಾಗರಿಕರಲ್ಲಿ ಆಯಾಸ, ದೇಹದ ಬಿಗಿತ ಮತ್ತು ಕುಂಠಿತ ಚಲನ–ವಲನಗಳು ವಯಸ್ಸಾಗುವಿಕೆಯ ಸಾಮಾನ್ಯ ಲಕ್ಷಣಗಳೆಂದು ಪರಿಗಣಿಸಲಾಗುವುದು. ಈ ಲಕ್ಷಣಗಳು ಕೆಲವು ಆಟೋ ಇಮ್ಯೂನ್ ಕಾರಣಗಳು (ರುಮಟಾಯ್ಡ್ ಸಂಧಿವಾತ) ಅಥವಾ ಮಸ್ಕ್ಯುಲೋಸ್ಕೆಲಿಟಲ್ (ಸ್ನಾಯು ಮತ್ತು ಮೂಳೆ)ಗಳ ಅಸ್ವಸ್ಥತೆಗಳೊಂದಿಗೆ ಸಂಬಂಧ ಹೊಂದಿರಬಹುದಾಗಿದೆ.

ಸಂಧಿವಾತದ ಬಗ್ಗೆ ಚರ್ಚೆ ನಡೆಸುವ ಡಾ. ಸಂಗೀತ ಅವರು, ಹಿರಿಯ ನಾಗರಿಕರಲ್ಲಿ ರುಮಟಾಯ್ಡ್ ಸಂಧಿವಾತ ಆರೈಕೆ ಮತ್ತು ಸ್ಥಿತಿ ನಿರ್ವಹಣೆಯ ಕುರಿತು ತಿಳಿಸುವರು. ಇದರೊಂದಿಗೆ ಮೂಳೆ ಮತ್ತು ಸ್ನಾಯು ಆರೋಗ್ಯ ಚಲನೆಯ ವಿಷಯಗಳ ಬಗ್ಗೆ ಫಿಸಿಯೋಥೆರಪಿ ತಜ್ಞ ಇಸ್ಮಾಯಿಲ್ ಅವರು ಸುಲಭ ವ್ಯಾಯಾಮಗಳ ನೇರಪ್ರದರ್ಶನದೊಂದಿಗೆ ಮಾಹಿತಿ ನೀಡುವರು.

ಮೂಳೆ ಮತ್ತು ಸ್ನಾಯು ಅರೋಗ್ಯ :ಆಹಾರ ಮತ್ತು ಪೋಷಣೆ ತಂಡದಿಂದ ಮೂಳೆ ಮತ್ತು ಸ್ನಾಯು ಆರೋಗ್ಯವನ್ನು ಉತ್ತೇಜಿಸುವ ಪಾಕ ವಿಧಾನ ಸಿದ್ಧತೆಗಳ ನೇರಪ್ರದರ್ಶನ ನೀಡುವರು.

ಹೆಚ್ಚಿನ ವಿವರಗಳಿಗಾಗಿ ಅಥವಾ ನೋಂದಣಿಗೆ ಮೊ.: 96206 33255 ಮೂಲಕ ಸಂಪರ್ಕಿಸಲು ಪ್ರಕಟಣೆ ಕೋರಿದೆ.

ರಾಜ್ಯ ಯುವ ಕಾಂಗ್ರೆಸ್ ಅಧ್ಯಕ್ಷರಿಗೆ ಸ್ವಾಗತ



ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಶುಕ್ರವಾರ ನಡೆದ ಯುವ ಕಾಂಗ್ರೆಸ್ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮಕ್ಕೆ ಆಗಮಿಸಿದ್ದ ರಾಜ್ಯ ಯುವ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥ ಗೌಡ ಅವರನ್ನು ಮೈಸೂರು ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ ಸ್ವಾಗತಿಸಿದರು. ಈ ಸಂದರ್ಭದಲ್ಲಿ ನಗರ ಕಾಂಗ್ರೆಸ್ ಸಮಿತಿಯ ಪ್ರಧಾನ ಕಾರ್ಯದರ್ಶಿ ಬಿ.ಶಿವಣ್ಣ, ಉಪಾಧ್ಯಕ್ಷ ವಿಕ್ರಾಂತ್ ಪಿ.ದೇವೇಗೌಡ, ಡಿಸಿಸಿ ಸದಸ್ಯ ಮಾದಾಪುರ ಲೋಕೇಶ್, ಕುಮಾರ್, ಕೃಷ್ಣಪ್ಪ, ದಿನೇಶ್, ರವಿ ಮತ್ತಿತರರು ಉಪಸ್ಥಿತರಿದ್ದರು.

ಕಾಂಗ್ರೆಸ್ ಉಪಾಧ್ಯಕ್ಷರಿಗೆ ಅಭಿನಂದನೆ



ಮೈಸೂರಿನ ನಗರ ಕಾಂಗ್ರೆಸ್ ಸಮಿತಿಯ ನೂತನ ಉಪಾಧ್ಯಕ್ಷರಾಗಿ ನೇಮಕಗೊಂಡ ವಿಕ್ರಾಂತ್ ಪಿ.ದೇವೇಗೌಡರನ್ನು ಕೆ.ಜಿ.ಕೊಪ್ಪಲ್ ಯುವ ಮುಖಂಡರು ಅಭಿನಂದಿಸಿದರು. ಈ ವೇಳೆ ಚಲನಚಿತ್ರ ನಟ ಸೋಮಣ್ಣ, ಉದ್ಯಮಿ ಪಿ.ನಾಗೇಂದ್ರ, ಕೆ.ಜಿ.ಕೊಪ್ಪಲ್ ಚಾಮುಂಡೇಶ್ವರಿ ದೇವಸ್ಥಾನದ ಅಧ್ಯಕ್ಷ ಗಿರೀಶ್ ಡಿ.ಗೌಡ, ಕಾಂಗ್ರೆಸ್ ಮುಖಂಡರಾದ ಕುಮಾರ್ ಗೌಡ, ಕಾಳ ಬೋರಪ್ಪ ಪಿ.ಬಂದಿಗೌಡ, ದತ್ತು ರಾಜ್ ಕುಮಾರ್, ಮಾದಪ್ಪ ಕೃಷ್ಣಪ್ಪ ದೇವು(ಪ್ರದೀಪ್), ಕುಮಾರ್(ಅಂಬಿ), ಸೂರಿ, ಅನಿಲ್ ಮತ್ತಿತರರು ಉಪಸ್ಥಿತರಿದ್ದರು.

ವಿಶ್ವಬ್ರಹ್ಮ ಕ್ರಿಕೆಟ್ ಟೂರ್ನಿಮೆಂಟ್‌ಗೆ ಚಾಲನೆ



ಮೈಸೂರು ಜಿಲ್ಲಾ ಚಿನ್ನ ಬೆಳ್ಳಿ ಕೆಲಸಗಾರ ಅಭಿವೃದ್ಧಿ ಸಂಘದ ವತಿಯಿಂದ ಮೈಸೂರು ಯೂನಿವರ್ಸಿಟಿ ಗ್ರೌಂಡ್‌ನಲ್ಲಿ ಆಯೋಜಿಸಿರುವ ಎರಡು ದಿನಗಳ ರಾಜ್ಯ ಮಟ್ಟದ ವಿಶ್ವಬ್ರಹ್ಮ ಕ್ರಿಕೆಟ್ ಟೂರ್ನಿಮೆಂಟ್‌ಗೆ ಚಲನಚಿತ್ರ ನಟಿ ಶ್ರೀಮತಿ ಭವ್ಯ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಎ ಶಂಕರ್ ಶೆಟ್ಟಿ ಅಂಡ್ ಸನ್ಸ್ ಮಾಲೀಕ ಆದರ್ಶ ಮೂರ್ತಿ, ಕೆ.ಆರ್.ಆಸ್ಪತ್ರೆ ವೈದ್ಯಕೀಯ ಅಧೀಕ್ಷಕರಾದ ಡಾ.ಶೋಭಾ ಹೆಚ್.ಪಿ., ನೇತ್ರ ತಜ್ಞ ಡಾ.ಚೇತನ್ ಸಂಘದ ಗೌರವಾಧ್ಯಕ್ಷ ಬಿ.ರವಿಪ್ರಕಾಶ್, ಅಧ್ಯಕ್ಷ ಗೋಲ್ಡನ್ ಟಿ ಸುರೇಶ್, ಕಾರ್ಯದರ್ಶಿ ಶಶಿಧರಾಚಾರ್ಯ, ಕ್ರೀಡಾ ಕಾರ್ಯದರ್ಶಿ ನಾಗರಾಜ್ ಆಚಾರ್ಯ, ಡಾಕ್ಟರ್ ಚೈನ್ ಸಿಂಗ್ ರಾಜ್, ಪುರೋಹಿತ್, ತಿರುಮಲಾಚಾರ್, ವಿವೇಕ್, ನಿವೃತ್ತ ಪೋಲೀಸ್ ಅಧಿಕಾರಿ ಎಂ.ಎಸ್. ಉಮಾಪತಿ, ಬಿಜೆಪಿ ಮುಖಂಡ ಗೆಜ್ಜಗಳ್ಳಿ ಮಹೇಶ್, ಆರ್ ಮಂಜುನಾಥ್, ಅಣ್ಣಯ್ಯ ಚಾರ್ ಇನ್ನಿತರರಿದ್ದರು

ಶ್ರೀ ಚಾಮುಂಡೇಶ್ವರಿ ತಾಯಿಯ ವರ್ಧಂತಿ...



ಮೈಸೂರಿನ ಜೆಎಸ್‌ಎಸ್ ಫಾರ್ಮಸಿ ಕಾಲೇಜಿನಲ್ಲಿ ಶ್ರೀ ಚಾಮುಂಡೇಶ್ವರಿ ತಾಯಿಯ ವರ್ಧಂತಿ ಪೂಜಾ ಕಾರ್ಯಕ್ರಮ ಗುರುವಾರ ನಡೆಯಿತು. ಕಾಲೇಜಿನ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಆಷಾಢ ಕೊನೇ ಶುಕ್ರವಾರದ ವಿಶೇಷ ಪೂಜೆ



ಮೈಸೂರು ತಾಲೂಕು ಜಯಪುರ ಹೋಬಳಿ ದಾರಿಪುರ ಗ್ರಾಮದ ಚಾಮುಂಡೇಶ್ವರಿ ಬಳಗದ ವತಿಯಿಂದ ಕೊನೆಯ ಆಷಾಢ ಶುಕ್ರವಾರ ಪ್ರಯುಕ್ತ ಚಾಮುಂಡೇಶ್ವರಿ ದೇವಿ ಮೂರ್ತಿ ಪ್ರತಿಷ್ಠಾಪಿಸಿ, ವಿಶೇಷ ಹೂವಿನ ಅಲಂಕಾರ ಮಾಡಿ ಪೂಜೆ ಸಲ್ಲಿಸಿ, ಅನ್ನ ಸಂತರ್ಪಣೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಪ್ರಗತಿಪರ ರೈತ ನರ್ಸರಿ ಗುರು, ಬಿಜೆಪಿ ಯುವ ಮುಖಂಡ ವಿ.ಕವೀಶ್ ಗೌಡ ಸಮಾಜ ಸೇವಕ ಎಸ್.ಶ್ರೀಕಾಂತ್, ಮಾವಿನಹಳ್ಳಿ ಅಭಿಷೇಕ್, ಗ್ರಾಮ ಪಂಚಾಯಿತಿ ಸದಸ್ಯ ಬರಡನಪುರ ಶಿವಣ್ಣ ಬಸವಣ್ಣ, ಗಣೇಶ, ಡಿ.ಎಂ.ಗಿರೀಶ್, ಶಿವಣ್ಣ ಸೇರಿ ಗ್ರಾಮಸ್ಥರು ಉಪಸ್ಥಿತರಿದ್ದರು.

ಕೆಬಿಜಿ ಅವರಿಗೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಶ್ರದ್ಧಾಂಜಲಿ





ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಅವರು ಶುಕ್ರವಾರದಂದು 'ಮೈಸೂರು ಮಿತ್ರ' ಹಾಗೂ 'ಸ್ಟಾರ್ ಆಫ್ ಮೈಸೂರ್' ಸಂಸ್ಥಾಪಕ ಸಂಪಾದಕರಾದ ಡಾ. ಕೆ.ಬಿ.ಗಣಪತಿ (ಕೆಬಿಜಿ) ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಶ್ರದ್ಧಾಂಜಲಿ ಸಲ್ಲಿಸಿ, ಕೆಬಿಜಿ ಅವರ ಪತ್ನಿ, ಅಕಾಡೆಮಿ ನ್ಯೂಸ್ ಪೇಪರ್ಸ್ ಪ್ರೈವೇಟ್ ಲಿಮಿಟೆಡ್ ಕಾರ್ಯಕಾರಿ ನಿರ್ದೇಶಕರಾದ ಶ್ರೀಮತಿ ರ್‍ಯಾಲಿ ಗಣಪತಿ, ಪುತ್ರ 'ಮೈಸೂರು ಮಿತ್ರ' ಮತ್ತು 'ಸ್ಟಾರ್ ಆಫ್ ಮೈಸೂರ್' ವ್ಯವಸ್ಥಾಪಕ ಸಂಪಾದಕರಾದ ವಿಕ್ರಂ ಮುತ್ತಣ್ಣ ಅವರಿಗೆ ಸಾಂತ್ವನ ಹೇಳಿದರು. ಈ ವೇಳೆ ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಮಾಜಿ ಅಧ್ಯಕ್ಷ ಬಿ.ಪಿ. ಮಂಜುನಾಥ್, ಹಿರಿಯ ವಕೀಲ ಎಸ್.ಅರುಣ್ ಕುಮಾರ್, ನಗರ ಬಿಜೆಪಿ ಪ್ರಧಾನ ಕಾರ್ಯದರ್ಶಿ ಕೇಬಲ್ ಮಹೇಶ್ ಉಪಸ್ಥಿತರಿದ್ದರು. ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ (ಬಲಚಿತ್ರ) ಸಹ ಶುಕ್ರವಾರ ಬೆಳಿಗ್ಗೆ ಮೈಸೂರಿನ ಕೆ.ಸಿ.ಲೇಔಟ್‌ನ ಕೆಬಿಜಿಯವರ ನಿವಾಸಕ್ಕೆ ಭೇಟಿ ನೀಡಿ ದಿವಂಗತರಿಗೆ ಶ್ರದ್ಧಾಂಜಲಿ ಸಲ್ಲಿಸಿದರು. ಅವರೊಂದಿಗೆ ಶಾಸಕ ಟಿ.ಎಸ್.ಶ್ರೀವತ್ಸ ಮತ್ತಿತರರಿದ್ದರು.

ನೀರಾವರಿ ಪಂಪ್‌ಸೆಟ್‌ಗಳಿಗೆ ಹಗಲಿನಲ್ಲಿಯೂ ಸಮರ್ಪಕ ವಿದ್ಯುತ್ ಪೂರೈಕೆಗೆ

ಕುಸುಮ್–ಸಿ ಯೋಜನೆ ತ್ವರಿತ ಅನುಷ್ಠಾನಕ್ಕೆ ಸೂಚನೆ

ಮೈಸೂರು, ಜು.18– ನೀರಾವರಿ ಪಂಪ್‌ಸೆಟ್‌ಗಳಿಗೆ ಹಗಲಿನ ವೇಳೆಯೂ ಸಮರ್ಪಕ ವಿದ್ಯುತ್ ಪೂರೈಸುವ ಕುಸುಮ್–ಸಿ ಯೋಜನೆಯನ್ನು ತ್ವರಿತ ಹಾಗೂ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿದ ರಾಜ್ಯದ ನಂಬರ್ 1 ಎಸ್ಕಾಂ ಎಂಬ ಹೆಗ್ಗಳಿಕೆಗೆ ಪಾತ್ರರಾಗುವಂತೆ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಗಮಿತ(ಸೆಸ್ಕ್) ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ಇಂಧನ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ ಸೂಚನೆ ನೀಡಿದ್ದಾರೆ.

ಮೈಸೂರಿನ ವಿಜಯನಗರ 2ನೇ ಹಂತದಲ್ಲಿರುವ ನಿಗಮದ ಕಚೇರಿಯಲ್ಲಿ ಶುಕ್ರವಾರ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, "ರೈತರ ಕೃಷಿ ಪಂಪ್ ಸೆಟ್‌ಗಳಿಗೆ ಹಗಲಿನ ವೇಳೆಯಲ್ಲೂ 7 ಗಂಟೆ ವಿದ್ಯುತ್ ಪೂರೈಕೆ ಮಾಡಲು ಕುಸುಮ್–ಸಿ ಯೋಜನೆ ಅತ್ಯಂತ ಸಹಕಾರಿಯಾಗಲಿದೆ. ಆದ್ದರಿಂದ ಕುಸುಮ್–ಸಿ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿದರೆ ಮುಂದಿನ ಕೆಲವೇ ತಿಂಗಳುಗಳಲ್ಲಿ ರೈತರ ವಿದ್ಯುತ್ ಸಮಸ್ಯೆ ಪರಿಹಾರವಾಗಲಿದೆ. ಈ ನಿಟ್ಟಿನಲ್ಲಿ ನಿಗಮದ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು" ಎಂದರು.

ಕುಸುಮ್–ಸಿ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿರುವ ರಾಜ್ಯದ ನಂಬರ್ 1 ಎಸ್ಕಾಂ ಎಂಬ ಖ್ಯಾತಿ ಪಡೆಯುವಂತೆ ಮಾಡಲು ಅಧಿಕಾರಿಗಳು ಹೆಚ್ಚಿನ ಪರಿಶ್ರಮದಿಂದ ಕೆಲಸ ಮಾಡಬೇಕಿದೆ. ಸೆಸ್ಕ್ ವ್ಯಾಪ್ತಿಯಲ್ಲಿ ಈಗಾಗಲೇ ಕುಸುಮ್–ಸಿ ಯೋಜನೆಯನ್ನು ಅನುಷ್ಠಾನಗೊಳಿಸುವಲ್ಲಿ ಉತ್ತಮ ರೀತಿಯಲ್ಲಿ ಕೆಲಸ ಮಾಡಲಾಗುತ್ತಿದೆ. ಜತೆಗೆ ಎಲ್ಲೆಲ್ಲಿ ಭೂಮಿ ಸಮಸ್ಯೆಗಳಿವೆ ಅವುಗಳನ್ನು ಬಗೆಹರಿಸಬೇಕಿದ್ದು, ಈ ನಿಟ್ಟಿನಲ್ಲಿ ಉದ್ಯಮಿಗಳು ಹಾಗೂ ರೈತರ ಜತೆಗೆ ಮಾತುಕತೆ ನಡೆಸಿ ಕುಸುಮ್–ಸಿ ಯೋಜನೆ ಅನುಷ್ಠಾನಕ್ಕೆ ಅಗತ್ಯವಿರುವ ಭೂಮಿಯನ್ನು ಪಡೆಯಲು ಪ್ರಯತ್ನಿಸಬೇಕು" ಎಂದು ಸೂಚಿಸಿದರು.

ಸಮಸ್ಯೆಗಳಿಗೆ ಶೀಘ್ರವೇ ಸ್ಪಂದಿಸಿ: ನಿಗಮದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುವ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳು ಚುರುಕಾಗಿ ಕೆಲಸ ಮಾಡುವುದರ ಜತೆಗೆ ಸಮಸ್ಯೆಗಳು ಕಂಡುಬಂದಲ್ಲಿ ಶೀಘ್ರವೇ ಸ್ಪಂದಿಸಬೇಕು. ಇಲ್ಲದಿದ್ದಲ್ಲಿ ಜನರ ಆಕ್ರೋಶಕ್ಕೆ ಗುರಿಯಾಗುತ್ತೇವೆ. ಹಾಗಾಗಿ, ಜವಾಬ್ದಾರಿ ಅರಿತು ಕೆಲಸ ಮಾಡಬೇಕು" ಎಂದು ನಿಗಮದ ಎಇಇಗಳಿಗೆ ಅಪರ ಮುಖ್ಯ ಕಾರ್ಯದರ್ಶಿಗಳು ಸೂಚನೆ ನೀಡಿದರು. "ಬಿಲ್ಲಿಂಗ್, ಮೀಟರ್ ರೀಡಿಂಗ್, ಮೀಟರ್‌ಗಳ ಪರಿಶೀಲನೆ, ಅಕ್ರಮ ವಿದ್ಯುತ್ ಸಂಪರ್ಕಗಳು ಸೇರಿದಂತೆ ಇನ್ನಿತರ ವಿಷಯಗಳಲ್ಲಿ ಮತ್ತಷ್ಟು ಪರಿಣಾಮಕಾರಿಯಾಗಿ ಕೆಲಸ ಆಗಬೇಕು. ಮುಖ್ಯವಾಗಿ, ಗ್ರಾಹಕರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ನಿಗಾವಹಿಸಬೇಕು." ಎಂದು ಸಲಹೆ ನೀಡಿದರು.

ಸಭೆಯ ಆರಂಭದಲ್ಲಿ ಮಾತನಾಡಿದ ಸೆಸ್ಕ್ ವ್ಯವಸ್ಥಾಪಕ ನಿರ್ದೇಶಕರಾದ ಕೆ.ಎಂ. ಮುನಿಗೋಪಾಲ್ ರಾಜು, ಗಂಗಾ ಕಲ್ಯಾಣ ಯೋಜನೆ, ಕುಡಿಯುವ ನೀರು ಸರಬರಾಜು ಯೋಜನೆ, ಪಿಎಂ ಜನಮನ್, ಹಾಡಿಗಳ ವಿದ್ಯುತೀಕರಣ ಯೋಜನೆಗಳ ಪ್ರಗತಿ ಹಾಗೂ ನಿಗಮ ವ್ಯಾಪ್ತಿಯಲ್ಲಿ ಮಾಡಲಾಗಿರುವ ಫೀಡರ್ ನಿರ್ವಹಣೆ, ಟ್ರಾನ್ಸ್‌ಫಾರ್ಮರ್‌ಗಳ ನಿರ್ವಹಣೆ, ಐಪಿ ಸೆಟ್‌ಗಳ ನೋಂದಣಿ ಇನ್ನಿತರ ವಿಷಯಗಳ ಮಾಹಿತಿ ನೀಡಿದರು.

ಸಭೆಯಲ್ಲಿ ಸೆಸ್ಕ್ ತಾಂತ್ರಿಕ ನಿರ್ದೇಶಕ ಡಿ.ಜೆ. ದಿವಾಕರ್, ಮುಖ್ಯ ಆರ್ಥಿಕ ಅಧಿಕಾರಿ ಜಿ. ರೇಣುಕಾ, ಮುಖ್ಯ ಪ್ರಧಾನ ವ್ಯವಸ್ಥಾಪಕರಾದ ಶರಣಮ್ಮ ಎಸ್. ಜಂಗಿನ, ಆಡಳಿತ ಮತ್ತು ಮಾನವ ಸಂಪನ್ಮೂಲ ಶಾಖೆಯ ಪ್ರಧಾನ ವ್ಯವಸ್ಥಾಪಕರಾದ ಬಿ.ಆರ್. ರೂಪ ಸೇರಿದಂತೆ ಮುಖ್ಯ ಇಂಜಿನಿಯರ್‌ಗಳು, ನಿಗಮದ ಹಲವು ಅಧಿಕಾರಿಗಳು ಪಾಲ್ಗೊಂಡಿದ್ದರು.

ಇಂಧನ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯಿಂದ ಪ್ರಗತಿ ಪರಿಶೀಲನೆ



ಇಂಧನ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ ಶುಕ್ರವಾರ ಮೈಸೂರಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಸಿದರು

> ಕುಸುಮ್–ಸಿ ಯೋಜನೆ ಸಮರ್ಪಕ ಅನುಷ್ಠಾನಕ್ಕೆ 153 ಸಬ್ ಸ್ಟೇಷನ್‌ಗಳಿಂದ 842.16 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆಗೆ ಕಾರ್ಯಾದೇಶ ಪತ್ರ ನೀಡಲಾಗಿದೆ. 100 ಸಬ್ ಸ್ಟೇಷನ್‌ಗಳಿಂದ 566.3 ಮೆಗಾ ವ್ಯಾಟ್ ಉತ್ಪಾದನೆಗೆ ಪಿಪಿಎ ಕಾರ್ಯಗತ ಮಾಡಲಾಗಿದೆ. ಇದರಲ್ಲಿ ಎಲ್ಲ ವಿಭಾಗದ ಇಇ ಗಳಿಗೆ ಮೂರು ತಿಂಗಳಲ್ಲಿ ಕನಿಷ್ಠ 5 ಮೆಗಾ ವ್ಯಾಟ್ ವಿದ್ಯುತ್ ಉತ್ಪಾದನೆ ಆಗಬೇಕೆಂದು ಟಾರ್ಗೆಟ್ ನೀಡಲಾಗಿದೆ.
>
> - ಕೆ.ಎಂ. ಮುನಿಗೋಪಾಲ್ ರಾಜು, ವ್ಯವಸ್ಥಾಪಕ ನಿರ್ದೇಶಕರು, ಸೆಸ್ಕ್.

ದುರಾಡಳಿತದಲ್ಲಿ ಕಾಂಗ್ರೆಸ್ ಸರ್ಕಾರದ್ದು ಸಾಧನೆ

- ಮಾಜಿ ಉಪ ಮುಖ್ಯಮಂತ್ರಿ ಡಾ. ಸಿ.ಎನ್.ಅಶ್ವತ್ಥನಾರಾಯಣ್ ಟೀಕೆ
- ಒಂದೂ ಒಳ್ಳೆ ಕೆಲಸ ಮಾಡದೇ ಇದ್ದರೂ ಮೈಸೂರಲ್ಲಿ ಸಾಧನಾ ಸಮಾವೇಶ!



ಬೆಂಗಳೂರು, ಜು.18(ಕೆಎಂಶಿ)– ಕಾಂಗ್ರೆಸ್ ಸರ್ಕಾರ ದುರಾಡಳಿತದ ಸಾಧನೆ ಮಾಡಿದೆ ಎಂದು ಮಾಜಿ ಉಪಮುಖ್ಯಮಂತ್ರಿ ಡಾ.ಸಿ.ಎನ್.ಅಶ್ವತ್ಥನಾರಾಯಣ್ ಇಂದಿಲ್ಲಿ ಟೀಕಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮತದಾರರನ್ನು ನಂಬಿಸಿ ಬಹುಮತ ಪಡೆದು ಆಡಳಿತ ಚುಕ್ಕಾಣಿ ಹಿಡಿದ ಕಾಂಗ್ರೆಸ್ ಜನರಿಗೆ ದ್ರೋಹ, ಅನ್ಯಾಯ ಮಾಡಿ ಭ್ರಷ್ಟಾಚಾರದ ಕೊಡುಗೆ ನೀಡಿದೆ. ನೂರಾರು ಕೋಟಿ ರೂ. ಹಗರಣ ನಡೆಸಿದ್ದು, ಒಂದೂ ಒಳ್ಳೆಯ ಕೆಲಸ ಮಾಡದೆ ಮೈಸೂರಿನಲ್ಲಿ ಸಾಧನಾ ಸಮಾವೇಶ ನಡೆಸುತ್ತಿದೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ತಲೆ ಮೇಲೆ ಹೊಡೆದಂತೆ ಸುಳ್ಳು ಹೇಳುತ್ತಾರೆ. ಆತ್ಮಸಾಕ್ಷಿ ಎಂಬುದೇ ಇಲ್ಲ. ಸುಳ್ಳನ್ನೇ ಸತ್ಯವೆಂದು ಸಾಧನಾ ಸಮಾವೇಶ ಮಾಡುತ್ತಿದ್ದಾರೆ. ಮುಡಾ ಹಗರಣದಲ್ಲಿ ನಿವೇಶನ ವಾಪಸ್ ಮಾಡುವ ಮೂಲಕ ಅವ್ಯವಹಾರವನ್ನು ಸ್ವತಃ ಒಪ್ಪಿಕೊಂಡಂತಾಗಿದೆ. ಮಹರ್ಷಿ ವಾಲ್ಮೀಕಿ ನಿಗಮದ ಹಗರಣಕ್ಕೆ ಏನು ಉತ್ತರ ಕೊಡುತ್ತಾರೆ. ಅಧಿಕಾರಿಗಳ ಆತ್ಮಹತ್ಯೆಗೆ ಏನು ಕಾರಣ ಹೇಳುತ್ತಾರೆ. ಪ್ರತಿಯೊಂದರಲ್ಲೂ ಕಮಿಷನ್, ಹಗಲು ದರೋಡೆ ನಡೆಸಿದ ವಿಚಾರ ಸಮಾವೇಶದಲ್ಲಿ ತಿಳಿಸುತ್ತಾರಾ ಎಂದರು.

ಕೆಲವೆಡೆ ಕಮಿಷನ್ ಶೇ.100ಕ್ಕೆ ಏರಿದೆ, ಇನ್ನು ಕೆಲವೆಡೆ ಶೇ.80, ಶೇ.60 ಭ್ರಷ್ಟಾಚಾರ ಆರೋಪ ಕೇಳಿಬರುತ್ತಿದೆ. ದುಡ್ಡಿಲ್ಲದೇ ವರ್ಗಾವಣೆ ಇಲ್ಲ, ಈ ಸಂಬಂಧ ದಲಿತ ವರ್ಗಕ್ಕೆ ಸೇರಿದ ಅಧಿಕಾರಿಗಳು ಆತ್ಮಹತ್ಯೆ ಮಾಡಿಕೊಂಡಿದ್ದಾರೆ, ಇದು ಕೊಲೆಗಡುಕರ, ಸಾವಿನ ಸರ್ಕಾರ.

ಆರ್‌ಸಿಬಿ ವಿಜಯೋತ್ಸವ ವೇಳೆ ಕಾಲ್ತುಳಿತ ಸಂಭವಿಸಿ 11 ಜನರ ಸಾವು ಘಟನೆಗೆ ಯಾರು ಹೊಣೆ, ಕಾನೂನು ಸುವ್ಯವಸ್ಥೆ ಕಾಪಾಡುವುದು ಯಾರ ಜವಾಬ್ದಾರಿ, ಕಾರ್ಯಕ್ರಮಕ್ಕೆ ಅನುಮತಿ ಇರಲಿಲ್ಲ ಎಂದಾದರೆ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕ್ರೀಡಾಂಗಣಕ್ಕೆ ಏಕೆ ಹೋದರು.

ಜನರು ಸಾಯುತ್ತಿದ್ದರೂ ವಿಜಯೋತ್ಸವ ಟ್ರೋಫಿಗೆ ಮುತ್ತು ಕೊಡುತ್ತಿದ್ದರೆ, ಇತ್ತ ಮುಖ್ಯಮಂತ್ರಿ ಕ್ರೀಡಾಭಿಮಾನಿಗಳು ಸಾಯುತ್ತಿದ್ದರೂ ಹೋಟೆಲ್‌ನಲ್ಲಿ ಮಸಾಲೆ ದೋಸೆ ತಿನ್ನುತ್ತಿದ್ದರು. ಕಾರ್ಯಕ್ರಮಕ್ಕೆ ಅನುಮತಿ ಇಲ್ಲದಿದ್ದರೂ ವಿಧಾನಸೌಧ ಬಳಿ ವಿಜಯೋತ್ಸವ ನಡೆಸಿದ್ದೇಕೆ, ಆರ್‌ಸಿಬಿ, ಕೆಎಸ್‌ಸಿಎ, ಡಿಎನ್‌ಎ ಸರ್ಕಾರ ನಡೆಸುತ್ತಿದೆಯೇ, ಇವರಿಗೆ ನಾಚಿಕೆ ಆಗಬೇಕು ಎಂದರು.

ಜನರ ಜೀವ ತೆಗೆಯುವುದೇ ಇವರ ಸಾಧನೆ. ಅಧಿಕಾರದಲ್ಲಿ ಇರುವ ಯಮದೂತರು, ವರದಿ ನಿಜಕ್ಕೂ ಖಂಡನೀಯ, ಕಾರ್ಯಕ್ರಮ ಬೇಡ ಎಂಬ ಸ್ಪಷ್ಟ ನಿಲುವನ್ನು ಪೊಲೀಸ್ ಅಧಿಕಾರಿಗಳು ತೆಗೆದುಕೊಂಡಿದ್ದರು, ಕ್ರಿಕೆಟಿಗ ವಿರಾಟ್ ಕೊಯ್ಲಿ ಮೇಲೆ ಹೊಣೆ ಹೊರಿಸುತ್ತಿದ್ದಾರೆ.

ಇನ್ನು ಮುಂದೆ ಕರ್ನಾಟಕದಲ್ಲಿ ಯಾವುದೇ ಕ್ರೀಡೆಗಳು ನಡೆಯದಂತೆ ಆಗಲಿದೆ. ಎಲ್ಲರಲ್ಲೂ ಭಯ ಹುಟ್ಟಿಸಿದ್ದಾರೆ. ರಾಜ್ಯಕ್ಕೆ ಕಳಂಕ ತರುವ, ತಲೆ ತಗ್ಗಿಸುವ ಕೆಲಸ ಮಾಡಿದ್ದಾರೆ. ಕರ್ನಾಟಕದಿಂದ ಉದ್ಯಮಿಗಳು ಓಡಿ ಹೋಗುತ್ತಿದ್ದಾರೆ. ಇದು ಹಗರಣ ದೊರೆಗಳ (ಸ್ಕ್ಯಾಮ್ ಕಿಂಗ್ಸ್) ಸರ್ಕಾರ ಆಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾಂಗ್ರೆಸ್ ಸರ್ಕಾರ ವಿರೋಧ ಪಕ್ಷದ ಶಾಸಕರ ವಿರುದ್ಧ ಸುಳ್ಳು ಮೊಕದ್ದಮೆ ಹೂಡುತ್ತಿದೆ

- ವಿಧಾನಸಭೆ ವಿಪಕ್ಷ ನಾಯಕ ಆರ್.ಅಶೋಕ್ ಆರೋಪ
- ರೌಡಿಶೀಟರ್ ಬಿಕ್ಲ ಶಿವ ಹತ್ಯೆಯಲ್ಲಿ ಬೈರತಿ ಬಸವರಾಜ್ ಸಿಲುಕಿಸುವ ಯತ್ನ



ಬೆಂಗಳೂರು, ಜು.18(ಕೆಎಂಶಿ)–ರಾಜ್ಯ ಕಾಂಗ್ರೆಸ್ ಸರ್ಕಾರ ವಿರೋಧ ಪಕ್ಷದ ಶಾಸಕರನ್ನು ಸುಳ್ಳು ಮೊಕದ್ದಮೆಗಳಲ್ಲಿ ಸಿಲುಕಿಸುವ ಪ್ರಯತ್ನ ಮಾಡುತ್ತಿದೆ ಎಂದು ವಿಧಾನ ಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಆರೋಪಿಸಿದ್ದಾರೆ.

ರೌಡಿಶೀಟರ್ ಬಿಕ್ಲ ಶಿವ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೃತನ ತಾಯಿ ವಿಜಯಲಕ್ಷ್ಮಿ, ತಾವು ಶಾಸಕ ಬೈರತಿ ಬಸವರಾಜ್ ವಿರುದ್ಧ ದೂರು ಕೊಟ್ಟಿಲ್ಲ, ಪೊಲೀಸರೇ ಹೆಸರು ಹಾಕಿಕೊಂಡಿದ್ದಾರೆ ಎಂಬುದಾಗಿ ಹೇಳಿರುವುದು ಕಾಂಗ್ರೆಸ್ ಸರ್ಕಾರದ ಕೀಳುಮಟ್ಟದ ರಾಜಕೀಯ ತೋರಿಸುತ್ತದೆ ಎಂದಿದ್ದಾರೆ.

ಈ ಸಂಬಂಧ ಟ್ವೀಟ್ ಮಾಡಿರುವ ಅವರು, ರಾಜ್ಯ ಸರ್ಕಾರ ವಿರೋಧ ಪಕ್ಷಗಳ ನಾಯಕರ ವಿರುದ್ಧ ದ್ವೇಷ ಸಾಧಿಸುತ್ತಿದೆ ಎಂಬುದನ್ನು ಸಾಬೀತುಪಡಿಸಿದೆ ಎಂದಿದ್ದಾರೆ.

ಮಾತೆತ್ತಿದರೆ, ಕೇಂದ್ರ ಸರ್ಕಾರ ಸಿಬಿಐ, ಐಟಿ, ಇಡಿ ಮೂಲಕ ವಿರೋಧಪಕ್ಷಗಳನ್ನು ಟಾರ್ಗೆಟ್ ಮಾಡುತ್ತಿದೆ ಎಂಬ ಅಪಪ್ರಚಾರ ಮಾಡುವ ಕರ್ನಾಟಕ ಕಾಂಗ್ರೆಸ್ ನಾಯಕರು, ರೌಡಿಶೀಟರ್ ಹತ್ಯೆ ದೂರಿನಲ್ಲಿ ಶಾಸಕರ ಹೆಸರೇ ಇಲ್ಲದಿದ್ದರೂ ದುರುದ್ದೇಶದಿಂದ ಎಫ್‌ಐಆರ್ ಹಾಕಿರುವುದು ಯಾವ ನ್ಯಾಯ. ಸುಳ್ಳು ಕೇಸುಗಳನ್ನು ಹಾಕುವ ಮೂಲಕ ಬಿಜೆಪಿ ಶಾಸಕರಿಗೆ ಬೆದರಿಕೆ ಹಾಕಬಹುದು ಎಂಬ ಭ್ರಮೆಯಿಂದ ಕಾಂಗ್ರೆಸ್ ಸರ್ಕಾರ ಹೊರಬರಬೇಕು.

ಬಿಜೆಪಿ ಯಾವುದೇ ಅಪರಾಧಿಗಳನ್ನು ರಕ್ಷಿಸುವುದಿಲ್ಲ, ಆರೋಪ ಇದ್ದರೆ ಕಾನೂನಿನ ಪ್ರಕಾರ ತನಿಖೆ ಮಾಡಲಿ, ನ್ಯಾಯಾಲಯದಲ್ಲಿ ಸಾಬೀತುಪಡಿಸಲಿ, ಈ ರೀತಿ ದ್ವೇಷ ರಾಜಕಾರಣ ಮಾಡುವುದು ಸರಿಯಲ್ಲ. ರಾಜ್ಯ ಸರ್ಕಾರ ವಿರೋಧ ಪಕ್ಷದ ಶಾಸಕರನ್ನು ಇದೇ ರೀತಿ ಟಾರ್ಗೆಟ್ ಮಾಡುತ್ತಿದ್ದರೆ, ಸರ್ಕಾರದ ವಿರುದ್ಧ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆ.

ನಿರಂತರ ಪರಿಶ್ರಮ, ಶಿಸ್ತು ವಿದ್ಯಾರ್ಥಿಗಳು ಗುರಿಮುಟ್ಟಲು ಸಹಕಾರಿ

ಮೈಸೂರು ವಿವಿ ಕುಲಸಚಿವೆ ಎಂ.ಕೆ.ಸವಿತಾ ಅಭಿಮತ

ಮೈಸೂರು, ಜು.18(ವಿವಿಹೆಚ್)– ವಿದ್ಯಾರ್ಥಿಗಳಲ್ಲಿ ಓದಿನ ಬಗೆಗಿನ ತುಡಿತ, ಅಚಲ ಗುರಿ, ನಿರಂತರ ಪರಿಶ್ರಮ ಹಾಗೂ ಶಿಸ್ತು ವಿದ್ಯಾರ್ಥಿಗಳನ್ನು ತಮ್ಮ ಗುರಿಯತ್ತ ಕೊಂಡೊಯ್ಯಲು ಸಹಕರಿಸುತ್ತದೆ ಎಂದು ಮೈಸೂರು ವಿಶ್ವವಿದ್ಯಾನಿಲಯದ ಕುಲಸಚಿವೆ ಎಂ.ಕೆ.ಸವಿತಾ ಅಭಿಪ್ರಾಯಪಟ್ಟರು.

ನಗರದ ಲಕ್ಷ್ಮೀಪುರಂನ ಸರ್ಕಾರಿ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜಿನಲ್ಲಿ ಜ್ಞಾನಬುತ್ತಿ ಸಂಸ್ಥೆ ವತಿಯಿಂದ ಆಯೋಜಿಸಲಾಗಿದ್ದ 2025–26ನೇ ಸಾಲಿನ ಐಎಎಸ್, ಕೆಎಎಸ್ ಮತ್ತು ಇತರ ಎಲ್ಲಾ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಜ್ಞಾನವೆಂಬ ಹಸಿವನ್ನು ನಿರಂತರ ಶ್ರಮವೆಂಬ ಕಠಿಣ ತಪಸ್ಸಿನಿಂದ ಮಾತ್ರ ಗೆಲ್ಲಲು ಸಾಧ್ಯ. ವಿದ್ಯಾರ್ಥಿಗಳು ಜೀವನದಲ್ಲಿ ದೊಡ್ಡ–ದೊಡ್ಡ ಗುರಿಗಳನ್ನು ಇಟ್ಟುಕೊಂಡು ಪರಿಶ್ರಮ ಹಾಕಿದಾಗ ಮಾತ್ರ ಸ್ಪರ್ಧಾತ್ಮಕ ಜಗತ್ತಿನಲ್ಲಿ ಉನ್ನತ ಹುದ್ದೆಗಳನ್ನು ಅಲಂಕರಿಸಬಹುದು ಎಂದು ಸಲಹೆ ನೀಡಿದರು.

ಇತ್ತೀಚಿನ ದಿನಗಳಲ್ಲಿ ಮೊಬೈಲ್, ಸಾಮಾಜಿಕ ಮಾಧ್ಯಮಗಳನ್ನು ಬಳಸಿಕೊಂಡು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುತ್ತೇವೆ ಎಂದು ವಿದ್ಯಾರ್ಥಿಗಳು ಭಾವಿಸಿದ್ದಾರೆ. ಆದರೆ ವಾಸ್ತವವಾಗಿ ಸಾಮಾಜಿಕ ಮಾಧ್ಯಮಗಳ ಬಳಕೆಯಿಂದ ಶಿಕ್ಷಣದ ಬೆಳವಣಿಗೆ ಕುಂಠಿತವಾಗಿದೆ. ಇದರಿಂದ ಯಶಸ್ಸು ಪಡೆಯಲು ಸಾಧ್ಯವಿಲ್ಲ. ಜ್ಞಾನಬುತ್ತಿಯಂತಹ ಸಂಸ್ಥೆಗಳಲ್ಲಿ ಮಾರ್ಗದರ್ಶನ ಪಡೆಯುವ ಮೂಲಕ ಯಶಸ್ಸು ಪಡೆಯಬಹುದು ಎಂದು ಅವರು ತಿಳಿಸಿದರು.

2024ರ ಯುಪಿಎಸ್‌ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ಎ.ಸಿ.ಪ್ರೀತಿ ಮಾತನಾಡಿ, ಪ್ರಸಕ್ತ ವಿದ್ಯಮಾನದಲ್ಲಿ ವಿದ್ಯಾರ್ಥಿಗಳು ಓದುವುದನ್ನೇ ಮರೆತಿದ್ದಾರೆ. ಸಮಯವನ್ನು ವ್ಯರ್ಥ ಮಾಡುತ್ತಾ ಕಾಲಹರಣ ಮಾಡುವಲ್ಲಿ ನಿರತರಾಗಿದ್ದಾರೆ ಎಂದು ಬೇಸರಿಸಿದರು.

ವಿದ್ಯಾರ್ಥಿಗಳು ಮೊದಲು ಏತಕ್ಕಾಗಿ ಓದಬೇಕು?, ಏನನ್ನು ಓದಬೇಕು?, ನಿಮ್ಮ ಗುರಿ ಯಾವುದು? ಎಂಬುದನ್ನು ತಿಳಿಯಬೇಕು. ನಂತರ ಇವುಗಳನ್ನು ಸಾಧಿಸಲು ಏನು ಮಾಡಬೇಕು. ಯಾರಿಗಾಗಿ ಮಾಡಬೇಕು ಎಂಬುದನ್ನು ಅರಿಯಬೇಕು. ಅದು ನಿಮ್ಮನ್ನು ಗುರಿಯೆಡೆಗೆ ಕೊಂಡೊಯ್ಯುತ್ತದೆ ಎಂದು ಸಲಹೆ ನೀಡಿದರು.

ಮೈಸೂರು ವಿವಿ ಹಿರಿಯ ರಾಜ್ಯಶಾಸ್ತ್ರ ಪ್ರಾಧ್ಯಾಪಕರಾದ ಹೆಚ್.ಎಂ.ರಾಜಶೇಖರ್ ಮಾತನಾಡಿದರು.

ಅಖಿಲ ಭಾರತ ಸಹಕಾರ ಮಹಾಮಂಡಲ ನಿರ್ದೇಶಕ ವೈ.ಎನ್.ಶಂಕರೇಗೌಡ, ಪ್ರೀತಿ ಅವರ ತಂದೆ ಚನ್ನಬಸಪ್ಪ, ತಾಯಿ ನೇತ್ರಾವತಿ, ಪ್ರೊ.ಈ.ಶಿವಪ್ರಸಾದ್, ಪ್ರೊ.ವಿ.ವಿಜಯಪ್ರಕಾಶ್, ಎಸ್.ಗಣೇಶ್, ರಾಜೀವ್ ಶರ್ಮ, ಮಂಜುನಾಥ್ ಮಹದೇವಪ್ಪ, ಯು.ಎಂ. ಶರದ್‌ರಾವ್, ನಾಗರಾಜು ಬೀಜಗನಹಳ್ಳಿ, ರೋಹನ್ ರವಿಕುಮಾರ್, ಡಾ.ಕೃಷ್ಣ, ಡಾ.ಐಪನಹಳ್ಳಿ ವಸಂತ ಕುಮಾರ್, ಡಾ.ಮೋಹನ್ ಹಾರೋಹಳ್ಳಿ ಡಾ.ಎಸ್‌ಬಿಎಂ ಪ್ರಸನ್ನ, ಪ್ರೊ.ಸಿ.ಕೆ ಕಿರಣ್‌ಕೌಶಿಕ್, ಕೆ.ವೈ.ನಾಗೇಂದ್ರ ಉಪಸ್ಥಿತರಿದ್ದರು. ಪ್ರೊ.ಕೃ.ಪ.ಕೃಷ್ಣ ನಿರೂಪಿಸಿ ವಂದಿಸಿದರು. ಶಾಂಭವಿ ಮತ್ತು ತಂಡ ಪ್ರಾರ್ಥಿಸಿದರು, ಜೈನಹಳ್ಳಿ ನಾರಾಯಣ ಸ್ವಾಗತಿಸಿದರು.



ಮೈಸೂರು ವಿವಿ ಕುಲಸಚಿವೆ ಎಂ.ಕೆ.ಸವಿತಾ ಗಿಡಕ್ಕೆ ನೀರೆರೆಯುವ ಮೂಲಕ ಐಎಎಸ್, ಕೆಎಎಸ್ ಮತ್ತು ಇತರ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಶಿಬಿರವನ್ನು ಉದ್ಘಾಟಿಸಿದರು.

ಮೈಸೂರು ಮಿತ್ರ

ಎಲ್ಲಾ ಪೌರ ಕಾರ್ಮಿಕರು, ಡಿ-ಗ್ರೂಪ್ ನೌಕರರಿಗೆ ಬಿಪಿಎಲ್ ಕಾರ್ಡ್ ನೀಡಲು ಚಿಂತನೆ

ಆಹಾರ ಮತ್ತು ನಾಗರೀಕ ಸರಬರಾಜು ಸಚಿವ ಕೆ.ಹೆಚ್ ಮುನಿಯಪ್ಪ



ಮೈಸೂರು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಆಹಾರ ಮತ್ತು ನಾಗರೀಕ ಸರಬರಾಜು ಸಚಿವ ಕೆ.ಹೆಚ್. ಮುನಿಯಪ್ಪ ಮೈಸೂರು ವಿಭಾಗದ ಆಹಾರ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

ಮೈಸೂರು, ಜು.18(ಎಸ್‌ಪಿಎನ್)- ಎಲ್ಲಾ ಪೌರಕಾರ್ಮಿಕರು, ಕೂಲಿ ಸೇರಿದಂತೆ ಇತರೆ ವರ್ಗದ ಕಾರ್ಮಿಕರು ಹಾಗೂ 'ಡಿ' ಗ್ರೂಪ್ ನೌಕರರಿಗೆ ಬಿಪಿಎಲ್ ಕಾರ್ಡ್ ಕೊಡುವುದರ ಬಗ್ಗೆ ರಾಜ್ಯ ಸರ್ಕಾರದ ಮನಸ್ಸಿನಲ್ಲಿದ್ದು, ಈ ವಿಷಯ ಕುರಿತು ಮುಖ್ಯಮಂತ್ರಿಗಳೊಂದಿಗೆ ಸಮಲೋಚನೆಯಲ್ಲಿದ್ದೇನೆ ಎಂದು ಆಹಾರ ನಾಗರಿಕ ಸರಬರಾಜು ಇಲಾಖೆ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದರು.

ಮೈಸೂರು ಸಿದ್ಧಾರ್ಥ ಬಡಾವಣೆಯಲ್ಲಿರುವ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಹಾರ ನಾಗರಿಕ ಸರಬರಾಜು ಇಲಾಖೆ, ಗ್ರಾಹಕರ ವ್ಯವಹಾರಗಳು ಮತು ಕಾನೂನು ಮಾಪನಶಾಸ್ತ್ರ ಇಲಾಖೆಯ ಮೈಸೂರು ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಪತ್ರಕರ್ತರು ಕೇಳಿದ ಪ್ರಶ್ನೆಗೆ ಉತ್ತರಿಸಿದರು.

ಎಲ್ಲಾ ಪೌರಕಾರ್ಮಿಕರಿಗೂ ಬಿಪಿಎಲ್ ನೀಡಲು ಕಾನೂನು ತೊಡಕಿದೆ. ಹಾಗಾಗಿ ಎಲ್ಲಾ ಪೌರಕಾರ್ಮಿಕರು, ಡಿ ಗ್ರೂಪ್ ನೌಕರರು, ಕಾರ್ಮಿಕರಿಗೂ ನೀಡಬೇಕೇ ಅಥವಾ ಆಯ್ದು ವರ್ಗಕ್ಕೆ ನೀಡಬೇಕೇ? ಬೇಡವೇ? ಎಂಬುದರ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚೆ ನಡೆಸಿ, ಜಾರಿಗೊಳಿಸುವ ಬಗ್ಗೆ ಚಿಂತಿಸುತ್ತೇನೆ ಎಂದರು.

ರಾಜ್ಯದಲ್ಲಿ ಇ-ಕೆವೈಸಿ ಆಗದೇ ಇರುವ ಪಡಿತರ ಚೀಟಿದಾರರ ಗುರುತಿಸಬೇಕು. ಸಕ್ರಿಯವಲ್ಲದ ಬಿಪಿಎಲ್ ಕಾರ್ಡ್‌ಗಳನ್ನು ಎಪಿಎಲ್ ಕಾರ್ಡ್‌ಗಳಾಗಿ ಇನ್ನು ಏಳು ದಿನದಲ್ಲಿ ಪರಿವರ್ತಿಸಬೇಕು. ಇ-ಕೆವೈಸಿ ಮಾಡದ ಪಡಿತರ ಚೀಟಿದಾರರಿಗೆ ಮೊದಲು ಎಚ್ಚರಿಕೆ ನೀಡಿ, ನಂತರ ಪಡಿತರ ಕೊಡುವುದನ್ನು ನಿಲ್ಲಿಸಬೇಕು ಎಂದು ತಾಕೀತು ಮಾಡಿದರಲ್ಲದೆ, ಇ-ಕೆವೈಸಿ ಮಾಡಿಸದ ಆಹಾರ ಇಲಾಖೆಗಳ ವಿರುದ್ಧ ಶಿಸ್ತು ಕ್ರಮ ಜರುಗಿಸ ಲಾಗುವುದು ಎಂದು ಅಧಿಕಾರಿಗಳಿಗೆ ಎಚ್ಚರಿಸಿದರು.

ಯಾವುದೇ ಪಡಿತರ ಚೀಟಿಗಳನ್ನು ರದ್ದುಮಾಡು ವುದಿಲ್ಲ. ಬದಲಾಗಿ, ಆರ್ಥಿಕವಾಗಿ ಸದೃಢವಾಗಿರುವವರು ಬಿಪಿಎಲ್ ಕಾರ್ಡ್‌ಗಳನ್ನು ಪಡೆದಿದ್ದರೆ, ಅಂತಹ ಕಾರ್ಡ್‌ಗಳನ್ನು ಎಪಿಎಲ್ ಕಾರ್ಡ್‌ಗಳನ್ನಾಗಿ ಪರಿವರ್ತಿಸುವಂತೆ ಸೂಚಿಸಿದ್ದೇನೆ ಎಂದರು. ಚಾಮರಾಜನಗರ ಜಿಲ್ಲೆಯಲ್ಲಿ ಗುಡ್ಡ ಪ್ರದೇಶಗಳಲ್ಲಿ 10 ರಿಂದ 15 ಮನೆಗಳು ಇರುವ ಕಡೆಗೆ ಅಲ್ಲಿಗೆ ಪಡಿತರ ತಲುಪಿಸುವ ಜವಾಬ್ದಾರಿ ಆಹಾರ ಇಲಾಖೆ ಅಧಿಕಾರಿಗಳದ್ದು ಎಂದು ಸೂಚನೆ ನೀಡಿದರು.

ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಆಯುಕ್ತೆ ವಾಸಿ ರೆಡ್ಡಿ ವಿಜಯ್‌ಜ್ಯೋತ್ಸ್ನಾ ಮಾತನಾಡಿ, ಇದುವರೆಗೆ 1.69 ಲಕ್ಷ ಜನರು ಇ-ಕೆವೈಸಿ ಮಾಡಿಸಿಲ್ಲ. ಸಿಂಗಲ್ ಮೆಂಬರ್ ಕಾರ್ಡ್‌ಗಳಿಗೆ ಇ-ಕೆವೈಸಿ ಮಾಡಿಸಲು ಸ್ವಲ್ಪ ಅವಕಾಶ ನೀಡಬೇಕು. 4-5 ಜನರಿರುವ ಕಾರ್ಡ್‌ಗಳ ಸದಸ್ಯರು ಇ-ಕೆವೈಸಿ ಮಾಡಿಸದಿದ್ದರೆ ಇ ಕೆವೈಸಿ ಮಾಡಿಸದ ಸದಸ್ಯರ ಪಡಿತರ ನಿಲ್ಲಿಸಬಹುದಾಗಿದೆ ಎಂದರು.

ಜಾಗೃತ ಸಮಿತಿ ರಚನೆಗೆ ಸೂಚನೆ: ಆ.5ರೊಳಗೆ ಇ-ಕೆವೈಸಿ ಮಾಡಿಸದ ಬಿಪಿಎಲ್ ಕಾರ್ಡ್‌ಗಳ ಸದಸ್ಯರಿಗೆ ಎಚ್ಚರಿಕೆ ನೀಡಿ, ಪಡಿತರ ನಿಲ್ಲಿಸಬೇಕು. ಇಲ್ಲವಾದಲ್ಲಿ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಜರುಗಿಸ ಲಾಗುವುದು. ತಾಲೂಕು ಮತ್ತು ಜಿಲ್ಲಾ ಹಂತದಲ್ಲಿ ಕೇವಲ ಆರೋಗ್ಯ ಕಾರ್ಡ್‌ಗಳಿಗೆ ಮಾತ್ರ ಬಿಪಿಎಲ್ ಕಾರ್ಡ್‌ಗಳನ್ನು ಉಪಯೋಗಿಸುವ ಪಡಿತರ ಸದಸ್ಯರಿಗೆ ಪ್ರತೇಕ ನೀತಿ ತರುವ ಬಗ್ಗೆ ಚಿಂತಿಸಲಾಗಿದೆ. ತಾಲ್ಲೂಕು ಹಂತದಲ್ಲಿ ಹಿತಿಯ ನಾಗರಿಕರು ಆರೋಗ್ಯಕ್ಕೆ ಸಂಬಂಧಿಸಿದ ಕಾರ್ಡ್‌ಗಳಿಗೆ ಅರ್ಜಿ ಸಲ್ಲಿಸಿದಾಗ ಅದರ ಕೂಲಂಕುಷ ಪರಿಶೀಲನೆ ನಡೆಸಬೇಕೆಂದು ಕಿವಿಮಾತು ಹೇಳಿದರು. ಜಿಲ್ಲಾ ಮಟ್ಟದ ಜಾಗೃತಿ ಸಮಿತಿಗಳನ್ನು ರಚಿಸಲು ಅಧಿಕಾರಿಗಳಿಗೆ ಸಚಿವರು ನಿರ್ದೇಶಿಸಿದರು.

ಈ ಸಂದರ್ಭದಲ್ಲಿ ಸಚಿವರ ಆಪ್ತ ಕಾರ್ಯದರ್ಶಿ ಡಾ.ಹೆಚ್.ನಟರಾಜ್, ನಿಗಮ ನಿರ್ದೇಶಕ ಜಗದೀಶ್,ಕಾನೂನು ಮಾಪನ ಇಲಾಖೆ ನಿಯಂತ್ರಕರಾದ ಎಂಎಸ್‌ಎನ್. ಬಾಬು ಹಾಗೂ ಇತರೆ ಆಹಾರ ಇಲಾಖೆ ಮತ್ತು ಕಾನೂನು ಮಾಪನ ಶಾಸ್ತ್ರ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

ಕರ್ನಾಟಕ ಮಾದರ ಮಹಾಸಭಾ ಸದಸ್ಯತ್ವ ನೋಂದಣಿ ಅಭಿಯಾನಕ್ಕೆ ಚಾಲನೆ



ಕರ್ನಾಟಕ ಮಾದರ ಮಹಾಸಭಾ ಮೈಸೂರು ವಿಭಾಗ ಮಟ್ಟದ ಸದಸ್ಯತ್ವ ನೋಂದಣಿ ಅಭಿಯಾನ ಸಭೆ ಕಾರ್ಯಕ್ರಮವನ್ನು ಆಹಾರ ಸಚಿವ ಕೆ.ಹೆಚ್.ಮುನಿಯಪ್ಪ ಉದ್ಘಾಟಿಸಿದರು.

ಮೈಸೂರು, ಜು.18(ಎಂಕೆ)- ಕರ್ನಾಟಕ ಮಾದರ ಮಹಾಸಭಾ ಮೈಸೂರು ವಿಭಾಗ ಮಟ್ಟದ ಸದಸ್ಯತ್ವ ನೋಂದಣಿ ಅಭಿಯಾನಕ್ಕೆ ಆಹಾರ ಸಚಿವ ಕೆ.ಹೆಚ್.ಮುನಿಯಪ್ಪ ಚಾಲನೆ ನೀಡಿದರು.

ಮೈಸೂರು-ಹುಣಸೂರು ರಸ್ತೆಯಲ್ಲಿರುವ ಲೀ ರುಚಿ ಹೋಟೆಲ್‌ನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾದಿಗ ಸಮುದಾಯದ ಮುಖಂಡರಿಗೆ ಸದಸ್ಯತ್ವ ನೀಡುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿದರು.

ಇದಕ್ಕೂ ಮುನ್ನ ಮಾತನಾಡಿದ ಅವರು, ಕರ್ನಾಟಕ ಮಾದರ ಮಹಾಸಭಾ ಈಗಾಗಲೇ ಹಲವು ಕಾರ್ಯಕ್ರಮಗಳನ್ನು ಮಾಡಿದ್ದು, ಪಕ್ಷಾತೀತವಾಗಿ ಸಂಘಟನೆಯಾಗುತ್ತಿದೆ. ಮಾದಿಗ ಸಮುದಾಯದ ವಿದ್ಯಾವಂತ ಮಕ್ಕಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ನೀಡಿ, ಅವರನ್ನು ಉನ್ನತ ಸ್ಥಾನಕ್ಕೆ ಕರೆದೊಯ್ಯುವ ಉದ್ದೇಶ ವನ್ನು ಮಹಾಸಭಾ ಹೊಂದಿದೆ. ಇದಕ್ಕಾಗಿ ಬೆಂಗಳೂರಿನಲ್ಲಿ ಸ್ಥಳ ಗುರುತಿಸಲಾಗಿದೆ. ಹಾಗೆಯೇ ಸಮುದಾಯದಲ್ಲಿ ಯಾರಿಗೆ ತೊಂದರೆಯಾದರೂ ಸ್ಪಂದಿಸುವ ನಿಟ್ಟಿನಲ್ಲಿ ಮಹಾಸಭಾ ಕಾರ್ಯ ನಿರ್ವಹಿಸಲಿದೆ ಎಂದರು.

ವಿಧಾನ ಪರಿಷತ್ ಸದಸ್ಯ ಡಾ.ತಿಮ್ಮಯ್ಯ ಮಾತನಾಡಿ, ಪ್ರತಿ ತಾಲೂಕಿನಲ್ಲಿ ಕನಿಷ್ಠ ನೂರು ಅಥವಾ ಗ್ರಾಮಕ್ಕೆ ಒಬ್ಬರಂತೆ ಕರ್ನಾಟಕ ಮಾದರ ಮಹಾಸಭಾಗೆ ಸದಸ್ಯತ್ವ ಪಡೆದುಕೊಳ್ಳಬೇಕು. ಅಲ್ಲದೆ ನಿಗದಿತ ಸಮಯದಲ್ಲಿ ಸದಸ್ಯತ್ವ ಅಭಿಯಾನವನ್ನು ಮುಕ್ತಾಯಗೊಳಿಸಬೇಕು. ಒಳ ಮೀಸಲಾತಿ ಸಮೀಕ್ಷಾ ಕಾರ್ಯ ಶೇ.95 ರಷ್ಟು ಮುಕ್ತಾಯಗೊಂಡಿದ್ದು, ಇನ್ನೂ ಒಂದೆರೆಡು ತಿಂಗಳಲ್ಲಿ ಜಾರಿಗೊಳಿಸುವಂತೆ ಸರ್ಕಾರಕ್ಕೆ ಮನವಿ ಮಾಡಬೇಕಿದೆ ಎಂದರು.

ಮಾಜಿ ಸಚಿವ ಕೋಟೆ ಎಂ.ಶಿವಣ್ಣ, ಮಾಜಿ ಎಂಎಲ್‌ಸಿಗಳಾದ ಸಿ.ರಮೇಶ್, ಆರ್.ಧರ್ಮಸೇನಾ, ಜಿಪಂ ಮಾಜಿ ಸದಸ್ಯೆ ಸುಧಾ ಮಹದೇವಯ್ಯ, ಕೈಮಗ್ಗ ಅಭಿವೃದ್ಧಿ ನಿಗಮದ ಮಾಜಿ ನಿರ್ದೇಶಕ ರಾಮಕೃಷ್ಣ, ಕರ್ನಾಟಕ ಮಾದರ ಮಹಾಸಭಾ ರಾಜ್ಯ ಮುಖಂಡ ಬಿ.ಕೆ.ಶಿವಪ್ಪ, ಮುಖಂಡರಾದ ಪುರುಷೋತ್ತಮ್, ಎಡತೊರೆ ನಿಂಗರಾಜು, ಚಾ.ನಗರ ಎಂ.ಶಿವಮೂರ್ತಿ, ಮಾರ್ಬಳ್ಳಿ ಶೇಖರ್, ರಾಚಪ್ಪ ಜಟ್ಟಿಹುಂಡು, ರಾಚಪ್ಪ ಹುಣಸೂರು ಮತ್ತಿತರರು ಉಪಸ್ಥಿತರಿದ್ದರು.



ಡಾ.ಕೆ.ಬಿ. ಗಣಪತಿ ಹಾಗೂ ಡಾ.ಬಿ.ಸರೋಜಾದೇವಿಯವರಿಗೆ ಶ್ರದ್ಧಾಂಜಲಿ...

ಮೈಸೂರು ತಾಲೂಕು ಹುಯಿಲಾಳು ಗ್ರಾಮದ ಶ್ರೀ ಮನೆ ಮಂಚಮ್ಮ ದೇವಸ್ಥಾನ ಸೇವಾ ಟ್ರಸ್ಟ್ ವತಿಯಿಂದ 'ಮೈಸೂರು ಮಿತ್ರ' ಹಾಗೂ 'ಸ್ಟಾರ್ ಆಫ್ ಮೈಸೂರ್' ಸಂಸ್ಥಾಪಕ ಸಂಪಾದಕರಾದ ಡಾ.ಕೆ.ಬಿ.ಗಣಪತಿ ಹಾಗೂ ಖ್ಯಾತ ನಟಿ ಡಾ.ಬಿ.ಸರೋಜಾದೇವಿ ಅವರಿಗೆ ನಗರದ ಪುರಭವನದಲ್ಲಿ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಟ್ರಸ್ಟ್ ಅಧ್ಯಕ್ಷ ಹುಯಿಲಾಳು ರಾಮಸ್ವಾಮಿ, ಕಲಾವಿದರಾದ ಶ್ರೀನಿವಾಸ್, ಬಸವಣ್ಣ ಬೊಮ್ಮೇನಹಳ್ಳಿ, ನಾಗರಾಜು, ಸುನೀಲ್, ರಾಜು ಮತ್ತಿತರರು ಉಪಸ್ಥಿತರಿದ್ದರು.

ಕಾಡಾನೆ ದಾಳಿ ಓರ್ವನಿಗೆ ತೀವ್ರ ಗಾಯ


ತೀವ್ರವಾಗಿ ಗಾಯಗೊಂಡ ಪ್ರವೀಣ್

ಸಿದ್ದಾಪುರ, ಜು.18– ಕೆಲಸಕ್ಕೆ ತೆರಳುತ್ತಿದ್ದ ಕಾರ್ಮಿಕರಿಬ್ಬರ ಮೇಲೆ ಕಾಡಾನೆ ದಾಳಿ ಮಾಡಿದ ಪರಿಣಾಮ ಓರ್ವ ಕಾರ್ಮಿಕನಿಗೆ ಗಂಭೀರ ಗಾಯವಾಗಿ ಮಡಿಕೇರಿ ಜಿಲ್ಲಾ ಆಸ್ಪತ್ರೆಗೆ ದಾಖಲಾದರೆ ಮತ್ತೋರ್ವ ಸಣ್ಣ ಪುಟ್ಟ ಗಾಯಗಳೊಂದಿಗೆ ಪ್ರಾಣಾಪಾಯದಿಂದ ಪಾರಾದ ಘಟನೆ ಸಿದ್ದಾಪುರ ಸಮೀಪದ ಶಿಲ್ಪಿ ಕಾಫಿ ತೋಟದಲ್ಲಿ ನಡೆದಿದೆ.

ಕೆಲಸಕ್ಕೆ ತೆರಳುತ್ತಿದ್ದ ಕಾರ್ಮಿಕರಿಬ್ಬರು ಕಾಫಿ ತೋಟದ ಮಾರ್ಗದಲ್ಲಿ ಹೋಗುತ್ತಿದ್ದಾಗ ಹಠಾತ್ತನೆ ಎದುರಾದ ಕಾಡಾನೆ ಬಾಗಲ ಕೋಟೆ ಮೂಲದ ಪ್ರವೀಣ್ ಪರಮಾನಂದ ಎಂಬ ಕಾರ್ಮಿಕನ ಮೇಲೆ ದಾಳಿ ಮಾಡಿದೆ. ಸ್ಥಳದಲ್ಲಿದ್ದ ಮತ್ತೋರ್ವ ಕಾರ್ಮಿಕ ರಘು ಎಂಬಾತನ ಮೇಲೆ ದಾಳಿಗೆ ಯತ್ನಿಸಿದಾಗ ಆತ ಓಡಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಸಮೀಪದಲ್ಲಿದ್ದ ಇತರ ಕಾರ್ಮಿಕರ ಮೇಲೂ ಕಾಡಾನೆ ದಾಳಿಗೆ ಯತ್ನಿಸಿದಾಗ ಕಾರ್ಮಿಕರು ಓಡಿ ಪಾರಾಗಿದ್ದಾರೆ. ತೋಟದ ಮಾಲೀಕರು ಇಬ್ಬರು ಕಾರ್ಮಿಕರನ್ನು ಸಿದ್ದಾಪುರ ಆಸ್ಪತ್ರೆಗೆ ಕರೆತಂದು ದಾಖಲಿಸಿದ್ದಾರೆ. ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ ವಲಯ ಅರಣ್ಯಾಧಿಕಾರಿ ಶಿವರಾಮ್ ಗಾಯಾಳುಗಳ ಆರೋಗ್ಯ ವಿಚಾರಿಸಿ ಗಂಭೀರ ಗಾಯ ಗೊಂಡಿದ್ದ ಪ್ರವೀಣ್‌ನನ್ನು ಹೆಚ್ಚಿನ ಚಿಕಿತ್ಸೆಗೆ ಮಡಿಕೇರಿಗೆ ದಾಖಲಿಸಿದ್ದಾರೆ.

ಸ್ಥಳಕ್ಕೆ ಡಿಎಫ್‌ಓ ಜಗನ್ನಾಥ್, ಎಸಿಎಫ್ ಗೋಪಾಲ್, ಆರ್‌ಎಫ್‌ಓ ಶಿವರಾಂ ಸಿಬ್ಬಂದಿ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಕಾಡಾನೆಯನ್ನು ಕಾಡಿಗಟ್ಟಲು ಅಧಿಕಾರಿಗಳು ಸಿಬ್ಬಂದಿಗಳಿಗೆ ಸೂಚಿಸಿದರು. ಕಾರ್ಯಾಚರಣೆ ಮುಂದುವರಿಸಿದ ಸಿಬ್ಬಂದಿ ಸಲಗವನ್ನು ಕಾಡಿಗಟ್ಟುವಲ್ಲಿ ಯಶಸ್ವಿಯಾಗಿದ್ದಾರೆ.

ತವರಿಗೆ ಬಂದಿದ್ದ ಯೋಧ ನಿಧನ

ವಿರಾಜಪೇಟೆ, ಜು.18–ರಜೆ ಮೇಲೆ ತವರಿಗೆ ಬಂದಿದ್ದ ಯೋಧನೋರ್ವ ಅನಾರೋಗ್ಯದಿಂದ ಮೃತಪಟ್ಟಿದ್ದಾರೆ ತಾಲೂಕಿನ ಆರ್ಜಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಿರುಮಕ್ಕಿಯಲ್ಲಿ ನಡೆದಿದೆ.

ಕಿರುಮಕ್ಕಿಯ ನಿವಾಸಿ ಹೆಚ್. ಬೀರಯ್ಯ ಎಂಬುವರ ಪುತ್ರ ಹೆಚ್.ಬಿ. ರವಿಶಂಕರ್(39) ಮೃತ ಯೋಧ. ರಜೆ ಮೇಲೆ ತಿಂಗಳ ಹಿಂದೆಯೇ ಊರಿಗೆ ಬಂದಿದ್ದ ರವಿಶಂಕರ್ ಕಿಡ್ನಿ ಸಮಸ್ಯೆಯಿಂದ ಬಳಲುತ್ತಿದ್ದರೆನ್ನಲಾಗಿದ್ದು, ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಶುಕ್ರವಾರ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ.

ಯೋಧ ರವಿಶಂಕರ್ 2004ರಲ್ಲಿ ಸೇನೆಗೆ ಸೇರಿದ್ದು, ಅಸ್ಸಾಂ ರೈಫಲ್ ರೆಜಿ ಮೆಂಟ್‌ನ ಮಣಿಪುರದಲ್ಲಿ ಸೇವೆ ಸಲ್ಲಿಸುತ್ತಿದ್ದರು. 21 ವರ್ಷಗಳ ಕಾಲ ಕರ್ತವ್ಯ ನಿರ್ವಹಿಸಿದ್ದ ಯೋಧ ಇನ್ನೆರಡು ದಿನದಲ್ಲಿ ರಜೆ ಮುಗಿಸಿ ಕರ್ತವ್ಯಕ್ಕೆ ಹಾಜರಾಗ ಬೇಕಾಗಿತ್ತು.


ತಾಲೂಕು ಮಾಜಿ ಸೈನಿಕರ ಸಂಘದಿಂದ ಯೋಧನ ಪತ್ನಿಗೆ ರಾಷ್ಟ್ರಧ್ವಜ ಹಸ್ತಾಂತರಿಸಿದರು.

ಸಾವಿನ ಸುದ್ದಿ ತಿಳಿದು ಕೂಡಲೇ ಶಾಸಕ ಎ.ಎಸ್. ಪೊನ್ನಣ್ಣ ಕಿರುಮಕ್ಕಿ ಗ್ರಾಮಕ್ಕೆ ತೆರಳಿ ಅಂತ್ಯಸಂಸ್ಕಾರ ದಲ್ಲಿ ಪಾಲ್ಗೊಂಡು ಕುಟುಂಬದವರಿಗೆ ಸಾಂತ್ವನ ಹೇಳಿದರು.

ಭಾರತೀಯ ಸೇನೆಯ ಬೆಂಗಳೂರಿನ ಮುಖ್ಯ ಕಛೇರಿಯಿಂದ ಆಗಮಿಸಿದ ಅಧಿಕಾರಿಗಳು ಅಂತಿಮ ದರ್ಶನ ಪಡೆದು ಗೌರವ ಸಲ್ಲಿಸಿದರು. ಈ ವೇಳೆ ಯೋಧನ ಪತ್ನಿ, ಹೆತ್ತವರು ಮತ್ತು ಸಂಬಂಧಿಗಳ ರೋದನ ಮುಗಿಲು ಮುಟ್ಟಿತ್ತು. ಜಿಲ್ಲಾ ಪೊಲೀಸ್ ಡಿಎಆರ್ ತುಕಡಿ ಗಾಳಿಯಲ್ಲಿ 3 ಸುತ್ತು ಗುಂಡು ಹಾರಿಸಿ ಅಂತಿಮ ನಮನ ಸಲ್ಲಿಸಿತು.



ತಾಲೂಕು ಮಾಜಿ ಸೈನಿಕರ ಸಂಘದ ವತಿಯಿಂದ ಗೌರವ ನಮನ ಸಲ್ಲಿಸಿ ಮೃತ ಯೋಧನ ಪತ್ನಿಗೆ ರಾಷ್ಟ್ರಧ್ವಜ ಹಸ್ತಾಂತರಿಸಿದರು. ತಾಲೂಕು ದಂಡಾಧಿಕಾರಿ ಅನಂತ ಶಂಕರ, ವೃತ್ತ ನಿರೀಕ್ಷಕ ಅನೂಪ್ ಮಾದಪ್ಪ, ಮಾಜಿ ಸೈನಿಕರ ಸಂಘದ ಅಧ್ಯಕ್ಷ ಚಪ್ಪಂಡ ಹರೀಶ್, ನಿರ್ದೇಶಕರಾದ ಚೇಂದ್ರಿಮಾಡ ನಂಜಪ್ಪ, ಕಬ್ಬಚ್ಚಿರ ಬೋಪಣ್ಣ, ಬಾಳೆಕುಟ್ಟೀರ ದಿನಿ ಸೇರಿದಂತೆ ಮಾಜಿ ಸೈನಿಕರು, ಗ್ರಾಮ ಪಂಚಾಯಿತಿ ಸದಸ್ಯರು, ಸಾವಿರಾರು ಮಂದಿ ಅವರ ಅಂತಿಮ ದರ್ಶನ ಪಡೆದರು. ಸಂಜೆ ಸರಕಾರಿ ಗೌರವದೊಂದಿಗೆ, ಕುಟುಂಬದವರ ಸಮ್ಮುಖದಲ್ಲಿ ಅಂತ್ಯಕ್ರಿಯೆ ಕಿರುಮಕ್ಕಿಯಲ್ಲಿ ನೆರವೇರಿತು.

ಇಗ್ಗುತ್ತಪ್ಪ ದೇವಾಲಯಕ್ಕೆ ಲಗ್ಗೆ ಇಟ್ಟ ಸಲಗ



ಮಡಿಕೇರಿ: ನಾಪೋಕ್ಲು ಸಮೀಪದ ಕಕ್ಕಬ್ಬೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪಾಡಿ ಶ್ರೀ ಇಗ್ಗುತ್ತಪ್ಪ ದೇವಾಲಯದ ಆವರಣದಲ್ಲಿ ಒಂಟಿ ಸಲಗವೊಂದು ಸಂಚರಿಸಿರುವ ದೃಶ್ಯ ದೇವಾಲಯದ ಸಿ.ಸಿ ಕ್ಯಾಮರಾದಲ್ಲಿ ಸೆರೆಯಾಗಿದ್ದು ಗ್ರಾಮಸ್ಥರಲ್ಲಿ ಆತಂಕ ಸೃಷ್ಟಿಸಿದೆ.

ಕೆಲ ದಿನಗಳಿಂದ ಕಕ್ಕಬ್ಬೆ ಗ್ರಾಪಂನ ವಿವಿಧ ಗ್ರಾಮಗಳ ತೋಟಗಳಿಗೆ ಲಗ್ಗೆ ಇಟ್ಟು ಅಪಾರ ಪ್ರಮಾಣದಲ್ಲಿ ಕೃಷಿಗಿಡಗಳನ್ನು ನಾಶಪಡಿಸಿ ನಷ್ಟ ಉಂಟು ಮಾಡಿವೆ. ಮಧ್ಯರಾತ್ರಿ ಕಕ್ಕಬ್ಬೆ ಪಾಡಿ ಶ್ರೀ ಇಗ್ಗುತ್ತಪ್ಪ ದೇವಾಲಯದ ಆವರಣಕ್ಕೆ ಬಂದ ಸಲಗ ದೇವರ ಕಟ್ಟೆ ಬಳಿಯಲ್ಲಿರುವ ಹಲಸಿನ ಹಣ್ಣು ಗಳನ್ನು ತಿಂದು ತೆರಳಿದ ದೃಶ್ಯ ಸಿ.ಸಿ. ಕ್ಯಾಮರಾದಲ್ಲಿ ಸೆರೆಯಾಗಿದೆ. ಅಲ್ಲದೆ ಹಿಂದಿನ ದಿನವೂ ಕೂಡ ಇದೇ ಸಲಗ ದೇವಾಲಯದ ರಸ್ತೆಯಲ್ಲಿ ಸಂಚರಿಸಿದ ದೃಶ್ಯ ಕೂಡ ಸೆರೆಯಾಗಿದ್ದು, ಗ್ರಾಮಸ್ಥರಲ್ಲಿ ಭಯದ ವಾತಾವರಣ ಸೃಷ್ಟಿಯಾಗಿದೆ.

ಕಳೆದ ವರ್ಷವೂ ಕಾಡಾನೆ ದಾಳಿಯಿಂದ ವ್ಯಕ್ತಿಯೊಬ್ಬರು ಮೃತಪಟ್ಟು, ಇನ್ನೊಬ್ಬರು ಗಂಭೀರ ಗಾಯಗೊಂಡ ಘಟನೆ ನಡೆದಿತ್ತು. ಕಾಡಾನೆಗಳ ಉಪಟಳ ನಿರಂತರವಾಗಿರುವುದರಿಂದ ಗ್ರಾಮಸ್ಥರು ಭಯಪಡುವ ಪರಿಸ್ಥಿತಿ ಉದ್ಭವವಾಗಿದೆ. ಅರಣ್ಯ ಇಲಾಖೆ ಕೂಡಲೇ ಆನೆಗಳನ್ನು ಕಾಡಿಗಟ್ಟಲು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದ್ದಾರೆ.

ಸೇತುವೆ ದಾಟುತ್ತಿದ್ದ ದುರಗಪ್ಪ ಮಾದಾರ ಬೈಕ್ ಸಹಿತ ಕೊಚ್ಚಿ ಹೋಗಿರುವ ಶಂಕೆ

ಮಡಿಕೇರಿ: ಜಲವಂಯದ ಸೇತುವೆಯನ್ನು ಬೈಕ್‌ನಲ್ಲಿ ದಾಟುತ್ತಿದ್ದ ಬೆಳಗಾಂ ಮೂಲದ ಯುವಕನೊಬ್ಬ ನೀರಿನಲ್ಲಿ ಕೊಚ್ಚಿ ಹೋಗಿರುವ ಶಂಕೆ ವ್ಯಕ್ತವಾಗಿದೆ.

ಬೆಳಗಾಂನ ಸಿಂಧೋಗಿ ತಾಲೂಕಿನ ದುರಗಪ್ಪ ಮಾದಾರ(19) ಎಂಬಾತ ನದಿ ನೀರಿನಲ್ಲಿ ಕೊಚ್ಚಿ ಹೋಗಿರುವ ಶಂಕೆಯೊಂದಿಗೆ ಜಿಲ್ಲೆ ಗಡಿ ಭಾಗ ಕರಿಕೆ ಹಾಗೂ ಕಾಸರಗೋಡು ವ್ಯಾಪ್ತಿಗೆ ಒಳಪಡುವ ಮಂಞಡ್ಕ ನದಿಯಲ್ಲಿ ಶೋಧ ಕಾರ್ಯ ನಡೆಸಲಾಯಿತು. ಕರಿಕೆ ಗ್ರಾಮ ಪಂಚಾಯಿತಿ ಸದಸ್ಯರು ಮತ್ತು ಕಾಸರಗೋಡು ಅಗ್ನಿಶಾಮಕ ದಳ, ಪೊಲೀಸ್ ಇಲಾಖೆ ಜಂಟಿಯಾಗಿ ಶೋಧನೆ ನಡೆಸಿದರು.

ಘಟನೆ ಹಿನ್ನೆಲೆ : ಕೊಡಗು ಗಡಿ ಭಾಗ ಕರಿಕೆ ಹಾಗೂ ಕೇರಳ ರಾಜ್ಯದ ಕಾಸರಗೋಡುವಿನ ನಡುವೆ ಹರಿಯುತ್ತಿರುವ ಮಂಞಡ್ಕ ನದಿ ಎರಡೂ ರಾಜ್ಯಗಳ ಗಡಿಯನ್ನು ವಿಂಗಡಿಸುತ್ತದೆ. ನದಿಯ ಇನ್ನೊಂದು ಭಾಗ ಕಾಸರಗೋಡುವಿಗೆ ಸೇರಿದ್ದು, ಅಲ್ಲಿನ ರಬ್ಬರ್ ಪ್ಲಾಂಟೇಷನ್‌ನಲ್ಲಿ ಕೆಲಸ ಮಾಡುತ್ತಿದ್ದ, ಹಿಟಾಚಿ ಯಂತ್ರಕ್ಕೆ ದುರಗಪ್ಪ ಮಾದಾರ ಎಂಬಾತ ಸಹಾಯಕನಾಗಿದ್ದ. ಕರಿಕೆ–ಕಾಸರಗೋಡು ವ್ಯಾಪ್ತಿಯಲ್ಲಿ ಭಾರಿ ಮಳೆ ಸುರಿದ ಪರಿಣಾಮ ಮಂಞಡ್ಕ ನದಿ ಉಕ್ಕಿ ಹರಿದಿದ್ದು, ಮಧ್ಯಾಹ್ನ 2 ಗಂಟೆಯ ವೇಳೆಗೆ ದುರಗಪ್ಪ ಹಿಟಾಚಿ ಚಾಲಕನಿಗೆ ಊಟ ತರುವ ಸಲುವಾಗಿ ಬೈಕ್‌ನಲ್ಲಿ ತಾನು ವಾಸವಿದ್ದ ಕರಿಕೆ ಗ್ರಾಮದ ಕಡೆಗೆ ಹೊರಟಿದ್ದಾನೆ. ಸಮಯ ಕಳೆದರೂ ದುರಗಪ್ಪ ಬಾರದಿರುವ ಹಿನ್ನೆಲೆಯಲ್ಲಿ ಚಾಲಕ ತನ್ನ ಪತ್ನಿಗೆ ಕರೆ ಮಾಡಿದಾಗ ಆತ ಇನ್ನೂ ಮನೆಗೆ ಬಂದಿಲ್ಲ ಎಂದು ಮಾಹಿತಿ ನೀಡಿದ್ದಾರೆ.



ಇದರಿಂದ ಗಾಬರಿಯಾದ ಹಿಟಾಚಿ ಚಾಲಕ ಮತ್ತು ಇತರರು ಮಂಞಡ್ಕ ಸೇತುವೆ ಬಳಿ ಆಗಮಿಸಿದ ಸಂದರ್ಭ ಸೇತುವೆ ನದಿ ನೀರಿನಿಂದ ಮುಳುಗಿರುವುದು ಕಂಡು ಬಂದಿದೆ. ಮಾತ್ರವಲ್ಲದೇ ಮುಳುಗು ಸೇತುವೆ ಮೇಲೆ ವಾಹನ ಬಿದ್ದಿರುವ ಗುರುತುಗಳು ಕಂಡು ಬಂದಿದೆ. ಇದರಿಂದ ಯುವಕ ದುರಗಪ್ಪ ಬೈಕ್ ಸಹಿತ ನೀರಿನಲ್ಲಿ ಕೊಚ್ಚಿ ಹೋಗಿರುವ ಶಂಕೆ ವ್ಯಕ್ತವಾಗಿದೆ.

8 ಕಿ.ಮೀ ಶೋಧನೆ: ಘಟನೆ ನಡೆದ ಸ್ಥಳವಾದ ಮಂಞಡ್ಕ ನದಿ ಬಹುತೇಕ ಕಾಸರಗೋಡು ಜಿಲ್ಲೆಗೆ ಸೇರುವ ಹಿನ್ನೆಲೆಯಲ್ಲಿ ಅಲ್ಲಿನ ರಾಜಪುರಂ ಪೊಲೀಸ್ ಠಾಣೆಯಲ್ಲಿ ವ್ಯಕ್ತಿ ನಾಪತ್ತೆ ಪ್ರಕರಣ ದಾಖಲಿಸಲಾಗಿದೆ. ಕಾಸರಗೋಡು ಅಗ್ನಿಶಾಮಕ ದಳದ ಸಿಬ್ಬಂದಿಗಳು, ಕಾಸರಗೋಡು ಕಂದಾಯ ಇಲಾಖೆ ತಹಶೀಲ್ದಾರ್ ಹಾಗೂ ಕಾಸರಗೋಡು ಪೊಲೀಸರು, ಕರಿಕೆ ಗ್ರಾಪಂ ಸದಸ್ಯರು ಹಾಗೂ ಗ್ರಾಮಸ್ಥರು ನದಿಯಲ್ಲಿ ಶೋಧ ಕಾರ್ಯ ನಡೆಸಿದರು. ಕೊಡಗು–ಕಾಸರಗೋಡು ಎರಡೂ ಭಾಗದಲ್ಲಿ ಉಕ್ಕಿ ಹರಿಯುತ್ತಿರುವ ಮಂಞಡ್ಕ ನದಿಯಲ್ಲಿ ಒಟ್ಟು 8 ಕಿ.ಮೀ ಉದ್ದಕ್ಕೂ ರ‍್ಯಾಫ್ಟ್‌ಗಳನ್ನು ಬಳಸಿ ಶೋಧ ಕಾರ್ಯ ನಡೆಸಲಾಯಿತು. ಆದರೂ ದುರಗಪ್ಪ ಮಾದಾರನ ಬಗ್ಗೆ ಯಾವುದೇ ಸುಳಿವು ಲಭ್ಯವಾಗಿಲ್ಲ. ಸಂಜೆ ಕತ್ತಲು ಮತ್ತು ಮಳೆಯ ಕಾರಣ ಶೋಧ ಕಾರ್ಯಾಚರಣೆಯನ್ನು, ಶನಿವಾರವೂ ಮುಂದುವರಿಸಲಾಗುತ್ತದೆ ಎಂದು ಕರಿಕೆ ಗ್ರಾಮ ಪಂಚಾಯಿತಿ ಅಧ್ಯಕ್ಷ ಬಾಲಚಂದ್ರ ನಾಯರ್ ಮಾಹಿತಿ ನೀಡಿದ್ದಾರೆ.

ಬೆಳಗೊಳ ಬಳಿ ಸಿಎಂ ಸಿದ್ದರಾಮಯ್ಯ ಪೆಟ್ರೋಲ್ ಬಂಕ್ ಉದ್ಘಾಟನೆ



ಬೆಳಗೊಳಕ್ಕೆ ಆಗಮಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬೃಹತ್ ಸೇಬಿನ ಹಾರ ಹಾಕಿ ಸನ್ಮಾನಿಸಲಾಯಿತು. ಮತ್ತೊಂದು ಚಿತ್ರದಲ್ಲಿ ಪೆಟ್ರೋಲ್ ಬಂಕ್ ಅನ್ನು ಸಿಎಂ ಸಿದ್ದರಾಮಯ್ಯ ಉದ್ಘಾಟಿಸಿದರು. ಈ ವೇಳೆ ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಶಾಸಕ ರಮೇಶ್ ಬಾಬು, ಜಿಲ್ಲಾಧಿಕಾರಿ ಕುಮಾರ್ ಇತರರು ಇದ್ದರು.

ಶ್ರೀರಂಗಪಟ್ಟಣ, ಜು.18– ತಾಲೂಕಿನ ಬೆಳಗೊಳ ಗ್ರಾಮದ ಬಳಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೂತನ ನಯಾರಾ ಪೆಟ್ರೋಲ್ ಬಂಕ್ ಅನ್ನು ಉದ್ಘಾಟಿಸಿದರು.

ಮೈಸೂರಿನಿಂದ ನೇರವಾಗಿ ಆಗಮಿಸಿದ ಮುಖ್ಯಮಂತ್ರಿಗಳನ್ನು ಪಂಪ್‌ಹೌಸ್ ಬಳಿ ಶಾಸಕ ರಮೇಶ ಬಂಡಿಸಿದ್ದೇಗೌಡ ಸ್ವಾಗತಿಸಿದರು. ನಂತರ ಅಲ್ಲಿಂದ ಬೆಳಗೊಳ ಗ್ರಾಮಕ್ಕೆ ತೆರಳಿ ಸುತ್ತೂರು ಶ್ರೀಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸೇರಿದಂತೆ ಇನ್ನಿತರ ಗಣ್ಯರ ಸಮ್ಮುಖದಲ್ಲಿ ಸಿಎಂ ಸಿದ್ದರಾಮಯ್ಯ ತಮ್ಮ ಆಪ್ತ ಶಿವರಾಜು ಅವರಿಗೆ ಸೇರಿದ ಶ್ರೀಮಹದೇಶ್ವರ ಫ್ಯೂಯಲ್ ಸ್ಟೇಷನ್(ನಯಾರಾ ಪೆಟ್ರೋಲ್ ಬಂಕ್) ಅನ್ನು ಟೇಪ್ ಕತ್ತರಿಸುವ ಮೂಲಕ ಉದ್ಘಾಟಿಸಿದರು.

ಇದಕ್ಕೂ ಮುನ್ನಾ ಬೆಳಗೊಳಕ್ಕೆ ಆಗಮಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪೆಟ್ರೋಲ್ ಬಂಕ್ ಮಾಲೀಕ ಶಿವರಾಜು ಬಳಗದ ವತಿಯಿಂದ ಬೃಹತ್ ಸೇಬಿನ ಹಾರ ಹಾಕಿ ಅದ್ದೂರಿಯಾಗಿ ಆಹ್ವಾನಿಸಲಾಯಿತು. ಮುಖ್ಯಮಂತ್ರಿಗಳಿಗೆ ಕೈ ಕೊಟ್ಟು ಮಾತನಾಡಿಸಲು ಅಭಿಮಾನಿಗಳ ದಂಡು ಮುಗಿಬಿದ್ದರೂ, ಎಲ್ಲರಿಗೂ ಕೈ ಬೀಸಿ ಸಿಎಂ ನಮಸ್ಕರಿಸಿದರು.

ಸೇಬಿನ ಹಾರಕ್ಕೆ ಮುಗಿಬಿದ್ದ ಜನತೆ: ಮುಖ್ಯಮಂತ್ರಿಗಳು ಕಾರ್ಯಕ್ರಮ ಉದ್ಘಾಟಿಸಿ ಮೈಸೂರಿಗೆ ತೆರಳುತ್ತಿದ್ದಂತೆ ಇತ್ತ ಅವರ ಅಭಿಮಾನಿಗಳು ಕ್ರೇನ್‌ನಲ್ಲಿದ್ದ ಬೃಹತ್ ಸೇಬಿನ ಹಾರ ಕಿತ್ತು ಸೇಬಿನ ಹಣ್ಣುಗಳನ್ನು ಕೈಗೆ ಸಿಕ್ಕಿಷ್ಟು ಕಿತ್ತೊಯ್ದುರು. ಕ್ಷಣ ಮಾತ್ರದಲ್ಲಿ ಕ್ರೇನ್‌ನಲ್ಲಿದ್ದ ಬೃಹತ್ ಹಾರ ಖಾಲಿಯಾಗಿ ಖಾಲಿ ದಾರ ಮಾತ್ರ ನೇತಾಡುತ್ತಿತ್ತು. ಕಾರ್ಯಕ್ರಮದಲ್ಲಿ ಶಾಸಕ ರಮೇಶ ಬಂಡಿಸಿದ್ದೇಗೌಡ, ಮಾಜಿ ಶಾಸಕ ಸೋಮಶೇಖರ್, ಜಿಲ್ಲಾಧಿಕಾರಿ ಡಾ.ಕುಮಾರ, ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ್ ಬಾಲದಂಡಿ ಸೇರಿದಂತೆ ಇತರ ಸ್ವಾಮೀಜಿಗಳು ಉಪಸ್ಥಿತರಿದ್ದರು.

ಪ್ಲಾಸ್ಟಿಕ್‌ನಿಂದ ವರ್ಷಕ್ಕೆ 20 ಸಾವಿರ ಜಾನುವಾರು ಬಲಿ


ಕೆ.ಗೌಡಗೆರೆ ಗ್ರಾಮದಲ್ಲಿ ಪ್ರಬಂಧ ಸ್ಪರ್ಧೆ ವಿಜೇತರನ್ನು ಸನ್ಮಾನಿಸಲಾಯಿತು.

ಮಂಡ್ಯ, ಜು.18– ಪ್ಲಾಸ್ಟಿಕ್ ಎಂಬ ಪೆಡಂಭೂತದಿಂದ ಪ್ರತಿ ವರ್ಷ 20 ಸಾವಿರಕ್ಕೂ ಹೆಚ್ಚು ಜಾನುವಾರುಗಳು, ಲಕ್ಷಾಂತರ ಜೀವಿಗಳು ಬಲಿಯಾಗುತ್ತಿವೆ ಎಂದು ಸೌತ್ ಮಲ್ಟಿಪಲ್ ಕೌನ್ಸಿಲ್ ಅಲಯನ್ಸ್ ಆಫ್ ಇಂಟರ್ ನ್ಯಾಷನಲ್ ಸಂಸ್ಥೆ ಉಪಾಧ್ಯಕ್ಷ ಕೆ.ಟಿ.ಹನುಮಂತು ಆತಂಕ ವ್ಯಕ್ತಪಡಿಸಿದರು.

ಅಸೋಸಿಯೇಷನ್ ಆಫ್ ಅಲಯನ್ಸ್ ಸಂಸ್ಥೆ ತಾಲೂಕಿನ ಕೆ.ಗೌಡಗೆರೆ ಗ್ರಾಮದಲ್ಲಿ ನಡೆಸಿದ ಪ್ಲಾಸ್ಟಿಕ್ ಮುಕ್ತ ಪ್ರಪಂಚ ನಿರ್ಮಾಣದಲ್ಲಿ ವಿದ್ಯಾರ್ಥಿಗಳ ಪಾತ್ರ ಕುರಿತ ಪ್ರಬಂಧ ಸ್ಪರ್ಧೆ ವಿಜೇತರಿಗೆ ಅಭಿನಂದನೆ ಹಾಗೂ ಗಿಡ ನೆಡುವ ಕಾರ್ಯಕ್ರಮ ಮತ್ತು ಬ್ಯಾಂಡ್‌ಸೆಟ್ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಇಡೀ ವಿಶ್ವವೇ ಪ್ಲಾಸ್ಟಿಕ್ ನಿರ್ಮೂಲನೆ ಮಾಡುವ ಸಂಕಲ್ಪ ಮಾಡಬೇಕು. ಹಾಗಾದಾಗ ಮಾತ್ರ ಪ್ಲಾಸ್ಟಿಕ್ ಅನ್ನು ಭೂಮಿತಿಯಿಂದ ತೊಲಗಿಸಲು ಸಾಧ್ಯ ಎಂದರು.

ಪ್ರಧಾನಿ ಮೋದಿ 2022ರಲ್ಲಿ ಏಕ ಬಳಕೆ ಪ್ಲಾಸ್ಟಿಕ್ ಉಪಯೋಗಿಸುವಂತಿಲ್ಲ ಎಂದು ನಿರ್ಬಂಧಿಸಿದ್ದರು. ಆದರೆ ಸಿಕ್ಕಿಂ 1998ರಲ್ಲೇ ಏಕಬಳಕೆ ಪ್ಲಾಸ್ಟಿಕ್ ನಿಷೇಧ ಮಾಡಿತ್ತು. ಆ ರಾಜ್ಯದ ನಾಲ್ಕೈದು ಗ್ರಾಮಗಳಲ್ಲಿ ಶೇ.100ರಷ್ಟು ಪ್ಲಾಸ್ಟಿಕ್ ಬಳಕೆ ಮಾಡುತ್ತಲೇ ಇಲ್ಲ ಎಂದರು.

ಪ್ಲಾಸ್ಟಿಕ್ ಇಡೀ ಮಾನವನ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವುದರ ಜೊತೆಗೆ ಜಾನುವಾರುಗಳು ಸಾವಿರಾರು ಸಂಖ್ಯೆಯಲ್ಲಿ ಸಾಯುತ್ತಿವೆ. ಲಕ್ಷಾಂತರ ಜಲ ಚರಜೀವಿಗಳು ಸಹ ಪ್ಲಾಸ್ಟಿಕ್ ತಿಂದು ಸಾವನ್ನಪ್ಪಿವೆ. ಸಮುದ್ರದ ನೀರಿನ ಮೇಲೆ ತೇಲುವಂತಹ ಪ್ಲಾಸಿಕನ್ನು ಮೀನು ಗಳೆಂದು ಭ್ರಮಿಸಿ ತಿನ್ನುವ 5 ರಿಂದ 6 ಲಕ್ಷ ಪಕ್ಷಿಗಳು ಸಹ ಪ್ರತಿ ವರ್ಷ ಮೃತ ಪಡುತ್ತಿವೆ ಎಂದು ಆತಂಕ ವ್ಯಕ್ತಪಡಿಸಿದರು.

ಪ್ಲಾಸ್ಟಿಕ್ ಇಷ್ಟೆಲ್ಲಾ ಅವಾಂತರ ಮಾಡುತ್ತಿವೆ ಎಂದರೆ ಸಾವಿರಾರು ವರ್ಷಗಳು ಹೋದರೂ ಕೊಳೆಯುವುದಿಲ್ಲ. ಮಣ್ಣು, ಗಾಳಿ, ನೀರಿನಲ್ಲೂ ಏನೂ ಮಾಡಲಾಗದು. ಬೆಂಕಿಯಲ್ಲಿ ಮಾತ್ರ ಬೇಯುತ್ತವೆ. ಆದರೆ ಇದು ಅತ್ಯಂತ ಅಪಾಯಕಾರಿ. ಇಡೀ ವಾತಾವರಣವನ್ನು ಕಲುಷಿತಗೊಳಿಸುತ್ತವೆ. 10 ರಿಂದ 15 ರೀತಿಯ ರಾಸಾಯನಿಕಗಳು ಎಲ್ಲಾ ಜೀವಿಗಳ ಮೇಲೂ ಹಾನಿಯುಂಟು ಮಾಡುತ್ತವೆ ಎಂದು ಎಚ್ಚರಿಸಿದರು.

ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ ಭೂಮಿಯಿಂದ ಹೊಡೆದೋಡಿಸಬೇಕು. ಇಡೀ ವಿಶ್ವವನ್ನೇ ಪ್ಲಾಸ್ಟಿಕ್ ಮುಕ್ತ ಮಾಡಬೇಕೆಂಬುದು ನಮ್ಮ ಸಂಸ್ಥೆ ಸಂಕಲ್ಪ. ಹಾಗಾಗಿ ಮೊದಲು ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು, ಶಾಲಾ–ಕಾಲೇಜು ಹಂತಗಳಲ್ಲಿ ಮಾಡುತ್ತಿದ್ದೇವೆ.ಇದಕ್ಕಾಗಿಯೇ ಪ್ರಬಂಧ ಸ್ಪರ್ಧೆ ಏರ್ಪಡಿಸಿದ್ದೇವೆ

ಸಂಸ್ಥೆ 2ನೇ ಉಪ ಗೌರ್ನರ್ ಚಂದ್ರಶೇಖರ್ ಮಾತನಾಡಿದರು. ಅಲಯನ್ಸ್ ಸಂಸ್ಥೆ ವಲಯಾಧ್ಯಕ್ಷ ಎಚ್.ಜೆ.ಸುರೇಶ್, ಜಿಲ್ಲಾ ರಾಯಭಾರಿ ಅಪ್ಪಾಜಿ, ಪ್ರತಿ ಭಾಂಜಲಿ ಸುಗಮ ಸಂಗೀತ ಅಕಾಡೆಮಿ ಅಧ್ಯಕ್ಷ ಡೇವಿಡ್, ಎಸ್‌ಡಿಎಂಸಿ ಅಧ್ಯಕ್ಷ ಸ್ವಾಮಿ, ಶಿಕ್ಷಕರಾದ ಜಯಚಂದ್ರ, ರಾಮಕೃಷ್ಣ ಇತರರಿದ್ದರು. ಇದೇ ವೇಳೆ ಗಿಡಗಳನ್ನು ನೆಡಲಾಯಿತು. ಪ್ರಬಂಧ ಸ್ಪರ್ಧೆ ವಿಜೇತರನ್ನು ಸನ್ಮಾನಿಸಲಾಯಿತು.

ಇಂದು ವಿದ್ಯುತ್ ವ್ಯತ್ಯಯ

ನಾಗಮಂಗಲ, ಜು.18– ತ್ರೈಮಾಸಿಕ ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವುದರಿಂದ ನಾಗಮಂಗಲ ವಿತರಣಾ ಕೇಂದ್ರದಿಂದ ಹೊರಹೊಮ್ಮುವ ನಾಗಮಂಗಲ ಅರ್ಬನ್, ಟಿ.ಬಿ ಅರ್ಬನ್, ಎ.ಸಿ ಹಳ್ಳಿ, ಎನ್‌ಜೆವೈ ಮೈಲಾರ ಪಟ್ಟಣ, ಶ್ರೀರಾಮನಹಳ್ಳಿ, ಕೋಟೆಬೆಟ್ಟ, ಪಂಪ್‌ಸೆಟ್ ವ್ಯಾಪ್ತಿಗಳಾದ ಬಸರಾಳು, ಬೆಳ್ಳೂರು ರೂರಲ್, ಬಿಂಡಿಗನವಿಲೆ, ಮೇಲುಕೋಟೆ, ಜೋಡಿ ನೇರಲಕೆರೆ, ತುಪ್ಪದ ಮಡು, ಭೈರನಹಳ್ಳಿ ಹಾಗೂ ಮುಳಕಟ್ಟೆ ಪಂಪ್‌ಸೆಟ್ ಮಾರ್ಗಗಳಿಗೆ ಒಳಪಡುವ ನಾಗಮಂಗಲ ಪುರಸಭೆ ವ್ಯಾಪ್ತಿ, ಅಂಚೆ ಚಿಟ್ಟೆನಹಳ್ಳಿ, ಹುಲಿಕೆರೆ, ಪಾಲ ಅಗ್ರಹಾರ ಹಾಗೂ ತುಪ್ಪದಮಡು ಗ್ರಾಪಂ ವ್ಯಾಪ್ತಿಯ ಗ್ರಾಮಗಳಲ್ಲಿ ಜು.19ರಂದು ಬೆಳಗ್ಗೆ 10 ರಿಂದ ಸಂಜೆ 6ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.

ಸಂಭ್ರಮದ ಗಜೇಂದ್ರಮೋಕ್ಷ ಉತ್ಸವ


ಮೇಲುಕೋಟೆಯಲ್ಲಿ ಕೃಷ್ಣರಾಜಮುಡಿ ಬ್ರಹ್ಮೋತ್ಸವದ 6ನೇ ದಿನವಾದ ಶುಕ್ರವಾರ ಸಂಜೆ ಕೃಷ್ಣರಾಜಮುಡಿ ಕಿರೀಟ ಅಲಂಕಾರದೊಂದಿಗೆ ಚೆಲುವ ನಾರಾಯಣಸ್ವಾಮಿಗೆ ಗಜೇಂದ್ರಮೋಕ್ಷ ಉತ್ಸವ ಸಂಭ್ರಮದಿಂದ ನೆರವೇರಿತು.

ಸಾಧನಾ ಸಮಾವೇಶ ಕೇವಲ ಡ್ರಾಮಾ

ಕೇಂದ್ರ ಸಚಿವ ವಿ.ಸೋಮಣ್ಣ ಕುಹಕ ನುಡಿ


ಕೊಳ್ಳೇಗಾಲದ ಮಾನಸ ಸಂಸ್ಥೆಯಲ್ಲಿ ಕೇಂದ್ರ ಸಚಿವ ವಿ. ಸೋಮಣ್ಣ ಅವರನ್ನು ಸನ್ಮಾನಿಸಲಾಯಿತು.

ಕೊಳ್ಳೇಗಾಲ,ಜು.18–ನಾಳೆ ಮೈಸೂರಲ್ಲಿ ಕಾಂಗ್ರೆಸ್ ಪಕ್ಷ ನಡೆಸಲಿರುವ ಸಾಧನಾ ಸಮಾವೇಶ ಒಂದು ಡ್ರಾಮಾ ಅಷ್ಟೆ ಹಿಂದಿದ್ದ ಸಿದ್ದರಾಮಯ್ಯ ಈಗ ಕಳೆದುಹೋಗಿದ್ದಾರೆ ಎಂದು ಕೇಂದ್ರ ರೈಲ್ವೆ ರಾಜ್ಯ ಸಚಿವ ವಿ.ಸೋಮಣ್ಣ ಕುಹಕ ನುಡಿದಿದ್ದಾರೆ

ಮಾನಸ ಸಂಸ್ಥೆಯಲ್ಲಿ ಆಯೋಜಿಸಿದ್ದ ಸಮಾರಂಭದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾಳೆಯ ಕಾಂಗ್ರೆಸ್ ಸಾಧನಾ ಸಮಾವೇಶ ನಿಜಕ್ಕೂ ಒಂದು ಡ್ರಾಮಾ. ರಾಜ್ಯದಲ್ಲಿ ಆಡಳಿತ ಕುಸಿದಾಗ ಸಮಾವೇಶ ಅಂತ ಡ್ರಾಮಾ ಮಾಡುತ್ತಿದ್ದಾರೆ. ಜನರಿಗೂ ಇದು ಗೊತ್ತು ರಾಜ್ಯ ಸರ್ಕಾರದಲ್ಲಿ ಹಣ ಇಲ್ಲ, ಪಾಪರ್ ಆಗಿದೆ. ಕೇಂದ್ರ ಸರ್ಕಾರ ನೀಡುವ ಅನುದಾನದಲ್ಲಿ ಕೆಲಸ ಮಾಡುತ್ತಿದೆ. ನಾವು ಯೋಜನಾ ವೆಚ್ಚಕ್ಕೆಂದು ಹಣ ನೀಡಿದರೆ ರಾಜ್ಯ ಸರ್ಕಾರ ಆ ಹಣವನ್ನು ಯೋಜನೆಗೆ ಬಳಸದೆ ಬೇರೆ ಉದ್ದೇಶಕ್ಕೆ ಖರ್ಚು ಮಾಡುತ್ತಿದೆ ಎಂದು ಅವರು ಮೂದಲಿಸಿದರು.

ಕಾಂಗ್ರೆಸ್‌ನಲ್ಲಿ ಹೈಕಮಾಂಡ್ ದೊಡ್ಡದು, ಸಿದ್ದರಾಮಯ್ಯ ಸಿಎಂ ಆದಾಗಲೇ ಎರಡೂವರೆ ವರ್ಷಕ್ಕೆಂದು ಒಪ್ಪಂದವಾಗಿದೆ ಎಂಬ ಮಾಹಿತಿ ನಮಗೂ ಇದೆ. ಸಮಾಜವಾದಿ ಪಂಥದ ಸಿದ್ದರಾಮಯ್ಯ ಕಳೆದು ಹೋಗಿದ್ದಾರೆ. ಅದಕ್ಕೆ ಈಗ ಹೈಕಮಾಂಡ್ ಹೇಳಿದಂತೆ ಕೇಳ್ತೀನಿ ಅಂತ ಹೇಳಿ ಬಂದಿದ್ದಾರೆ. ಅಲ್ಲಿ ಏನು ಒಳ ಒಪ್ಪಂದ ಆಗಿದೆ ಅನ್ನೋದು ಮುಂದಿನ ಜನವರಿ 26 ರೊಳಗೆ ಗೊತ್ತಾಗುತ್ತೆ. ನಮಗಿಂತ ಹೆಚ್ಚಾಗಿ ಸಿದ್ದರಾಮಯ್ಯನವರಿಗೇ ಒಪ್ಪಂದದ ಬಗ್ಗೆ ಗೊತ್ತು. ಬದಲಾವಣೆಗೆ ಸಿದ್ದರಾಮಯ್ಯನವರ ಮೈಂಡ್ ಸೆಟ್ ಆಗಿದೆ. ಸಿದ್ದರಾಮಯ್ಯ ಅವರು ಜೀವನದಲ್ಲಿ ಒಂದೂ ನಿಜ ಹೇಳಿಲ್ಲ. ಅಧಿಕಾರಕ್ಕೆ ಬಂದ ಎರಡೂವರೆ ವರುಷದಲ್ಲಿ ಅವರು ಸತ್ಯವನ್ನೇ ನುಡಿದಿಲ್ಲ ಎಂದು ಸೋಮಣ್ಣ ವ್ಯಂಗ್ಯವಾಡಿದರು

ನೂತನ ರೈಲ್ವೆ ಯೋಜನೆಗೆ ಸ್ಪಂದಿಸುತ್ತಿಲ್ಲ: ಬೆಂಗಳೂರು–ಹೆಜ್ಜಾಲ ಕನಕಪುರ ಮಾರ್ಗ ಚಾಮರಾಜನಗರಕ್ಕೆ ನೂತನ ರೈಲ್ವೆ ಯೋಜನೆ ವಿಚಾರದಲ್ಲಿ ಮುಖ್ಯಮಂತ್ರಿಗೆ ಎರಡು ಬಾರಿ ಪತ್ರ ಬರೆದಿದ್ದೇನೆ. ಕಂದಾಯ ಮಂತ್ರಿಗೂ ಬರೆದಿದ್ದೇನೆ, ಸಂಸದರ ಗಮನಕ್ಕೂ ತಂದಿದ್ದೇನೆ, ಪುಟ್ಟರಂಗಶೆಟ್ಟರಿಗೂ ಈ ವಿಚಾರ ಗೊತ್ತು. ಆದರೆ ರಾಜ್ಯ ಸರ್ಕಾರದಿಂದ ಸೂಕ್ತ ಸ್ಪಂದನೆ ಸಿಗುತ್ತಿಲ್ಲ ಎಂದು ಕೇಂದ್ರ ರೈಲ್ವೆ ರಾಜ್ಯ ಸಚಿವ ವಿ. ಸೋಮಣ್ಣ ಆರೋಪಿಸಿದ್ದಾರೆ.

ಈ ಯೋಜನೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಬೇಕೆಂದು ಮುಖ್ಯಮಂತ್ರಿಗಳು ಪತ್ರ ಬರೆದಿದ್ದಾರೆ. ಹಿಂದೆ ಮಲ್ಲಿಕಾರ್ಜುನ ಖರ್ಗೆ ಸಚಿವರಾಗಿದ್ದಾಗ ಈ ಯೋಜನೆ ಘೋಷಣೆಯಾಗಿತ್ತು. ಲಾಭದಾಯಕವಲ್ಲ ಅನ್ನೋ ಕಾರಣಕ್ಕೆ ಕೈ ಬಿಟ್ಟಿದ್ದರು. ಮತ್ತೆ ಯೋಜನೆ ಕೈಗೆತ್ತಿಕೊಳ್ಳಲು ಅನುಮತಿ ಕೊಡುವಂತೆ ಪತ್ರ ಬರೆದರೆ ರಾಜ್ಯ ಸರ್ಕಾರ ಸ್ಪಂದಿಸುತ್ತಿಲ್ಲ, ಅವರು ಅನುಮತಿ ನೀಡಿದರೆ ಈ ವಿಚಾರವನ್ನು ನಾನು ಕೈಗೆತ್ತಿಕೊಳ್ಳುವೆ ಎಂದು ಸುದ್ದಿಗಾರರಿಗೆ ಆಶ್ವಾಸನೆ ನೀಡಿದರು.

ಮಟಾಷ್ ಆಗ್ತಾರೆ ಕೇವಲ ತಮ್ಮ ಕಾಂಗ್ರೆಸ್ ಶಾಸಕರಿಗೆ ಮಾತ್ರ 50 ಕೋಟಿ ಅನುದಾನ ಬಿಡುಗಡೆ ಮಾಡಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿಪಕ್ಷಗಳ ಶಾಸಕರಿಗೆ ಹಣ ನೀಡದೆ ಸೇಡಿನ ಭಾವನೆಯನ್ನ ಹೊಂದಿ ಆಡಳಿತ ನಡೆಸಲು ಹೋದರೆ ಮಟಾಷ್ ಆಗ್ತಾರೆ. ರಾಜ್ಯದ ಜನ ಇದನ್ನು ಒಪ್ಪಲ್ಲ, ಆ ರೀತಿ ಮಾಡಿದರೆ ಅಧಿಕಾರ ಕಳೆದುಕೊಳ್ಳುವರೆಂದು ಸೋಮಣ್ಣ ಹೇಳಿದರು.

ರಾಜ್ಯ ಸರ್ಕಾರ ರೈಲ್ವೆ ವಿಚಾರದಲ್ಲಿ ಅಸ್ತು ಎಂದರೆ ನಾನು ಮುಂದಿನ ತೀರ್ಮಾನ ಕೈಗೊಳ್ಳುತ್ತೇನೆ. ನನಗೂ ಈ ಭಾಗದ ರೈಲ್ವೆ ಯೋಜನೆಗೆ ಉತ್ಸುಕತೆ ಇದೆ ಎಂದರು.

ಬಿಜೆಪಿ ಶಿಸ್ತಿನ ಪಕ್ಷ, ನಾನು ರಾಷ್ಟ್ರದ ಮಂತ್ರಿ 32 ರಾಜ್ಯಗಳಲ್ಲೂ ಕೆಲಸ ಮಾಡಬೇಕು. ನೀವು ಬಿಜೆಪಿ ರಾಜ್ಯಾಧ್ಯಕ್ಷರಾಗ್ತೀರಾ ಎಂಬ ಅಪ್ರಸ್ತುತ ಪ್ರಶ್ನೆಗೆ ಉತ್ತರ ಕೊಡುವ ಸ್ಥಿತಿಯಲ್ಲಿ ನಾನು ಇಲ್ಲ. ನಮ್ಮ ಪಕ್ಷದಲ್ಲಿ ಒಲಿದುಬಂದರೆ, ಆಫರ್ ಕೊಟ್ರೆ ಎಂಬ ಪ್ರಶ್ನೆಯೇ ಇಲ್ಲ. ಯಾವ ಕಾಲಕ್ಕೆ ಏನಾಗಬೇಕು ಅಂತ ಕಾಲವೇ ಉತ್ತರ ನೀಡುತ್ತೆ. ಈ ನಿಟ್ಟಿನಲ್ಲಿ ತೀರ್ಮಾನಕ್ಕೆ ನಮ್ಮ ನಾಯಕರಿದ್ದಾರೆ. ದೇಶಕ್ಕಾಗಿ ನಾವು ಎಂಬ ಧ್ಯೇಯದಲ್ಲಿ ಸಾಗಬೇಕು ಎಂದು ಹೇಳುವ ಮೂಲಕ ರಾಜ್ಯಾಧ್ಯಕ್ಷ ಸ್ಥಾನಕ್ಕೆ ತಾವು ಆಕಾಂಕ್ಷಿಯಲ್ಲ ಎಂಬ ಸಂದೇಶ ರವಾನಿಸಿದರು.

ಕೆರೆಗಳಿಗೆ ನೀರು ತುಂಬಿಸಲು ಅಗತ್ಯ ಕ್ರಮ


ಪುಟ್ಟರಂಗಶೆಟ್ಟಿ ಕೋಡಿಮೋಳೆ ಕೆರೆ, ದೊಡ್ಡ ಕೆರೆ, ಚಿಕ್ಕ ಕೆರೆಗೂ ಭೇಟಿ ನೀಡಿ ಪರಿಶೀಲಿಸಿದರು.

ಚಾಮರಾಜನಗರ, ಜು.18 – ತಮ್ಮ ಕ್ಷೇತ್ರ ವ್ಯಾಪ್ತಿಯಲ್ಲಿರುವ ಕೆರೆಗಳಿಗೆ ನೀರು ತುಂಬಿಸಲು ಅಗತ್ಯ ಕ್ರಮ ವಹಿಸಲಾಗಿದೆ ಎಂದು ಶಾಸಕ ಸಿ.ಪುಟ್ಟರಂಗಶೆಟ್ಟಿ ತಿಳಿಸಿದ್ದಾರೆ.

ತಾಲೂಕಿನ ಕೋಡಿಮೋಳೆ ಕೆರೆಯಲ್ಲಿ ನಿರ್ಮಿಸಿರುವ ಪಂಪ್‌ಹೌಸ್‌ಗೆ ಭೇಟಿ ನೀಡಿ ಮಾತನಾಡಿದ ಅವರು, ಹಿಂದಿನ ಅವಧಿಯಲ್ಲಿಯೂ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ದಿ.ಹೆಚ್.ಎಸ್.ಮಹದೇವ ಪ್ರಸಾದ್ ಕಾಲದಲ್ಲಿಯೇ ಜಿಲ್ಲೆಯ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಅನುಷ್ಠಾನಕ್ಕೆ ಬಂದಿತ್ತು ಸುತ್ತೂರು ಏತ ನೀರಾವರಿ ಯೋಜನೆಯಡಿ ಕೆರೆಗಳಿಗೆ ನೀರು ಹರಿಸುವ ಕಾರ್ಯ ನಡೆದಿದೆ ಎಂದು ತಿಳಿಸಿದರು.

ತಮ್ಮ ಕ್ಷೇತ್ರದಲ್ಲಿ ಹೆಚ್ಚಿನ ಕೆರೆಗಳಿದ್ದು ನೀರು ತುಂಬಿಸುವ ಕಾರ್ಯ ನಡೆದಿದೆ. ಕೋಡಿಮೋಳೆ ಕೆರೆಯಿಂದ ಎರಡು ಭಾಗವಾಗಿ ದೊಡ್ಡಮೋಳೆ ಕೆರೆ, ಚಿಕ್ಕಮೋಳೆ ಕೆರೆ, ನಗರದ ಕೆರೆ, ಬಂಡಿಗೆರೆ, ಮರಗದ ಕೆರೆ, ಕೆರೆಗಳಿಗೆ ನೀರು ಹರಿಯಲಿದೆ. ಮಲ್ಲೆ ದೇವನಹಳ್ಳಿ, ಪುಟ್ಟನಪುರ, ನಾಗವಳ್ಳಿ, ಕಾಗಲವಾಡಿ, ಹೊಂಡರಬಾಳು, ಸರಗೂರು ಮೋಳೆ, ಹೆಬ್ಬಳ್ಳ ಕೆರೆಗಳಿಗೂ ನೀರು ತುಂಬಿಸಲಾಗುತ್ತಿದೆ ಎಂದರು.

ಮಲೆಮಹದೇಶ್ವರ ಬೆಟ್ಟದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಮಂಜೂರಾತಿ ನೀಡಿರುವ ಹಲವು ಅಭಿವೃದ್ಧಿ ಯೋಜನೆಗಳಿಗೆ ಸಂಬಂಧಿಸಿದಂತೆ ಹಾಗೂ ಕೆರೆಗೆ ನೀರು ಹರಿಸುವ ಯೋಜನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಜಿಲ್ಲಾ ಉಸ್ತುವಾರಿ ಸಚಿವರನ್ನು ಆಹ್ವಾನಿಸಿ ಚಾಲನೆ ನೀಡುವ ಕಾರ್ಯಕ್ರಮವನ್ನು ಸ್ವಲ್ಪ ದಿನದಲ್ಲಿಯೇ ಆಯೋಜಿಸಲಾಗುವುದು ಎಂದರು.

ಪಟ್ಟಣಕ್ಕೆ ಮಾಲಂಗಿಯಿಂದ ಕುಡಿಯುವ ನೀರು ಪೂರೈಸುವ ಮೂರನೇ ಹಂತದ ಯೋಜನೆಗೆ 162 ಕೋಟಿ ರೂ., ಒಳ ಚರಂಡಿ ನಿರ್ಮಾಣಕ್ಕೆ 141 ಕೋಟಿ ರೂ., ಕ್ರೀಡಾಂಗಣ ಅಭಿವೃದ್ಧಿಗೆ 15 ಕೋಟಿ ರೂ. ಅನುದಾನ ನಿಗದಿಯಾಗಿದೆ. ಕೋಡಿಮೋಳೆ ಕೆರೆ ಪಂಪ್‌ಹೌಸ್ ವೀಕ್ಷಣೆ ಬಳಿಕ ಶಾಸಕರು ದೊಡ್ಡ ಕೆರೆ, ಚಿಕ್ಕ ಕೆರೆಗೂ ಭೇಟಿ ನೀಡಿ ಪರಿಶೀಲಿಸಿದರು.

ಕಾವೇರಿ ನೀರಾವರಿ ನಿಗಮದ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಕೆ.ಎಸ್.ಮಹೇಶ್, ಸಹಾಯಕ ಎಂಜಿನಿಯರ್ ಎಂ.ವಿ. ಲೋಕೇಶ್, ಅಮೃತ ಕನ್‌ಸ್ಟ್ರಕ್ಷನ್ ಗುತ್ತಿಗೆದಾರ ರಾಧಾಕೃಷ್ಣರೆಡ್ಡಿ, ನಗರಸಭೆ ಸದಸ್ಯ ಸ್ವಾಮಿ, ಗ್ರಾಪಂ ಅಧ್ಯಕ್ಷ ನಟರಾಜು, ಮುಖಂಡರಾದ ಗೋವಿಂದಶೆಟ್ಟಿ, ನಾಗಯ್ಯ, ಇತರರು ಇದ್ದರು.

ತ್ಯಾಜ್ಯ ನಿರ್ವಹಣಾ ಘಟಕದ ಸದ್ಬಳಕೆ ಮಾಡಿಕೊಳ್ಳಿ


ಮೂಡಲ ಅಗ್ರಹಾರ ಗ್ರಾಮದ ಬಳಿ ಘನ ತ್ಯಾಜ್ಯ ವಿಲೇವಾರಿ ಘಟಕದ ಕಾಮಗಾರಿಗೆ ಶಾಸಕ ಎ.ಆರ್.ಕೃಷ್ಣಮೂರ್ತಿ ಭೂಮಿಪೂಜೆ ನೆರವೇರಿಸಿದರು

ಯಳಂದೂರು: ಸಮೀಪದ ಮೂಡಲ ಅಗ್ರಹಾರ ಗ್ರಾಮದಲ್ಲಿ ಸ್ವಚ್ಛಭಾರತ್ ಮಿಷನ್ ಯೋಜನೆಯಡಿ ನಿರ್ಮಾಣಗೊಳ್ಳುತ್ತಿರುವ ಘನತ್ಯಾಜ್ಯ ನಿರ್ವಹಣಾ ಘಟಕದ ಉಪಯೋಗವನ್ನು ಗ್ರಾ. ಪಂ. ಯವರೂ ಪಡೆದುಕೊಳ್ಳುವಂತೆ ಶಾಸಕ ಎ.ಆರ್. ಕೃಷ್ಣಮೂರ್ತಿ ತಿಳಿಸಿದ್ದಾರೆ.

ಪಟ್ಟಣ ಪಂಚಾಯಿತಿಯಿಂದ ನಿರ್ಮಾಣಗೊಳ್ಳುತ್ತಿರುವ ಘನತ್ಯಾಜ್ಯ ನಿರ್ವಹಣಾ ಘಟಕದ 166 ಕೋಟಿ ರೂ. ವೆಚ್ಚದ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಹಿಂದಿನ ಸರ್ಕಾರದ ಅವಧಿಯಲ್ಲೇ ಜಿಲ್ಲಾಧಿಕಾರಿ ಕಾವೇರಿ 9 ಎಕರೆ ಸರ್ಕಾರಿ ಜಮೀನಲ್ಲಿ ಚಾಲನೆ ನೀಡಲಾಗಿತ್ತು. ಈ ಸ್ಥಳ ಕುದೇರು ಗ್ರಾಪಂಗೆ ಸೇರಿದ ಜಮೀನಾಗಿದ್ದು, ಯಳಂದೂರಿಗೆ ದೂರವಿದ್ದರಿಂದ ನಿರ್ಮಾಣಕ್ಕೆ ಆಗಲೇ ವಿರೋಧವಿದ್ದರೂ ಕಾಮಗಾರಿ ಆರಂಭವಾಗಿತ್ತು. ಈಗ ಸುತ್ತುಗೋಡೆ ಸೇರಿದಂತೆ ಇತರೆ ಕೆಲಸಗಳು ಆರಂಭಗೊಂಡಿವೆ. ಇಲ್ಲಿ ಹಸಿ ಹಾಗೂ ಒಣ ಕಸವನ್ನು ಬೇರ್ಪಡಿಸಿ ಇದನ್ನು ವೈಜ್ಞಾನಿಕವಾಗಿ ಸಂಸ್ಕರಿಸಲಾಗುತ್ತದೆ. ಅಕ್ಕಪಕ್ಕದಲ್ಲಿರುವ ಕುದೇರು, ದೇಮಳ್ಳಿ ಸೇರಿದಂತೆ ಇತರೆ ಪಂಚಾಯಿತಿಯವರು ತಮ್ಮಲ್ಲಿ ಉತ್ಪತ್ತಿಯಾಗುವ ಕಸವನ್ನು ತಂದು ಸಂಸ್ಕರಿಸಲು ಅವಕಾಶವಿರುವುದರಿಂದ ಇದರ ಸದ್ಬಳಕೆ ಮಾಡಿಕೊಳ್ಳಬೇಕೆಂದರು.

ಮುಷ್ಕರಕ್ಕೆ ಮುಂದಾಗಿದ್ದ ಸಾರಿಗೆ ನೌಕರರಿಗೆ ಸರ್ಕಾರದಿಂದ ಶಾಕ್

ಎಸ್ಮಾ ಜಾರಿ; ಪ್ರತಿಭಟನೆಗೆ 6 ತಿಂಗಳ ನಿಷೇಧ

ಬೆಂಗಳೂರು, ಜು.18– ವೇತನ ಹೆಚ್ಚಳ ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಅನಿರ್ದಿಷ್ಟಾವಧಿ ಪ್ರತಿಭಟನೆಗೆ ಮುಂದಾಗಿದ್ದ ಸಾರಿಗೆ ನೌಕರರಿಗೆ ಎಸ್ಮಾ ಜಾರಿ ಮೂಲಕ ರಾಜ್ಯ ಸರ್ಕಾರ ಶಾಕ್ ನೀಡಿದೆ ಮುಂದಿನ ಆರು ತಿಂಗಳು ಎಸ್ಮಾ ಜಾರಿಯಿರುವ ಹಿನ್ನೆಲೆಯಲ್ಲಿ ಯಾವುದೇ ರೀತಿಯ ಮುಷ್ಕರವನ್ನು ನಿಷೇಧಿಸಲಾಗಿದೆ.

ಸಾರಿಗೆ ನೌಕರ 38 ತಿಂಗಳಿನಿಂದ ಭತ್ಯೆ ಮತ್ತು ವೇತನ ಹೆಚ್ಚಳ ಸೇರಿದಂತೆ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ರಾಜ್ಯ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ಆಗಸ್ಟ್ 5ರಂದು ಬೆಳಗ್ಗೆ 6 ಗಂಟೆಯಿಂದ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಕರೆ ನೀಡಿದ್ದು, ಇದರಂತೆ ರಾಜ್ಯದ ಕೆಎಸ್‌ಆರ್‌ಟಿಸಿ, ಬಿಎಂಟಿಸಿ ಸೇರಿದಂತೆ ನಾಲ್ಕು ನಿಗಮಗಳ ನೌಕರರು ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ಮುಖಂಡ ಅನಂತ ಸುಬ್ಬರಾವ್ ನೇತೃತ್ವದಲ್ಲಿ ಮುಷ್ಕರ ನಡೆಸಲು ಮುಂದಾಗಿದ್ದರು. ಸಾರಿಗೆ ಮುಷ್ಕರದ ಬಗ್ಗೆ ಸಿಎಂ ಸಿದ್ದರಾಮಯ್ಯ ಅವರಿಗೆ ಇ–ಮೇಲ್ ಮೂಲಕ ನೋಟಿಸ್ ಕಳಿಸಿದ್ದೇವೆ ಎಂದು ಸುಬ್ಬರಾವ್ ತಿಳಿಸಿದ್ದರು.

ಸರ್ಕಾರಿ ನೌಕರನನ್ನು ನಿಯಂತ್ರಣ ಮಾಡುವ ಕಾಯ್ದೆ 'ಎಸ್ಮಾ' 1968 ರಿಂದ ಜಾಲ್ತಿಯಲ್ಲಿದ್ದು, ಕರ್ನಾಟಕದಲ್ಲಿ ಇದರ ಜಾರಿ ಕುರಿತು 1994ರಲ್ಲಿ ಕಾನೂನಿನ ಮೊದಲ ರೂಪುರೇಷೆ ತಯಾರಾಯಿತು. 2013ರ ಜೂನ್‌ನಿಂದ ರಾಜ್ಯದಲ್ಲಿ ಕಾನೂನಾಗಿ ಮಾರ್ಪಾಡಾಯಿತು. ನಂತರ 2015ರಲ್ಲಿ ಸರ್ಕಾರ ಕೆಲ ತಿದ್ದುಪಡಿ ಮಾಡಿದೆ.

ಸರ್ಕಾರಿ ನೌಕರರು ಸಾಮೂಹಿಕ ಪ್ರತಿಭಟನೆ ನಡೆಸಿ ಪರಿಸ್ಥಿತಿ ನಿಯಂತ್ರಣ ತಪ್ಪುತ್ತದೆ ಎನ್ನುವುದು ಸರ್ಕಾರದ ಗಮನಕ್ಕೆ ಬಂದರೆ ಎಸ್ಮಾ ಜಾರಿ ಮಾಡಲು ಮುಂದಾಗುತ್ತದೆ. ಮೂಲ ಸೌಕರ್ಯಗಳಾದ ಆಹಾರ, ಭದ್ರತೆ, ಶಿಕ್ಷಣ, ಆರೋಗ್ಯ, ಪೊಲೀಸ್ ವ್ಯವಸ್ಥೆಗೆ ಮುಖಭಂಗ ಬರುವ ಹಂತಕ್ಕೆ ಪ್ರತಿಭಟನೆಗಳು ಬಂದಾಗ ಸರ್ಕಾರ ಎಸ್ಮಾ ಜಾರಿ ಮಾಡುವ ಅಧಿಕಾರವಿದೆ. ಎಸ್ಮಾ ಕಾಯ್ದೆ ಉಲ್ಲಂಘನೆ ಮಾಡಿದರೆ ವಾರಂಟ್ ಇಲ್ಲದೇ ಬಂಧನ ಮಾಡಬಹುದು. ಅಲ್ಲದೆ 6 ತಿಂಗಳು ಜೈಲು ಶಿಕ್ಷೆಯನ್ನು ನೀಡುವ ಸಾಧ್ಯತೆಯೂ ಇರುತ್ತದೆ ಎಂಬ ಉಲ್ಲೇಖವಿದೆ.

ಎಸ್ಮಾ ಜಾರಿಯಲ್ಲಿದ್ದ ಮೇಲೆ ಅದನ್ನು ಧಿಕ್ಕರಿಸಿ ಉದ್ಯೋಗಿ ಪ್ರತಿಭಟನೆಯಲ್ಲಿ ಪಾಲ್ಗೊಂಡರೆ ಆತನ ವೇತನ, ಭತ್ಯೆ, ಬಡ್ತಿ ಮತ್ತು ಇತರ ಸವಲತ್ತುಗಳ ಮೇಲೆ ಪರಿಣಾಮ ಉಂಟಾಗುತ್ತದೆ. ಈ ಕಾರಣಕ್ಕೆ ರಾಜ್ಯ ಸರ್ಕಾರಗಳು ಉದ್ಯೋಗಿಗಳು ಹಠ ಮುಂದುವರಿಸಿದರೆ ಕೊನೆಯ ಅಸ್ತ್ರವಾಗಿ ಎಸ್ಮಾ ಜಾರಿಗೊಳಿಸುತ್ತದೆ.

ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿ ಮುಂದುವರಿಕೆ: ನಿಖಿಲ್ ಕುಮಾರಸ್ವಾಮಿ



ಬಾಗಲಕೋಟೆ, ಜು.18– ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಜೆಡಿಎಸ್ ಹಾಗೂ ಬಿಜೆಪಿ ನಡುವಿನ ಮೈತ್ರಿ ಹೀಗೆಯೇ ಮುಂದುವರಿಯಲಿದೆ. ಈ ಮೈತ್ರಿ ಮುಂದುವರಿಸಲು ದೇವೇಗೌಡರು, ಕುಮಾರಸ್ವಾಮಿ ಆಸಕ್ತಿ ಹೊಂದಿದ್ದಾರೆ ಎಂದು ರಾಜ್ಯ ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹೇಳಿದರು.

ಬಾಗಲಕೋಟೆ ಜಿಲ್ಲೆ ಬಾದಾಮಿಯ ವೀರಪುಲಿಕೇಶಿ ಮೈದಾನದಲ್ಲಿ ನಡೆದ ಜೆಡಿಎಸ್ ಸಮಾವೇಶದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. 2018ರ ವಿಧಾನಸಭೆ ಚುನಾವಣೆಯಲ್ಲಿ ಬಾದಾಮಿ ಮತಕ್ಷೇತ್ರ ಸಿದ್ದರಾಮಯ್ಯ ಸ್ಪರ್ಧೆಯ ಕಾರಣ ಇಡೀ ರಾಜ್ಯದ ಗಮನ ಸೆಳೆದಿತ್ತು.

ಚಾಮುಂಡಿಯಲ್ಲಿ ಜನ ಅವರ ಪರ ಇಲ್ಲ ಎಂಬುದು ಗೊತ್ತಾಗಿ ಬಾದಾಮಿ ಕ್ಷೇತ್ರ ಆಯ್ಕೆ ಮಾಡಿಕೊಂಡಿದ್ದರು. ಇಲ್ಲಿಯೂ ಅವರು ಗೆದ್ದಿದ್ದು ದೊಡ್ಡ ಅಂತರದಿಂದಲ್ಲ. ಇಬ್ಬರು ಬಲಿಷ್ಠರ ಪೈಪೋಟಿಯ ಮಧ್ಯೆ ಶ್ರೀರಾಮುಲು ಅಲ್ಪಮತಗಳ ಅಂತರದಲ್ಲಿ ಸೋಲನ್ನು ಅಭವಿಸಿದರು. ಸಿದ್ದರಾಮಯ್ಯ ನಿಮ್ಮೆಲ್ಲರ ಆಶೀರ್ವಾದದಿಂದ ಗೆದ್ದರು. ಆದರೆ, ಜನರ ನಿರೀಕ್ಷೆಯಂತೆ ಕೆಲಸ ಮಾಡಲಿಲ್ಲ. ಪುನರ್ಜನ್ಮ ನೀಡಿದ ಕ್ಷೇತ್ರಕ್ಕೆ ಏನೂ ಮಾಡಲಿಲ್ಲ ಎಂದು ಆರೋಪಿಸಿದರು.

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23

ಕೆಲಸಕ್ಕೆ ಬೇಕಾಗಿದ್ದಾರೆ
ವಿಜಯನಗರ ಮೈಸೂರಿನಲ್ಲಿ ನೂತನವಾಗಿ ಪ್ರಾರಂಭವಾಗುತ್ತಿರುವ ವೆಜ್ ಅಂಡ್ ನಾನ್‌ವೆಜ್ ರೆಸ್ಟೋರೆಂಟ್‌ಗೆ ಚೈನೀಸ್ ಮತ್ತು ನಾಟಿ ಸ್ಟೈಲ್ ಅಡುಗೆ ಮಾಡುವ ಅನುಭವವುಳ್ಳ ಚೆಫ್ ಮತ್ತು ಸಪ್ಲೈಯರ್‌ಗಳು ಬೇಕಾಗಿದ್ದಾರೆ
ಸಂಪರ್ಕಿಸಿ: 9353263974

SITE FOR SALE
40X60 EAST FACE40 FEET ROAD, ADHISHWAR LAYOUT ATTACHED TO VIJAYNAGAR 4TH STAGE. DIRECT OWNER BROKERS EXCUSE
9972399939

SITE FOR SALE
39X40-SOUTH WEST CORNER.M.S. RAMAIAH LAYOUT (MUDA APPROVED) ATTACHED TO VIJAYNAGAR 4TH STAGE
9972399939

30 X 40 ಸೈಟ್ ರಿಂಗ್ ರಸ್ತೆಗೆ 600 ಮೀಟರ್, ಅರಮನೆ -7 ಕಿ.ಮೀ
10 ಲಕ್ಷ ಪಾವತಿ ಉಳಿಕೆ ಲೋನ್ ಲಭ್ಯ ಆಲನಹಳ್ಳಿ / ಮಾನಸಿನಗರ / ಲಲಿತಾದ್ರಿಪುರ
ತಕ್ಷಣ ಮನೆ ಕಟ್ಟಬಹುದು - 63 ಲಕ್ಷ
ಜೆ.ಪಿ.ನಗರ – ಶ್ರೀರಾಂಪುರ ರಿಂಗ್ ರಸ್ತೆ ಬಳಿ ಕ್ರೈಸ್ಟ್ ಪಬ್ಲಿಕ್ ಸ್ಕೂಲ್ ಬಳಿ 54 - 75 ಲಕ್ಷ
ಲೇಔಟ್ಸ್ – ಇಲವಾಲ, ಬೋಗಾದಿಯಲ್ಲೂ
Brokers Excuses
81230 75038

ಉದ್ಯೋಗವಕಾಶ
ಮಹಿಳೆಯರು, ಯುವತಿಯರು, ಹಾಗೂ ಯುವಕರು ನಮ್ಮ ಶಾಖೆಗಳಲ್ಲಿ ವಯಸ್ಸಾದ ಹಿರಿಯ ನಾಗರೀಕರನ್ನು ಮನೆಯಲ್ಲೇ ಉಳಿದುಕೊಂಡು ನೋಡಿಕೊಳ್ಳಲು ಹೋಂ ನರ್ಸ್ ಗಳು ಬೇಕಾಗಿದ್ದಾರೆ. ತಿಂಗಳ ವೇತನ :15000 ರಿಂದ 20000 ರೂ ವರೆಗೆ ಉಚಿತ ಊಟ ಮತ್ತು ವಸತಿಯೊಂದಿಗೆ ವಯೋಮಿತಿ :18–50 ವರ್ಷ ವಯಸ್ಸಿನವರು ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ
9035113222

ಉಚಿತ ತರಬೇತಿ
ಮನೆಯಿಂದಲೇ ಬಟ್ಟಲು ಸಾಂಬ್ರಾಣಿ ಮತ್ತು ಅಣಬೆ ತಯಾರಿಸಿ ನಮಗೆ ಮರಳಿಸಿ ಪ್ರತಿದಿನ 500 ರಿಂದ 800 ರೂ. ವರೆಗೆ ಗಳಿಸಿ.
ತರಬೇತಿಗಾಗಿ:
7406375196, 9880548596

TEACHERS REQUIRED
BA, B.Ed. / B.Sc., B.Ed. candidates required for Science / Maths & Social - Kannada teachers post for High School English Medium.
Please contact immediately.
7892351939, 9742792363

STAFF REQUIRED
MYSURU RETINA CARE
1. O.T. TECHNICIAN
2. OPTOMETRIST
3. RECEPTIONIST ANY DEGREE
7338369364 / 0821-2543244
#22A, SRI GURU KRUPAM, 1st Floor, New Kantharaj Urs Road, Niveditha Nagar, Mysore, Above Sri Veg Hotel

RERA APPROVED – RAI ESTATES – MUDA APPROVED
ಮೈಸೂರಿನ ಸುತ್ತ ರೈ ಎಸ್ಟೇಟ್ ನಿರ್ಮಿಸಿರುವ ಲೇಔಟ್‌ಗಳಲ್ಲಿ ಸೈಟ್ ಕೊಳ್ಳಲು ಸಂಪರ್ಕಿಸಿ
9448181488, 9945061604
#10, 1st Floor, New Sayyaji Rao Road, Bamboo Bazar, Nysuru - 570 001

PRAKRUTHI PROPERTIES
FOR SALE
30x40@ 22 lakhs Near RT Nagar
BSNL Lyt Sites Also Avl.
Apartments @ Ramakrishna Nagar
Residential & Commercial Plots in & around Mysore
20x30 New 2BHK House, As Per your Plan With Interiors @ Just 40 Lakh in Bogadi
95386 90359, 90359 90359

SBIT TRAVELS
FIXED DEPARTURE
SINGAPORE 5N 6D
AUGUST 12th ,30th
BALI 5N 6D
SEPTEMBER 14th
VIETNAM 6N 7D
AUGUST 30TH
(Saraswathipuram, Mysuru)
9343524127

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 9606838940

Sites for Sale
JNANABHARATHI Layout, Behind Airport, on DADADAHALLI highway. 30x40 East Facing and Corner Sites. MUDA Khata & E-khatha ready. Direct Owner
Contact : Rajashekar
9342123373

ಡ್ರೈವರ್ ಬೇಕಾಗಿದ್ದಾರೆ
ಕನಿಷ್ಠ 5 ವರ್ಷ ಚಾಲನಾ ಅನುಭವವುಳ್ಳ ನುರಿತ ಡ್ರೈವರ್ ಬೇಕಾಗಿದ್ದಾರೆ (ಫಾರ್ಚುನರ್) ಈ ಕೆಳಗಿನ ವಿಳಾಸಕ್ಕೆ ಈ ದಿನವೇ ಖುದ್ದಾಗಿ ಸಂದರ್ಶನಕ್ಕೆ ಹಾಜರಾಗುವುದು.
944/1, CH-1/1, ಸಾಯಿ ಸದನ್, 1ನೇ ಕ್ರಾಸ್, 2ನೇ ಮೇನ್ ರಸ್ತೆ, ಲಕ್ಷ್ಮೀಪುರಂ, ಮೈಸೂರು–570004
ಸಂಪರ್ಕಿಸಿ: 96064 80154

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 6360485921

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 7204494854

ಸೋಲಾರ್ ಸರ್ವೀಸ್
ಅನ್ನು ಕಂಪನಿ ಕಡೆಯಿಂದ 700 ರೂ. ಗೆ 1–7–2025 ರಿಂದ 1–8–2025 ರವರೆಗೆ ಮಾಡಿಕೊಡಲಾಗುತ್ತದೆ.
Mob: 9008711654

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 8618373596

Villa Plots FOR SALE
30x40,30x50,40x60
28 Acres Project,MUDA App
1 Kms from Adithya Circle, Dattagalli, Kergalli,Mysore
8660105902

HOUSE FOR LEASE
30x55 West Face
1st Floor 2 BHK
798, 2nd Cross, Manujapatha Road, E & F Block Kuvempunagar
9845193962

SITE FOR SALE
20X30 WEST FACE MUDA ALLOTED VIJAYNAGAR 4TH STAGE 3RD PHASE. DIRECT OWNER BROKERS EXCUSE
9972399939

SITE FOR SALE
30x55 South face Muda approved Suvarna layout, Bogadi. Rate 2500 per sqft Direct Owner Brokers Excuse
9972399939

ಮನೆಗೆ ಅಡುಗೆ ಮಾಡುವವರು ಬೇಕಾಗಿದ್ದಾರೆ
VEG / NON VEG
ದಟ್ಟಗಳ್ಳಿ, ತ್ರಿವೇಣಿ ಮಾರ್ಟ್ ಹತ್ತಿರ, ಮೈಸೂರು
ಸಂಬಳ: 18,000/–
Mob: 9663570750

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್ ಸೋಲಾರ್ ಸರ್ವೀಸ್
8197383645, 9008711654

ತಕ್ಷಣ ಬೇಕಾಗಿದ್ದಾರೆ
ನಂಜನಗೂಡು, ಕಡಕೊಳ ಏರಿಯಾದ TVS ಫ್ಯಾಕ್ಟರಿಯಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ. ವಿದ್ಯಾರ್ಹತೆ: SSLC ಮೇಲ್ಪಟ್ಟು. ಸಂಬಳ: 18,000 (26 days 8 hours). ವಯೋಮಿತಿ: 45 ವರ್ಷದ ಒಳಗೆ. ESI and PF ಊಟ, ತಿಂಡಿ ವಸತಿ ಸೌಲಭ್ಯ ವಿರುತ್ತದೆ. ಸಂಪರ್ಕಿಸಬೇಕಾದ ಸಂಖ್ಯೆಗಳು
9620667819, 9620777819

ಕಾವೇರಿ ಎಜುಕೇಷನ್ ಟ್ರಸ್ಟ್ (ರಿ)
ನಗುವನಹಳ್ಳಿ, ಶ್ರೀರಂಗಪಟ್ಟಣ ತಾ॥ ಮಂಡ್ಯ ಜಿ॥
ಮೇಲ್ಕಂಡ ನಮ್ಮ ವಿದ್ಯಾ ಸಂಸ್ಥೆಗೆ ಪೂರ್ವ ಪ್ರಾಥಮಿಕ (LKG& UKG) ತರಗತಿಗಳಿಗೆ ಬೋಧಿಸಲು NST ವಿದ್ಯಾರ್ಹತೆಯುಳ್ಳ ಶಿಕ್ಷಕಿಯರು ಬೇಕಾಗಿದ್ದಾರೆ. ಆಸಕ್ತರು ತಮ್ಮ ಮೂಲ ದಾಖಲಾತಿಗಳೊಂದಿಗೆ ದಿ:22–07–2025ರ ಮಂಗಳವಾರ ಬೆಳಗ್ಗೆ 11.00 ಗಂಟೆಗೆ ನೇರ ಸಂದರ್ಶನದಲ್ಲಿ ಪಾಲ್ಗೊಳ್ಳಲು ತಿಳಿಸಿದೆ.
(ಮೈಸೂರು ಸಿಟಿ ಬಸ್ ನಿಲ್ದಾಣದಿಂದ ಬಸ್ ಮಾರ್ಗಸಂಖ್ಯೆ: 315B, 178A)
ಸಹಿ/– ಕಾರ್ಯದರ್ಶಿಗಳು
9980366956

FRANCHISE OPPORTUNITY!
Q-BLOT offers exciting franchise opportunities with a proven business model, training and support, clothing, cafe, restaurant, furniture, spa, automation, PetGrooming, Starts from 2.8L - 5Cr
9916097637

ತಕ್ಷಣ ಬೇಕಾಗಿದ್ದಾರೆ
ಮೈಸೂರು ನಗರದ ಸುತ್ತಮುತ್ತ ಕಾರ್ಖಾನೆಗಳಲ್ಲಿ ಕೆಲಸ ಮಾಡಲು ಸೆಕ್ಯೂರಿಟಿಗಳು, ಹೌಸ್‌ಕೀಪಿಂಗ್ ಲೇಬರ್ಸ್ (Helpers) ಗಳು ಕೆಲಸಕ್ಕೆ ತಕ್ಷಣ ಬೇಕಾಗಿದ್ದಾರೆ. ಹೆಬ್ಬಾಳು, ಮೇಟಗಳ್ಳಿ, ಜೆಪಿ ನಗರ, ಮೈಸೂರು ಸುತ್ತ ಮುತ್ತ ಕೆಲಸ ಮಾಡಲು ಮಹಿಳೆಯರು & ಪುರುಷರು ಬೇಕಾಗಿದ್ದಾರೆ. ಕೋ–ಆಪರೇಟಿವ್ ಸೊಸೈಟಿಯಲ್ಲಿ ಪಿಗ್ಮಿ ಕಲೆಕ್ಟರ್ ಹಾಗೂ ಕಛೇರಿ ಸಹಾಯಕರು ಕೆಲಸ ಮಾಡಲು ಪುರುಷರು ಬೇಕಾಗಿದ್ದಾರೆ. ವಿದ್ಯಾಭ್ಯಾಸ 10th pass & Fail.
9036461347, 9611208553

WANTED
Helpers, runners, fitters. ITI, Diploma Electrical (for machine maintenance). Diploma Mechanical (Autocad, solidwork).
0821-2582668, 7204445679
Address: - MYSTECH MACHINES #Q113, 4th Cross, 8th Main, Hebbal Industrial Estate, Mysore - 570016
Email: - mystechmachines@gmail.com

ಸದ್ಗುರು ಮ್ಯಾರೇಜಸ್
ಎಲ್ಲಾ ಜಾತಿಯ ವಧುವರರು, ವಿಧುರರು, ವಿಧವೆಯರು, ವಿಚ್ಛೇದಿತರು ನೇರ ಸಂಪರ್ಕಿಸಿ. ಫೋಟೋ, ಬಯೋಡೇಟಾ, ಜಾತಕವನ್ನು ವಾಟ್ಸಾಪ್ ಮಾಡಿರಿ.
9448229184, 7899625268

WANTED TEACHERS
Jnanajyothi Vidyalaya (English medium) Beerihundi.
B.Sc., M.Sc., B.Ed.-2 (Physics, Maths & CBZ). Hindi Teacher-1.
Wanted immediately contact:
9845390377, 8197057626

OLD AGE HOME
We offer nursing and medical services to bedridden and senior citizens with Veg. Food and accommodation at our centre in Gokulam, Mysore at a reasonable cost.
Mob: 9880102700

ಹುಡುಗರು ಬೇಕಾಗಿದ್ದಾರೆ
ಚೈನೀಸ್ ಫುಡ್ ಮತ್ತು ಚಾಟ್ಸ್‌ಗೆ ಸಹಾಯಕ ಹುಡುಗರು ಬೇಕಾಗಿದ್ದಾರೆ
ಸ್ಥಳ : ಪಾಂಡವಪುರ
9686960978

ಕ್ವಿಕ್ ಮ್ಯಾರೇಜಸ್
ಎಲ್ಲಾ ಜಾತಿಯ ವಧು–ವರರಿಗಾಗಿ ಮತ್ತು ವಿಧುರ–ವಿಚ್ಛೇದಿತ ವಧು–ವರರಿಗಾಗಿ ಕೂಡಲೇ ಸಂಪರ್ಕಿಸಿ
9343175000

R.V. CONSTRUCTIONS
Rate starts from Rs. 1690 per sq.ft.
No advance
Billing on stage by stage completion.
Office: 7975110915
D. Subbaiah Road, Mysore
Assist Major Bank Loans

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666

ಫೀಲ್ಡ್ ಸೇಲ್ಸ್ ಕೆಲಸಕ್ಕೆ ಹುಡುಗರು ಬೇಕಾಗಿದ್ದಾರೆ
ದ್ವಿಚಕ್ರ ವಾಹನ ಹೊಂದಿರಬೇಕು.
ಕೊಳ್ಳೇಗಾಲ – 02 ಹುದ್ದೆ
ಚಾಮರಾಜನಗರ – 02 ಹುದ್ದೆ
ಸಂಬಳ : 15,000/– ರಿಂದ 30,000/–
9008436264

ನಿವೇಶನ ಬೇಕಾಗಿದೆ
30x40 ಅಳತೆಯ ಪೂರ್ವ–ಉತ್ತರ ದಿಕ್ಕಿನ ನಿವೇಶನ ಸನ್‌ಸಿಟಿ, ನಾಗವಾಲ, ಆತ್ಮಾನಂದಸಾಗರ, ಸುತ್ತಮುತ್ತಲಿನ ಬಡಾವಣೆಗಳಲ್ಲಿ ಬೇಕಾಗಿದೆ
8762686366

ತಕ್ಷಣ ಬೇಕಾಗಿದ್ದಾರೆ
- ಸೆಕ್ಯೂರಿಟಿ ಗಾರ್ಡ್ಸ್ – (ಕುವೆಂಪುನಗರ, ಸರಸ್ವತಿಪುರಂ, ಟಿ.ಕೆ. ಲೇಔಟ್)
- ಹೌಸ್ ಕೀಪಿಂಗ್ – ಹುಡುಗರು / ಮಹಿಳೆಯರು
- ಗಾರ್ಡನ್ ಕಟ್ಟರ್ – ಅನುಭವವುಳ್ಳವರು

9731663856 / 9739166772

ಉಚಿತ ಭವಿಷ್ಯ ಶಾಶ್ವತ ಪರಿಹಾರ
ಓಂ ಕಾರ್ಯಸಿದ್ಧಿ ಆಂಜನೇಯಸ್ವಾಮಿ ಜ್ಯೋತಿಷ್ಯಾಲಯ
ಪಂ॥ ನಾಗರಾಜ್‌ರಾವ್ ಶಾಸ್ತ್ರಿ
ನೀವು ಬೇರೆ ಜ್ಯೋತಿಷ್ಯರಲ್ಲಿ ಕೇಳಿ ಹಣ, ನೆಮ್ಮದಿ, ವಿಶ್ವಾಸ ಕಳೆದುಕೊಂಡಲ್ಲಿ ನಿಮ್ಮ ಜೀವನ ಯಾವುದೇ ಗುಪ್ತ ಸಮಸ್ಯೆಗಳಿದ್ದರೂ, ಕೇರಳ ಭಗವತಿ ಕುಟ್ಟಿಚೇತನ್ ವಿದ್ಯೆ ನಿಮ್ಮ ಸಮಸ್ಯೆ ಏನೇ ಇರಲಿ, ಎಷ್ಟೇ ಕಠಿಣವಾಗಿರಲಿ 3 ದಿನಗಳಲ್ಲಿ ಶಾಶ್ವತ ಪರಿಹಾರ ಶತಸಿದ್ಧ.
ಮೈಸೂರು ಭುಗತಗಳ್ಳಿ ಗೇಟ್
9632364832

ನಿವೇಶನ / ಮನೆ ಬೇಕಾಗಿದೆ
ವಸಂತನಗರ, ಮಾನಸಿನಗರ, ಪೋಲೀಸ್ ಬಡಾವಣೆ, ಜೆ.ಎಸ್.ಎಸ್. ಬಡಾವಣೆ, ಕಪಿಲಾ ಬಡಾವಣೆ ಹಾಗೂ ಬನ್ನೂರು ರಸ್ತೆ, ಟಿ.ನರಸೀಪುರ ರಸ್ತೆ ಬಡಾವಣೆಗಳಲ್ಲಿ.
9448481664

FINWIZZ FINANCIAL SERVICES PVT LTE
We are Hiring Telecallers - Female Only
QUALIFICATION - PUC/ DEGREE, PRODUCT - ALL LOANS- (PL, BL,HL,LAP) ATTRACTIVE SALARY + INCENTIVE, ADDRESS: NO-07, MRN SIGNATURE 2ND FLOOR KAMAKSHI HOSPITAL ROAD SARASWATIPURAM MYSORE -570009
9535296193 - 9538123494

ಮನೆ ಮಾರಾಟಕ್ಕಿದೆ
20 X 30 ಎರಡು ಅಂತಸ್ತಿನ ಮನೆ, ಕುವೆಂಪು ನಗರ 'ಕ' ಬ್ಲಾಕ್, ಗ್ರಾನೈಟ್ ಫ್ಲೋರ್, ಸೋಲಾರ್, 4 BHK
ಬೆಲೆ 80 ಲಕ್ಷ
9741930136

SITE FOR SALE
25X40, 30X50, 40X60 Near Sri Rampura Ring Road, Mysuru
8050345574

SITE FOR SALE
In Kergalli, Mysore
30x40, 30x60
North Facing
8861137033

SITE FOR SALE
30x50 E/F
Bhoomika PR Valley MUDA Approved Ilvala
Rate: 40 Lakhs
8861220989

PART-TIME JOB OPPORTUNITY
For Senior Citizens House Wife and 45+ above. fix Salary / PF/ ESI. and Incentive More information Contact
9449152797 / 8660764095
7208872090

MOBILE ರಿಪೇರಿ ಟ್ರೈನಿಂಗ್
18 ವರ್ಷದಿಂದ Mobile, Electrical, Electronics ಮತ್ತು Computer Hardware ರಿಪೇರಿ ಹೇಳಿಕೊಡುತ್ತಿರುವ ಏಕೈಕ ಸಂಸ್ಥೆಯಲ್ಲಿ ಶೀಘ್ರದಲ್ಲಿ ಹೊಸ ಬ್ಯಾಚ್ ಪ್ರಾರಂಭ. ಯಾವುದೇ ವಿದ್ಯಾರ್ಹತೆ ಹಾಗೂ ವಯೋಮಿತಿಯ ಅಗತ್ಯವಿಲ್ಲ. PG ವ್ಯವಸ್ಥೆಯು ಇರುತ್ತದೆ. ಕೂಡಲೇ ಸಂಪರ್ಕಿಸಿ:
SMM Institute,
ಶ್ರೀ ವೀರಭದ್ರೇಶ್ವರಸ್ವಾಮಿ ದೇವಸ್ಥಾನದ ಎದುರು, ದಿವಾನ್ಸ್ ಶಾಲೆಯ ರಸ್ತೆ, ಕೆಆರ್.ಮೊಹಲ್ಲಾ ಮೈಸೂರು
Mob.: 9986926101

URGENTLY REQUIRED
Wanted Experienced DRIVERS
Attractive Salary and Incentive
8095188889

AFFIDAVIT
I Declare that my Correct Name is MANJULA in Aadhaar and PAN Card Mentioned Correctly as MANJULA. But in SKPC Bank A/C No. 7504 My Name Mentioned as MANJULA GUPTHA. Hence I make this affidavit on oath that MANJULA and MANJULA GUPTA Both are my name.
Affidavit No. IN-KA866304893315X
sd/- Manjula

ಬೇಕಾಗಿದ್ದಾರೆ
ರೂಂ ಬಾಯ್ಸ್‌ಗಳು ಮತ್ತು ಹೌಸ್ ಕೀಪಿಂಗ್ ಕೆಲಸದ ಅನುಭವ ಇರುವವರು.
ಆಸಕ್ತರು ಈ ಕೆಳಕಂಡ ವಿಳಾಸವನ್ನು ಸಂಪರ್ಕಿಸಿ
ವಿಜಯನಗರ ಸ್ಪೋರ್ಟ್ಸ್ ಕ್ಲಬ್ (ರಿ)
CA-12, 2ನೇ ಹಂತ, ವಿಜಯನಗರ, ಮೈಸೂರು – 570017
0821-2514823

HOUSE FOR SALE
6 Year old 30x40 W/F Opp. Park G+2F, 2 BHK, Vijayanagar 4th Stage, 1st Phase, Attached 3rd Stage. Mysore.
Price: 2.20 Cr
Negotiable Broker Excuse
7676171798



Solar Water Heater SALES & SERVICE
BAJAJ FINSERV
SUNZONE SOLAR SYSTEM
VM Double Road, Kuvempunagar, Mysuru
9845175443

ಮನೆ ಕೆಲಸಕ್ಕೆ ಮಹಿಳೆ ಬೇಕಾಗಿದ್ದಾರೆ
ಊಟ, ವಸತಿ ಇರುತ್ತದೆ. ಕಡ್ಡಾಯವಾಗಿ ಮನೆಯಲ್ಲೆ ಉಳಿಯಬೇಕು. 35 ವಯಸ್ಸಿನ ಮಿತಿ ಇರಬೇಕು. ಆಕರ್ಷಕ ಸಂಬಳ
9986622769

We are Hiring Join Our Team
Position Available: Graphic Designer
(Male or Female) - 02 Nos.
Basic Knowledge CorelDraw, Photoshop. Minimum 1 year Experience Required.
Freshers can also apply
Interested Candidates send your resume:
7204935087 / 7306811538

ಬೇಕಾಗಿದ್ದಾರೆ
ನ್ಯೂ ಶಾರದ ರೆಸಾರ್ಟ್ ಕೆ.ಆರ್.ಎಸ್. ಮೇನ್ ರೋಡ್ ನಿಯರ್ ಪಂಪ್ ಹೌಸ್ ಸರ್ಕಲ್
1) ಹೆಡ್ ಕುಕ್ ಆಲ್ ರೌಂಡರ್
2) ಕ್ಯಾಪ್ಟನ್ ; 3) ಅಕೌಂಟ್ ಟೆಂಟ್
4) ಕಿಚನ್ ಅಸಿಸ್ಟೆಂಟ್
ಅನುಭವ ಉಳ್ಳವರಿಗೆ ಮಾತ್ರ ಆದ್ಯತೆ,
Mob: 9880185785

ಗುಡ್ ವಿಶ್ ಫೌಂಡೇಶನ್ ಸೇವಾ ಸಂಸ್ಥೆ
ಕಳೆದ 7 ವರ್ಷಗಳಿಂದ ಮಕ್ಕಳ ಪರವಾಗಿ ಸಮಾಜ ಸೇವಾ ಕೆಲಸ ಮಾಡುತ್ತಿದ್ದು, ಅದರ ನಿಟ್ಟಿನಲ್ಲಿ ಅನಾಥ ವೃದ್ಧರಿಗೆ, ನಿರಾಶ್ರಿತರಿಗೆ, ಆಶ್ರಯ ಮತ್ತು ರಕ್ಷಣೆ ವ್ಯವಸ್ಥೆಯನ್ನು ಮಾಡಲು ಪ್ರಾರಂಭಿಸಿದ್ದೇವೆ. ನಿಮ್ಮ ಸುತ್ತ ಮುತ್ತ ಯಾವುದೇ ತೊಂದರೆಗೊಳಗಾದ ಮಹಿಳಾ ವೃದ್ಧರಿಗೆ ದಯಮಾಡಿ ನಮ್ಮ ಸಂಸ್ಥೆಗೆ ದಾಖಲಿಸಬಹುದು. ಉಚಿತ ಆಶ್ರಯ ಮತ್ತು ರಕ್ಷಣೆ, ಪೋಷಣೆ, ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಆಸಕ್ತಿ ಉಳ್ಳವರು ದಯಮಾಡಿ ಈ ದೂರವಾಣಿಯನ್ನು ಸಂಪರ್ಕಿಸಿ
8970208156–7795708156

10,000 ಅಡಿ ಖಾಲಿ ಜಾಗ ಬಾಡಿಗೆಗೆ ದೊರೆಯುತ್ತದೆ.
ವಿಜಯನಗರ 2ನೇ ಹಂತ ವಾಟರ್ ಟ್ಯಾಂಕ್ ಪಕ್ಕ
ಬ್ರೋಕರ್ ಕ್ಷಮಿಸಿ
Mob :9448978383

ಉದ್ಯೋಗ ಅವಕಾಶಗಳು
1) ಸೆಕ್ಯೂರಿಟಿ ಗಾರ್ಡ್‌ಗಳು (NIGHT SECURITY)–ಬಲ್ಲಾಳ್ ಸರ್ಕಲ್ BMC ನಗರ, ಸಿದ್ದಪ್ಪ ಸ್ಕ್ವೇರ್, ನಂಜುಮಳಿಗೆ ಸುತ್ತ ಮುತ್ತ
2) ಹೌಸ್ ಕೀಪಿಂಗ್ (ಹೆಂಗಸರು) :– ಸಿದ್ದಪ್ಪ ಸ್ಕ್ವೇರ್, ಸುತ್ತ ಮುತ್ತ 8 hour duty, weekly off ಇರುತ್ತದೆ. ಜೊತೆಗೆ ESI ಮತ್ತು PF
3) ಅನುಭವಿ ಮಾರ್ಕೆಟಿಂಗ್ ವ್ಯವಸ್ಥಾಪಕರು ಬೇಕಾಗಿದ್ದಾರೆ
ಸ್ಥಳ : ಮಂಡ್ಯ, ಮಂಡ್ಯ ಸುತ್ತ ಮುತ್ತ
ವಿಶ್ವಾಸಾರ್ಹ ಹೆಸರಿನೊಂದಿಗೆ ನಿಮ್ಮ ಜೀವನವನ್ನು ಬೆಳೆಸಲು ಈ ಅವಕಾಶವನ್ನು ಕಳೆದುಕೊಳ್ಳಬೇಡಿ ತಕ್ಷಣ ಸೇರ್ಪಡೆ
9148975329, 8867197599, 8217563349

HOUSE FOR SALE
20x30 Duplex, 3BHK
Newly Built House at IPS Layout, 100 mtrs from Ring Road, West Road, North Door
Price : 82,00,000/-
Slightly Negotiable
9008203560

ತಕ್ಷಣ ಬೇಕಾಗಿದ್ದಾರೆ
ಮೈಸೂರಿನ ಸುತ್ತಮುತ್ತ ಕೆಲಸ ನಿರ್ವಹಿಸಲು SSLC, PUC, ITI & CNC Operators. ಸೆಕ್ಯೂರಿಟಿ ಗಾರ್ಡ್ ಮತ್ತು ಹೌಸ್‌ಕೀಪಿಂಗರ್ಸ್ ಬೇಕಾಗಿದ್ದಾರೆ.
9035567819

ತಕ್ಷಣ ಬೇಕಾಗಿದ್ದಾರೆ
ಸೆಕ್ಯೂರಿಟಿ ಸೂಪರ್‌ವೈಸರ್ ಮತ್ತು ಗಾರ್ಡ್, 8 ಗಂಟೆ ಪಾಹಾಳಿ, ವಯೋಮಿತಿ 45 ವರ್ಷ ಒಳಪಟ್ಟು ESI ಮತ್ತು PF ಸೌಲಭ್ಯವಿದೆ.
ಹೂಟಗಳ್ಳಿ ಮತ್ತು ಹೆಬ್ಬಾಳ್ ಇಂಡಸ್ಟ್ರೀಯಲ್ ಏರಿಯ
9035367083 / 6361548626

ಸೈಟು ಮಾರಾಟಕ್ಕಿದೆ
ಬನ್ನೂರು ಮುಖ್ಯ ರಸ್ತೆಗೆ ಹೊಂದಿಕೊಂಡಂತೆ RR ಕನ್ವೆನ್ಷನ್ ಎದುರುಗಡೆ ಇರುವ ಕಮರ್ಷಿಯಲ್ 2200 SQ FT ಇರುವ ಸೈಟ್ ಮಾರಾಟಕ್ಕೆ ಲಭ್ಯವಿದೆ.
ಆಸಕ್ತರು ದಯವಿಟ್ಟು ಸಂಪರ್ಕಿಸಿ
6360633036

ಸೈಟುಗಳು ಮಾರಾಟಕ್ಕಿದೆ
ಇಲವಾಲದಲ್ಲಿ DTCP ಇಂದ ಅನುಮೋದನೆಗೊಂಡ ಲೇಔಟ್‌ನಲ್ಲಿ ಸೈಟ್‌ಗಳು ಮಾರಾಟಕ್ಕೆ ಲಭ್ಯವಿವೆ.
ಆಸಕ್ತರು ದಯವಿಟ್ಟು ಸಂಪರ್ಕಿಸಿ
7411165904

ಸೈಟು ಬೇಕಾಗಿದೆ
ಚಿಕ್ಕಹಳ್ಳಿ / ವಾಜಮಂಗಲ / ವರುಣ / ಜೆಎಸ್‌ಎಸ್ 2ನೇ ಹಂತ / ವರುಣ ಬಸವೇಶ್ವರ / ನಿರ್ಮಾಣ್‌ನಗರ / ಲಲಿತಾದ್ರಿನಗರ / ಪೊಲೀಸ್ ಲೇಔಟ್ ಹಾಗೂ ಅಕ್ಕಪಕ್ಕದ ಬಡಾವಣೆಗಳಲ್ಲಿ, ಟಿ ನರಸೀಪುರ ರಸ್ತೆ / ಬನ್ನೂರು ರಸ್ತೆ
9686071750

ಡಿಸೈನರ್ಸ್ ಬೇಕಾಗಿದ್ದಾರೆ
ಕೋರಲ್‌ಡ್ರಾ ಅಥವಾ ಫೋಟೋಷಾಪ್ ಕಲಿತಿರುವವರು
WANTED DESIGNERS
Corel Draw and Photoshop Known Persons
9663161624
9980608548

ಮೈಸೂರು ಮಿತ್ರ 46
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

2.97 ಕೋಟಿ ರೂ. ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ



ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ದರ್ಶನ್ ಗುದ್ದಲಿಪೂಜೆ ನೆರವೇರಿಸಿದರು.

ನಂಜನಗೂಡು/ಮಲ್ಲುಂಡಿ, ಜು.18– ತಾಲೂಕಿನ ವಿವಿಧ ಗ್ರಾಮಗಳಲ್ಲಿ ಸಾಮಾನ್ಯ ವರ್ಗದ ಬೀದಿಗಳಿಗೆ ಮೂಲ ಸೌಕರ್ಯ ಕಲ್ಪಿಸುವ ಸಲುವಾಗಿ 2.97 ಕೋಟಿ ರೂ. ವೆಚ್ಚದಲ್ಲಿ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಲಾಗಿದೆ ಎಂದು ಶಾಸಕ ದರ್ಶನ್ ತಿಳಿಸಿದರು.

ತಾಲೂಕಿನ ಬಸವಟ್ಟಿಗೆ, ಹೆಮ್ಮರಗಾಲ, ನೇರಳೆ, ಹಂಪಾಪುರ, ಹಳೇಪುರ, ತರದಲೆ, ಬಾಗೂರು, ಸಿದ್ದಯ್ಯನ ಹುಂಡಿ ಗ್ರಾಮಗಳಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸುವ ಜೊತೆಗೆ ಅಭಿವೃದ್ಧಿ ಕಡೆಗಣಿಸದೆ, ಕ್ಷೇತ್ರಗಳ ಅಭಿವೃದ್ಧಿಗೆ ಸಾಕಷ್ಟು ಅನುದಾನ ನೀಡಿದೆ. ನಂಜನಗೂಡು ಕ್ಷೇತ್ರಕ್ಕೆ ಕಳೆದ 2 ವರ್ಷಗಳಲ್ಲಿ 400 ಕೋಟಿಗಿಂತಲೂ ಅಧಿಕ ಅನುದಾನ ನೀಡಿದ್ದಾರೆ. ಗ್ಯಾರೆಂಟಿ ಯೋಜನೆಗಳಿಂದ ರಾಜ್ಯದಲ್ಲಿ ಅಭಿವೃದ್ಧಿ ಕುಂಠಿತಗೊಂಡಿಲ್ಲ ಎಂಬುದಕ್ಕೆ ನಂಜನಗೂಡು ಕ್ಷೇತ್ರದಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕೆಲಸಗಳೇ ಸಾಕ್ಷಿ. ಉಳಿದಿರುವ ನನ್ನ ಅವಧಿಯಲ್ಲಿ ಹೆಚ್ಚಿನ ಅನುದಾನ ತಂದು ಕ್ಷೇತ್ರದಲ್ಲಿ ಯಾವುದೇ ಅಭಿವೃದ್ಧಿ ಕೆಲಸಗಳು ಬಾಕಿ ಇಲ್ಲದಂತೆ ಅಭಿವೃದ್ಧಿ ಕಾರ್ಯ ಮಾಡುವ ಮೂಲಕ ಒಂದು ಮಾದರಿ ಕ್ಷೇತ್ರವನ್ನಾಗಿ ರೂಪಿಸಲಾಗುವುದು ಎಂದರು.

ಇಂದು ಬಸವಟ್ಟಿಗೆ ಗ್ರಾಮದಲ್ಲಿ 15 ಲಕ್ಷ ವೆಚ್ಚದಲ್ಲಿ ಸಾಮಾನ್ಯ ವರ್ಗದ ಬೀದಿಯಲ್ಲಿ ಚರಂಡಿ ನಿರ್ಮಾಣ, ನೇರಳೆ ಗ್ರಾಮದಲ್ಲಿ 50 ಲಕ್ಷ ವೆಚ್ಚದಲ್ಲಿ ಮುಖ್ಯರಸ್ತೆ ಅಭಿವೃದ್ಧಿ, ಉಪ್ಪಾರ ವರ್ಗದ ಬೀದಿಯಲ್ಲಿ 30 ಲಕ್ಷ, ಮುಸ್ಲಿಂ ಬೀದಿಯಲ್ಲಿ 15 ಲಕ್ಷ ವೆಚ್ಚದಲ್ಲಿ ಚರಂಡಿ ಮತ್ತು ಸಿಸಿ ರಸ್ತೆ, ಹಂಪಾಪುರ ಗ್ರಾಮದಲ್ಲಿ 30 ಲಕ್ಷ ವೆಚ್ಚದಲ್ಲಿ ಮುಖ್ಯ ರಸ್ತೆ, 15 ಲಕ್ಷ ವೆಚ್ಚದಲ್ಲಿ ಸಾಮಾನ್ಯ ವರ್ಗದ ಬೀದಿಯಲ್ಲಿ ಚರಂಡಿ ಮತ್ತು ಸಿಸಿ ರಸ್ತೆ ನಿರ್ಮಾಣ, ಹಳೇಪುರ ಗ್ರಾಮದಲ್ಲಿ ಲಿಂಗಾಯತ ಬೀದಿ ಅಭಿವೃದ್ಧಿಗೆ 10 ಲಕ್ಷ, ಉಪ್ಪಾರ ಬೀದಿ ಅಭಿವೃದ್ಧಿಗೆ 20 ಲಕ್ಷ, ಸಿದ್ದಯ್ಯನ ಹುಂಡಿ ಗ್ರಾಮದಲ್ಲಿ 20 ಲಕ್ಷ, ಬಾಗೂರು ಗ್ರಾಮದಲ್ಲಿ 10 ಲಕ್ಷ, ತರದಲೆ ಗ್ರಾಮದಲ್ಲಿ 20 ಲಕ್ಷ ವೆಚ್ಚದಲ್ಲಿ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಲಾಗಿದ್ದು, ಶೀಘ್ರದಲ್ಲಿ ಕಾಮಗಾರಿ ಮುಕ್ತಾಯಗೊಂಡು ಸಾರ್ವಜನಿಕರಿಗೆ ಉಪಯೋಗವಾಗಲಿದೆ ಎಂದರು.

ಈ ವೇಳೆ ಮಾಜಿ ಶಾಸಕ ಕೇಶವಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ಜಿ.ಮಹೇಶ್, ಎಸ್ಸಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಿವಣ್ಣ, ಮುಖಂಡರಾದ ಕುಳ್ಳಯ್ಯ, ದೊರೆಸ್ವಾಮಿ ನಾಯಕ, ಶಿವಪ್ಪದೇವರು, ರಂಗದಾಸ್, ಶಿವಕುಮಾರ್, ಕೃಷ್ಣಮೂರ್ತಿ, ನಾಗೇಂದ್ರ, ವೀರೇಶ್, ಜಿಪಂ ಮಾಜಿ ಸದಸ್ಯೆ ಲತಾಸಿದ್ದಶೆಟ್ಟಿ, ಗ್ರಾಪಂ ಅಧ್ಯಕ್ಷ ಗಿರೀಶ್, ಎಇ ಶರಣ್, ಇಂಜಿನಿಯರ್ ಪುರುಷೋತ್ತಮ್, ಸುಕೇತರಾಜು, ಜಯಶೇಖರ, ಮಹದೇವಪ್ಪ ಅರುಣ್ ಕುಮಾರ್, ಸುರೇಶ್, ಮಹಾಲಿಂಗಪ್ಪ, ಕುಮಾರ್, ಕೀರ್ತಿರಾಜು, ಶಿವಪ್ಪ, ಕಸುವಿನಹಳ್ಳಿ ಪಿಎಸಿಎಸ್ ಅಧ್ಯಕ್ಷ ಕೆ.ಎನ್.ಚಿನ್ನಸ್ವಾಮಿ, ಗ್ರಾಪಂ ಸದಸ್ಯ ಕೆ.ಎನ್.ಮಲ್ಲೇಶ್ ಸೇರಿದಂತೆ ಹಲವರಿದ್ದರು.

ಸ್ವಚ್ಛತಾ ಕಾರ್ಮಿಕರಿಗೆ ಸುರಕ್ಷಾ ಕಿಟ್ ವಿತರಣೆ



ಪೌರ ಕಾರ್ಮಿಕರಿಗೆ ಸುರಕ್ಷಾ ಕಿಟ್ ವಿತರಿಸಲಾಯಿತು.

ತಿ.ನರಸೀಪುರ, ಜು.18– ಪಟ್ಟಣದ ಪುರಸಭೆ ವತಿಯಿಂದ ನಮಸ್ತೆ ದಿನಾಚರಣೆ ಅಂಗವಾಗಿ ಸ್ವಚ್ಛತಾ ಕಾರ್ಮಿಕರಿಗೆ ಸುರಕ್ಷಾ ಕಿಟ್ ವಿತರಿಸಲಾಯಿತು.

ಪುರಸಭೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಪೌರ ಕಾರ್ಮಿಕರು ಮತ್ತು ವಾಹನ ಚಾಲಕರಿಗೆ ಪುರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಸಿ.ಪ್ರಕಾಶ್ ಅವರು ಕೈಗವಸು, ಬೂಟು, ಸಮವಸ್ತ್ರ ಹಾಗೂ ಇನ್ನಿತರ ಸುರಕ್ಷಾ ಪದಾರ್ಥಗಳನ್ನು ವಿತರಿಸಿ ಪ್ರತಿಯೊಬ್ಬರೂ ಇವುಗಳನ್ನು ಬಳಸಿ ಕಾರ್ಯ ನಿರ್ವಹಿಸುವಂತೆ ಸೂಚಿಸಿದರು.

ದೇಶ ವ್ಯಾಪ್ತಿ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯವು ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯದೊಂದಿಗೆ ಜಂಟಿಯಾಗಿ ರಾಷ್ಟ್ರೀಯ ಯಾಂತ್ರೀಕೃತ ನೈರ್ಮಲ್ಯ ಪರಿಸರ ವ್ಯವಸ್ಥೆ (ನಮಸ್ತೆ) ಯೋಜನೆಯನ್ನು 2023ರಲ್ಲಿ ಪ್ರಾರಂಭಿಸಲಾಯಿತು ಎಂದರು.

ಸದರಿ ಯೋಜನೆಯು ಒಳಚರಂಡಿ ಮತ್ತು ಸೆಪ್ಟಿಕ್ ಟ್ಯಾಂಕ್ ಕಾರ್ಮಿಕರ (SSW) ಸುರಕ್ಷತೆ ಮತ್ತು ಘನತೆ ಕಾಪಾಡುವುದು ಮತ್ತು ನೈರ್ಮಲ್ಯ ಶುಚಿಗೊಳಿಸುವ ಕೆಲಸದಲ್ಲಿ ಸಾವುಗಳಾಗುವುದನ್ನು ತಡೆಗಟ್ಟುವುದು ಈ ಯೋಜನೆಯ ಉದ್ದೇಶವಾಗಿದೆ. ಅಲ್ಲದೆ, ಘನತ್ಯಾಜ್ಯ ನಿರ್ವಹಣೆಯಲ್ಲಿ ತೊಡಗಿರುವ ಚಿಂದಿ/ ತ್ಯಾಜ್ಯ ಆಯುವವರನ್ನು ನಮಸ್ತೆ ಯೋಜನೆಯಡಿ ಸೇರಿಸಲಾಗಿದೆ ಎಂದರು.

ಪುರಸಭಾಧ್ಯಕ್ಷೆ ವಸಂತ ಶ್ರೀಕಂಠ ಮಾತನಾಡಿ, ನಮಸ್ತೆ ದಿನಾಚರಣೆ ಮುಖ್ಯ ಕಾರ್ಯಕ್ರಮ ಉತ್ತರ ಪ್ರದೇಶದ ಲಕ್ನೋದಲ್ಲಿ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ರಾಜ್ಯ ಸಚಿವ ಬಿ.ಎಲ್. ವರ್ಮಾ ಉಪಸ್ಥಿತಿಯಲ್ಲಿ ನಡೆಯಿತು. ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ಮಟ್ಟದಲ್ಲಿ ಈ ಕಾರ್ಯಕ್ರಮ ಆಯೋಜಿಸಲು ಸೂಚಿಸಿರುವುದರಿಂದ ತಿ.ನರಸೀಪುರದಲ್ಲೂ ನಮಸ್ತೆ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಮುಖ್ಯಾಧಿಕಾರಿ ಬಿ.ಕೆ.ವಸಂತ ಕುಮಾರಿ, ಸಮುದಾಯ ಸಂಘಟಕ ಮಹದೇವ್, ಕಂದಾಯ ಅಧಿಕಾರಿ ತ್ರಿವೇಣಿ, ಪರಿಸರ ಅಭಿಯಂತರು ನಸೀಮಾ ಅಂಜುಮ್, ಹಿರಿಯ ಆರೋಗ್ಯ ನಿರೀಕ್ಷಕಿ ಚಂಪಾಶ್ರೀ ಹಾಗೂ ಪೌರಕಾರ್ಮಿಕರು ವಾಹನ ಚಾಲಕರು ಭಾಗವಹಿಸಿದ್ದರು.

ಬಾಚೇಗೌಡನಹಳ್ಳಿ ಡೈರಿಗೆ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ



ನೂತನ ಅಧ್ಯಕ್ಷ, ಉಪಾಧ್ಯಕ್ಷರು ಹಾಗೂ ನಿರ್ದೇಶಕರನ್ನು ಸನ್ಮಾನಿಸಲಾಯಿತು.

ಹೆಚ್.ಡಿ.ಕೋಟೆ, ಜು.18– ತಾಲೂಕಿನ ಬಾಚೇಗೌಡನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರಾಗಿ ಚೆಲುವರಾಜು, ಉಪಾಧ್ಯಕ್ಷರಾಗಿ ದೊಡ್ಡನಾಯಕ ಅವಿರೋಧವಾಗಿ ಆಯ್ಕೆಯಾದರು.

ನಿರ್ದೇಶಕರಾಗಿ ವೆಂಕಟೇಶ್, ಸಿದ್ಧಶೆಟ್ಟಿ, ರಾಜನಾಯಕ, ನಾಗನಾಯಕ, ಸಿದ್ದನಾಯಕ, ದೇವಮ್ಮ, ರಶ್ಮಿ ಅವಿರೋಧವಾಗಿ ಆಯ್ಕೆ ಯಾದರು. ಚುನಾವಣಾಧಿಕಾರಿಯಾಗಿ ರೇಣುಕ ಕಾರ್ಯ ನಿರ್ವಹಿಸಿದರು. ನೂತನ ಅಧ್ಯಕ್ಷ, ಉಪಾಧ್ಯಕ್ಷರನ್ನು ಮೈಮುಲ್ ನಿರ್ದೇಶಕ ಈರೇಗೌಡ ಅಭಿನಂದಿಸಿದರು. ಈ ವೇಳೆ ಸಿಇಓ ಬೀರೇಗೌಡ (ಬೀರೇಶ್), ವಿಸ್ತಾರಣಾಧಿಕಾರಿ ಜಗದಾಂಬ, ಗ್ರಾಮದ ಮುಖಂಡರು ಹಾಜರಿದ್ದರು.

ಹುಚ್ಚಯ್ಯ ನಿಧನ



ಹುಣಸೂರು, ಜು.18– ಆರೋಗ್ಯ ರಕ್ಷಾ ಸಮಿತಿ ಸದಸ್ಯ, ಕಾಂಗ್ರೆಸ್ ಯುವ ಮುಖಂಡ ನಾಗರಾಜ್ ಅವರ ತಂದೆ ಕಲ್ಕುಣಿಕೆ ನಿವಾಸಿ ಬಿಕ್ಕಲ ಹುಚ್ಚಯ್ಯ (81) ಶುಕ್ರವಾರ ನಿಧನರಾದರು. ಮೃತರು ಪತ್ನಿ, ನಾಲ್ವರು ಪುತ್ರಿಯರು, ಓರ್ವ ಪುತ್ರ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಶನಿವಾರ ಕಲ್ಕುಣಿಕೆ ಸ್ಮಶಾನದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಹುಟ್ಟುಹಬ್ಬದ ಸಂಭ್ರಮಾಚರಣೆ ವೇಳೆ ಸ್ನೇಹಿತರಿಂದ ಹಲ್ಲೆ

ಗಾಯಗೊಂಡಿದ್ದ ಯುವಕ ಸಾವು

ನಂಜನಗೂಡು, ಜು.18– ಹುಟ್ಟುಹಬ್ಬದ ಸಂಭ್ರಮಾಚರಣೆಗೆ ಕರೆಸಿಕೊಂಡು ಸ್ನೇಹಿತರೆ ಸೇರಿ ಹಲ್ಲೆ ನಡೆಸಿದ ಪರಿಣಾಮ ಗಂಭೀರವಾಗಿ ಗಾಯಗೊಂಡು ಸಾವು ಬದುಕಿನ ನಡುವೆ ಹೋರಾಟ ನಡೆಸುತ್ತಿದ್ದ ಯುವಕ ಸಾವನ್ನಪ್ಪಿರುವ ಘಟನೆ ತಾಲೂಕಿನ ಕೆಂಪಿಸಿದ್ದನ ಹುಂಡಿ ಗ್ರಾಮದಲ್ಲಿ ಜರುಗಿದೆ.

ಕೆಂಪಿಸಿದ್ದನಹುಂಡಿ ಗ್ರಾಮದ ಕೆ.ಕೆ.ಸ್ವಾಮಿ ಅವರ ಪುತ್ರ ಕಿರಣ್(19) ಸಾವನ್ನಪ್ಪಿದ ಯುವಕ. ಘಟನೆ ಸಂಬಂಧ ಕೆಂಪಿಸಿದ್ದನಹುಂಡಿ ಗ್ರಾಮದ ವಸಂತಕುಮಾರ, ಮಧುಸೂದನ, ರವಿಚಂದ್ರ, ಚಂದ್ರ, ಸಿದ್ದರಾಜು ಎಂಬುವರ ಮೇಲೆ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು, ಐವರನ್ನು ಪೊಲೀಸರು ಬಂಧಿಸಿದ್ದಾರೆ.

ಜು.15ರಂದು ಸ್ನೇಹಿತ ರವಿಚಂದ್ರ ಎಂಬುವನ ಹುಟ್ಟುಹಬ್ಬದ ಸಂಭ್ರಮಾಚರಣೆಗಾಗಿ ತನ್ನ ಸ್ನೇಹಿತರಾದ ವಸಂತಕುಮಾರ, ಮಧುಸೂದನ್, ರವಿಚಂದ್ರ, ಚಂದ್ರ, ಸಿದ್ದರಾಜು ಎಂಬುವವರ ಜೊತೆಗೆ ಕಿರಣ್ ತೆರಳಿದ್ದನು. ಸಂಭ್ರಮಾಚರಣೆ ವೇಳೆ ಮದ್ಯಪಾನ ಮಾಡುತ್ತಿದ್ದ ವೇಳೆ ವಸಂತನ ಮೊಬೈಲ್‌ಗೆ ಯುವತಿಯೊಬ್ಬಳು ಕರೆ ಮಾಡಿದ್ದಾಳೆ. ಆ ಕರೆಯನ್ನು ಕಿರಣ್ ರಿಸೀವ್ ಮಾಡಿದ್ದರಿಂದ



ಕೋಪಗೊಂಡ ವಸಂತ ಕಿರಣ್‌ಗೆ ಮನಸೋ ಇಚ್ಛೆ ಥಳಿಸಿದ್ದಾನೆ. ಈ ವೇಳೆ ಮಧುಸೂದನ್ ಬೈಕ್ ಅನ್ನು ಕಿರಣ್ ತೆಗೆದುಕೊಂಡು ಮನೆಗೆ ವಾಪಸ್ ಆಗುತ್ತಿದ್ದ ವೇಳೆ ಅಲ್ಲಿದ್ದ ಸ್ನೇಹಿತರು ಅವನನ್ನು ಬಿಡಬೇಡ ಮುಗಿಸಿ ಬಿಡು ಎಂದು ಹೇಳಿದ್ದರಿಂದ ಪ್ರೇರಣೆಗೊಂಡ ವಸಂತ ಕಿರಣ್‌ನನ್ನು ಹಿಂಬಾಲಿಸಿಕೊಂಡು ಹೋಗಿ ಕಿರಣ್ ಬೈಕ್‌ಗೆ ಹಿಂಬದಿಯಿಂದ ಗುದ್ದಿ ಆತನ ಹೊಟ್ಟೆ ಮೇಲೆ ಬೈಕ್ ಹರಿಸಿ ಕೊಲೆಗೆ ಯತ್ನಿಸಿ ಕ್ರೂರತ್ವ ಮೆರೆದಿದ್ದಾನೆ. ತೀವ್ರ ಗಾಯಗೊಂಡಿದ್ದ ಯುವಕನನ್ನು ಸ್ಥಳೀಯರು ಆಸ್ಪತ್ರೆಗೆ ಸೇರಿಸಿದ್ದಾರೆ.

ಆಸ್ಪತ್ರೆಯಲ್ಲಿ ಸಾವು ಮತ್ತು ಬದುಕಿನ ನಡುವೆ ಹೋರಾಟ ನಡೆಸುತ್ತಿದ್ದ ಕಿರಣ್ ಗುರುವಾರ ರಾತ್ರಿ ಸಾವನ್ನಪ್ಪಿದ್ದಾನೆ. ನಂತರ ಆರೋಪಿಗಳು ಕಿರಣ್ ಅಪಘಾತವಾಗಿ ಗಾಯಗೊಂಡಿದ್ದಾನೆಂದು ಬಿಂಬಿಸಿ ಪ್ರಕರಣ ಮುಚ್ಚಿ ಹಾಕಲು ಹೊರಟಿದ್ದಾರೆ. ಆದರೆ ಪ್ರಕರಣ ದಾಖಲಿಸಿ ಕೊಂಡ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಸುನೀಲ್ ಕುಮಾರ್ ತನಿಖೆ ನಡೆಸಿ ಇದು ಅಪಘಾತವಲ್ಲ, ಉದ್ದೇಶ ಪೂರ್ವಕವಾಗಿ ಕೊಲೆ ನಡೆಸಿದ್ದಾರೆ ಎಂದು ಪ್ರಕರಣದ ಸತ್ಯಾಂಶವನ್ನು ಭೇದಿಸಿದ್ದಾರೆ. ಶುಕ್ರವಾರ ಕಿರಣ್ ಶವವನ್ನು ಮರಣೋತ್ತರ ಪರೀಕ್ಷೆಗೆ ಒಳಪಡಿಸಿ ವಾರಸುದಾರರಿಗೆ ಹಸ್ತಾಂತರಿಸಿದರು. ಅಂತ್ಯಕ್ರಿಯೆ ವೇಳೆ ಕಿರಣ್ ಪೋಷಕರ ಹಾಗೂ ಸಂಬಂಧಿಕರ ಆಕ್ರಂದನ, ಮುಗಿಲು ಮುಟ್ಟುವಂತಿತ್ತು. ಈ ಸಂಬಂಧ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಆಷಾಢ ಮಾಸದ ಕಡೇ ಶುಕ್ರವಾರ

ಶ್ರೀ ತ್ರಿಪುರ ಸುಂದರಿ ಅಮ್ಮನವರಿಗೆ ವಿಶೇಷ ಪೂಜೆ

ಮೂಗೂರು, ಜು.18– ಆಷಾಢ ಮಾಸದ ಕಡೇ ಶುಕ್ರವಾರ ಅಂಗವಾಗಿ ಇಲ್ಲಿನ ಶ್ರೀ ತ್ರಿಪುರ ಸುಂದರಿ ಅಮ್ಮನವರ ದೇವಾಲಯದಲ್ಲಿ ವಿಶೇಷ ಪೂಜಾ ಕೈಂಕರ್ಯಗಳು ನೆರವೇರಿದವು. ಈ ವೇಳೆ ಕನಕಾಂಬರ ಹೂವಿನ ಸೀರೆ ಅಲಂಕಾರದಿಂದ ಕಂಗೊಳಿಸುತ್ತಿದ್ದ ಅಮ್ಮನವರ ದರ್ಶನ ಪಡೆಯಲು ಭಕ್ತರು ಮುಗಿ ಬಿದ್ದರು.



ಗ್ರಾಮದ ಶ್ರೀತ್ರಿಪುರ ಸುಂದರಿ ಅಮ್ಮನವರ ದೇವಾಲಯವನ್ನು ತಳಿರು ತೋರಣ, ಬಗೆ ಬಗೆಯ ಹೂಗಳು, ಬಣ್ಣ ಬಣ್ಣದ ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿತ್ತು. ಶುಕ್ರವಾರ ಮುಂಜಾನೆಯೇ ಶ್ರೀತ್ರಿಪುರ ಸುಂದರಿ ಅಮ್ಮನವರು ಹಾಗೂ ಶ್ರೀದೇಶೇಶ್ವರಸ್ವಾಮಿ ಮತ್ತು ಪಾರ್ವತಿ ಅಮ್ಮನವರಿಗೆ ಅಭಿಷೇಕ ಸೇರಿದಂತೆ ವಿಶೇಷ ಪೂಜಾ ಕೈಂಕರ್ಯ ನಡೆಯಿತು. ರಾಜ್ಯದ ವಿವಿಧೆಡೆಗಳಿಂದ ಆಗಮಿಸಿದ್ದ ಭಕ್ತರು ಬಿಸಿಲನ್ನು ಲೆಕ್ಕಿಸದೇ ಅಮ್ಮನವರಿಗೆ ಪೂಜೆ ಸಲ್ಲಿಸಿ ದರ್ಶನ ಪಡೆದು, ಇಷ್ಟಾರ್ಥ ಸಿದ್ಧಿಗಾಗಿ ಅಮ್ಮನವರಿಗೆ ಮಡಿಲಕ್ಕಿ ಸೇವೆ, ನಿಂಬೆ ಹಣ್ಣು ಬೆಲ್ಲದಾರತಿ ಸೇವೆ ನೆರವೇರಿಸಿ ಪ್ರಾರ್ಥಿಸಿದರು. ಬೆಳಗ್ಗೆಯಿಂದ ಸಂಜೆವರೆಗೂ ಭಕ್ತರು ಅಮ್ಮನವರ ವೈಭವ ಕಣ್ತುಂಬಿಕೊಂಡರು. ಹರಕೆ ಹೊತ್ತ ಭಕ್ತರು ದೇಗುಲದಲ್ಲಿ ಪ್ರಸಾದ ತಯಾರಿಸಿ ವಿತರಿಸಿದರು. ಗ್ರಾಮದಲ್ಲಿ ಚಿಕ್ಕ ಜಾತ್ರೆಯೇ ಏರ್ಪಟ್ಟಿದ್ದು ವ್ಯಾಪಾರ ಭರಾಟೆ ಜೋರಾಗಿತ್ತು.

ಸನ್ಮಾನ



ತಿ.ನರಸೀಪುರದ ಶ್ರೀ ವೆಂಕಟೇಶ್ವರ ದೇವಸ್ಥಾನದಲ್ಲಿ ಚಾಮುಂಡೇಶ್ವರಿ ವರ್ಧಂತೋತ್ಸವ ಅಂಗವಾಗಿ ದೊರೆ ಸ್ವಾಮೀಜಿ ಅವರನ್ನು ಕರವೇ ಜಿಲ್ಲಾ ಉಪಾಧ್ಯಕ್ಷ ಕೆ. ರಾಚು ಸನ್ಮಾನಿಸಿದರು. ನಂಜುಂಡಸ್ವಾಮಿ, ರಾಚಪ್ಪ, ಐಬಿ ಶಿವು, ಹಾಜರಿದ್ದರು.

ಒಂದನೇ ಪುಟದಿಂದ

ಇಂದು 'ಸಾಧನಾ ಸಮಾವೇಶ'

ಇದರೊಂದಿಗೆ 300ಕ್ಕೂ ಖಾಸಗಿ ಬಸ್, ಮಿನಿ ಟೆಂಪೋ, ಟ್ಯಾಕ್ಸಿ ಸೇರಿ ದಂತೆ ನೂರಾರು ವಾಹನಗಳಲ್ಲಿ ಪಕ್ಷದ ಕಾರ್ಯಕರ್ತರು ಸಮಾವೇಶಕ್ಕೆ ಆಗಮಿಸಲಿದ್ದಾರೆ.

ಸಾವಿರಕ್ಕೂ ಹೆಚ್ಚು ಪೊಲೀಸರ ನಿಯೋಜನೆ: ಸಾಧನ ಸಮಾವೇಶಕ್ಕೆ ಸೂಕ್ತ ಬಂದೋಬಸ್ತ್ ಒದಗಿಸುವ ನಿಟ್ಟಿನಲ್ಲಿ ಸಾವಿರಕ್ಕೂ ಹೆಚ್ಚು ಪೊಲೀಸರನ್ನು ನಿಯೋಜಿಸಲಾಗಿದೆ. ವೇದಿಕೆ ಬಳಿ ಕಾರ್ಯಕರ್ತರು ಅನಾವಶ್ಯಕವಾಗಿ ನುಸುಳದಂತೆ ಕಟ್ಟೆಚ್ಚರ ವಹಿಸಲಾಗಿದೆ. ಅಲ್ಲದೆ, ಸಿಎಂ ಸಿದ್ದರಾಮಯ್ಯ ಸೇರಿದಂತೆ ಗಣ್ಯರು ವೇದಿಕೆ ಪ್ರವೇಶಿಸಲು ಹಾಗೂ ವೇದಿಕೆಯಿಂದ ನಿರ್ಗಮಿಸುವ ವೇಳೆ ಬಂದೋಬಸ್ತ್‌ಗಾಗಿ ಪ್ರತ್ಯೇಕ ಭದ್ರತಾ ತಂಡವನ್ನು ನಿಯೋಜಿಸಲಾಗಿದೆ. ಕಾರ್ಯಕರ್ತರನ್ನು ಕರೆತರುವ ಬಸ್ ಹಾಗೂ ಖಾಸಗಿ ವಾಹನಗಳನ್ನು ಮಹಾರಾಜ ಪದವಿ ಪೂರ್ವ ಕಾಲೇಜು ಮೈದಾನ, ಸ್ಕೌಟ್ಸ್ ಮತ್ತು ಗೈಡ್ಸ್ ಮೈದಾನ, ಜೆ.ಕೆ. ಮೈದಾನದಲ್ಲಿ ನಿಲುಗಡೆಗೆ ಅವಕಾಶ ಕಲ್ಪಿಸಲಾಗಿದೆ.

ಬೆಂಗಳೂರಿಂದ ನೇರವಾಗಿ ವೇದಿಕೆಗೆ: ಸಿಎಂ ಸಿದ್ದರಾಮಯ್ಯ ಬೆಂಗಳೂರಿನ ಹೆಚ್‌ಎಎಲ್ ವಿಮಾನ ನಿಲ್ದಾಣದಿಂದ ಬೆಳಗ್ಗೆ 11 ಗಂಟೆಗೆ ಮೈಸೂರಿಗೆ ವಿಶೇಷ ವಿಮಾನದಲ್ಲಿ ಪ್ರಯಾಣ ಬೆಳೆಸಲಿದ್ದಾರೆ. ಬೆಳಗ್ಗೆ 11.45ಕ್ಕೆ ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣಕ್ಕೆ ಬಂದು, ಮಧ್ಯಾಹ್ನ 12 ಗಂಟೆಗೆ ರಸ್ತೆ ಮಾರ್ಗವಾಗಿ ಸಾಧನ ಸಮಾವೇಶ ನಡೆಯುವ ಮಹಾರಾಜ ಕಾಲೇಜು ಮೈದಾನಕ್ಕೆ ಆಗಮಿಸಲಿದ್ದಾರೆ. ಸಿಎಂ ಬರುವ ಮುನ್ನವೇ ಸಾಧನ ಸಮಾವೇಶದಲ್ಲಿ ವಿವಿಧ ಇಲಾಖೆಗಳ ಸಚಿವರು, ಸ್ಥಳೀಯ ಶಾಸಕರು ಮಾತನಾಡಲಿದ್ದಾರೆ.

ಉಳಿವಿಗೆ ಸಿದ್ದರಾಮಯ್ಯ ಶಕ್ತಿ ಪ್ರದರ್ಶನ

ಕಾಂಗ್ರೆಸ್ ಹೈಕಮಾಂಡಿಗೆ ಬೆದರಿಸುವ ಷಡ್ಯಂತ್ರ

ಮೈಸೂರು ಜಿಲ್ಲೆಯಲ್ಲಿ ಏನು ಅಭಿವೃದ್ಧಿ ಮಾಡಿಲ್ಲ. ಆದರೂ ಸಾಧನಾ ಸಮಾವೇಶ ಮಾಡುತ್ತಿದ್ದಾರೆ. ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ಕೊಡುವ ಸಂದರ್ಭ ಸನ್ನಿಹಿತವಾಗಿದ್ದು, ಈಗ ಸಮಾವೇಶದ ಮೂಲಕ ಕಾಂಗ್ರೆಸ್ ಹೈಕಮಾಂಡಿಗೆ ಬೆದರಿಸುವ ಷಡ್ಯಂತ್ರ ಇದರ ಹಿಂದಿದೆ. ಮುಡಾ ಹಗರಣದ ವಿರುದ್ಧ ಬಿಜೆಪಿ ಪಾದಯಾತ್ರೆ ಮಾಡಿತ್ತು. ಆತಂಕಕ್ಕೆ ಒಳಗಾದ ಸಿದ್ದರಾಮಯ್ಯನವರು ಮೈಸೂರು ಸೇರಿದಂತೆ ವಿವಿಧೆಡೆ ಸಮಾವೇಶ ಮಾಡಿದ್ದರು. ಮುಖ್ಯಮಂತ್ರಿ ಕುರ್ಚಿಗೆ ಕಂಟಕ ಬಂದಾಗಲೆಲ್ಲ, ಸಿದ್ದರಾಮಯ್ಯನವರಿಗೆ ಅಹಿಂದ ಸಮುದಾಯಗಳು ನೆನಪಾಗುತ್ತವೆ. - ಬಿ.ವೈ.ವಿಜಯೇಂದ್ರ

ಬಿಜೆಪಿ ಈ ಹಿಂದೆ ರಾಮನಾಥ ಕೋವಿಂದ್ ಅವರನ್ನು ರಾಷ್ಟ್ರಪತಿಯಾಗಿ ಮಾಡಿತ್ತು. ಈಗ ಬುಡಕಟ್ಟು ಜನಾಂಗಕ್ಕೆ ಸೇರಿದ ದ್ರೌಪದಿ ಮುರ್ಮು ಅವರನ್ನು ರಾಷ್ಟ್ರಪತಿಗಳನ್ನಾಗಿ ಮಾಡಿದ್ದೇವೆ. ಕಾಂಗ್ರೆಸ್ ಈ ಹಿಂದೆ ಮುಖ್ಯಮಂತ್ರಿಯಾಗಿದ್ದ ದೇವರಾಜ ಅರಸು ಅವರನ್ನು ಅಪಮಾನ ಮಾಡಿ ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಿತ್ತು. ಇದನ್ನು ಸಿದ್ದರಾಮಯ್ಯನವರು ಮರೆತಿದ್ದರೂ ರಾಜ್ಯದ ಜನರು ಮರೆತಿಲ್ಲ. ದೇವರಾಜ ಅರಸು ಅವರ ದಾಖಲೆಯನ್ನು ಮುರಿಯಬೇಕೆಂದು ಹಪಾಹಪಿ ಸಿದ್ದರಾಮಯ್ಯನವರಲ್ಲಿದೆ. ದೇವರಾಜ ಅರಸು ಅವರಿಗೆ ಕಾಂಗ್ರೆಸ್ ಪಕ್ಷ ಮಾಡಿದ ಅಪಮಾನ ವನ್ನು ಸಿದ್ದರಾಮಯ್ಯನವರು ನೆನಪಿಸಿಕೊಳ್ಳಬೇಕು ಎಂದು ವಾಗ್ದಾಳಿ ನಡೆಸಿದರು. ಸಿಎಂ ಸಿದ್ದರಾಮಯ್ಯ ತಮ್ಮ ಕುರ್ಚಿ ಉಳಿಸಿಕೊಳ್ಳಲು ಸಾಧನಾ ಸಮಾವೇಶ ಮಾಡುತ್ತಿದ್ದಾರೆ. ಅಹಿಂದ ಜನರ ಭಜನೆ ಮಾಡುತ್ತಿದ್ದು, ಆ ಸಮುದಾಯಗಳಿಗೆ ಸಿದ್ದರಾಮಯ್ಯನವರು ಯಾವುದೇ ರೀತಿಯ ನ್ಯಾಯ ಕೊಡಲು ಸಾಧ್ಯವಾಗಿಲ್ಲ. ರಾಹುಲ್ ಗಾಂಧಿಯವರ ಆದೇಶದಂತೆ ಸಿದ್ದರಾಮಯ್ಯನವರು ಆ ಕಾಂತ ರಾಜು ವರದಿಯನ್ನೂ ಕಸದ ಬುಟ್ಟಿಗೆ ಹಾಕಿದ್ದಾರೆ. ಹಾಗಾಗಿ ಅಹಿಂದ ಸಮುದಾಯಗಳು ಇವರಿಗೆ ಕೇವಲ ಮತ ಬ್ಯಾಂಕ್ ಮಾತ್ರ ಎಂದು ಟೀಕಿಸಿದರು.

ಪ್ರಚಾರಕ್ಕಾಗಿ 11 ಸಾವು: ಆರ್‌ಸಿಬಿ ಗೆಲುವಿನ ವಿಜಯೋತ್ಸವದ ವೇಳೆ ಕಾಲ್ತುಳಿತ ಉಂಟಾಗಿ 11 ಅಭಿಮಾನಿಗಳು ಮೃತಪಟ್ಟ ಪ್ರಕರಣಕ್ಕೆ ನ್ಯಾ.ಮೈಕೆಲ್ ಕುನ್ಹಾ ಅವರು ಸಂಪೂರ್ಣ ವರದಿ ಕೊಟ್ಟಿಲ್ಲ. ಆರ್‌ಸಿಬಿ ಗೆಲುವಿನಲ್ಲಿ ಪ್ರಚಾರ ಗಿಟ್ಟಿಸಿಕೊಳ್ಳಲು ಮುಖ್ಯಮಂತ್ರಿ ಮತ್ತು ಉಪ ಮುಖ್ಯಮಂತ್ರಿ ಪೈಪೋಟಿ ಮಾಡಿದ್ದರು. ಆ ಪ್ರಚಾರದ ಹಪಾಹಪಿಯಿಂದ 11 ಜನರು ಪ್ರಾಣ ಕಳೆದುಕೊಂಡರು. ಇದೀಗ ಅರೆಬೆಂದ ವರದಿಯನ್ನು ಹೈಕೋರ್ಟ್‌ಗೆ ನೀಡಿದ್ದಾರೆ. ಇದು ಮುಖ್ಯಮಂತ್ರಿ ಮಾಡಿದ ಅಕ್ಷಮ್ಯ ಅಪರಾಧ ಎಂದು ಆರೋಪಿಸಿದರು.

ಹೃದ್ರೋಗ ಪ್ರಮಾಣ ಹೆಚ್ಚಳ

ಜಾಗೃತಿಯ ಜೊತೆಗೆ ಆರೋಗ್ಯದ ಅರಿವನ್ನು ಮೂಡಿಸಿದಂತಾಗುತ್ತದೆ ಎಂದರು.

10 ವರ್ಷದಿಂದಲೇ ಆರಂಭ!: ಇತ್ತೀಚೆಗೆ ಯುವಕರಲ್ಲಿ ಹಠಾತ್ ಸಾವು ಸಂಭವಿಸುತ್ತಿದ್ದು, ಅವರನ್ನು ಆಸ್ಪತ್ರೆಗೆ ಕರೆದುಕೊಂಡು ಬರುವಷ್ಟರಲ್ಲಿ ಸಾವನ್ನಪ್ಪಿರುತ್ತಾರೆ. ಹೃದಯಾಘಾತವಾಗಿದೆ ಎಂದರೆ ಆತನ ಆರೋಗ್ಯ 10 ವರ್ಷದಿಂದಲೇ ಕೆಲ ಸಮಸ್ಯೆಗಳಿಂದ ಕೂಡಿದ್ದು, ತಪಾಸಣೆ ಮಾಡಿಸಿಕೊಳ್ಳದೆ ನಿರ್ಲಕ್ಷತೆ ವಹಿಸಿದ್ದರ ಪರಿಣಾಮ ಹೃದಯಾಘಾತ ಸಂಭವಿಸುವ ಸಾಧ್ಯತೆ ಹೆಚ್ಚು. ಆದ್ದರಿಂದ ಹೃದಯಾಘಾತವನ್ನು ನಿಯಂತ್ರಣ ಮಾಡಬೇಕಾದರೆ ದೇಹದಲ್ಲಿರುವ ಸಮಸ್ಯೆಗಳನ್ನು ಮೊದಲು ಸರಿಪಡಿಸಿಕೊಳ್ಳಬೇಕು. ಆದರೆ ಬಹುತೇಕರು ತೊಂದರೆ ಬರುವವರೆಗೂ ಆಸ್ಪತ್ರೆಗೆ ಹೋಗುವುದಿಲ್ಲ ಎಂದು ತಿಳಿಸಿದರು.

14 ಅಸಾಂಕ್ರಾಮಿಕ ರೋಗಗಳು: ಕಾರ್ಯಾಗಾರ ಉದ್ಘಾಟಿಸಿದ ಆರೋಗ್ಯ ಇಲಾಖೆ ವಿಭಾಗೀಯ ಸಹ ನಿರ್ದೇಶಕರಾದ ಡಾ.ಬಿ.ಮಲ್ಲಿಕಾ ಮಾತನಾಡಿ, ಡಯಾಬಿಟಿಸ್ ರೆಟಿನೋಪತಿ, ಕಿಡ್ನಿ, ಕ್ಯಾನ್ಸರ್ ಸೇರಿದಂತೆ 14 ಬಗೆಯ ಅಸಾಂಕ್ರಾಮಿಕ ರೋಗಗಳನ್ನು 'ಗೃಹ ಆರೋಗ್ಯ ಸೇವೆ' ಕಾರ್ಯಕ್ರಮದಲ್ಲಿ ಸೇರಿಸಲಾಗಿದೆ. ಮನೆ ಮನೆಗೆ ತೆರಳಿ ಆರೋಗ್ಯ ಅರಿವು ಮೂಡಿಸುವ ಜೊತೆಗೆ ನಿಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳುವಂತೆ ವೈದ್ಯರಿಗೆ ಸಲಹೆ ನೀಡಿದರು.

ಹಾಸನದಲ್ಲಿ ಎಲ್ಲಾ ಸಾವನ್ನು ಹೃದಯ ತೊಂದರೆಯಿಂದಲೇ ಸಂಭವಿಸಿವೆ ಎಂದು ಹೇಳಲಾಗಿತ್ತು. ಆದರೆ ಅವರಲ್ಲಿ ಕೆಲವರು ಮಾತ್ರ ಈ ಕಾರಣಕ್ಕೆ ಮೃತಪಟ್ಟಿರುವುದು ಅಧ್ಯಯನದ ನಂತರ ತಿಳಿದು ಬಂದಿದೆ. ಹಾಗಾಗಿ ಇತರ ಕಾಯಿಲೆಗಳನ್ನು ಗಂಭಿರ ವಾಗಿ ಪರಿಗಣಿಸಿ ಚಿಕಿತ್ಸೆ ಪಡೆಯಬೇಕು. ಅದಕ್ಕೆ ಬೇಕಾದ ಸಹಕಾರವನ್ನು ಆರೋಗ್ಯ ಇಲಾಖೆ ನೀಡಲಿದೆ ಎಂದರು. ಜಿಲ್ಲಾ ಆರೋಗ್ಯಾಧಿಕಾರಿ ಡಾ.ಪಿ.ಸಿ. ಕುಮಾರಸ್ವಾಮಿ ಮಾತನಾಡಿ, ಆರೋಗ್ಯ ಇಲಾಖೆಯ ಈಗಾಗಲೇ ಮನೆ ಮನೆಗೆ ಭೇಟಿ ಮಾಡಿ ಸಮೀಕ್ಷೆ ನಡೆಸುತ್ತಿದ್ದು, ಜಿಲ್ಲೆಯಲ್ಲಿ 1.5 ಲಕ್ಷಕ್ಕೂ ಅಧಿಕ ಮಂದಿಗೆ ಡಯಾಬಿಟಿಸ್ ಕಂಡು ಬಂದಿದೆ. ಇವರೆಲ್ಲರ ಚಿಕಿತ್ಸೆಗೆ ಸಹಕಾರಿಯಾಗುವ ನಿಟ್ಟಿನಲ್ಲಿ 'ಗೃಹ ಆರೋಗ್ಯ ಯೋಜನೆ' ಕಾರ್ಯ ನಿರ್ವಹಿಸಲಿದೆ. ಆರೋಗ್ಯಭರಿತ ಸಮಾಜವನ್ನು ನಿರ್ಮಾಣ ಮಾಡುವ ನಿಟ್ಟಿನಲ್ಲಿ ಈ ಕಾರ್ಯಾಗಾರ ಆಯೋಜಿಸಿದ್ದು ಭಾಗವಹಿಸಿರುವ ಎಲ್ಲರೂ ಕಾರ್ಯಾಗಾರದ ಸದುಪಯೋಗ ಪಡೆಯುವಂತೆ ತಿಳಿಸಿದರು.

ಬಳಿಕ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ನಾಗರಾಜ್, ಜಿಲ್ಲೆಯಲ್ಲಿ ಅಸಾಂಕ್ರಾಮಿಕ ರೋಗಗಳ ಪರಿಸ್ಥಿತಿ, ನಿಯಂತ್ರಣಕ್ಕಾಗಿ ಕೈಗೊಂಡಿರುವ ಕ್ರಮಗಳು, ಗೃಹಾರೋಗ್ಯದಿಂದ ಹಮ್ಮಿಕೊಳ್ಳಲಾಗುವ ಕಾರ್ಯಕ್ರಮಗಳು, ನಾಗರಿಕರು ಅವುಗಳಿಗೆ ಹೇಗೆ ಸ್ಪಂದಿಸಬೇಕು ಎಂಬುದರ ಕುರಿತು ವಿವರಿಸಿದರು. ಯೋಜನೆ ಅನುಷ್ಠಾನಾಧಿಕಾರಿ ಡಾ. ಬೃಂದಾ, ಜಯದೇವ ಆಸ್ಪತ್ರೆ ಆರ್‌ಎಂಓ ಡಾ.ಪಶುಪತಿ ಮತ್ತಿತರರಿದ್ದರು.

ಹೃದ್ರೋಗಿಗಳ ಚಿಕಿತ್ಸೆಗೆ ತೊಂದರೆ...!

ಜಯದೇವ ಆಸ್ಪತ್ರೆಯಲ್ಲಿ ಹೃದ್ರೋಗೇತರ ರೋಗಿಗಳ ಸಂಖ್ಯೆ ಹೆಚ್ಚಾಗುತ್ತಿರುವುದರಿಂದ ನಿಜವಾಗಿಯೂ ಹೃದ್ರೋಗದಿಂದ ಬಳಲುತ್ತಿರುವ ರೋಗಿಗಳಿಗೆ ಚಿಕಿತ್ಸೆ ನೀಡಲು ತೊಂದರೆಯಾಗುತ್ತಿದೆ. ವೈದ್ಯರು ಒತ್ತಡದಲ್ಲಿ ಕೆಲಸ ಮಾಡುವಂತಾಗಿದೆ. ಅಲ್ಲದೇ ಚಿಕಿತ್ಸೆ ಪಡೆದು ಹೋದವರ ಫಾಲೋ ಅಪ್(ಹಾಗಾಗ ವಿಚಾರಿಸುವುದು) ಮಾಡಲು ಸಾಧ್ಯವಾಗುತ್ತಿಲ್ಲ. ಫಾಲೋ ಅಪ್ ಮಾಡುವುದು ಮುಖ್ಯವಾಗಿದ್ದು, ಗೃಹ ಆರೋಗ್ಯ ಯೋಜನೆ, ರೋಗಿಗಳ ಫಾಲೋ ಅಪ್ ಮಾಡಲು ಅನುಕೂಲವಾಗಲಿದೆ.

- ಡಾ.ಕೆ.ವಿ.ಸದಾನಂದ, ವೈದ್ಯಕೀಯ ಅಧೀಕ್ಷಕರು, ಮೈಸೂರು ಜಯದೇವ ಹೃದ್ರೋಗ ಮತ್ತು ಸಂಶೋಧನಾ ಸಂಸ್ಥೆ, ಮೈಸೂರು

ಅತ್ಯಾಚಾರ ಕೇಸ್: ಜು.30ಕ್ಕೆ

ಪ್ರಜ್ವಲ್ ರೇವಣ್ಣ ಭವಿಷ್ಯ ನಿರ್ಧಾರ

ಬೆಂಗಳೂರು, ಜು.18– ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಮೇಲಿನ ಅತ್ಯಾಚಾರ ಪ್ರಕರಣದ ಸಂಬಂಧ ವಾದ–ಪ್ರತಿವಾದ ಆಲಿಸಿದ ಜಡ್ಜ್ ಸಂತೋಷ ಗಜಾನನ ಭಟ್ ಆದೇಶವನ್ನು ಕಾಯ್ದಿರಿಸಿದ್ದಾರೆ. ಜುಲೈ 30ರಂದು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಈ ಪ್ರಕರಣದ ತೀರ್ಪು ಪ್ರಕಟಿಸಲಿದ್ದು, ಪ್ರಜ್ವಲ್ ರೇವಣ್ಣಗೆ ಆತಂಕ ಶುರುವಾಗಿದೆ.



ಮಾಜಿ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧದ ಮೈಸೂರು ಜಿಲ್ಲೆ ಕೆ.ಆರ್.ನಗರದ ಮಹಿಳೆ ಮೇಲೆ ಅತ್ಯಾಚಾರ ಆರೋಪ ಪ್ರಕರಣದ ವಾದ ಮಂಡನೆ ಪೂರ್ಣವಾಗಿದೆ. ಪ್ರಾಸಿಕ್ಯೂಷನ್ ಪರ ವಿಶೇಷ ಅಭಿಯೋಜಕರಾದ ಬಿ.ಎನ್.ಜಗದೀಶ್, ಅಶೋಕ್ ನಾಯ್ಕ್ ವಾದ ಮಂಡಿಸಿದ್ದರೆ, ಪ್ರಜ್ವಲ್ ರೇವಣ್ಣ ಪರವಾಗಿ ಹಿರಿಯ ವಕೀಲರಾದ ನಳಿನಾ ಮಾಯಗೌಡ ಪ್ರತಿ ವಾದ ಮಂಡಿಸಿದ್ದಾರೆ. ಜುಲೈ 30ರಂದು ಪ್ರಜ್ವಲ್ ರೇವಣ್ಣ ಭವಿಷ್ಯ ನಿರ್ಧಾರವಾಗಲಿದ್ದು, ಒಂದು ವೇಳೆ ಕೋರ್ಟ್, ಪ್ರಜ್ವಲ್ ರೇವಣ್ಣನನ್ನು ದೋಷಿ ಎಂದು ತೀರ್ಪು ನೀಡಿದರೆ ಕನಿಷ್ಠ 10 ವರ್ಷ, ಗರಿಷ್ಠ ಜೀವಾವಧಿ ಶಿಕ್ಷೆಗೆ ಒಳಗಾಗಲಿದ್ದಾರೆ. ಇದರಿಂದ ಕೋರ್ಟ್ ಏನು ತೀರ್ಪು ಏನಾಗಲಿದೆ ಎನ್ನುವ ಆತಂಕದಲ್ಲಿ ಪ್ರಜ್ವಲ್ ರೇವಣ್ಣ ಇದ್ದಾರೆ. ಇನ್ನು ಮೈಸೂರು ಜಿಲ್ಲೆಯ ಕೆ.ಆರ್.ನಗರ ಮಹಿಳೆಯ ಅಪಹರಣ ಪ್ರಕರಣದಲ್ಲಿ ಸಂಬಂಧಿಸಿದಂತೆ ಎಚ್.ಡಿ.ರೇವಣ್ಣ ಮತ್ತು ಭವಾನಿ ರೇವಣ್ಣ ಸೇರಿದಂತೆ ಒಟ್ಟು 9 ಆರೋಪಿಗಳಿದ್ದು, ಈಗಾಗಲೇ ರೇವಣ್ಣ ಹಾಗೂ ಭವಾನಿ ರೇವಣ್ಣ ಅವರಿಗೆ ಜಾಮೀನು ಸಿಕ್ಕಿದೆ ಆದರೆ, ಪ್ರಮುಖ ಆರೋಪಿ ಪ್ರಜ್ವಲ್ ರೇವಣ್ಣ ಮಾತ್ರ ಒಂದು ವರ್ಷದಿಂದ ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಲ್ಲೇ ಇದ್ದಾರೆ. ಹಾಸನದಲ್ಲಿ ಪ್ರಜ್ವಲ್ ರೇವಣ್ಣ ವಿರುದ್ಧ ದಾಖಲಾಗಿದ್ದ ಅತ್ಯಾಚಾರ ಕೇಸ್ ನಂತರ ಸಿಐಡಿಗೆ ವರ್ಗಾವಣೆ ಆಗಿತ್ತು. ಅರೆಸ್ಟ್ ಆಗಿದ್ದ ಪ್ರಜ್ವಲ್‌ರನ್ನ ಎಸ್‌ಐಟಿ ಕಸ್ಟಡಿಗೆ ಪಡೆದಿತ್ತು. ಈ ಎರಡೂ ಕೇಸ್‌ಗಳಲ್ಲಿ ವಿಚಾರಣೆ ಮುಗಿದಿರುವ ಕಾರಣಕ್ಕೆ ಪ್ರಜ್ವಲ್ ರೇವಣ್ಣರನ್ನ ನ್ಯಾಯಾಂಗ ಬಂಧನಕ್ಕೆ ನೀಡಲಾಗಿತ್ತು. ಬಳಿಕ ಪ್ರಜ್ವಲ್ ರೇವಣ್ಣ ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ಕೋರ್ಟ್ ನ್ಯಾಯಾಧೀಶ ಸಂತೋಷ್ ಗಜಾನನ ಭಟ್ ವಜಾ ಮಾಡಿದ್ದರು. ಇನ್ನು ತನಿಖೆ ನಡೆಸಿದ್ದ ಎಸ್‌ಐಟಿ ಅಧಿಕಾರಿಗಳು 123 ಸಾಕ್ಷ್ಯಗಳನ್ನು ಸಂಗ್ರಹಿಸಿದ್ದಾರೆ. ಸುಮಾರು 2 ಸಾವಿರ ಪುಟಗಳ ಚಾರ್ಜ್ ಶೀಟನ್ನು ಜನಪ್ರತಿನಿಧಿಗಳ ವಿಶೇಷ ಕೋರ್ಟ್‌ಗೆ ಸಲ್ಲಿಸಲಾಗಿದ್ದು, ಇದೀಗ ವಾದ ಪ್ರತಿವಾದ ಅಂತ್ಯಗೊಂಡಿದೆ. ಜುಲೈ 30ರಂದು ಪ್ರಜ್ವಲ್ ರೇವಣ್ಣ ಭವಿಷ್ಯ ನಿರ್ಧಾರವಾಗಲಿದೆ.

ಸಾಕ್ಷ್ಯ ಸಿಕ್ಕರೆ ರಾಹುಲ್ ಗಾಂಧಿಯನ್ನೇ ಜೈಲಿಗಟ್ಟುತ್ತೇನೆ...!

ಗುವಾಹತಿ, ಜು.18– ಭ್ರಷ್ಟಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಹಿಮಂತ ಶರ್ಮಾ ಬಿಸ್ವಾ ಅವರನ್ನು ಜೈಲಿಗೆ ಹಾಕಬೇಕು ಎಂಬ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹೇಳಿಕೆಗೆ ತೀಕ್ಷ್ಣವಾಗಿ ತಿರುಗೇಟು ನೀಡಿರುವ ಅಸ್ಸಾಂ ಸಿಎಂ ಹಿಮಂತ ಶರ್ಮಾ ಬಿಸ್ವಾ ಸಾಕ್ಷ್ಯಾಧಾರ ಸಿಕ್ಕರೆ ಅವರನ್ನೇ ಜೈಲಿಗಟ್ಟುತ್ತೇನೆ ಎಂದು ಹೇಳಿದ್ದಾರೆ.



ಭ್ರಷ್ಟಾಚಾರ ಮಾಡಿದ್ದಕ್ಕೆ ತಮ್ಮನ್ನು ಜೈಲಿಗೆ ಹಾಕಬೇಕು ಎಂದು ಹೇಳಿದ್ದ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಗೆ ಅಸ್ಸಾಂ ಮುಖ್ಯಮಂತ್ರಿ ಹಿಮಾಂತ ಬಿಸ್ವ ಶರ್ಮಾ ತಿರುಗೇಟು ನೀಡಿದ್ದು, ನನಗಿಂತ ಮೊದಲು ಅವರು ಜೈಲಿಗೆ ಹೋಗುವುದಿಲ್ಲ ಎನ್ನುವುದಕ್ಕೆ ಏನು ಗ್ಯಾರಂಟಿ ಎಂದು ಪ್ರಶ್ನಿಸಿದ್ದಾರೆ. ಇಂಥ ಹೇಳಿಕೆಗಳು ರಾಷ್ಟ್ರೀಯ ನಾಯಕರಿಗೆ ಸೂಕ್ತವಲ್ಲ ಎಂದು ಶರ್ಮಾ ಕುಟುಕಿದ್ದಾರೆ.

ಅಂತೆಯೇ ರಾಜ್ಯವೊಂದಕ್ಕೆ ಬಂದು ಯಾರನ್ನು ಜೈಲಿಗೆ ಹಾಕಬೇಕು ಎಂದು ಹೇಳುವುದು ರಾಷ್ಟ್ರೀಯ ನಾಯಕನಿಗೆ ಶೋಭೆಯಲ್ಲ. ನಾನು ಎಷ್ಟು ಮುಖ್ಯ ಎಂಬುದನ್ನು ಇದು ಸಾರುತ್ತದೆ. ತಮ್ಮ ವಿರುದ್ಧ ದೇಶಾದ್ಯಂತ ದಾಖಲಾಗಿರುವ ಪ್ರಕರಣಗಳಲ್ಲಿ ಜಾಮೀನಿನ ಮೇಲೆ ಹೊರಗೆ ಇದ್ದಾರೆ ಎನ್ನುವುದನ್ನು ರಾಹುಲ್ ಗಾಂಧಿ ಮನಃಪೂರ್ವಕವಾಗಿ ಮರೆತಂತಿದೆ ಎಂದು ಹಿಮಂತ ಶರ್ಮಾ ಹೇಳಿದರು.

ಇದೇ ವೇಳೆ 'ಗೋಲ್‌ಪಾರ ಜಿಲ್ಲೆಯ ಪೈಕಾನ್ ಮೀಸಲು ಅರಣ್ಯದಲ್ಲಿ ತೆರವು ಕಾರ್ಯಾಚರಣೆಯ ಸಂದರ್ಭದಲ್ಲಿ ಭುಗಿಲೆದ್ದ ಹಿಂಸಾತ್ಮಕ ಘರ್ಷಣೆಗೆ, ರಾಹುಲ್ ಗಾಂಧಿಯವರ ಭಾಷಣ ಕಾರಣ" ಎಂದು ಆರೋಪಿಸಿರುವ ಅಸ್ಸಾಂ ಮುಖ್ಯಮಂತ್ರಿ, "ರಾಹುಲ್ ಗಾಂಧಿ ಅವರ ದ್ವೇಷಭಾಷಣ ಅತಿಕ್ರಮಣಕಾರರನ್ನು ಕೆರಳಿಸಿದೆ. ಇದೇ ಕಾರಣಕ್ಕೆ ಅರಣ್ಯ ಭೂಮಿಯನ್ನು ತೆರವುಗೊಳಿಸುವ ಪ್ರಯತ್ನಗಳನ್ನು ಹಿಂಸಾತ್ಮಕವಾಗಿ ತಡೆಯುವ ಪ್ರಯತ್ನ ನಡೆದಿದೆ' ಎಂದು ಕಿಡಿಕಾರಿದರು.

"ರಾಹುಲ್ ಗಾಂಧಿ ಇಲ್ಲಿಗೆ ಬಂದು ಅತಿಕ್ರಮಣಕಾರರು ಸರ್ಕಾರಿ ಭೂಮಿಯನ್ನು ಆಕ್ರಮಿಸಿಕೊಳ್ಳುವಂತೆ ಪ್ರೋತ್ಸಾಹಿಸಿದರು. ಇದರಿಂದ ಅತಿಕ್ರಮಣಕಾರರು ತೆರವು ಕಾರ್ಯಾಚರಣೆ ನಡೆಸುತ್ತಿದ್ದ ಪೊಲೀಸ್ ಮತ್ತು ಅರಣ್ಯ ಸಿಬ್ಬಂದಿ ಮೇಲೆ ದೊಣ್ಣೆಗಳಿಂದ ದಾಳಿ ಮಾಡಿದರು. ಪೊಲೀಸರು ಆತ್ಮರಕ್ಷಣೆಗೆ ಗುಂಡು ಹಾರಿಸಿದ್ದರಿಂಧ ಓರ್ವ ವ್ಯಕ್ತಿ ಸಾವನ್ನಪ್ಪಿದ್ದಾನೆ. ಅರಣ್ಯ ಅತಿಕ್ರಮಣಕಾರರಿಗೆ ಅದೇ ಸ್ಥಳದಲ್ಲಿ ಪುನರ್ವಸತಿ ಕಲ್ಪಿಸಲಾಗುವುದು ಮತ್ತು ಮನೆಗಳನ್ನು ನೀಡಲಾಗುವುದು ಎಂಬ ರಾಹುಲ್ ಗಾಂಧಿ ಹೇಳಿಕೆ ಕಾನೂನುಬಾಹಿರ' ಎಂದು ಅಸ್ಸಾಂ ಸಿಎಂ ಹರಿಹಾಯ್ದರು.

ಶಾಸಕರ ಮುನಿಸಿಗೆ 50 ಕೋಟಿ ಮುಯ್ಯಿ!


ಬೆಂಗಳೂರು, ಜು.18(ಕೆಎಂಶಿ)– ಮುಖ್ಯಮಂತ್ರಿ ಮೂಲ ಸೌಕರ್ಯ ಅಭಿವೃದ್ಧಿ ಯೋಜನೆಯಡಿ ಶಾಸಕರಿಗೆ ಬಿಡುಗಡೆಗೊಂಡಿರುವ ತಲಾ 50 ಕೋಟಿ ರೂ. ಅನುದಾನ ಪಡೆಯಲು ಸಿದ್ದರಾಮಯ್ಯ ಅನುಮೋದನೆ ಕಡ್ಡಾಯ.

ನಾಯಕತ್ವ ಬದಲಾವಣೆ ವಿಷಯ ತೀವ್ರ ಸ್ವರೂಪ ಪಡೆದಿರುವ ಬೆನ್ನಲ್ಲೇ ಮುಖ್ಯಮಂತ್ರಿ, ಹೊರಡಿಸಿರುವ ಈ ಆದೇಶ ರಾಜಕೀಯ ವಲಯದಲ್ಲಿ ಭಾರೀ ಚರ್ಚೆಗೆ ಗ್ರಾಸವಾಗಿದೆ. ಶಾಸಕರು ತಾವು ಯಾವ ಕಾಮಗಾರಿಗಳನ್ನು ಕೈಗೊಳ್ಳುತ್ತೇವೆ ಎಂಬ ಬೇಡಿಕೆ ಪತ್ರಕ್ಕೆ ಸಿದ್ದರಾಮಯ್ಯ ಅನುಮೋದನೆ ಕಡ್ಡಾಯವಾಗಿದೆ.

ಅನುಮೋದನೆಗೂ ಮುನ್ನ ಶಾಸಕರು, ಮುಖ್ಯಮಂತ್ರಿ ಸಚಿವಾಲಯದಿಂದ ಬಂದಿರುವ ಪತ್ರವನ್ನು ಮುಖ್ಯಮಂತ್ರಿ ಆಪ್ತ ಕಾರ್ಯದರ್ಶಿ ಡಾ.ವೆಂಕಟೇಶಯ್ಯ ಕಚೇರಿಯ ವಿಶೇಷ ಕರ್ತವ್ಯಾಧಿಕಾರಿ ಶಶಿಕುಮಾರ್ ಅವರಿಗೆ ತೋರಿಸಿ ಅನುದಾನ ಪಡೆದುಕೊಳ್ಳಲು ಸೂಚಿಸಲಾಗಿದೆ. ಈ ಸಂಬಂಧ ಜುಲೈ 30 ಹಾಗೂ 31ರಂದು ಪ್ರತಿ ಜಿಲ್ಲಾ ವ್ಯಾಪ್ತಿಯ ಶಾಸಕರ ಪ್ರತ್ಯೇಕ ಸಭೆ ಕರೆದಿದ್ದು, ಅಲ್ಲಿ ಮುಖ್ಯಮಂತ್ರಿ ಅವರಿಗೆ ನೀಡಿರುವ ಬೇಡಿಕೆಗಳ ಮನವಿ ಪತ್ರ ಸಲ್ಲಿಸಿ ಅನುಮೋದನೆ ಪಡೆದುಕೊಳ್ಳುವಂತೆ ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದ್ದಾರೆ.

ಶಾಸಕರಿಗೆ ಬಿಡುಗಡೆ ಮಾಡಿರುವ ಹಣವನ್ನು ಕ್ಷೇತ್ರದಲ್ಲಿ ಯಾವ ಉದ್ದೇಶಗಳಿಗೆ ವೆಚ್ಚ ಮಾಡಬೇಕೆಂಬುದನ್ನೂ ಸ್ವತಃ ಮುಖ್ಯಮಂತ್ರಿ ಅವರೇ ಪಟ್ಟಿ ಮಾಡಿ ತಿಳಿಸಿದ್ದಾರೆ.

ಮೈಸೂರಿಂದ ಇಂಡಿಗೋ ಏರ್‌ಲೈನ್ಸ್ ವಿಮಾನ ಹಾರಾಟ ಸಾಧ್ಯತೆ



ಸಂಸದ ಯದುವೀರ್ ಮನವಿಗೆ ಸಕಾರಾತ್ಮಕ ಪ್ರತಿಕ್ರಿಯೆ

ಮೈಸೂರು, ಜು.18– ಮೈಸೂರಿನಿಂದ ಪ್ರಮುಖ ನಗರಗಳಾದ ಮುಂಬೈ, ಚೆನ್ನೈ, ಹೈದರಾಬಾದ್ ಹಾಗೂ ಗೋವಾಗೆ ವಿಮಾನ ಸೇವೆ ಆರಂಭಿಸುವಂತೆ ಇಂಡಿಗೋ ಏರ್‌ಲೈನ್ಸ್ ಸಂಸ್ಥೆಗೆ ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಪತ್ರ ಬರೆದು, ಮನವಿ ಮಾಡಿದ್ದಾರೆ.

ಸಾಂಸ್ಕೃತಿಕ ರಾಜಧಾನಿ ಮೈಸೂರು ದೇಶದ ಪ್ರಮುಖ ಪ್ರವಾಸಿ ತಾಣಗಳಲ್ಲಿ ಒಂದಾಗಿದೆ. ಈ ನಗರದಿಂದ ಪ್ರಮುಖ ನಗರಗಳಾದ ಮುಂಬೈ, ಚೆನ್ನೈ, ಹೈದರಾಬಾದ್, ಗೋವಾಗೆ ವಿಮಾನ ಸೇವೆ ಆರಂಭಿಸಿದರೆ ಉದ್ಯಮಿಗಳು, ಪ್ರವಾಸಿಗರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಅನುಕೂಲವಾಗಲಿದೆ ಎಂದು ಸಂಸದರು ಪತ್ರದಲ್ಲಿ ವಿವರಿಸಿದ್ದಾರೆ.

ಇಂಡಿಗೋ ಏರ್‌ಲೈನ್ಸ್ ಸೇವೆ ಆರಂಭಿಸುವ ಭರವಸೆ ನೀಡಿದೆ. ಈ ಸಂಬಂಧ ಅತಿ ಶೀಘ್ರದಲ್ಲೇ ಸೂಕ್ತ ನಿರ್ಧಾರ ತೆಗೆದುಕೊಳ್ಳುವ ವಿಶ್ವಾಸ ನನಗಿದೆ. ಈ ವಿಮಾನ ಸೇವೆಗಳು ಆರಂಭವಾದರೆ ನಮ್ಮ ಮೈಸೂರು ಜನರಿಗೆ ಹೆಚ್ಚು ಪ್ರಯೋಜನವಾಗಲಿದೆ ಎಂದು ಯದುವೀರ್ ತಿಳಿಸಿದ್ದಾರೆ.

ಆಷಾಢ ಕೊನೇ ಶುಕ್ರವಾರ ಚಾಮುಂಡಿ ಬೆಟ್ಟದಲ್ಲಿ ಭಕ್ತಸಾಗರ



ಮಹಿಷ ಮರ್ಧಿನಿ ಅಲಂಕಾರದಲ್ಲಿ ಕಂಗೊಳಿಸುತ್ತಿರುವ ಚಾಮುಂಡೇಶ್ವರಿ.

●ಮಹಿಷಾಸುರ ಮರ್ಧಿನಿ ಅಲಂಕಾರದಲ್ಲಿ ಕಂಗೊಳಿಸಿದ ಚಾಮುಂಡೇಶ್ವರಿ ●ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಸೇರಿ ಗಣ್ಯರಿಂದ ತಾಯಿ ದರ್ಶನ



ಆಷಾಢ ಕೊನೇ ಶುಕ್ರವಾರ ಚಾಮುಂಡಿಬೆಟ್ಟದ ದೇವಾಲಯದಲ್ಲಿ ದರ್ಶನ ಪಡೆಯಲು ಮುಗಿ ಬಿದ್ದಿರುವ ಭಕ್ತರು.

ಮೈಸೂರು, ಜು.18(ಎಂಟಿವೈ)– ಆಷಾಢ ಮಾಸದ ಕೊನೆ ಶುಕ್ರವಾರವಾದ ಇಂದು ಚಾಮುಂಡಿಬೆಟ್ಟದ ದೇವಾಲಯದಲ್ಲಿ ನಡೆದ ವಿಶೇಷ ಪೂಜಾ ಮಹೋತ್ಸವದಲ್ಲಿ ಅಪಾರ ಸಂಖ್ಯೆಯ ಭಕ್ತರು ಪಾಲ್ಗೊಂಡು ದೇವಿ ದರ್ಶನ ಪಡೆದು ಪುಳಕಿತರಾದರು.

ಶಕ್ತಿ ದೇವತೆಯ ಆರಾಧನೆಯ ಮಾಸವಾದ ಆಷಾಢದಲ್ಲಿ ಈ ಬಾರಿ ನಾಲ್ಕು ಶುಕ್ರವಾರದಂದೂ ಚಾಮುಂಡಿಬೆಟ್ಟದ ದೇವಾಲಯದಲ್ಲಿ ವಿಶೇಷ ಪೂಜಾ ಮಹೋತ್ಸವ ಜರುಗಿದ್ದು, ಕೊನೆ ವಾರವಾದ ಇಂದು ನಡೆದ ವಿಶೇಷ ಪೂಜಾ ಮಹೋತ್ಸವದಲ್ಲಿ ನಾಡದೇವಿ ದರ್ಶನ ಪಡೆಯಲು ರಾಜ್ಯದಾದ್ಯಂತ ಅಪಾರ ಸಂಖ್ಯೆಯ ಭಕ್ತರು ಮುಂಜಾನೆಯಿಂದಲೇ ಬೆಟ್ಟಕ್ಕೆ ಆಗಮಿಸಿ ದರ್ಶನ ಪಡೆಯಲು ಕಾತುರ ವ್ಯಕ್ತಪಡಿಸಿದರು.

ಗುರುವಾರವಷ್ಟೇ(ಜು.17) ಚಾಮುಂಡೇಶ್ವರಿಯ ವರ್ಧಂತಿ ಮಹೋತ್ಸವ ವಿಜೃಂಭಣೆಯಿಂದ ನೆರವೇರಿತ್ತು. ಮರುದಿನವಾದ ಇಂದು ಕೊನೇ ಆಷಾಢ ಶುಕ್ರವಾರವಾದ ಹಿನ್ನೆಲೆಯಲ್ಲಿ ಮುಂಜಾನೆ 3.30ರಿಂದಲೇ ದೇವಿಗೆ ವಿವಿಧ ಪೂಜಾ ಕೈಂಕರ್ಯ ಜರುಗಿದವು. ಪ್ರಧಾನ ಆಗಮಿಕ ಡಾ. ಎನ್.ಶಶಿಶೇಖರ್ ದೀಕ್ಷಿತ್ ನೇತೃತ್ವದಲ್ಲಿ ದೇವಿಗೆ ಮಹನ್ಯಾಸಪೂರ್ವಕ ರುದ್ರಾಭಿಷೇಕ, ರುದ್ರಾಭಿಷೇಕ, ಪುಷ್ಪಾರ್ಚನೆ, ಪುಣ್ಯಾಹ ಸೇರಿದಂತೆ ವಿವಿಧ ಪೂಜಾ ಕಾರ್ಯ ಜರುಗಿದ ಬಳಿಕ ಮೂಲಕ ವಿಗ್ರಹಕ್ಕೆ ಮಹಿಷ ಮರ್ಧಿನಿ ಅಲಂಕಾರ ಮಾಡಿ ಮಂಗಳಾರತಿ ಬೆಳಗಿ ಮುಂಜಾನೆ 5.30ರಿಂದ ಭಕ್ತರ ದರ್ಶನಕ್ಕೆ ಅವಕಾಶ ಮಾಡಿಕೊಡಲಾಯಿತು.

ಮುಂಜಾನೆಯಿಂದಲೇ ಕೊರೆಯುವ ಚಳಿ, ಜಿಟಿ ಜಿಟಿ ಮಳೆ ನಡೆಯುವೆಯೇ ಬೆಟ್ಟಕ್ಕೆ ಬರುವ ಭಕ್ತರ ಸಂಖ್ಯೆ ಹೆಚ್ಚಾಗಿತ್ತು. ಎಂದಿನಂತೆ ಖಾಸಗಿ ವಾಹನಗಳ ಪ್ರವೇಶಕ್ಕೆ ನಿರ್ಬಂಧ ಹೇರಲಾಗಿತ್ತು. ಮುಂಜಾನೆ 5 ಗಂಟೆಯಿಂದಲೇ ನಗರ ಬಸ್ ನಿಲ್ದಾಣ ಹಾಗೂ ಲಲಿತಮಹಲ್ ಪ್ಯಾಲೇಸ್ ಮೈದಾನದಿಂದ ಭಕ್ತರನ್ನು ಕರೆದೊಯ್ಯಲು ಬಸ್ ಸಂಚಾರ ಆರಂಭಿಸಲಾಯಿತು. ಅಲ್ಲದೆ, ಮೆಟ್ಟಿಲು ಮೂಲಕ ಬೆಟ್ಟ ಹತ್ತಲು ಮುಂಜಾನೆ 5ಕ್ಕೆ ಅವಕಾಶ ಮಾಡಿಕೊಡಲಾಯಿತು. ಸಂಜೆವರೆಗೂ ಬೆಟ್ಟಕ್ಕೆ ತಂಡೋಪ ತಂಡವಾಗಿ ಬಂದ ಭಕ್ತರು ಧರ್ಮದರ್ಶನ, 300 ರೂ. ಹಾಗೂ 2 ಸಾವಿರ ರೂ. ಟಿಕೆಟ್ ಪಡೆದು ಪ್ರತ್ಯೇಕ ಸಾಲಿನಲ್ಲಿ ಸಾಗಿ ದರ್ಶನ ಪಡೆದು ಸಂಭ್ರಮಿಸಿದರು. ಬಣ್ಣ ಬಣ್ಣದ ಹೂವಿನ ಅಲಂಕಾರದಿಂದ ಕಂಗೊಳಿಸುತ್ತಿದ್ದ ಚಾಮುಂಡೇಶ್ವರಿ ದೇವಾಲಯ ಭಕ್ತರನ್ನು ಮಂತ್ರಮುಗ್ಧರನ್ನಾಗಿಸುತ್ತಿತ್ತು.

ಗಣ್ಯರಿಂದ ದರ್ಶನ: ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ, ಸಚಿವ ಕೆ.ಹೆಚ್.ಮುನಿಯಪ್ಪ, ಕೇಂದ್ರ ಸಚಿವೆ ಶೋಭ ಕರಂದ್ಲಾಜೆ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಮಾಜಿ ಸಚಿವ ಹೆಚ್.ಡಿ.ರೇವಣ್ಣ, ಭವಾನಿ ರೇವಣ್ಣ ಸೇರಿದಂತೆ ಇನ್ನಿತರರು ಬೆಟ್ಟಕ್ಕೆ ಆಗಮಿಸಿ ದರ್ಶನ ಪಡೆದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಬಾಷಾ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಜೂನಿಯರ್ (ಕ)	4 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಮಾಲಿಕ್ (ಹಿಂ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ಜೂನಿಯರ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಮಾದೇವ (ಕ)	4 ಪ್ರದರ್ಶನಗಳು
ರಾಜಕಮಲ್	
3 ಬಿಹೆಚ್‌ಕೆ (ತ)	4 ಪ್ರದರ್ಶನಗಳು
ಸಂಗಂ	
ಎಕ್ಕ (ಕ)	4 ಪ್ರದರ್ಶನಗಳು
ಲಿಡೋ	
ತಮ್ಮುಡು (ತೆ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಮಾದೇವ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	28 ಇಯರ್ಸ್ ಲೇಟರ್ (ಇಂ): ಬೆ10.40ಕ್ಕೆ, ರಾ.7.55ಕ್ಕೆ, ಡಿಎನ್‌ಎ (ತ): ಮ1.10ಕ್ಕೆ, ಕುಬೇರಾ (ತೆ): ಸಂ.4.05ಕ್ಕೆ, ಸಿತಾರೆ ಜಮೀನ್ ಪರ್ (ಹಿಂ): ರಾ.10.25ಕ್ಕೆ.
ಸ್ಕ್ರೀನ್ 2	ಇಲಿಯೋ (3ಡಿ)(ಇಂ): ಬೆ11.30ಕ್ಕೆ, ಮ.1.45ಕ್ಕೆ, ಸಿತಾರೆ ಜಮೀನ್ ಪರ್ (ಹಿಂ): ಸಂ.4ಕ್ಕೆ, ರಾ.7.10ಕ್ಕೆ, ಯುನೈಟೆಡ್ ಕಿಂಗ್‌ಡಮ್ ಆಫ್ ಕೇರಳ (ಮ): ರಾ10.20ಕ್ಕೆ.
ಸ್ಕ್ರೀನ್ 3	ಮಾದೇವ (ಕ): ಬೆ.10.30ಕ್ಕೆ, ರಾ.7.10ಕ್ಕೆ, ಮಾತೊಂದ ಹೇಳುವೆ (ಕ): ಮ.1.15ಕ್ಕೆ, 28 ಇಯರ್ಸ್ ಲೇಟರ್ (ಇಂ): ಸಂ.4.30ಕ್ಕೆ, ವ್ಯಾಸನಸಮೇತಂ ಬಂಧುಮಿತ್ರ (ಮ): ರಾ.10ಕ್ಕೆ.
ಸ್ಕ್ರೀನ್ 4	ಕುಬೇರಾ (ತೆ): ಬೆ10.30ಕ್ಕೆ, ಸಂ.6.25ಕ್ಕೆ, ರಾ.10.15ಕ್ಕೆ, ಕುಬೇರಾ (ತ): ಮ.2.20ಕ್ಕೆ.

ಐನಾಕ್ಸ್ ಮೂವೀಸ್
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519


ಸ್ಕ್ರೀನ್ 1	ಎಡಗೈಯೇ ಅಪಘಾತಕ್ಕೆ ಕಾರಣ (ಕ): ಮ.1.45ಕ್ಕೆ, ಸಂ.4.25ಕ್ಕೆ, ಸಂ.6.50ಕ್ಕೆ, ಮಾದೇವ (ಕ): ರಾ.9.15ಕ್ಕೆ.
ಸ್ಕ್ರೀನ್ 2	ಮಾದೇವ (ಕ): ಮ.1.15ಕ್ಕೆ, ಸಂ.4.30ಕ್ಕೆ, ರಾ.7.30ಕ್ಕೆ.
ಸ್ಕ್ರೀನ್ 3	ಯುದ್ಧಕಾಂಡ 2 (ಕ): ಸಂ.6.50ಕ್ಕೆ.
ಸ್ಕ್ರೀನ್ 4	ಹೌಸ್‌ಫುಲ್ 5ಎ (ಹಿಂ): ಮ.1.15ಕ್ಕೆ, ಸಂ.4.30ಕ್ಕೆ, ರಾ.7.44ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆ ಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಚಾಮುಂಡೇಶ್ವರಿ ಪೂಜೆ



ಮೈಸೂರಿನ ಡಿ. ಬನುಮಯ್ಯ ಚೌಕದ ಆಟೋ ನಿಲ್ದಾಣದಲ್ಲಿ ಕಡೇ ಆಷಾಢ ಶುಕ್ರವಾರ ಸಂಜೆ ಜಗನ್ಮಾತೆ ಚಾಮುಂಡೇಶ್ವರಿಗೆ ವಿಶೇಷ ಪೂಜೆ ಸಲ್ಲಿಸಿ, ಸಿಹಿ ವಿತರಿಸಲಾಯಿತು. ಈ ಸಂದರ್ಭದಲ್ಲಿ ಪೇಪರ್ ಸುಂದರ್, ಟಿ.ಎಸ್.ಅರುಣ್, ಅಂಗಡಿ ರವಿ, ಶ್ರೀಧರ್, ಮಹದೇವ್, ಆಟೋ ರಮೇಶ್, ಸೋಮಶೇಖರ್, ಬಸವರಾಜ್, ಮಣಿ ಇನ್ನಿತರರು ಉಪಸ್ಥಿತರಿದ್ದರು.

ಮಾವಿನಹಳ್ಳಿಯಲ್ಲಿ ಚಾಮುಂಡೇಶ್ವರಿಗೆ ವಿಶೇಷ ಪೂಜೆ



ಮೈಸೂರು ತಾಲೂಕು ಜಯಪುರ ಹೋಬಳಿಯ ಮಾವಿನಹಳ್ಳಿ ಗ್ರಾಮದಲ್ಲಿ ಆಷಾಢ ಮಾಸ ಕೊನೇ ಶುಕ್ರವಾರದ ಪ್ರಯುಕ್ತ ಚಾಮುಂಡೇಶ್ವರಿ ದೇವಿಗೆ ಪೂಜೆ ಸಲ್ಲಿಸಿ, ಭಕ್ತರಿಗೆ ಪ್ರಸಾದ ವಿನಿಯೋಗ ಮಾಡಲಾಯಿತು. ಜೆಡಿಎಸ್ ಮುಖಂಡ ಹಾಗೂ ಜಯಪುರ ದೊಡ್ಡಪ್ರಮಾಣ ಪತ್ತಿನ ವ್ಯವಸಾಯ ಸೇವಾ ಸಹಕಾರ ಸಂಘದ ನಿರ್ದೇಶಕ ಅಭಿಷೇಕ್, ಗ್ರಾಮದ ಮುಖಂಡರಾದ ಕಾವ್ಯ ಅಭಿಷೇಕ್, ಶಿವಮ್ಮ ದೊಡ್ಡಪುಟ್ಟೇಗೌಡ, ರಾಜೇಶ್ವರಿ ಸಿದ್ದೇಗೌಡ, ಎಂ.ವೆಂಕಟೇಶ್, ನಾಗೇಶ್, ಅಭಿ, ಸಿದ್ದೇಶ, ನಾರಾಯಣ, ನಾಗೇಗೌಡ, ರವಿಚಂದ್ರ ಮತ್ತು ಸಣ್ಣೇಗೌಡ ಉಪಸ್ಥಿತರಿದ್ದರು.

ಮೆಟ್ಟಿಲ ಮೂಲಕ ಬೆಟ್ಟ ಹತ್ತಿ ಚಾಮುಂಡೇಶ್ವರಿ ದರ್ಶನ ಪಡೆದ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ



ಮೆಟ್ಟಿಲು ಮೂಲಕ ಚಾಮುಂಡಿಬೆಟ್ಟ ಹತ್ತುತ್ತಿರುವ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ.

ಮೈಸೂರು,ಜು.18(ಎಂಟಿವೈ)– ಕೇಂದ್ರ ಸಚಿವ ಶೋಭಾ ಕರಂದ್ಲಾಜೆ ಅವರು ಆಷಾಢ ಕೊನೆ ಶುಕ್ರವಾರದ ಅಂಗವಾಗಿ ಬೆಂಬಲಿಗರೊಂದಿಗೆ ಮೆಟ್ಟಿಲು ಮೂಲಕ ಚಾಮುಂಡಿಬೆಟ್ಟ ಹತ್ತಿ ದೇವಿ ದರ್ಶನ ಪಡೆದು ಪೂಜೆ ಸಲ್ಲಿಸಿದರು.

ಕಳೆದ ಹಲವು ವರ್ಷಗಳಿಂದ ಆಷಾಢ ಮಾಸದ ಶುಕ್ರವಾರದಂದು ಮೆಟ್ಟಿಲು ಮೂಲಕ ಬೆಟ್ಟ ಹತ್ತುವ ಸಂಪ್ರದಾಯ ಅನುಸರಿಸುತ್ತಾ ಬಂದಿರುವ ಕೇಂದ್ರ ಸಚಿವ ಶೋಭಾ ಕರಂದ್ಲಾಜೆ ಇಂದು ಬೆಳಗ್ಗೆ ಬೆಂಬಲಿಗರೊಂದಿಗೆ ಮೆಟ್ಟಿಲು ಹತ್ತುವ ಮೂಲಕ ಬೆಟ್ಟ ತಲುಪಿದರು. ಬಳಿಕ ದೇವಾಲಯಕ್ಕೆ ತೆರಳಿ ವಿಶೇಷ ಪೂಜೆ ಸಲ್ಲಿಸಿ, ದೇವಿ ದರ್ಶನ ಪಡೆದರು.

ಕಾಂಗ್ರೆಸ್ ಆಂತರಿಕ ವಿಚಾರ: ದರ್ಶನ ಪಡೆದ ಬಳಿಕ ದೇವಾಲಯದ ಹೊರಗೆ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಬದಲಾವಣೆ ವಿಚಾರ ಕಾಂಗ್ರೆಸ್ ಪಕ್ಷದ ಆಂತರಿಕ ವಿಚಾರವಾಗಿದೆ. 135 ಶಾಸಕರನ್ನು ರಾಜ್ಯದ ಜನತೆ ಗೆಲ್ಲಿಸಿದ್ದಾರೆ. ಅವರಿಗೆ ನ್ಯಾಯ ಕೊಡಬೇಕು ಎಂದಷ್ಟೇ ಪ್ರತಿಕ್ರಿಯಿಸುತ್ತೇನೆ ಎಂದರು.

ದಲಿತರೊಬ್ಬರನ್ನು ಬಿಜೆಪಿ ರಾಜ್ಯಾಧ್ಯಕ್ಷರನ್ನಾಗಿ ಮಾಡಲಿ ಎಂದು ಸಿಎಂ ಸಿದ್ದರಾಮಯ್ಯ ಟ್ವೀಟ್ ಮಾಡಿರುವುದಕ್ಕೆ ಪ್ರತಿಕ್ರಿಯಿಸಿದ ಅವರು, ವಿಚಾರವನ್ನು ಡೈವರ್ಟ್ ಮಾಡಲು ಏನು ಬೇಕಾದರೂ ಮಾತನಾಡುತ್ತಾರೆ. ರಾಜ್ಯ ಸರ್ಕಾರದ ಬಹಳ ಮಂದಿ ಮಾನಸಿಕ ಸ್ಥಿಮಿತತೆ ಕಳೆದುಕೊಂಡಿದ್ದಾರೆ. ಅದಕ್ಕೆ ದಿನಕ್ಕೊಂದು ರೀತಿಯಲ್ಲಿ ಮಾತನಾಡುತ್ತಿದ್ದಾರೆ. ಏನು ಮಾತನಾಡ್ತಿದ್ದೇವೆ ಎಂದು ಅವರಿಗೇ ಗೊತ್ತಿಲ್ಲ. ಈ ರೀತಿ ಮಾತನಾಡುವುದು ಹಾಗೂ ಟ್ವೀಟ್ ಮಾಡುವುದನ್ನು ಬಿಟ್ಟು, ರಾಜ್ಯದ ಅಭಿವೃದ್ಧಿ ಕಡೆ ಗಮನ ಹರಿಸಲಿ. ಜನರು ನಿಮ್ಮನ್ನು ಗೆಲ್ಲಿಸಿರುವುದು ಅಭಿವೃದ್ಧಿ ಮಾಡುವುದಕ್ಕೆ ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಮುಖಂಡರಾದ ಕೇಬಲ್ ಮಹೇಶ್, ಲ.ಜಗದೀಶ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಇಂದು ಗುರುವಂದನಾ ಕಾರ್ಯಕ್ರಮ

ಮೈಸೂರು, ಜು.18– ಮೈಸೂರಿನ ರಾಮಾನುಜ ರಸ್ತೆಯಲ್ಲಿರುವ ನಮೋ ಯೋಗಭವನದಲ್ಲಿ ನಾಳೆ(ಜು.19) ಸಂಜೆ 5 ಗಂಟೆಗೆ ಸುವರ್ಣ ಬೆಳಕು ಫೌಂಡೇಶನ್ ಹಾಗೂ ಹಿಮಾಲಯ ಪ್ರತಿಷ್ಠಾನ ವತಿಯಿಂದ ಗುರುವಂದನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಹಿರಿಯ ಅಥ್ಲೆಟಿಕ್ ತರಬೇತುದಾರ ಪ್ರಭಾಕರ್, ಹಿರಿಯ ಖೋ ಖೋ ತರಬೇತುದಾರ ಜೀವೇಂದ್ರ ಕುಮಾರ್ ಅವರಿಗೆ ಗುರುವಂದನಾ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಅಂತರಾಷ್ಟ್ರೀಯ ಯೋಗ ಶಿಕ್ಷಕ ರಮೇಶ್ ಶೆಟ್ಟಿ ಕಾರ್ಯಕ್ರಮ ಉದ್ಘಾಟಿಸಲಿದ್ದು, ಶ್ರೀರಾಮಕೃಷ್ಣ ಪರಮಹಂಸ ಸೇವಾ ಟ್ರಸ್ಟ್‌ನ ಕೆಂಪಲಿಂಗರಾಜು ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಯಾಗಿ ಅಂತರಾಷ್ಟ್ರೀಯ ಹಿರಿಯ ಕ್ರೀಡಾಪಟು ಕೆ.ಟಿ.ರಾಮೇಗೌಡ, ಉದ್ಯಮಿ ಅವಿನಾಶ್ ಭಾಗವಹಿಸಲಿದ್ದಾರೆ.

ಆಷಾಡ ಕೊನೇ ಶುಕ್ರವಾರದ ವಿಶೇಷ ಪೂಜೆ



ಮೈಸೂರಿನ ಹೊಸಹುಂಡಿ ರಿಂಗ್ ರಸ್ತೆಯಲ್ಲಿ ಕೊನೇ ಆಷಾಢ ಶುಕ್ರವಾರ ನಾಡ ದೇವತೆ ಶ್ರೀ ಚಾಮುಂಡೇಶ್ವರಿ ದೇವಿಯ ಪೂಜಿಸಿ, ಭಕ್ತಾದಿಗಳಿಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು. ಈ ವೇಳೆ ನಿಖಿಲ್ ಕುಮಾರಸ್ವಾಮಿ ಅಭಿಮಾನಿ ಬಳಗದ ಅಧ್ಯಕ್ಷ ಪ್ರದೀಪ್, ಕೃಷ್ಣೇಗೌಡ, ಬೀಡನಹಳ್ಳಿ ಕುಮಾರ್, ಬಸಪ್ಪ, ಉಮೇಶ್, ನಿತಿನ್, ಶ್ರೀಕಾಂತ್, ರೋಹಿತ್, ಸಿದ್ದೇಶ್, ರವಿ ಮುಂತಾದವರಿದ್ದರು.

ಮೈಸೂರು ದಸರಾ ಪ್ರತಿಷ್ಠೆ ಸಂಕೇತವಾದ ಕುಸ್ತಿಗಿಲ್ಲ ಆಸ್ಥೆ!

●ಉಪ್ಪು–ಮೆಣಸಿನಕಾಯಿಗೆ ನೀಡುವಂತೆ ಪ್ರೋತ್ಸಾಹ ಧನ ವಿತರಣೆ ●ಅಖಾಡದಲ್ಲೂ ಕುಸ್ತಿ ಪ್ರೇಮಿಗಳಿಗೆ ಅಗತ್ಯ ಸೌಕರ್ಯಗಳಿಲ್ಲ ●ಕುಸ್ತಿ ಆಯೋಜನೆ ಪ್ರಕ್ರಿಯೆಯಲ್ಲೇ ಹತ್ತು–ಹಲವು ಅವಾಂತರ ●ಹಿರಿಯ ಕುಸ್ತಿ ಪಟುಗಳ ಬೇಸರ; ವ್ಯವಸ್ಥೆ ಸುಧಾರಣೆಗೆ ಆಗ್ರಹ

ಮೈಸೂರು, ಜು.18(ಎಂಕೆ)– ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆಗಳಲ್ಲೊಂದಾದ ದಸರಾ ಕುಸ್ತಿ ಪಂದ್ಯಾವಳಿ ವೈಯಕ್ತಿಕ ಹಿತಾಸಕ್ತಿಗಳ ಪ್ರಭಾವದಿಂದ ಕಳೆಗುಂದುತ್ತಿದೆ ಎಂದು ಹಿರಿಯ ಪೈಲ್ವಾನರು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಈ ವರ್ಷದ ದಸರಾ ಮಹೋತ್ಸವಕ್ಕೆ ಪೂರ್ವ ಸಿದ್ಧತೆಗಳಾಗುತ್ತಿದ್ದು, ಮುಂದಾದರೂ ಮೈಸೂರಿನ ಹೆಮ್ಮೆಯಾದ ದಸರಾ ಕುಸ್ತಿಯನ್ನು ಜನಮಾನಸಕ್ಕೆ ಕೊಂಡೊಯ್ಯುವ ನಿಟ್ಟಿನಲ್ಲಿ ದಸರಾ ಕುಸ್ತಿ ಉಪಸಮಿತಿ ಕಾರ್ಯನಿರ್ವಹಿಸಬೇಕು ಎಂದಿದ್ದಾರೆ.

ಕುಸ್ತಿ ಪೈಲ್ವಾನರನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ನೀಡುವ ಪ್ರೋತ್ಸಾಹ ಧನ, ಜೋಡಿ ಕಟ್ಟುವುದರಲ್ಲಿ ಕೆಲವರು ತಮ್ಮ ವೈಯಕ್ತಿಕ ಹಿತಾಸಕ್ತಿಗಳನ್ನು ಮುಂದಿಟ್ಟುಕೊಂಡು ಇಡೀ ಕುಸ್ತಿ ಪಂದ್ಯಾವಳಿಯ ವೈಭವವನ್ನೇ ಹಾಳು ಮಾಡುತ್ತಿದ್ದಾರೆ. ನಾಡಹಬ್ಬಕ್ಕೆ ಮೆರುಗು ಇಲ್ಲದಂತೆ ಮಾಡುತ್ತಿದ್ದಾರೆ ಎಂದು ತೀವ್ರ ಬೇಸರ ಹೊರಹಾಕಿದ್ದಾರೆ.

1 ಸಾವಿರ ರೂ.ನಿಂದ ಹಿಡಿದು ಮನಸ್ಸೋ ಇಚ್ಛೆ ಪ್ರೋತ್ಸಾಹ ಧನ ನೀಡಲಾಗುತ್ತದೆ. ಅಲ್ಲದೆ, ಹೀಗೆ ನೀಡುವ ಪ್ರೋತ್ಸಾಹ ಧನದಿಂದ ಪೈಲ್ವಾನರು ಏನನ್ನು ಕೊಂಡು ತಿನ್ನಲು ಸಾಧ್ಯ. ಪಾರಂಪರಿಕ ಕ್ರೀಡೆಯನ್ನು ಪ್ರೋತ್ಸಾಹಿಸುವಲ್ಲಿ ಹಿಂದೆ ಬಿದ್ದಿರುವುದರಿಂದಲೇ ವರ್ಷದಿಂದ ವರ್ಷಕ್ಕೆ ಕುಸ್ತಿ ಅಭಿಮಾನಿಗಳು ಹಾಗೂ ಪೈಲ್ವಾನರ ಸಂಖ್ಯೆಯೂ ಕಡಿಮೆಯಾಗುತ್ತಿದೆ ಎಂದು ವಿಷಾದಿಸಿದ್ದಾರೆ.

ಕಳೆದ 2024ರ ದಸರಾ ಕುಸ್ತಿ ಪಂದ್ಯಾವಳಿಗೆ ನೀಡಲಾದ 50 ಲಕ್ಷ ರೂ. ಅನುದಾನದಲ್ಲಿ ಸುಮಾರು 49 ಲಕ್ಷ ರೂ.ಗಳು ಖರ್ಚಾಗಿದ್ದು, ನಾಡಕುಸ್ತಿ ಹಾಗೂ ಪಾಯಿಂಟ್ ಕುಸ್ತಿಯಲ್ಲಿ ಭಾಗವಹಿಸುವ ಪೈಲ್ವಾನರಿಗೆ ಬಹುಮಾನ ನೀಡಲಾಗಿದೆ. ಎಬಿಸಿಡಿ ಕ್ಯಾಟಗರಿಯಲ್ಲಿ ಬಹುಮಾನದ ಮೊತ್ತವನ್ನು ನಿಗದಿ ಮಾಡಲಿದ್ದು, ಮುಂದಾದರೂ ಕುಸ್ತಿ ಕಲೆ ಉಳಿವಿಗಾಗಿ ಪ್ರೋತ್ಸಾಹ ಧನ ಹೆಚ್ಚಿಸುವ ಜೊತೆಗೆ ಪಾರದರ್ಶಕತೆಗೆ ಆದ್ಯತೆ ನೀಡಬೇಕು ಎಂದು ಆಗ್ರಹಿಸಿದ್ದಾರೆ.



ದಸರಾ ಕುಸ್ತಿ ಪಂದ್ಯ

ಹುಚ್ಚನ ಮದುವೆಯಲ್ಲಿ ಉಂಡೋನೆ ಜಾಣ...! ಕೆಲವರು ಬಕ ಪಕ್ಷಿಗಳಂತೆ ದಸರಾ ಕುಸ್ತಿಗಾಗಿ ಕಾದು ಕುಳಿತಿರುತ್ತಾರೆ. ಪ್ರೋತ್ಸಾಹ ಧನ ನೀಡುವಲ್ಲಿ ತಾರತಮ್ಯ ಮಾಡಲಾಗುತ್ತದೆ. ಆನ್‌ಲೈನ್ ಪೇಮೆಂಟ್ ಮಾಡುತ್ತೇವೆ ಎಂದೇಳಿ ಎಷ್ಟೋ ಪೈಲ್ವಾನರಿಗೆ ಪ್ರೋತ್ಸಾಹ ಧನ ಸೇರಿರುವುದಿಲ್ಲ. ದಸರಾ ಉಪಸಮಿತಿಯು ಮಧ್ಯವರ್ತಿಗಳನ್ನು ಇಟ್ಟುಕೊಂಡು ಜೋಡಿ ಕಟ್ಟುವುದರಿಂದ ಸಮಸ್ಯೆಗಳು ಹೆಚ್ಚಾಗುತ್ತಿವೆ ಎಂದು ಹಿರಿಯ ಪೈಲ್ವಾನ್ ಮಹದೇವ್ 'ಮೈಸೂರು ಮಿತ್ರ'ನಲ್ಲಿ ಬೇಸರಿಸಿದ್ದಾರೆ.

ನೋಡುಗರ ಸಂಖ್ಯೆ ಕಡಿಮೆಯಾಗ್ತಿದೆ: ವರ್ಷದಿಂದ ವರ್ಷಕ್ಕೆ ದಸರಾ ಕುಸ್ತಿ ಪಂದ್ಯಾವಳಿ ನೋಡುವವರ ಸಂಖ್ಯೆ ಕಡಿಮೆಯಾಗುತ್ತಿದೆ. ನಾವೆಲ್ಲಾ ಕುಸ್ತಿ ಮಾಡುವಾಗ ಕಿಕ್ಕಿರಿದು ಜನ ತುಂಬಿರುತ್ತಿದ್ದರು. ಕುಸ್ತಿ ಪಂದ್ಯಾವಳಿ ಇಂತಹ ದಿನ ನಡೆಯುತ್ತದೆ ಎಂದರೆ ವ್ಯಾಪಕ ಪ್ರಚಾರಗಳನ್ನು ಮಾಡಲಾಗುತ್ತಿತ್ತು. ಆದರೆ, ಇಂದು ಪ್ರಚಾರವೇ ಇಲ್ಲ. ಪ್ರಚಾರವೆಂಬುದು ಕೇವಲ ಕುಸ್ತಿ ಅಖಾಡಕ್ಕೆ ಸೀಮಿತವಾಗಿರುವುದರಿಂದ ನೋಡುಗರ ಸಂಖ್ಯೆ ಬಹಳ ಕಡಿಮೆಯಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಉಪಸಮಿತಿ ರಚನೆಯಲ್ಲಿ ವಿಳಂಬ: ಜನಪ್ರತಿನಿಧಿಗಳನ್ನು ಒಳಗೊಂಡ ದಸರಾ ಕುಸ್ತಿ ಉಪಸಮಿತಿ ರಚನೆ ಮಾಡುವುದೇ ಇನ್ನೇನು ಪಂದ್ಯಾವಳಿ ಒಂದೆರಡು ದಿನ ಇರುವಾಗ. ತಿಂಗಳ ಮುಂಚೆಯೇ ಅಧಿಕಾರಿಗಳ ಒಳಗೊಂಡ ಸಮಿತಿ ಮಾಡಿದ್ದರೂ ಆ ಸಮಿತಿಯಿಂದ ಯಾವುದೇ ಪ್ರಕ್ರಿಯೆಗಳು ನಡೆದಿರುವುದಿಲ್ಲ. ಮತ್ತೆಲ್ಲಿ ಪ್ರಚಾರ ಸಿಗಲಿದೆ. ಕುಸ್ತಿ ಗಾಳಿ–ಗಂಧ ಗೊತ್ತಿಲ್ಲದವರಿಗೆ ಅವಕಾಶ ನೀಡಿದರೆ ಕುಸ್ತಿ ಕಲೆ ಬೆಳೆಯುವುದೇ ಎಂದು ಪ್ರಶ್ನಿಸಿದರು.

ಕಡೆಗೂ ಆಗದ ಚಾವಣಿ...!

ದಸರಾ ಕುಸ್ತಿ ಪಂದ್ಯಾವಳಿ ನಡೆಯುವ ದೊಡ್ಡಕೆರೆ ಮೈದಾನದ ಡಿ.ದೇವರಾಜ ಅರಸು ವಿವಿಧೋದ್ದೇಶ ಕ್ರೀಡಾಂಗಣದ ವೀಕ್ಷಕರ ಗ್ಯಾಲರಿಗೆ ಚಾವಣಿ ಅಳವಡಿಸಬೇಕು ಎನ್ನುವ ಪ್ರಸ್ತಾಪ ಐದಾರು ವರ್ಷಗಳಿಂದ ಕೇಳಿ ಬಂದರೂ ಇನ್ನೂ ಬಿಸಿಲಿನಲ್ಲೇ ಕುಳಿತು ವೀಕ್ಷಣೆ ಮಾಡಬೇಕಾದ ಪರಿಸ್ಥಿತಿ ಮುಂದುವರೆದಿದೆ. ಮಳೆ ಬಂದರೆ ಗ್ಯಾಲರಿಯಲ್ಲಿ ಕುಳಿತ ಅಭಿಮಾನಿಗಳು ಅಖಾಡದ ಸುತ್ತಲೂ ನಿಲ್ಲುವುದರಿಂದ ಕುಸ್ತಿ ಪಂದ್ಯಕ್ಕೂ ಅಡಚಣೆ ಉಂಟಾಗುತ್ತದೆ ಎಂದು ಕೆಲ ಕುಸ್ತಿ ಪೈಲ್ವಾನರು ದೂರಿದ್ದಾರೆ.

ಪ್ರೋತ್ಸಾಹ ಧನ ವರ್ಷದಿಂದ ವರ್ಷಕ್ಕೆ ಕಡಿಮೆಯಾಗುತ್ತಿದೆ....

“ಮೊದಲೆಲ್ಲಾ ದಸರಾ ಕುಸ್ತಿಯಲ್ಲಿ ಭಾಗವಹಿಸುವ ಪೈಲ್ವಾನರಿಗೆ ಹೆಚ್ಚಿನ ಪ್ರೋತ್ಸಾಹ ಧನ ನೀಡಲಾಗುತ್ತಿತ್ತು. ದಸರಾ ಕೇಸರಿ, ಕಂಠೀರವ ಇತ್ಯಾದಿ ಟೈಟಲ್ ಕುಸ್ತಿ ಪಂದ್ಯಾವಳಿಗೆ ಕುಸ್ತಿ ಸಮಿತಿ ಅನುದಾನ ನೀಡಲಾಗುತ್ತಿತ್ತು. ಆದರೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಪ್ರೋತ್ಸಾಹ ಧನ ನೀಡಲು ಆರಂಭಿಸಿದ ಬಳಿಕ ಪೈಲ್ವಾನರಿಗೆ ನೀಡುವ ಪ್ರೋತ್ಸಾಹ ಧನ ವರ್ಷದಿಂದ ವರ್ಷಕ್ಕೆ ಕಡಿಮೆಯಾಗುತ್ತಿದೆ. ಅಲ್ಲದೆ ದಸರಾ ಕುಸ್ತಿಯಲ್ಲಿ ಕೊಡುವ ಐನೂರು, ಸಾವಿರ ಯಾವ ಮೂಲೆಗೆ ಹೇಳಿ!

– ಶ್ರೀನಿವಾಸ್‌ಗೌಡ, ಹಿರಿಯ ಪೈಲ್ವಾನರು.



ಮೈಸೂರು ನಗರ (ಜಿಲ್ಲಾ) ಕನ್ನಡಪರ ಸಂಘಟನೆ ನಾಗರಿಕ ಹಿತರಕ್ಷಣಾ ವೇದಿಕೆ ವತಿಯಿಂದ ಚಾಮುಂಡೇಶ್ವರಿ ವರ್ಧಂತಿ ಅಂಗವಾಗಿ ಪ್ರಸಾದ ವಿನಿಯೋಗ ಮಾಡಲಾಯಿತು. ಈ ವೇಳೆ ವೇದಿಕೆ ಅಧ್ಯಕ್ಷ ಮಂಜುನಾಥ್ (ಮಿಲ್ಕ್ ಮಂಜು), ಕೆಆರ್ ಆಸ್ಪತ್ರೆ ಸೂಪರಿಡೆಂಟೆಂಟ್ ಶೋಭಾ, ಪ್ರದಾನ ಕಾರ್ಯದರ್ಶಿ ಮೋಹನ್‌ಕುಮಾರ್, ಕಾರ್ಯದರ್ಶಿ ಸರ್ದಾರ್ ಮಹೇಶ್, ಬಾಲಕೃಷ್ಣೇಗೌಡ, ಯೋಗೇಶ್, ಮಂಜುನಾಥ್ (ಮುನ್ನಾ), ರಂಗಪ್ಪಗೌಡ ಇನ್ನಿತರರಿದ್ದರು.



ಕಡೇ ಆಷಾಢ ಶುಕ್ರವಾರದ ಅಂಗವಾಗಿ ಮೈಸೂರಿನ ಜೆ.ಪಿ.ನಗರದಲ್ಲಿ ಚಾಮುಂಡೇಶ್ವರಿ ಗೆಳೆಯರ ಬಳಗದಿಂದ ತಾಯಿ ಚಾಮುಂಡೇಶ್ವರಿಗೆ ಪೂಜೆ ಸಲ್ಲಿಸಿ ಸಾರ್ವಜನಿಕರಿಗೆ ಪ್ರಸಾದ ವಿತರಿಸಲಾಯಿತು. ಈ ವೇಳೆ ಬಳಗದ ಸಿದ್ಧಾರ್ಥ್, ಗುಣವಂತ, ಮಹೇಶ್, ಚೆಲುವರಾಜ್, ರೋಹಿತ್, ಮಧು, ಕೃಷ್ಣ, ಹರ್ಷ, ಭರತ್ ಸೇರಿದಂತೆ ಇನ್ನಿತರರಿದ್ದರು.

8ನೇ ವರ್ಷದ ಸವಿನೆನಪು



ನೀವು ನಮ್ಮನ್ನಗಲಿ ಇಂದಿಗೆ 8 ವರ್ಷ ಕಳೆದರೂ ನಿನ್ನ ನೆನಪು ನಮ್ಮ ಹೃದಯದಲ್ಲಿ ಸದಾ ಹಸಿರಾಗಿದೆ. ನೀನು ತೋರಿದ ಪ್ರೀತಿ ಅಜರಾಮರ. ನಿನ್ನ ದಿವ್ಯ ಆತ್ಮಕ್ಕೆ ಚಿರಶಾಂತಿಯನ್ನು ನೀಡಲೆಂದು ಭಗವಂತನಲ್ಲಿ ಪ್ರಾರ್ಥಿಸುತ್ತೇವೆ.

ಇಂತಿ ದುಃಖತಪ್ತರು:
ಜಯ ಸಂತೋಷ್‌ಕುಮಾರ್
ಸುಮಿತ್ರ ಕುಮಾರ
ಹೇಮಪ್ರಭ, ಶಮಂತ್
ಕುಟುಂಬವರ್ಗದವರು
ಮಹದೇಶ್ವರ ಬಡಾವಣೆ
ಮೈಸೂರು-16.
9945973735

ಎಂ.ಮೋಹನ್
ಜನನ: 11-05-2003
ಮರಣ: 19-07-2017

5ನೇ ವರ್ಷದ ಪುಣ್ಯಸ್ಮರಣೆ



ನೀವು ನಮ್ಮನ್ನಗಲಿ ಇಂದಿಗೆ 5 ವರ್ಷವಾಯಿತು ಸದಾ ನಿಮ್ಮ ನೆನಪಿನಲ್ಲಿರುವ
ಜಯಲಕ್ಷ್ಮಿ.ಎಂ.(ಧರ್ಮಪತ್ನಿ) ಶಿಕ್ಷಣ ಇಲಾಖೆ, ಹರ್ಷ.ಎನ್ & ದರ್ಶನ್.ಎನ್ (ಮಕ್ಕಳು).
ಶಿವಣ್ಣ.ಹೆಚ್.ಎಂ (ಫಾಲ್ಕನ್ ಟೈರ್ಸ್)
ಡಾ|| ರವಿಕುಮಾರ್.ಎಂ (ಅಸಿಸ್ಟೆಂಟ್ ಪ್ರೊಫೆಸರ್)
ಅನಿಲ್ ಕುಮಾರ್.ಎಂ (ರೈಲ್ವೇ ಇಲಾಖೆ) ಮತ್ತು ಕುಟುಂಬದವರು

ನರಸಿಂಹಮೂರ್ತಿ.ಹೆಚ್
ಜನನ: 04.07.1972 ಮರಣ: 19.07.2020

ಮೈಸೂರು ಮಿತ್ರ 46

ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತುಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
–ಜಾಹೀರಾತು ವ್ಯವಸ್ಥಾಪಕರು

CHANGE OF NAME

I, NEELU FAR residing at #4/126, Daira Mohalla Ward No 14, Bannur Town, T.Narasipura Taluk, Mysore District-571101 have changed my name from NEELU FUR to NEELU FAR vide affidavit sworn before Notary Udaykumar K.M Dtd. 18-07-2025

ನಿಧನ



ಶ್ರೀ ಎ ಶ್ರೀನಿವಾಸ ಗುಪ್ತ
ಆದಿನಾರಾಯಣ ಜ್ಯುವೆಲರಿ ಹಾಲ್, ಅಶೋಕ ರೋಡ್, ಮೈಸೂರು – 01

ಇವರು ದಿನಾಂಕ 17–07–2025 ಗುರುವಾರ ದೈವಾಧೀನರಾದರೆಂದು ತಿಳಿಸಲು ವಿಷಾಧಿಸುತ್ತೇವೆ. ಮೃತರ ಅಂತಿಮ ದರ್ಶನವನ್ನು ದಿನಾಂಕ : 19–07–2025 ಶನಿವಾರ ಬೆಳಗ್ಗೆ : 11:00 ಗಂಟೆ ವರೆಗೆ ಸ್ವಗೃಹ ನಂ 107, 9ನೇ ಮುಖ್ಯ ರಸ್ತೆ, 2ನೇ ಕ್ರಾಸ್, ಸರಸ್ವತಿಪುರಂ, ಮೈಸೂರು ಇಲ್ಲಿ ಏರ್ಪಡಿಸಲಾಗಿದೆ.

ದುಃಖತಪ್ತರು
ಕುಟುಂಬವರ್ಗದವರು



ಹಸಿರು ನಮ್ಮ ಉಸಿರು

